

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 5 ಮಂಗಳವಾರ 2024

ಸಂಪುಟ: 44 | ಸಂಚಿಕೆ: 317 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಕುಮಾರಸ್ವಾಮಿ ಸ್ಪರ್ಧೆ ದೆಹಲಿಯಲ್ಲಿ ನಿರ್ಧಾರ

● ಮಾಜಿ ಪ್ರಧಾನಿ ದೇವೇಗೌಡರ ಪ್ರತಿಕ್ರಿಯೆ ● ವಾರದೊಳಗೆ ಸೀಟು ಹಂಚಿಕೆ ಪ್ರಕ್ರಿಯೆ ಪೂರ್ಣ ● ಅತೀ ಶೀಘ್ರದಲ್ಲೇ ಮಂಡ್ಯದಲ್ಲಿ ಸಮಾವೇಶ

ಬೆಂಗಳೂರು, ಮಾ.4(ಕೆಎಂಶಿ)–ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಕಣಕ್ಕಿಳಿಯುವ ಬಗ್ಗೆ ದೆಹಲಿಯಲ್ಲಿ ನಿರ್ಧಾರವಾಗಲಿದೆ ಎಂದು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುಮಾರಸ್ವಾಮಿ ರಾಷ್ಟ್ರ ರಾಜಕಾರಣಕ್ಕೆ ಹೋಗುತ್ತಾರೆಯೇ ಎನ್ನುವುದನ್ನು ಈಗಲೇ ಏನೂ ಹೇಳಲು ಸಾಧ್ಯವಿಲ್ಲ, ದೆಹಲಿಯಲ್ಲಿ ಉಭಯ ಪಕ್ಷದ ನಾಯಕರು ನಡೆಸುವ ಚರ್ಚೆಯಲ್ಲಿ ಬರುವ ಫಲಿತಾಂಶದ ಮೇಲೆ ತೀರ್ಮಾನವಾಗಲಿದೆ ಎಂದರು.



ಇನ್ನೊಂದು ವಾರದಲ್ಲಿ ಸೀಟು ಹಂಚಿಕೆ ಬಗ್ಗೆ ತೀರ್ಮಾನ ಆಗುತ್ತದೆ. ಜೆಡಿಎಸ್ ಪಕ್ಷಕ್ಕೆ ಯಾವ ಯಾವ ಕ್ಷೇತ್ರ ಎನ್ನುವುದು ಮೋದಿ, ಅಮಿತ್ ಶಾ, ನಡ್ಡಾ, ಕುಮಾರಸ್ವಾಮಿ ಸಮಾಲೋಚನೆ ಮಾಡುತ್ತಾರೆ. ಅಲ್ಲಿ ಅವರು ಸ್ಪರ್ಧೆ ಮಾಡಬೇಕಾ, ಬೇಡವಾ ಎನ್ನುವ ನಿರ್ಧಾರ ಮಾಡುತ್ತಾರೆ ಎಂದರು. ಜೆಡಿಎಸ್ ಮತ್ತು ಬಿಜೆಪಿ ನಡುವೆ ಕ್ಷೇತ್ರ ಹಂಚಿಕೆ ಅಂತಿಮ ಹಂತದಲ್ಲಿದ್ದು, ಬಹುಶಃ ಒಂದು ವಾರದೊಳಗೆ ಎಲ್ಲಾ ಪ್ರಕ್ರಿಯೆ ನಡೆಯುತ್ತದೆ. ಬಿಜೆಪಿ ಟಿಕೆಟ್ ವಿಚಾರವಾಗಿ ಕೆಲವು ಕ್ಷೇತ್ರಗಳ ಅಭಿಪ್ರಾಯ ಕೇಳಬಹುದು. ಆಗ ಹೇಳುತ್ತೇವೆ. ಮೈತ್ರಿ ಧರ್ಮವನ್ನು ನಾವು ಪಾಲಿಸುತ್ತೇವೆ. ಎಲ್ಲಾ ಕ್ಷೇತ್ರಗಳನ್ನು ಗೆಲ್ಲುವುದಕ್ಕೆ ಬಿಜೆಪಿ ಜತೆ ಸೇರಿ ಕೆಲಸ ಮಾಡುತ್ತೇವೆ. ಚುನಾವಣೆ ಅಧಿಸೂಚನೆ ಆದ ಬಳಿಕ ರಾಜ್ಯದಲ್ಲಿ ನನ್ನ ಪ್ರವಾಸದ ಬಗ್ಗೆ ನಿರ್ಧಾರ ಮಾಡಲಾಗುವುದು. ಮೋದಿ ಅವರ ಪ್ರವಾಸ ಬಹಳ ಸ್ಪೀಡ್ ಇದೆ. 10 ದಿನಗಳಲ್ಲಿ ಹಲವಾರು ರಾಜ್ಯಗಳಲ್ಲಿ ಅವರು ಪ್ರವಾಸ ಮಾಡುತ್ತಿದ್ದಾರೆ. ಆದರೆ, ನಾನು ಎಲ್ಲಿಗೆ ಕರೆದರೂ ಹೋಗುತ್ತೇನೆ. ಕುಮಾರಸ್ವಾಮಿ ಸೇರಿದಂತೆ ಜೆಡಿಎಸ್ ನಾಯಕರು ಪ್ರವಾಸ ಮಾಡುತ್ತಾರೆ ಎಂದರು.

ಮಾಧ್ಯಮಗಳಲ್ಲಿ ಮಂಡ್ಯ ಲೋಕಸಭೆ ಕ್ಷೇತ್ರದ ಕುರಿತು ಅನಗತ್ಯವಾಗಿ ಚರ್ಚೆ ಆಗುತ್ತಿದೆ. ಆ ಜಿಲ್ಲೆಯಲ್ಲಿ ಪಕ್ಷ ಬಲಿಷ್ಠವಾಗಿದೆ. ಆದಷ್ಟು ಬೇಗ ಮಂಡ್ಯದಲ್ಲಿ ಸಮಾವೇಶ ನಡೆಸಲಾಗುವುದು. ನನಗೆ ವಯಸ್ಸಾಗಿದ್ದರೂ ನಾನೇನು ಸುಮ್ಮನೆ ಕೂರಲ್ಲ ಎಂದರು. ಒಂದಿಷ್ಟು ಜನ ಮನಸ್ಸಿಗೆ ಬಂದ ಹಾಗೆ ಹೇಳಿಕೆ ಕೊಡುತ್ತಿದ್ದಾರೆ. ಹಾಗೆ ಹೇಳಿಕೆ ಕೊಡಲು ಅವರು ಸ್ವತಂತ್ರರು, ಬಿಜೆಪಿ ವರಿಷ್ಠರು ತೆಗೆದುಕೊಳ್ಳುವ ನಿಲುವೇ ಅಂತಿಮ ಎಂದರು.

ಸಂಸದ ಪ್ರತಾಪ್‌ಸಿಂಹರಿಂದ ಉನ್ನತೀಕರಣಗೊಂಡ ಮೈಸೂರಿನ ಅಶೋಕಪುರಂ ರೈಲ್ವೆ ನಿಲ್ದಾಣ ಲೋಕಾರ್ಪಣೆ

● ತ್ಯಾಜ್ಯ ಸುರಿಯುತ್ತಿದ್ದ ಜಾಗದಲ್ಲಿ ರೈಲ್ವೆ ನಿಲ್ದಾಣ ಕಂಗೊಳಿಸುತ್ತಿದೆ ● ಮೆಮು, ಕಾವೇರಿ, ಮಾಲ್ಗುಡಿ ಎಕ್ಸ್‌ಪ್ರೆಸ್ ವಿಸ್ತರಣೆ ಪ್ರಸ್ತಾಪ ● ಈ ನಿಲ್ದಾಣದಲ್ಲಿ ತಿರುಪತಿ ಎಕ್ಸ್‌ಪ್ರೆಸ್ ನಿಲುಗಡೆಗೆ ಚಿಂತನೆ ● ನಮೋ ಸರ್ಕಾರದಲ್ಲಿ ಹಣ, ಇಚ್ಛಾಶಕ್ತಿ ಕೊರತೆ ಇಲ್ಲ

ಮೈಸೂರು, ಮಾ.4(ಬಿಎಲ್‌ಯು)–ಒಟ್ಟು 32 ಕೋಟಿ ರೂಪಾಯಿ ವೆಚ್ಚದಲ್ಲಿ ಪುನರ್ ನಿರ್ಮಾಣಗೊಂಡಿರುವ ಮೈಸೂರಿನ ಅಶೋಕಪುರಂ ರೈಲ್ವೆ ನಿಲ್ದಾಣವನ್ನು ಇಂದು ಸಂಸದ ಪ್ರತಾಪ್ ಸಿಂಹ ಲೋಕಾರ್ಪಣೆಗೊಳಿಸಿದರು. ಎರಡು ಶತಮಾನಗಳ ದೂರದೃಷ್ಟಿ ಇಟ್ಟುಕೊಂಡು ಮೈಸೂರಿನ ರೈಲ್ವೆ ಯೋಜನೆಗಳನ್ನು ಅಭಿವೃದ್ಧಿ ಮಾಡಲಾಗುತ್ತಿದೆ ಎಂದು ಈ ವೇಳೆ ಅವರು ತಿಳಿಸಿದರು.


ತ್ಯಾಜ್ಯಯುಕ್ತ ಪ್ರದೇಶವೆಂಬ ಅಪವಾದ ಹೊಂದಿದ್ದ ಮೈಸೂರಿನ ಅಶೋಕಪುರಂ ರೈಲ್ವೆ ನಿಲ್ದಾಣ ಸೋಮವಾರ ಕಂಗೊಳಿಸುತ್ತಿದೆ. 22 ಕೋಟಿ ರೂಪಾಯಿಯನ್ನು ಸಂಚಾರ ಸೌಲಭ್ಯಗಳ ಉನ್ನತೀಕರಣಕ್ಕೆ ಬಳಸಲಾಗಿದೆ. ಉಳಿದ 10.5 ಕೋಟಿಯನ್ನು ಪ್ರಯಾಣಿಕರ ಸೌಕರ್ಯ ವೃದ್ಧಿಗೆ ವೆಚ್ಚ ಮಾಡಲಾಗಿದೆ. ಪುನರ್ ನಿರ್ಮಾಣಗೊಂಡಿರುವ ಪ್ಲಾಟ್‌ಫಾರಂನಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಸಂಸದ ಪ್ರತಾಪ್ ಸಿಂಹ ಮೇಲ್ದರ್ಜೆಗೇರಿಸಲ್ಪಟ್ಟಿರುವ ಅಶೋಕಪುರಂ ರೈಲ್ವೆ ನಿಲ್ದಾಣವನ್ನು ಇಂದು ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ಅಶೋಕಪುರಂ ● 9ನೇ ಪುಟಕ್ಕೆ




ಉನ್ನತೀಕರಣಗೊಂಡಿರುವ ಮೈಸೂರಿನ ಅಶೋಕಪುರಂ ರೈಲ್ವೆ ನಿಲ್ದಾಣವನ್ನು ಸಂಸದ ಪ್ರತಾಪ್ ಸಿಂಹ ಸೋಮವಾರ ಲೋಕಾರ್ಪಣೆಗೊಳಿಸಿದರು.



ಉನ್ನತೀಕರಣಗೊಂಡ ಅಶೋಕಪುರಂ ರೈಲ್ವೆ ನಿಲ್ದಾಣ









ಸುಡುಬಿಸಿಲ ತಾಪಕ್ಕೆ ತಲ್ಲಣಿಸುವ ಮೂಕ ಜೀವಿಗಳ ದಾಹಕ್ಕೆ ಮೌನ ಮಿಡಿತ ಪ್ರಾಣಿ-ಪಕ್ಷಿಗಳಿಗೆ ನೀರು ಉಣಿಸುವ ಕಾರ್ಯಕ್ರಮ



ಮೈಸೂರು,ಮಾ.4–ಟಿಟಿಎಲ್ ಟ್ರಸ್ಟ್, ಟಿಟಿಎಲ್ ವಾಣಿಜ್ಯ ವ್ಯವಹಾರ ನಿರ್ವಹಣಾ ಕಾಲೇಜು, ಟಿಟಿಎಲ್ ಸ್ವತಂತ್ರ ಪದವಿ ಪೂರ್ವ ಕಾಲೇಜು, ಯುವ ರೆಡ್ ಕ್ರಾಸ್ ಘಟಕ, ರಾಷ್ಟ್ರೀಯ ಸೇವಾ ಯೋಜನೆ ಘಟಕ ಮತ್ತು ಐಕ್ಯೂಎಸಿ ವತಿಯಿಂದ ಸುಡುಬಿಸಿಲ ತಾಪಕ್ಕೆ ತಲ್ಲಣಿಸುವ ಪ್ರಾಣಿ-ಪಕ್ಷಿಗಳಿಗೆ ನೀರು ಉಣಿಸುವ ಕಾರ್ಯಕ್ರಮವನ್ನು ಟಿಟಿಎಲ್ ಕಾಲೇಜ್ ಆವರಣದಲ್ಲಿ ನಾಳೆ (ಮಾ.5) ಬೆಳಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ.

ಟಿಟಿಎಲ್ ಕಾಲೇಜಿನ ಪ್ರಾಂಶುಪಾಲರು, ಆಡಳಿತ ಮತ್ತು ನಿಯೋಜನ ಅಧಿಕಾರಿ ಡಾ.ಬಿ.ವಿ.ಪ್ರಶಾಂತ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಟಿಟಿಎಲ್ ಟ್ರಸ್ಟ್ ಡಾ.ಗೀತಾ ರಾಮ್‌ದಾಸ್, ನೋಡಲ್ ಅಧಿಕಾರಿ ಮತ್ತು ಸದಸ್ಯರಾದ ಡಾಕ್ಟರ್ ಎಸ್.ಕೆ.ಮಿತ್ತಲ್, ಉರಗ ತಜ್ಞ ಸ್ನೇಕ್ ಶಾಮ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಭ್ರಮರಾಂಭ, ಪದವಿ ಕಾಲೇಜಿನ ಹಿರಿಯ ವಾಣಿಜ್ಯ ಶಾಸ್ತ್ರದ ಉಪನ್ಯಾಸಕ ಪ್ರೊ.ಎನ್.ಎಂ.ರಾಮಚಂದ್ರಯ್ಯ ಭಾಗವಹಿಸಲಿದ್ದಾರೆ.



ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷ ಕೆ.ಮರೀಗೌಡ ಅವರನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಹೆಚ್.ಕೆ.ಪಾಂಡು ಅಭಿನಂದಿಸಿದರು. ಈ ವೇಳೆ ಶಿಕ್ಷಣಾಧಿಕಾರಿ ಬಸವರಾಜು, ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಬಿ.ಸೋಮೇಗೌಡ, ಪ್ರಕಾಶ್, ಸಾಲುಂಡಿ ದೊರೆಸ್ವಾಮಿ, ಡಾ.ಚಿಕ್ಕಲ್ಲೂರು ಮಹೇಶ್, ಮಹದೇವಸ್ವಾಮಿ, ವಿಜಿ, ಸೋಮಣ್ಣ ಇನ್ನಿತರರಿದ್ದರು.

ಸಮಾಜ ಸೇವೆಯಿಂದ ಬದುಕು ಸಾರ್ಥಕ

ಕೆ.ಆರ್. ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅಭಿಮತ



ಮೈಸೂರು,ಮಾ.4–ಸಾಮಾಜಿಕ ಸೇವೆ ಬದುಕನ್ನು ಸಾರ್ಥಕಗೊಳಿಸುತ್ತದೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಹೇಳಿದರು.

ನಗರದ ಬೋಗಾದಿಯ ರವಿಶಂಕರ್ ಲೇಔಟ್‌ನಲ್ಲಿ ಜೈ ಶ್ರೀ ರಾಮ್ ಯುವ ಬ್ರಿಗೇಡ್ ನೂತನ ಸಂಘವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯನ ಹುಟ್ಟು ಮತ್ತು ಸಾವು ಸಹಜ. ಆದರೆ, ಇವೆರಡರ ಮಧ್ಯೆ ಹೇಗೆ ಬದುಕಬೇಕೆಂಬುದೇ ಜೀವನವಾಗಿದ್ದು, ಸ್ವಾರ್ಥಕ್ಕಾಗಿ ಬದುಕದೇ ಸಮಾಜ ಸೇವೆಗೆ ಮೀಸಲಾಗಿಡಬೇಕು. ಇದರಿಂದ ಬದುಕು ಸಾರ್ಥಕತೆಯ ಜತೆಗೆ ಸಮಾಧಾನವು ಇರುತ್ತದೆ. ರಕ್ತದಾನ ಶಿಬಿರ, ಆರೋಗ್ಯ ಶಿಬಿರ ಮುಂತಾದವು ಉಪಕಾರದ ಕಾರ್ಯಕ್ರಮಗಳಾಗಿವೆ. ಇವು ಚಿಕ್ಕ ಕಾರ್ಯಕ್ರಮ ಎಂದುಕೊಳ್ಳದೇ ನಿರಂತರವಾಗಿ ಸಂಘ ಸಂಸ್ಥೆಗಳು ಹಮ್ಮಿಕೊಳ್ಳುತ್ತಾ ಬರಬೇಕೆಂದರು.

ಇದೇ ಸಂದರ್ಭದಲ್ಲಿ 35 ಜನ ಸ್ವಯಂ ಪ್ರೇರಿತ ರಕ್ತದಾನ ಮಾಡಿದರು. ಹಾಗೆಯೇ ಸುಮಾರು 100ಕ್ಕೂ ಹೆಚ್ಚು ಜನ ಆರೋಗ್ಯ ತಪಾಸಣೆ ಮಾಡಿಸಿಕೊಂಡರು. ಸಂಘದ ಅಧ್ಯಕ್ಷ ರಾಘವೇಂದ್ರ, ಪ್ರಧಾನ ಕಾರ್ಯದರ್ಶಿ ಆರ್.ಮಹೇಶ್.ಕುಮಾರ್, ಉಪಾಧ್ಯಕ್ಷ ವೀರೇಶ್ ರೆಡ್ಡಿ, ಸಹ ಕಾರ್ಯದರ್ಶಿ ಪ್ರದೀಪ್‌ಕುಮಾರ್, ಖಜಾಂಚಿ ಪ್ರವೀಣ್ ಕುಮಾರ್, ಮಾಜಿ ಕಾರ್ಪೊರೇಟರ್ ಎಂ.ಬಿ.ಜಗದೀಶ್, ಬಿಜೆಪಿ ಮುಖಂಡ ಎಂ.ಆರ್.ಬಾಲಕೃಷ್ಣ ಇನ್ನಿತರರಿದ್ದರು.

ಸಿಗ್ಮಾ ಆಸ್ಪತ್ರೆಯಲ್ಲಿ ಪಲ್ಸ್ ಪೋಲಿಯೋ



ಮೈಸೂರು,ಮಾ.4–ಮೈಸೂರಿನ ಸಿಗ್ಮಾ ಆಸ್ಪತ್ರೆಯಲ್ಲಿ ರೋಟರಿ ಸೌತ್ ಈಸ್ಟ್ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಆಸ್ಪತ್ರೆಯ ನಿರ್ದೇಶಕರು ಮತ್ತು ಹಿರಿಯ ಮಕ್ಕಳ ತಜ್ಞರಾದ ಡಾ. ರಾಜೇಶ್ವರಿ ಮಾದಪ್ಪ ಮತ್ತು ಹಿರಿಯ ಮಕ್ಕಳ ತಜ್ಞರಾದ ಡಾ.ಎಂ.ಎಸ್.ಕನ್ಯಾ ನೇತೃತ್ವದಲ್ಲಿ ಮೂರು ದಿನಗಳ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಮುಡಾ ಆಯುಕ್ತ ದಿನೇಶ್ ಕುಮಾರ್ ಅವರ ಪತ್ನಿ ದೀಪ್ತಿ ದಿನೇಶ್ ಕುಮಾರ್ ಸಹ ಮಕ್ಕಳಿಗೆ ಪೋಲಿಯೋ ಹನಿ ಹಾಕಿದರು. ಆಸ್ಪತ್ರೆಯ ಮ್ಯಾನೇಜಿಂಗ್ ಡೈರೆಕ್ಟರ್ ಜ್ಞಾನಶಂಕರ್, ರೋಟರಿ ಸೌತ್ ಈಸ್ಟ್ ಅಧ್ಯಕ್ಷ ರೋ. ಮುರುಳಿಧರ್, ಡಾ. ಸಂತೋಷ್, ಕಾರ್ಯದರ್ಶಿ ರೋ. ಗಿರೀಶ್ ಇತರೆ ಸದಸ್ಯರು ಹಾಜರಿದ್ದರು.



ಪೇರೆಂಟ್ಸ್ ಅಸೋಸಿಯೇಶನ್ ಆಫ್ ಡೆಫ್ ಚಿಲ್ಡ್ರನ್ ಅವರು ನಡೆಸುತ್ತಿರುವ ಇನ್‌ಸ್ಟಿಟ್ಯೂಟ್ ಆಫ್ ಮದರ್ ಅಂಡ್ ಡೆಫ್ ಚೈಲ್ಡ್ ಶಾಲೆಯಲ್ಲಿ ಶಾಲೆಯ ಆಡಳಿತ ಮಂಡಳಿಯ ಸದಸ್ಯೆ ಹಾಗೂ ಶಾಲೆಯ ಮುಖ್ಯಸ್ಥರಾದ ಶ್ರೀಮತಿ ರತ್ನಶೆಟ್ಟಿಯವರ 60ನೇ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಶಿಕ್ಷಕಿ ಶ್ರೀಮತಿ ಉಮಾರಾಯಣ್ಣ, ದಿನಕರ ಶೆಟ್ಟಿ, ಶಾಲೆಯ ಸಂಸ್ಥಾಪಕ ವಿಂಗ್ ಕಮಾಂಡರ್ ಶ್ರೀನಿವಾಸನ್, ಮಕ್ಕಳು, ಪೋಷಕರು, ಹಿರಿಯ ವಿದ್ಯಾರ್ಥಿಗಳು, ಶಿಕ್ಷಕಿಯರು ಭಾಗವಹಿಸಿದ್ದರು.

ಅಖಂಡ ಣಮೋಕಾರ ಮಂತ್ರ ಪಠಣ

ಮೈಸೂರು, ಮಾ. 4– ಮೈಸೂರಿನ ವರ್ಧಮಾನ್ ಜೈನ್ ಮಿಲನ್ ಭಾರತೀಯ ಜೈನ್ ಮಿಲನ್ ವಲಯ–8 ವತಿಯಿಂದ ಮಾ. 8 ರಂದು ಬೆಳಗ್ಗೆ 8 ಗಂಟೆಯಿಂದ ಮಾ.9ರ ಬೆಳಗ್ಗೆ 8 ಗಂಟೆಯವರೆಗೆ ನಿರಂತರವಾಗಿ 24 ಗಂಟೆಗಳ ಅಖಂಡ ಣಮೋಕಾರ ಮಂತ್ರ ಪಠಣ ಕಾರ್ಯಕ್ರಮವನ್ನು ಶ್ರೀ ಪಾರ್ಶ್ವನಾಥಸ್ವಾಮಿ ಬಸದಿ, ಎಂಎಲ್ ಜೈನ್ ಬೋರ್ಡಿಂಗ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಎಲಚಗೆರೆ ಗ್ರಾಮದಿಂದ ವೃದ್ಧ ನಾಪತ್ತೆ



ನಂಜನಗೂಡು,ಮಾ.4–ತಾಲೂಕಿನ ಎಲಚಗೆರೆಹಳ್ಳಿ ಗ್ರಾಮದ 80 ವರ್ಷದ ಸಿದ್ದನಾಯಕ ಎಂಬ ವೃದ್ಧ ಬೆಳಿಗ್ಗೆ ಆಸ್ಪತ್ರೆಗೆ ಹೋಗಿ ಬರುತ್ತೇನೆ ಎಂದು ಹೇಳಿದವರು ನಾಪತ್ತೆಯಾಗಿದ್ದಾರೆ. ಫೆ.27ರಂದು ಬೆಳಗ್ಗೆ 11:30 ಗಂಟೆಯ ಸಮಯದಲ್ಲಿ ಮನೆಯಿಂದ ಹೊರಗೆ ಹೋದವರು ಇದುವರೆಗೂ ಮನೆಗೆ ವಾಪಸ್ ಬಂದಿಲ್ಲ. ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ. ಇವರ ಸುಳಿವು ಸಿಕ್ಕಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08221 226259 ಕರೆ ಮಾಡುವಂತೆ ಪೊಲೀಸರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಕ್ರಮವೆಸಗಿದರೆ ನಿರ್ದಾಕ್ಷಿಣ್ಯ ಕ್ರಮ

ಅಧಿಕಾರಿಗಳಿಗೆ ಮುಡಾ ಅಧ್ಯಕ್ಷ ಕೆ.ಮರೀಗೌಡ ಎಚ್ಚರಿಕೆ

ಮೈಸೂರು,ಮಾ.4(ಆರ್‌ಕೆ)–ಅಕ್ರಮವೆಸಗಿ ಸಾರ್ವಜನಿಕರಿಗೆ ನಷ್ಟ ಉಂಟು ಮಾಡುವವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ನೂತನ ಅಧ್ಯಕ್ಷ ಕೆ.ಮರೀಗೌಡರು ಅಧಿಕಾರಿಗಳಿಗೆ ಇಂದಿಲ್ಲಿ ಎಚ್ಚರಿಕೆ ನೀಡಿದ್ದಾರೆ.

ಅಧಿಕಾರ ವಹಿಸಿಕೊಂಡ ಬಳಿಕ ಇದೇ ಮೊದಲ ಬಾರಿ ಇಂದು ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿದ ಅವರು ಮುಡಾ ಆಸ್ತಿಯನ್ನು ಕಬಳಿಸುವವರ ವಿರುದ್ಧ ಕ್ರಮವಹಿಸಿ, ಆಸ್ತಿ ವಶಪಡಿಸಿಕೊಳ್ಳಿ ಎಂದು ತಾಕೀತು ಮಾಡಿದರು.

ಪ್ರಾಧಿಕಾರದ ಆಸ್ತಿಯನ್ನು ಪತ್ತೆ ಮಾಡಿ ಒತ್ತುವರಿಯಾಗಿದ್ದರೆ ತೆರವುಗೊಳಿಸಬೇಕು. ಕೆರೆಗಳು, ಮನೆ, ನಿವೇಶನಗಳನ್ನು ಅನಧಿಕೃತವಾಗಿ ವಶಪಡಿಸಿಕೊಂಡಿದ್ದರೆ ಪರಿಶೀಲಿಸಿ ಸೂಕ್ತ ದಾಖಲೆಗಳೊಂದಿಗೆ ತೆರವು ಕಾರ್ಯಾಚರಣೆ ಮಾಡುವಂತೆಯೂ ಮರೀಗೌಡ ಅಧಿಕಾರಿಗಳಿಗೆ ಸೂಚಿಸಿದರು.



ಮುಡಾ ನೂತನ ಅಧ್ಯಕ್ಷ ಕೆ.ಮರೀಗೌಡರು ಸೋಮವಾರ ತಮ್ಮ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿದರು.

ಸಾರ್ವಜನಿಕರಿಂದ ಬರುವ ಅರ್ಜಿಗಳನ್ನು ನಿಯಮಾನುಸಾರ ವಿಲೇವಾರಿ ಮಾಡಬೇಕು. ಅನಗತ್ಯ ವಿಳಂಬ, ಭ್ರಷ್ಟಾಚಾರಕ್ಕೆ ಅವಕಾಶ ನೀಡಬಾರದು. ಮಧ್ಯವರ್ತಿಗಳಿಗೆ ಕಡಿವಾಣ ಹಾಕಬೇಕು. ನ್ಯಾಯಾಲಯಗಳಲ್ಲಿ ಮೇಲ್ಮನವಿ ಸಲ್ಲಿಸದೆ ಮುಡಾ ಆಸ್ತಿ ಖಾಸಗಿ ವ್ಯಕ್ತಿಗಳಿಗೆ ಪಾಲಾಗುವುದನ್ನು ತಪ್ಪಿಸಬೇಕೆಂದು ತಾಕೀತು ಮಾಡಿದರು. ವಾಣಿಜ್ಯ ಮಳಿಗೆ ನಿರ್ಮಿಸಿ ಪ್ರಾಧಿಕಾರಕ್ಕೆ ಆದಾಯ ಬರುವಂತೆ ಮಾಡಬೇಕು, ಸಿಎ ನಿವೇಶನ, 'ಹೆಚ್' ವರ್ಗದಡಿ ಅರ್ಹರಿಗೆ ನಿವೇಶನ ಹಂಚಿಕೆ, ರೈತರ ಸಹಭಾಗಿತ್ವದೊಂದಿಗೆ 50:50 ಅನುಪಾತದಲ್ಲಿ ವಸತಿ ಬಡಾವಣೆ ನಿರ್ಮಾಣ ಮಾಡಿ ಸೂರಿಲ್ಲದವರಿಗೆ ನಿವೇಶನ ನೀಡಲು ಕ್ರಮ ಕೈಗೊಳ್ಳುವಂತೆಯೂ ಅಧ್ಯಕ್ಷರು ಇದೇ ಸಂದರ್ಭ ಸೂಚಿಸಿದರು. ಕಾರ್ಯದರ್ಶಿ ಶೇಖರ, ನಗರ ಯೋಜಕ ಸದಸ್ಯ ಶೇಷ, ಸೂಪರಿಂಟೆಂಡಿಂಗ್ ಇಂಜಿನಿಯರ್ ಚೆನ್ನಕೇಶವ, ಮುಖ್ಯ ಲೆಕ್ಕಾಧಿಕಾರಿ ಕವಿತಾ, ಅಪ್ತ ಸಹಾಯಕ ಗಂಗಾಧರ ಸೇರಿದಂತೆ ಹಲವರು ಸಭೆಯಲ್ಲಿ ಉಪಸ್ಥಿತರಿದ್ದರು.

> "ಬಾಕಿ ಉಳಿದಿರುವ ಅಭಿವೃದ್ಧಿ ಯೋಜನೆಗಳಿಗೆ ಸರ್ಕಾರದಿಂದ ಅನುಮೋದನೆಯಾಗಬೇಕಿದ್ದರೆ ಮಾಹಿತಿ ನೀಡಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ, ಕೆಲಸ ಮಾಡಿಸೋಣ. ಯಾವುದೇ ಕಾರಣಕ್ಕೂ ಒತ್ತಡ, ಆಮಿಷಗಳಿಗೊಳಗಾಗಿ ಕೆಲಸ ಮಾಡುವುದನ್ನು ಸಹಿಸುವುದಿಲ್ಲ.
> –ಕೆ.ಮರೀಗೌಡ, ಮುಡಾ ಅಧ್ಯಕ್ಷ

ನಾಳೆಯಿಂದ ಮೈಸೂರಲ್ಲಿ ಇಂಗ್ವಾನಲ್‌ಹರ್ನಿಯಾ, ಮೂಲವ್ಯಾಧಿ ಚಿಕಿತ್ಸಾ ಶಿಬಿರ

ಮೈಸೂರು, ಮಾ. 4– ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಮಾ.6ರಿಂದ 14 ರವರೆಗೆ ಇಂಗ್ವಾನಲ್‌ಹರ್ನಿಯಾ, ಮೂಲವ್ಯಾಧಿ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9738460501, ದೂ. 0821–2548231 ಸಂಪರ್ಕಿಸಬಹುದು.





ಕಾಡಾ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಪಿ.ಮರಿಸ್ವಾಮಿ ಅವರನ್ನು ಕೆಪಿಸಿಸಿ ಕಾರ್ಯದರ್ಶಿ ವರುಣ ಮಹೇಶ್, ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ ಅಮರನಾಥ್, ಚಾ.ನಗರ ಜಿಲ್ಲಾ ಮಾಜಿ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಲಾಲನಹಳ್ಳಿ ಶ್ರೀಧರಮೂರ್ತಿ, ಮಹಾದೇವಸ್ವಾಮಿ ಅಭಿನಂದಿಸಿದರು. ಬಲಚಿತ್ರದಲ್ಲಿ ಪಿ.ಮರಿಸ್ವಾಮಿ ಅವರನ್ನು ಕಾಂಗ್ರೆಸ್ ಮುಖಂಡರೂ ಆದ ಮೈಸೂರು ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಎಂ.ಪ್ರದೀಪ್.ಕುಮಾರ್ ಹೂಗುಚ್ಛ ನೀಡಿ, ಅಭಿನಂದಿಸಿದರು.

ಇಂದು ಮಹಿಳಾ ಅಧಿಕಾರಿಗಳಿಗೆ ಕ್ರೀಡಾಕೂಟ

ಮೈಸೂರು,ಮಾ.4–ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಜಿಲ್ಲಾ ಪಂಚಾಯತ್ ವತಿಯಿಂದ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಮಹಿಳಾ ಅಧಿಕಾರಿ ಅಥವಾ ಸಿಬ್ಬಂದಿಗಳಿಗಾಗಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಸಿಡಿಪಿಓ ರವರಿಗೆ ಹಾಗೂ ವಿವಿಧ ಇಲಾಖೆಗಳ ಮಹಿಳಾ ಅಧಿಕಾರಿಗಳಿಗೆ ಕ್ರೀಡಾಕೂಟವನ್ನು ಮಾ.5ರಂದು ಬೆಳಗ್ಗೆ 9 ಗಂಟೆಗೆ ಮೈಸೂರು ನಗರದ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಂಡಿಕೇಟ್ ಸದಸ್ಯರಾಗಿ ನಾಗರಾಜು ನೇಮಕ



ಮೈಸೂರು,ಮಾ.4(ಆರ್‌ಕೆ)–ಮಂಡ್ಯ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರನ್ನಾಗಿ ಮೈಸೂರಿನ ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜು ನಿವೃತ್ತ ಪ್ರಾಂಶುಪಾಲ ಎಂ.ನಾಗರಾಜು ಅವರನ್ನು ನೇಮಕ ಮಾಡಲಾಗಿದೆ.



ಮೈಸೂರಿನ ವಾರ್ಡ್ ನಂ.23ರ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಸದ್ವಿದ್ಯಾ ಶಾಲೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ ನಡೆಯಿತು. ಮುಡಾ ಮಾಜಿ ಸದಸ್ಯ ನವೀನ್‌ಕುಮಾರ್ ಮಗುವಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿದರು. ರವಿಚಂದ್ರ, ಲೋಕೇಶ್, ಶ್ರೀನಿವಾಸ್ ಆಚಾರ್ ಇತರರಿದ್ದರು.

ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ



ನಮೋ ಯೋಗ ಭವನದಲ್ಲಿ ಅರಿವು ಸಂಸ್ಥೆಯ 12ನೇ ವಾರ್ಷಿಕೋತ್ಸವ ಅಂಗವಾಗಿ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು.

ಮೈಸೂರು,ಮಾ.4–ಸಮಾಜ ನಮಗೇನು ಕೊಟ್ಟಿದೆ ಎನ್ನುವುದಕ್ಕಿಂತ ಸಮಾಜಕ್ಕೆ ನಾವೇನು ಕೊಟ್ಟಿದ್ದೇವೆ ಎನ್ನುವ ಚಿಂತನೆ ನಮ್ಮಲ್ಲಿ ಮೂಡಬೇಕು. ನಮಗೆ ಎಲ್ಲವನ್ನೂ ನೀಡಿರುವ ಸಮಾಜದ ಋಣವನ್ನು ತೀರಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದು ಹಿರಿಯ ಸಮಾಜಸೇವಕ ಕೆ.ರಘುರಾಮ ವಾಜಪೇಯಿ ಹೇಳಿದರು.

ನಗರದ ರಾಮಾನುಜ ರಸ್ತೆಯಲ್ಲಿರುವ ನಮೋ ಯೋಗ ಭವನದಲ್ಲಿ ಅರಿವು ಸಂಸ್ಥೆಯ 12ನೇ ವಾರ್ಷಿಕೋತ್ಸವ ಅಂಗವಾಗಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಕೆ.ಬಿ.ಲಿಂಗರಾಜು (ಕೈಗಾರಿಕಾ ಕ್ಷೇತ್ರ), ಡಾ.ಎಸ್.ಕೆ.ಮಿಥಲ್ (ವನ್ಯಜೀವಿ ಸಂರಕ್ಷಣಾ ಕ್ಷೇತ್ರ), ಜಯಪ್ರಕಾಶ್‌ಗೌಡ (ಚಿತ್ರರಂಗ ಕ್ಷೇತ್ರ), ಡಾ.ಆರ್.ಎಚ್.ಪವಿತ್ರ (ಶಿಕ್ಷಣ ಕ್ಷೇತ್ರ), ಶ್ವೇತಾ ಮಡಪ್ಪಾಡಿ (ಸಂಗೀತ ಕ್ಷೇತ್ರ), ಚರಣ್‌ರಾಜ್ (ಕ್ರೀಡಾ ಕ್ಷೇತ್ರ), ದೀಪಾನಾಯಕ್ (ಶಿಕ್ಷಣ ಕ್ಷೇತ್ರ), ನಾಗಮಣಿ (ಸಾಮಾಜಿಕ ಕ್ಷೇತ್ರ), ಎಂ ಕೆಬ್ಬೆಹುಂಡಿ ಶಿವಕುಮಾರ್ (ರಂಗಭೂಮಿ ಕ್ಷೇತ್ರ) ಅವರಿಗೆ ಅರಿವು ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಸಮಾಜ ಸೇವೆ ಮಾಡುವುದು ಮನುಷ್ಯನಿಗೆ ದೇವರು ನೀಡಿದ ಉತ್ತಮ ಅವಕಾಶ. ಅದರಲ್ಲೂ ನಿಸ್ವಾರ್ಥದಿಂದ ಸೇವೆ ಮಾಡಿದಾಗ ಅದರ ಮೌಲ್ಯ ಹೆಚ್ಚುತ್ತದೆ ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, ನಿರಂತರವಾಗಿ 12 ವರ್ಷದಿಂದ ನಾನಾ ರೀತಿಯ ಸಾಮಾಜಿಕ ಸೇವೆಯನ್ನು ಮಾಡುತ್ತಾ ಬಂದಿರುವ ಅರಿವು ಸಂಸ್ಥೆಯ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಸೇವಾ ಕಾರ್ಯ ನಿಜಕ್ಕೂ ಅತ್ಯಂತ ಶ್ಲಾಘನೀಯವಾದುದು. ಇಂತಹ ಸಾಮಾಜಿಕ ಸೇವೆಯ ಮೂಲಕ ಸಮಾಜಮುಖಿಯಾಗಿ ಕೆಲಸ ಮಾಡುವ, ಒಂದೇ ಮನಸ್ಸುಳ್ಳ ಸದಸ್ಯರನ್ನೊಳಗೊಂಡ ಸಂಘ–ಸಂಸ್ಥೆಗಳು ಜನರ ಮನಸ್ಸಿನಲ್ಲಿ ಸದಾ ಅಚ್ಚಳಿಯದೆ ಉಳಿಯುತ್ತವೆ ಎಂದು ಹೇಳಿದರು.


8ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು,ಮಾ.4– 2024–25ನೇ ಸಾಲಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಹಾಗೂ ಅನೈರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಆರ್ಥಿಕವಾಗಿ ಹಿಂದುಳಿದಿರುವ ಪ್ರತಿಭಾವಂತ ಗಂಡು ಮಕ್ಕಳಿಗೆ 8ನೇ ತರಗತಿಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಶ್ರೀ ರಾಮಕೃಷ್ಣ ವಿದ್ಯಾಶಾಲೆಗೆ ಪ್ರವೇಶ ಪರೀಕ್ಷೆ ಮುಖಾಂತರ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯ ಎಲ್ಲಾ ತಾಲೂಕಿನಲ್ಲಿರುವ ಸಹಾಯಕ ನಿರ್ದೇಶಕರ ಕಚೇರಿಗಳನ್ನು ಸಂಪರ್ಕಿಸಿ, ಅರ್ಜಿ ಸ್ವೀಕರಿಸಿದ ತಾಲೂಕಿನಲ್ಲೇ ಮಾ.26ರೊಳಗೆ ಅರ್ಜಿ ಸಲ್ಲಿಸಬೇಕು. ಪ್ರವೇಶ ಪರೀಕ್ಷೆ ಏ.11ರಂದು ಬೆಳಗ್ಗೆ 10ಕ್ಕೆ ಯಾದವಗಿರಿಯ ಶ್ರೀರಾಮಕೃಷ್ಣ ವಿದ್ಯಾಶಾಲೆಯಲ್ಲಿ ನಡೆಯುತ್ತದೆ. ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, 7ನೇ ತರಗತಿಯ ಅಂಕಪಟ್ಟಿ, ಅಭ್ಯರ್ಥಿ ಭಾವಚಿತ್ರ ಹಾಗೂ ಆಧಾರ್ ಕಾರ್ಡ್ ಅಥವಾ ವಿಳಾಸ ದೃಢೀಕರಣ ಪತ್ರಗಳನ್ನು ಅರ್ಜಿಯೊಂದಿಗೆ ಸಲ್ಲಿಸಬೇಕು.



ಮೈಸೂರಿನ ಜಯಚಾಮರಾಜ ತಾಂತ್ರಿಕ ವಿಶ್ವವಿದ್ಯಾನಿಲಯದ 2023–24ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಬಿ.ಇ. ಸಿವಿಲ್ ವಿಭಾಗದಲ್ಲಿ ಡಿ.ಮಂಜುನಾಥ್ 5 ಚಿನ್ನದ ಪದಕದೊಂದಿಗೆ ಪ್ರಥಮ ರ್‍ಯಾಂಕ್ ಗಳಿಸಿದ್ದಾರೆ. ಕಾಲೇಜಿನಲ್ಲಿ ನಡೆದ 6ನೇ ಘಟಿಕೋತ್ಸವ ಸಮಾರಂಭದಲ್ಲಿ ಚಿನ್ನದ ಪದಕ ನೀಡಲಾಯಿತು. ಈ ವೇಳೆ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಡಾ.ಸಿ.ಜಿ.ಬೆಟಸೂರ ಮಠ ಮತ್ತಿತರರು ಉಪಸ್ಥಿತರಿದ್ದರು. ಈತ ಜಾಕಿ ಕ್ವಾಟ್ರಸ್ ನಿವಾಸಿ ಎಎಸ್ಐ (ವೈರ್‌ಲೆಸ್ ಜಿಲ್ಲಾ ನಿಯಂತ್ರಣ ಕೊಠಡಿ) ಕೆ.ದಯಾನಂದ ಮತ್ತು ಶ್ರೀಮತಿ ಎಂ.ಆರ್.ರೋಹಿಣಿ ಅವರ ಪುತ್ರ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

5.3.2024 ಮಂಗಳವಾರ, ಮಳೆ ನಕ್ಷತ್ರ: ಪೂರ್ವಭಾದ್ರ 4.03.2024ರಿಂದ 16.03.2024 ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ, ತಿಥಿ: ದಶಮಿ, ನಕ್ಷತ್ರ: ಮೂಲ, ರಾಹುಕಾಲ: ಮಧ್ಯಾಹ್ನ 3ರಿಂದ 4.30ರವರೆಗೆ

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.

■ **ರಾಜೀವ್ ಗಾಂಧಿ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಯೂತ್ ಡೆವಲಪ್‌ಮೆಂಟ್, ಮೈಸೂರು ವಿವಿ ಎನ್‌ಎಸ್‌ಎಸ್ –ಎಂಪ್ಯಾನಲ್ಡ್ ಟ್ರೈನಿಂಗ್ ಇನ್‌ಸ್ಟಿಟ್ಯೂಟ್ :** ಮೈಸೂರು ವಿವಿ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮ, ಉದ್ಘಾಟನೆ : ಮೈಸೂರು ವಿವಿ ಕುಲಸಚಿವರಾದ ಶ್ರೀಮತಿ ವಿ.ಆರ್. ಶೈಲಜಾ, ಗೌರವ ಅತಿಥಿಗಳು : ಪ್ರಾದೇಶಿಕ ನಿರ್ದೇಶಕ ಕಾರ್ತಿಗುಹೇನ್, ಉಪಸ್ಥಿತರು: ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ. ಎಂ.ಬಿ. ಸುರೇಶ, ಸ್ಥಳ: ಎನ್‌ಎಸ್‌ಎಸ್ ಭವನ, ಬೆಳಗ್ಗೆ 10ಕ್ಕೆ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ :** ಸುಸ್ಥಿರ ಅಭಿವೃದ್ಧಿ ಹಾಗೂ ನಿರ್ವಹಣಾಶಾಸ್ತ್ರದ ನಾವೀನ್ಯ ಅನುಸರಣೆಗಳು ಕುರಿತು ರಾಷ್ಟ್ರೀಯ ಸಮ್ಮೇಳನ, ಉದ್ಘಾಟನೆ : ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ. ಕೆ.ಎಸ್. ರಂಗಪ್ಪ, ಮುಖ್ಯ ಭಾಷಣ : ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ ನಿವೃತ್ತ ಕುಲಪತಿ ಪ್ರೊ. ಎಂ.ಎಸ್. ಸುಭಾಷ್, ಮುಖ್ಯ ಅತಿಥಿಗಳು : ಇನ್ಫೋಸಿಸ್ ಅಭಿವೃದ್ಧಿ ಕೇಂದ್ರದ ಮುಖ್ಯಸ್ಥ ವಿನಾಯಕ್ ಹೆಗ್ಡೆ, ಅಧ್ಯಕ್ಷತೆ : ಕರಾಮುವಿವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ, ಉಪಸ್ಥಿತರು : ಕುಲಸಚಿವ ಪ್ರೊ. ಕೆ.ಎಲ್.ಎನ್. ಮೂರ್ತಿ, ಪ್ರೊ. ಕೆ.ವಿ. ಪ್ರವೀಣ್, ಡೀನ್ ಪ್ರೊ. ಎಂ. ರಾಮನಾಥಂ ನಾಯ್ಡು, ಪ್ರೊ. ಎನ್. ಲಕ್ಷ್ಮೀ, ಸ್ಥಳ: ಕಾವೇರಿ ಸಭಾಂಗಣ, ಕರಾಮುವಿವಿ, ಬೆಳಗ್ಗೆ 10.30ಕ್ಕೆ.

■ **ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್ ಚಾರಿಟೆಬಲ್ ಟ್ರಸ್ಟ್ :** ಜಿಲ್ಲೆಯ ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿನಿಯರಿಗೆ ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಶಾಸಕರಾದ ತನ್ವೀರ್ ಸೇಠ್, ಕೆ. ಹರೀಶ್‌ಗೌಡ, ಡಿ. ರವಿಶಂಕರ್, ಮೈಸೂರು ವಿವಿ ಕುಲಪತಿ ಎನ್.ಕೆ. ಲೋಕನಾಥ್, ಮೈಸೂರು ಜಿಲ್ಲಾ ಕಾಲೇಜು ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕರಾದ ಡಾ. ಎಚ್.ಎಂ.ಎ. ವಿಜಯಲಕ್ಷ್ಮಿ, ಬಿ.ಎಡ್. ಕಾಲೇಜು ನಿರ್ದೇಶಕರಾದ ಶ್ರೀಮತಿ ಗೀತಾಂಬಾ, ದಕ್ಷಿಣ ವಲಯ ಹೆಡ್ ಪಿ. ಶರಫುದ್ದೀನ್, ಸ್ಥಳ: ಪ್ರೊ. ಕೆ.ಎಸ್. ರಂಗಪ್ಪ ಸಭಾಂಗಣ, ಸ್ಕೂಲ್ ಆಫ್ ಪ್ಲಾನಿಂಗ್ ಮತ್ತು ಆರ್ಕಿಟೆಕ್ಚರ್ ಬಿಲ್ಡಿಂಗ್, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.

■ **ಟಿಟಿಎಲ್ ವಾಣಿಜ್ಯ ವ್ಯವಹಾರ ನಿರ್ವಹಣಾ ಕಾಲೇಜು :** ಸುಡುಬಿಸಿಲ ತಾಪಕ್ಕೆ ತಲ್ಲಣಿಸುವ ಮೂಕಜೀವಿಗಳ ದಾಹಕ್ಕೆ ಮೌನ ಮಿಡಿತ ಚಟುವಟಿಕೆಗಳ ಕಾರ್ಯಕ್ರಮ, ಅಧ್ಯಕ್ಷತೆ : ಟಿಟಿಎಲ್ ಕಾಲೇಜು ಪ್ರಾಂಶುಪಾಲ ಡಾ. ಬಿ.ವಿ. ಪ್ರಶಾಂತ್, ಮುಖ್ಯ ಅತಿಥಿಗಳು : ಟಿಟಿಎಲ್ ಟ್ರಸ್ಟ್ ಡಾ. ಗೀತಾ ರಾಮದಾಸ್, ಡಾ. ಎಸ್.ಕೆ. ಮಿತ್ತಲ್, ಉರಗ ತಜ್ಞ ಸ್ನೇಕ್ ಶ್ಯಾಂ, ವಿಕ್ರಂ ಅಯ್ಯಂಗಾರ್, ಶ್ರೀಮತಿ ಭ್ರಮರಾಂಭ, ಪ್ರೊ. ಎನ್.ಎಂ. ರಾಮಚಂದ್ರಯ್ಯ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ:** ಪಂಡಿತ್ ಶ್ರೀ ಅನಿರುದ್ಧಾಚಾರ್ ಪಾಂಡುರಂಗಿ ಅವರಿಂದ 'ಪದ್ಮ ಪುರಾಣ' ಕುರಿತು ಪ್ರವಚನ, ಸ್ಥಳ: ಮಠದ ಆವರಣ, ಜಯಲಕ್ಷ್ಮೀಪುರಂ, ಸಂಜೆ 5ರಿಂದ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಶ್ರದ್ಧೆಯ ಶಿಲ್ಪ–ಲೇಖನ ಮತ್ತು ಪ್ರಸ್ತುತಿ–ಟಿ.ಎಸ್.ಗೋಪಾಲ್, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ನಾ ಕಸ್ತೂರಿ ಅವರ ರಂಗನಾಯಕಿ ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ–ಉಮೇಶ್ ಎಸ್.ಎಸ್., 8.30 ಬಹುರೂಪಿ–ರಾಷ್ಟ್ರೀಯ ನಾಟಕೋತ್ಸವದ ಕುರಿತಾಗಿ ಸಂಭಾಷಣೆಯಲ್ಲಿ ಭಾಗವಹಿಸುತ್ತಾರೆ ನಿರ್ಮಲಾ ಮಠಪತಿ ಹಾಗೂ ಹೆಚ್.ಎಸ್.ಉಮೇಶ್, 9.00 ಪರಾಗ–ಬೇಸಾಯದ ಬದುಕು ಸರಾಗ, ಬಾನುಲಿ ಸರಣಿ–ಪ್ರಸ್ತುತಿ–ಎನ್.ಕೇಶವಮೂರ್ತಿ, 9.15 ಕರೆಗೊಂದು ಗೀತೆ, 10.00 ಗೀತಾ ವೈ.ಪುಟ್ಟಿ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30 ದೇವರನಾಮ–ರಾಜಗೋಪಾಲ ಭಾಗವತ್, ಶಾಂತಾ ಜಯತೀರ್ಥ, 12.45 'ನಮಗೆ ತೆರಿಗೆ ಭಾರವಾಗಿದೆಯೇ? ಮಾತನಾಡುತ್ತಾರೆ ಎ.ಯು. ಪ್ರಕಾಶ್, 1.20 ಭಾವಗೀತೆಗಳು–ಶೈಲಜಾ ಚಂದ್ರಶೇಖರ್, 3.00 ಮೈಸೂರು ಎ.ಚಂದನ್ ಕುಮಾರ್–ವೇಣುವಾದನ, 4.00 ಕಥಾ ಕಾಲಕ್ಷೇಪ–ಶಿವರಾತ್ರಿ ಮಹಿಮೆ, ಪ್ರಸ್ತುತಿ– ವಿದ್ವಾನ್ ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ–ರೇಷ್ಮೆ ಸಿರಿ ಬಾನುಲಿ ಸರಣಿ, ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಸ್ತರಣೆ ಮತ್ತು ತರಬೇತಿ ಕುರಿತ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಡಾ.ಆರ್.ಭಾಗ್ಯ ಮತ್ತು ಡಾ.ಆರ್.ಮೀನಲ್, 9.30 ಎನ್.ಪಿ.ರಾಮಸ್ವಾಮಿ–ಹಾಡುಗಾರಿಕೆ, 10.00 ಗಮಕ ವ್ಯಾಖ್ಯಾನ, ವಾಚನ–ಲಲಿತಾ ಎಸ್.ಶೇಖರ್, ವ್ಯಾಖ್ಯಾನ–ಸುಮಾ ವಸಂತ್, 10.30 ಸವಿನೆನಪು

ಮೈಸೂರು ಮಿತ್ರ ಮಂಗಳವಾರ 5 ಮಾರ್ಚ್ 2024

ಗುತ್ತಿಗೆದಾರರಿಂದ ಐದು ಪೈಸೆ ಲಂಚ ಪಡೆದಿದ್ದು ರುಜುವಾತುಪಡಿಸಿದರೆ ರಾಜಕೀಯ ನಿವೃತ್ತಿ

• ಗುತ್ತಿಗೆದಾರರ ಸಮಾರಂಭದಲ್ಲಿ ಸಿಎಂ ಸಿದ್ದರಾಮಯ್ಯ ಸವಾಲು • ನಮ್ಮ ಸರ್ಕಾರದಲ್ಲೂ ಶೇ. 40 ಕಮಿಷನ್ ಆರೋಪಕ್ಕೆ ಪ್ರತ್ಯುತ್ತರ • ಗುತ್ತಿಗೆದಾರರು ರಾಜಕೀಯದಿಂದ ದೂರವಿರಿ: ಡಿಸಿಎಂ ಡಿ.ಕೆ. ಶಿವಕುಮಾರ್



ಬೆಂಗಳೂರು, ಮಾ.4(ಕೆಎಂಶಿ)– ಗುತ್ತಿಗೆದಾರರಿಂದ ಐದು ಪೈಸೆ ಲಂಚ ಪಡೆದಿದ್ದು ಸಾಬೀತುಪಡಿಸಿದರೆ ರಾಜಕೀಯ ನಿವೃತ್ತಿ ಕೈಗೊಳ್ಳುವುದಾಗಿ ಮುಖ್ಯಮಂತ್ರಿ ಸಿದ್ದಾರಾಮಯ್ಯ ಇಂದಿಲ್ಲಿ ಖಾರವಾಗಿ ನುಡಿದಿದ್ದಾರೆ.

ಬಿಜೆಪಿ ಆಡಳಿತದಲ್ಲಿ ಇದ್ದಂತೆ ಕಾಂಗ್ರೆಸ್ ಆಡಳಿತದಲ್ಲೂ 40 ಪರ್ಸೆಂಟ್ ಕಮಿಷನ್ ನಡೆಯುತ್ತಿದೆ ಎಂದು ಗುತ್ತಿಗೆದಾರರು ಆರೋಪ ಮಾಡಿದ್ದ ಹಿನ್ನೆಲೆಯಲ್ಲಿ ಸಂಘವೇ ಇಂದು ನಗರದಲ್ಲಿ ಏರ್ಪಡಿಸಿದ್ದ ಸಮಾರಂಭದಲ್ಲಿ ಅವರಿಗೇ ಮುಖ್ಯಮಂತ್ರಿ ಈ ಸವಾಲು ಹಾಕಿದ್ದಾರೆ.

ಇದೇ ವೇದಿಕೆಯಲ್ಲಿ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಖಾತೆ ಹೊಣೆ ಹೊತ್ತ ಡಿ.ಕೆ.ಶಿವಕುಮಾರ್ ಮಾತನಾಡಿ, ಗುತ್ತಿಗೆದಾರರು ರಾಜಕೀಯದಿಂದ ದೂರವಿರಿ, ನಿಮಗೂ, ನಮಗೂ ಭ್ರಷ್ಟಾಚಾರದ ಮಸಿ ಯಾವಾಗಲೂ ಅಂಟೇ ಇರುತ್ತದೆ ಎಂದು ಮಾರ್ಮಿಕವಾಗಿ ತಿಳಿಸಿದ್ದಾರೆ.

ಅರಮನೆ ಮೈದಾನದಲ್ಲಿ ನಡೆದ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಮ್ಮೇಳನದಲ್ಲಿ ಮಾತನಾಡಿದ ಸಿದ್ದರಾಮಯ್ಯ, ನಾನು ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿ ಅಧಿಕಾರ ನಡೆಸುತ್ತಿದ್ದೇನೆ. ನಾನು ನಿಮ್ಮಿಂದ ಎಲ್‌ಓಸಿಗೆ ನಯಾಪೈಸೆ ಪಡೆದಿದ್ದು ಸಾಬೀತು ಮಾಡಿದರೂ ಸಾರ್ವಜನಿಕ ಜೀವನದಿಂದ ಹಿಂದೆ ಸರಿಯುತ್ತೇನೆ. ನೀವು ಹಿಂದಿನ ಸರ್ಕಾರದ ಮೇಲೆ ಮಾಡಿದ್ದ ಭ್ರಷ್ಟಾಚಾರದ ಆರೋಪವನ್ನು ಈ ಸರ್ಕಾರಕ್ಕೂ ಮುಂದುವರೆಸಬೇಡಿ ಎಂದರು. ಹೇಳಿಕೆ ನೀಡುವಾಗ ಜವಾಬ್ದಾರಿಯಿಂದ ವರ್ತಿಸಬೇಕು, ನಿಮ್ಮಲ್ಲಿನ ಸಣ್ಣ ಗುತ್ತಿಗೆದಾರರ ಅನುಕೂಲಕ್ಕಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 25 ಕೋಟಿ ರೂ.ನಂತೆ 4 ಸಾವಿರ ಕೋಟಿ ರೂ. ಕಾಮಗಾರಿ ಗುತ್ತಿಗೆ ನೀಡಲು ಲೋಕೋಪಯೋಗಿ ಸಚಿವರಿಗೆ ಸೂಚಿಸಿದ್ದೇನೆ.

ಗುತ್ತಿಗೆದಾರರ ಬಾಕಿ ಮೊತ್ತವನ್ನು ಹಂತ ಹಂತವಾಗಿ ಪೂರ್ತಿ ಪಾವತಿಸಲಾಗುವುದು, ನಿಮ್ಮ ಸಲಹೆಯಂತೆ ಪ್ಯಾಕೇಜ್ ಪದ್ಧತಿ ರದ್ದುಪಡಿಸುವ ಕುರಿತೂ ಚಿಂತನೆ ನಡೆದಿದೆ ಎಂದರು. ಭದ್ರ ಮೇಲ್ದಂಡೆ ಯೋಜನೆಗೆ ಕೇಂದ್ರದಿಂದ ಹಣ ಬಂದಿದ್ದರೂ ನಿಮ್ಮ ಸದಸ್ಯರಿಗೆ ಗುತ್ತಿಗೆ ದೊರೆಯುತ್ತಿತ್ತು ಎಂದು ಪ್ರಧಾನಿ ವಿರುದ್ಧ ವಾಗ್ದಾಳಿ ಮುಂದುವರೆಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಯಾವುದೇ ಸರ್ಕಾರ ಬಂದರೂ ನೀವು ರಾಜಕೀಯದವರ ಸಹವಾಸ ಮಾಡಬೇಡಿ ಎಂದು ಕಿವಿಮಾತು ಹೇಳಿದರು. ನೀವು ಹತ್ತು ಹಲವು ಬೇಡಿಕೆ ಇಟ್ಟಿದ್ದೀರಿ, ಲೋಕಸಭಾ ಚುನಾವಣೆ ನಂತರ ನಿಮ್ಮ ಬೇಡಿಕೆ ಬಗ್ಗೆ ಸರ್ಕಾರ ಗಮನ ಹರಿಸುತ್ತೆ, ನೀವು ಹೆದರಬೇಡಿ. ಮುಂದಿನ 9 ವರ್ಷಗಳ ಕಾಲ ಕರ್ನಾಟಕದಲ್ಲಿ ನಮ್ಮದೇ ಆಡಳಿತ ಎಂದು ಭವಿಷ್ಯ ನುಡಿದರು. ಗುತ್ತಿಗೆದಾರರ ಬಲ ನಮಗೆ ತಿಳಿದಿದೆ, ನೀವಿಲ್ಲದೆ ಸರ್ಕಾರ ನಡೆಸಲು ಸಾಧ್ಯವಿಲ್ಲ, ನೀವು ಕಾಮಗಾರಿ ನಡೆಸಿದರಷ್ಟೇ ಅಭಿವೃದ್ಧಿ, ಅದರಿಂದ ಸರ್ಕಾರಕ್ಕೂ ಒಳ್ಳೆಯ ಹೆಸರು ಬರುತ್ತದೆ. ಹಿಂದಿನ ಸರ್ಕಾರ ಸರಿಯಾದ ಯೋಜನೆ ಮಾಡದೆ ನಿಮ್ಮ ಮೇಲೆ ಹೊರೆ ಹಾಕಿದೆ, ನೀರಾವರಿ ಇಲಾಖೆ ಬಜೆಟ್ 16 ಸಾವಿರ ಕೋಟಿ ಇದೆ, ಆದರೆ ಕಳೆದ ವರ್ಷ 25 ಸಾವಿರ ಕೋಟಿ ಮೊತ್ತದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಒಟ್ಟು ನಮ್ಮ ಇಲಾಖೆಯಲ್ಲಿ ಒಂದು ಲಕ್ಷದ 25 ಸಾವಿರ ಕೋಟಿ ಮೊತ್ತದ ಕಾಮಗಾರಿಗಳು ನಡೆಯುತ್ತಿವೆ, ನಾವು ಹಣ ನೀಡದಿದ್ದರೆ, ನೀವು ಕೆಲಸ ಮುಗಿಸುವುದು ಹೇಗೆ ಎಂದು ಪ್ರಶ್ನಿಸಿದರು. ಈ ಬಾರಿ ಅಭಿವೃದ್ಧಿಗಾಗಿಯೇ 1.20 ಲಕ್ಷ ಕೋಟಿ ಹಣ ಮೀಸಲಿಟ್ಟಿದ್ದೇವೆ, ಆ ಹಣದಲ್ಲಿ ನಿಮ್ಮ ಬಹುತೇಕ ಬೇಡಿಕೆಗಳು ಈಡೇರುತ್ತವೆ. ಕೇಂದ್ರ ಸರ್ಕಾರ ನಮಗೆ ನೀಡಬೇಕಾದ ಹಣವನ್ನು ಕಾಲಾನುಕಾಲಕ್ಕೆ ನೀಡಿದ್ದರೆ ಇಂತಹ ಸಂಕಷ್ಟ ನಿಮಗೂ, ನಮಗೂ ಬರುತ್ತಿರಲಿಲ್ಲ ಎಂದಿದ್ದಾರೆ.

ಕಾವೇರಿ ಆಯುರ್ವೇದ ಕಾಲೇಜಲ್ಲಿ 'ಶಿಷ್ಯೋಪನಯನ'





ಕಾವೇರಿ ಆಯುರ್ವೇದ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಶಿಷ್ಯತ್ವ ಪ್ರತಿಜ್ಞೆ ಸ್ವೀಕರಿಸಿದರು.

ಮೈಸೂರು, ಮಾ.4(ಎಸ್‌ಬಿಡಿ)– ಮೈಸೂರಿನ ಕಾವೇರಿ ಆಯುರ್ವೇದ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆಯಲ್ಲಿ ಇತ್ತೀಚೆಗೆ 'ಶಿಷ್ಯೋಪನಯನ' ಕಾರ್ಯಕ್ರಮ ನಡೆಯಿತು.

ಕಾಲೇಜಿನ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಆಯುರ್ವೇದ ವೈದ್ಯಕೀಯ ವೃತ್ತಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಶಿಷ್ಯತ್ವ ಪ್ರತಿಜ್ಞೆ ಸ್ವೀಕರಿಸಿದರು.

ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಟ್ ಅಧ್ಯಕ್ಷ ಡಾ.ಜಿ.ಚಂದ್ರಶೇಖರ್ ಮಾತನಾಡಿ, ವೈದ್ಯ ವೃತ್ತಿ ತುಂಬಾ ಪವಿತ್ರವಾದುದು. ರೋಗಿಗಳನ್ನು ಬಾಧಿಸುತ್ತಿರುವ ಸಮಸ್ಯೆಗಳನ್ನು ಪತ್ತೆಹಚ್ಚಿ ಉತ್ತಮ ಚಿಕಿತ್ಸೆ ನೀಡುವ ಮೂಲಕ ಗುಣಮುಖರನ್ನಾಗಿಸುವ ನಿಟ್ಟಿನಲ್ಲಿ ವೈದ್ಯಕೀಯ ಜ್ಞಾನ ಅತ್ಯವಶ್ಯಕ. ಚಿಕಿತ್ಸೆ ಜೊತೆಗೆ ರೋಗಿಗಳಲ್ಲಿ ಆತ್ಮಸ್ಥೈರ್ಯ ತುಂಬುವುದು ತುಂಬಾ ಮುಖ್ಯ ಎಂದು ಸಲಹೆ ನೀಡಿದರು.

ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಡಾ.ಸರಳ ಚಂದ್ರಶೇಖರ್ ಮಾತನಾಡಿ, ವಿದ್ಯಾರ್ಥಿಗಳು ಶ್ರದ್ಧೆಯಿಂದ ವೈದ್ಯ ವೃತ್ತಿ ಕೋರ್ಸ್ ಅಧ್ಯಯನ ಮಾಡಿ, ಅತ್ಯುತ್ತಮ ವೈದ್ಯರಾಗಿ ಹೊರಹೊಮ್ಮಬೇಕೆಂದು ಕಿವಿಮಾತು ಹೇಳಿದರು. ಸಂಸ್ಥೆಯ ಡೀನ್ ಪ್ರೊ.ಶ್ರೀಕಂಠಸ್ವಾಮಿ ಮಾತನಾಡಿ, ಚೆನ್ನಾಗಿ ಓದುವುದರ ಜೊತೆಗೆ ಮಾನವೀಯ ಮೌಲ್ಯಗಳನ್ನು ರೂಢಿಸಿಕೊಳ್ಳಬೇಕು. ಸಮಾಜದಲ್ಲಿ ಅತ್ಯುತ್ತಮ ವೈದ್ಯರಾಗಿ ಸೇವೆ ಸಲ್ಲಿಸುವ ಮೂಲಕ ನಮ್ಮ ಸಂಸ್ಥೆ ಹಾಗೂ ನಿಮ್ಮ ಪೋಷಕರಿಗೆ ಕೀರ್ತಿ ತರಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ನಿರ್ದೇಶಕ ಡಾ.ಕೃಷ್ಣಪ್ರಸಾದ್, ಪ್ರಾಚಾರ್ಯ ಡಾ.ರಾಮಚಂದ್ರ ನಿಸರ್ಗಿ ಮತ್ತಿತರರಿದ್ದರು. ಇದಕ್ಕೂ ಮುನ್ನ ಕಾರ್ಯಕ್ರಮದ ಅಂಗವಾಗಿ 'ಧನ್ವಂತ್ರಿ ಹೋಮ' ನಡೆಸಲಾಯಿತು.

ಬರ ಸಂಬಂಧ ಇಂದು ಸಿಎಂ ಸಿದ್ದರಾಮಯ್ಯ ಮಹತ್ವದ ಸಭೆ

ಬೆಂಗಳೂರು, ಮಾ.4(ಕೆಎಂಶಿ)–ಬರ ಪರಿಸ್ಥಿತಿ ನಿರ್ವಹಣೆ ಮತ್ತಿತರ ವಿಷಯಗಳ ಪ್ರಗತಿ ಪರಿಶೀಲನೆ ಕುರಿತು ಜಿಲ್ಲಾ ಉಸ್ತುವಾರಿ ಸಚಿವರು, ಕಾರ್ಯದರ್ಶಿಗಳು ಮತ್ತು ಇತರ ಹಿರಿಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ (ಮಂಗಳವಾರ) ಬೆಳಗ್ಗೆ 11 ಗಂಟೆಗೆ ಗೃಹ ಕಚೇರಿ ಕೃಷ್ಣಾದಲ್ಲಿ ವಿಡಿಯೊ ಸಂವಾದ ನಡೆಸಲಿದ್ದಾರೆ. ವಿಡಿಯೊ ಸಂವಾದದಲ್ಲಿ ಎಲ್ಲ ಜಿಲ್ಲೆಗಳಲ್ಲಿನ ಕುಡಿಯುವ ನೀರು, ಬರ ನಿರ್ವಹಣೆ, ಜಾನುವಾರುಗಳಿಗೆ ಮೇವು, ಉದ್ಯೋಗ ಹಾಗೂ ಕೃಷಿ ವಿಷಯಗಳ ಕುರಿತು ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

ಬಿಜೆಪಿ ಮಹಿಳಾ ಮೋರ್ಚಾದಿಂದ 'ನಾರಿ ಶಕ್ತಿ ವಂದನಾ' ವಾಕಥಾನ್



ಮೈಸೂರಿನಲ್ಲಿ ಸೋಮವಾರ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ 'ನಾರಿ ಶಕ್ತಿ ವಂದನಾ' ವಾಕಥಾನ್ ನಡೆಸಲಾಯಿತು.

ಮೈಸೂರು, ಮಾ.4(ಎಸ್‌ಬಿಡಿ)– ಮೈಸೂರಿನ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಸೋಮವಾರ 'ನಾರಿ ಶಕ್ತಿ ವಂದನಾ' ವಾಕಥಾನ್ ಆಯೋಜಿಸಲಾಗಿತ್ತು.

ನ್ಯಾಯಾಲಯದ ಮುಂಭಾಗದಿಂದ ಆರ್‌ಟಿಓ ವೃತ್ತ, ರಾಮಸ್ವಾಮಿ ವೃತ್ತದ ಮಾರ್ಗವಾಗಿ ಚಾಮರಾಜಪುರಂನಲ್ಲಿರುವ ಬಿಜೆಪಿ ಕಚೇರಿವರೆಗೆ ವಾಕಥಾನ್ ನಡೆಸಿದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಮಾರ್ಗದುದ್ದಕ್ಕೂ 'ರನ್ ಫಾರ್ ನೇಷನ್' ಹಾಗೂ 'ರನ್ ಫಾರ್ ಮೋದಿ' ಘೋಷಣೆ ಮೊಳಗಿಸಿದರು.

ಈ ವೇಳೆ ಬಿಜೆಪಿ ಮೈಸೂರು ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ಪ್ರಧಾನಿ ಮೋದಿ ಅವರ ಮಾರ್ಗದರ್ಶನದಲ್ಲಿ ರೂಪಿಸಿರುವ ನಾರಿ ಶಕ್ತಿ ವಂದನಾ ಕಾರ್ಯಕ್ರಮ ಯಶಸ್ವಿಯಾಗಬೇಕು. ಸ್ವಸಹಾಯ ಸಂಘಗಳು, ನಗರ ಮತ್ತು ಗ್ರಾಮೀಣ ಭಾಗದ ಸ್ತ್ರೀಯರಿಗೆ ಕೇಂದ್ರ ಸರ್ಕಾರದ ಹಲವು ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಿ, ಸೇವೆ ಪಡೆಯಲು ಸೂಕ್ತ ಮಾರ್ಗದರ್ಶನ ನೀಡಬೇಕೆಂಬ ಕಾರ್ಯಕ್ರಮದ ಉದ್ದೇಶ ಸಾಕಾರಗೊಳ್ಳುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕೆಲಸ ಮಾಡಬೇಕು. ಮೋದಿ ಅವರು ಮಹಿಳಾ ಸಬಲೀಕರಣಕ್ಕಾಗಿ ನೀಡಿರುವ ಯೋಜನೆಗಳನ್ನು ಫಲಾನುಭವಿಗಳಿಗೆ ಮುಟ್ಟಿಸುವ ಮಹತ್ತರ ಜವಾಬ್ದಾರಿ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಮೇಲಿದೆ ಎಂದು ತಿಳಿಸಿದರು.

ಈ ವೇಳೆ ಶಾಸಕ ಟಿ.ಎಸ್.ಶ್ರೀವತ್ಸ, ಮೈಸೂರು ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾ ರಾಜ್, ಪ್ರಧಾನ ಕಾರ್ಯದರ್ಶಿಗಳಾದ ಚಂದ್ರಕಲಾ, ಮಮತಾ ಶೆಟ್ಟಿ, ಮಹಿಳಾ ವಿಭಾಗದ ಪ್ರಭಾರಿ ಹೇಮಾ ನಂದೀಶ್, ಬಿಜೆಪಿ ನಗರ ಘಟಕದ ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಜಿ.ಗಿರಿಧರ್, ಕೇಬಲ್ ಮಹೇಶ್, ಬಿ.ಎಂ.ರಘು, ಬಿಜೆಪಿ ಯುವ ಮೋರ್ಚಾ ನಗರಾಧ್ಯಕ್ಷ ರಾಕೇಶ್ ಗೌಡ, ಮಾಜಿ ಉಪಮೇಯರ್‌ಗಳಾದ ಡಾ.ರೂಪ, ಶೈಲೇಂದ್ರ, ನಗರಪಾಲಿಕೆ ಮಾಜಿ ಸದಸ್ಯರಾದ ಪ್ರಮೀಳಾ ಭರತ್, ಲಕ್ಷ್ಮಿ ಕಿರಣ್‌ಗೌಡ, ಸೌಭಾಗ್ಯ ಮೂರ್ತಿ, ಅಲ್ಪಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಡಾ.ಅನಿಲ್ ಥಾಮಸ್, ರಾಜ್ಯ ವಕ್ತಾರ ಎನ್.ವಿ.ಫಣೀಶ್, ಮುಖಂಡರಾದ ಹೇಮಂತ್‌ಕುಮಾರ್ ಗೌಡ, ಜಯಪ್ರಕಾಶ್(ಜೆಪಿ) ಗೌಡ ಸೇರಿದಂತೆ ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಕ್ಕೆ ಶೀಘ್ರ ಪರಿಹಾರ ಕಲ್ಪಿಸಿ

ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಶಿವರಾಜ್ ಸೂಚನೆ



ರೈತರ ಆತ್ಮಹತ್ಯೆ ಅರ್ಹ ಪ್ರಕರಣಗಳಲ್ಲಿ ಸಂತ್ರಸ್ತ ಕುಟುಂಬಗಳಿಗೆ ಸರ್ಕಾರದ ಸೌಲಭ್ಯಗಳನ್ನು ಕಲ್ಪಿಸುವ ಸಂಬಂಧ ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಸೋಮವಾರ ಅಧಿಕಾರಿಗಳ ಸಭೆ ನಡೆಸಿದರು.

ಮೈಸೂರು, ಮಾ.4(ಎಸ್‌ಬಿಡಿ)– ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬದವರಿಗೆ ಸರ್ಕಾರದ ಸೌಲಭ್ಯಗಳನ್ನು ತ್ವರಿತವಾಗಿ ಕಲ್ಪಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಮೈಸೂರು ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು ಸೂಚನೆ ನೀಡಿದರು.

ರೈತರ ಆತ್ಮಹತ್ಯೆ ಅರ್ಹ ಪ್ರಕರಣಗಳಲ್ಲಿ ಅವರ ಕುಟುಂಬದವರಿಗೆ ವಿವಿಧ ಇಲಾಖೆಗಳಿಂದ ದೊರಕುವ ಸೌಲಭ್ಯಗಳ ಅನುಷ್ಠಾನ ಸಂಬಂಧ ಜಿಲ್ಲಾ ಮಟ್ಟದ ಅಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿ ಸೋಮವಾರ ಪ್ರಗತಿ ಪರಿಶೀಲನೆ ನಡೆಸಿದ ಅವರು, ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬದ ಸದಸ್ಯರಿಗೆ ಸರ್ಕಾರದ ವಿಶೇಷ ಸೌಲಭ್ಯಗಳನ್ನು ತಲುಪಿಸುವಲ್ಲಿ ಯಾವುದೇ ವಿಳಂಬವಾಗದಂತೆ ಎಚ್ಚರ ವಹಿಸಬೇಕು ಎಂದು ತಿಳಿಸಿದರು.

ರೈತರ ಆತ್ಮಹತ್ಯೆ ಅರ್ಹ ಪ್ರಕರಣಗಳಲ್ಲಿ ಸರ್ಕಾರದ ವಿಶೇಷ ಸೌಲಭ್ಯಗಳ ಕುರಿತು ಅಧಿಕಾರಿಗಳ ಸ್ಪಂದನೆ ಹಾಗೂ ಪರಿಣಾಮಕಾರಿ ಅನುಷ್ಠಾನ ಕುರಿತು ಪ್ರತಿ ತಿಂಗಳ ಮೊದಲ ಸೋಮವಾರ ನಿಯಮಿತವಾಗಿ ಉಸ್ತುವಾರಿ ಸಭೆ ನಡೆಸಲಾಗುವುದು. ವಿವಿಧ ಇಲಾಖೆ ಅಧಿಕಾರಿಗಳು ರೈತ ಕುಟುಂಬಗಳಿಗೆ ತೊಂದರೆಯಾಗದಂತೆ ಕ್ರಮ ವಹಿಸಬೇಕು ಎಂದರು.

43 ಅರ್ಹ ಪ್ರಕರಣ: 2023ರ ಏಪ್ರಿಲ್‌ನಿಂದ ಈವರೆಗೆ ಜಿಲ್ಲೆಯಲ್ಲಿ ಒಟ್ಟು 53 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿದ್ದು, 43 ಅರ್ಹ ಪ್ರಕರಣಗಳೆಂದು ಪರಿಗಣಿಸಲಾಗಿದೆ. ಇದರಲ್ಲಿ ಮೂರು ಪ್ರಕರಣಗಳಲ್ಲಿ ಎಫ್‌ಎಸ್‌ಎಲ್ ವರದಿ ಬಾಕಿ ಇದ್ದು, ಎರಡು ಪ್ರಕರಣಗಳಲ್ಲಿ ಕೆಲ ದಾಖಲಾತಿಗಳ ಅವಶ್ಯಕತೆ ಇವೆ. ಈ ರೀತಿಯ ಕಾರಣಗಳಿಂದ ಬಾಕಿ ಇರುವ ಪ್ರಕರಣಗಳಿಗೆ ಪೊಲೀಸ್ ಅಧಿಕಾರಿಗಳು ಆದ್ಯತೆ ನೀಡಬೇಕು. ಇನ್ನು 16 ರೈತ ಕುಟುಂಬಗಳಿಗೆ ಆರೋಗ್ಯ ಇಲಾಖೆಯಿಂದ ಶೀಘ್ರ ಹೆಲ್ತ್ ಕಾರ್ಡ್ ನೀಡುವ ಮೂಲಕ ಅವರಿಗೆ ವಿಶೇಷ ಆರೋಗ್ಯ ಚಿಕಿತ್ಸಾ ಸೌಲಭ್ಯಗಳನ್ನು ಪಡೆಯಲು ಅನುಕೂಲ ಮಾಡಿಕೊಡಬೇಕು ಎಂದು ಸೂಚನೆ ನೀಡಿದರು. ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳಿಗೆ ಶಿಕ್ಷಣ ಕ್ಷೇತ್ರದಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಯಾವುದೇ ರೀತಿಯಲ್ಲಿ ವಿಳಂಬವಾಗದಂತೆ ಇಲಾಖೆ ಅಧಿಕಾರಿಗಳು ಕ್ರಮ ವಹಿಸಬೇಕು. ಪ್ರಕರಣ ವರದಿಯಾದ 4 ಗಂಟೆಯೊಳಗೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನಾ ವರದಿ ಸಲ್ಲಿಸಬೇಕು. ಕೃಷಿ ಕ್ಷೇತ್ರದ ಜೊತೆಗೆ ರೈತರ ಅಭಿವೃದ್ಧಿಗಾಗಿ ರೂಪಿಸಿರುವ ಯೋಜನೆಗಳು, ಸರ್ಕಾರಗಳ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸಿ, ಯಾವುದೇ ಕಾರಣಕ್ಕೂ ಕೆಟ್ಟ ನಿರ್ಧಾರ ತೆಗೆದುಕೊಳ್ಳದಂತೆ ಸ್ಥೈರ್ಯ ತುಂಬಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಂ.ಪಿ.ಕುಮಾರಸ್ವಾಮಿ, ಕೃಷಿ, ಕಂದಾಯ, ಶಿಕ್ಷಣ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

ಇಸ್ರೋ ಮುಖ್ಯಸ್ಥ ಎಸ್.ಸೋಮನಾಥ್‌ಗೆ ಕ್ಯಾನ್ಸರ್

Aditya-L1 ಉಡಾವಣೆಯ ದಿನವೇ ಪತ್ತೆಯಾಗಿತ್ತು ಮಾರಕ ಕಾಯಿಲೆ!



ನವದೆಹಲಿ: ಚಂದ್ರಯಾನ ಮತ್ತು ಸನ್ ಮಿಷನ್ ಯಶಸ್ವಿಗೊಳಿಸುವ ಮೂಲಕ ಬಾಹ್ಯಾಕಾಶ ಲೋಕದಲ್ಲಿ ಭಾರತಕ್ಕೆ ಕೀರ್ತಿ ತಂದ ಇಸ್ರೋ ಮುಖ್ಯಸ್ಥ ಸೋಮನಾಥ್ ಕ್ಯಾನ್ಸರ್‌ನಿಂದ ಬಳಲುತ್ತಿದ್ದಾರೆ. ಈ ವಿಷಯವನ್ನು ಸ್ವತಃ ಅವರೇ ಸಂದರ್ಶನವೊಂದರಲ್ಲಿ ಬಹಿರಂಗಪಡಿಸಿದ್ದಾರೆ.

ಸ್ಕ್ಯಾನಿಂಗ್ ಮಾಡುವಾಗ ಹೊಟ್ಟೆಯಲ್ಲಿ ಕ್ಯಾನ್ಸರ್ ಇರುವುದು ಪತ್ತೆಯಾಗಿದೆ, ಸದ್ಯ ಚಿಕಿತ್ಸೆ ಪಡೆಯುತ್ತಿರುವುದಾಗಿ ತಿಳಿಸಿದ್ದಾರೆ.ಆದಿತ್ಯ–ಎಲ್ 1 ಉಡಾವಣೆಯಾದ ದಿನದಂದು ಕ್ಯಾನ್ಸರ್ ಇರುವುದು ಪತ್ತೆಯಾಯಿತು. ಚಂದ್ರಯಾನದ ಸಂದರ್ಭದಲ್ಲಿ ಕೆಲವೊಂದು ಆರೋಗ್ಯ ಸಮಸ್ಯೆಗಳಿದ್ದರೂ ಸ್ಪಷ್ಟವಾಗಿ ಈ ಬಗ್ಗೆ ತಿಳಿದಿರಲಿಲ್ಲ. ಇದೀಗ ಕಿಮೋಥೆರಪಿ ಕೂಡ ಮಾಡಲಾಗಿದ್ದು, ಔಷಧಿ ಸೇವಿಸಿ ಚೇತರಿಸಿಕೊಳ್ಳುತ್ತಿರುವುದಾಗಿ ಹೇಳಿದ್ದಾರೆ.

ಇಂಡಿಯಾ ಟುಡೇ ವರದಿಯ ಪ್ರಕಾರ, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ಮುಖ್ಯಸ್ಥ ಡಾ. ಸೋಮನಾಥ್ ಅವರು ಚಂದ್ರಯಾನ–3 ಮಿಷನ್ ಉಡಾವಣೆಯಾದ ದಿನಗಳಿಂದ ಆರೋಗ್ಯ ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ಇತ್ತೀಚಿನ ಸಂದರ್ಶನವೊಂದರಲ್ಲಿ ಹೇಳಿದ್ದಾರೆ. ಆದಿತ್ಯ ಮಿಷನ್ ಪ್ರಾರಂಭವಾದಾಗಲೂ ಅವರ ಆರೋಗ್ಯ ಚೆನ್ನಾಗಿರಲಿಲ್ಲ. ಸಾಕಷ್ಟು ಸಮಸ್ಯೆ ಇತ್ತು. ಆದ್ದರಿಂದ ಹೊಟ್ಟೆಯ ಸ್ಕ್ಯಾನ್ ಮಾಡಿಸಿದ್ದರು. ಸ್ಕ್ಯಾನಿಂಗ್ ವರದಿಯಲ್ಲಿ ವೈದ್ಯರು ಕ್ಯಾನ್ಸರ್ ಸಾಧ್ಯತೆ ಬಗ್ಗೆ ಹೇಳಿದ್ದರು. ಇದಾದ ಬಳಿಕ ಕಾಯಿಲೆ ದೃಢಪಡಿಸಿಕೊಳ್ಳಲು ಚೆನ್ನೈಗೆ ತೆರಳಿದ್ದರು. ಅಲ್ಲಿ ಪರೀಕ್ಷೆಗೆ ಒಳಪಡಿಸಿದ ನಂತರ, ಹೊಟ್ಟೆಯ ಕ್ಯಾನ್ಸರ್‌ನಿಂದ ಬಳಲುತ್ತಿರುವುದು ಖಚಿತವಾಗಿತ್ತು. ನಂತರ ಶಸ್ತ್ರಚಿಕಿತ್ಸೆಗೆ ಒಳಗಾಗಬೇಕಾಗುತ್ತದೆ ಎಂದು ದೃಢಪಡಿಸಿದರು.

ಕ್ಯಾನ್ಸರ್‌ನಿಂದ ಬಳಲುತ್ತಿರುವುದು ದೃಢಪಟ್ಟಾಗ ಕುಟುಂಬದವರು ಆತಂಕಕ್ಕೆ ಒಳಗಾಗಿದ್ದರು ಎಂದು ಇಸ್ರೋ ಮುಖ್ಯಸ್ಥರು ತಿಳಿಸಿದ್ದಾರೆ. ಕ್ಯಾನ್ಸರ್ ವಿಷಯ ಕಚೇರಿ ತಲುಪಿತ್ತು. ಆದರೆ ಎಲ್ಲರಿಗೂ ವಿವರಿಸಿ ಹೇಳಲಾಯಿತು. ಇನ್ನು ಸ್ವಲ್ಪ ವಿರಾಮ ತೆಗೆದುಕೊಂಡು ಶಸ್ತ್ರಚಿಕಿತ್ಸೆ ಮಾಡಿದರು. ಈಗ ಆರೋಗ್ಯವಾಗಿದ್ದರೂ, ಕ್ಯಾನ್ಸರ್ ಚಿಕಿತ್ಸೆಯು ದೀರ್ಘವಾಗಿದೆ. ಆಸ್ಪತ್ರೆಯಲ್ಲಿ ಕೇವಲ 4 ದಿನ ಇದ್ದೆ. 5ನೇ ದಿನಕ್ಕೆ ಆಫೀಸಿಗೆ ಬಂದೆ. ಗಾಬರಿಯಾಗುವ ಅಗತ್ಯವಿಲ್ಲ. ನಾನು ನಿಯಮಿತವಾಗಿ ತಪಾಸಣೆ ಮಾಡಿಸಿಕೊಳ್ಳುತ್ತಿದ್ದೇನೆ. ಔಷಧೋಪಚಾರ ನಡೆಯುತ್ತಿದೆ. ಮನೆಯವರು ಸಹಾಯಕನನ್ನು ಕಳುಹಿಸಿದ್ದಾರೆ. ಇದೀಗ ನಾನು ಗಗನ್‌ಯಾನ್ ಮಿಷನ್‌ಗಾಗಿ ತಯಾರಿ ನಡೆಸುತ್ತಿದ್ದೇನೆ. ಎಲ್ಲಾ ಕಾರ್ಯಾಚರಣೆಗಳನ್ನು ಪೂರ್ಣಗೊಳಿಸಿದ ನಂತರವೇ ನನ್ನ ಪ್ರಾಣ ನಿಲ್ಲುವುದು ಎಂದಿದ್ದಾರೆ.

ನಾಳೆಯಿಂದ ಬಹುರೂಪಿ ನಾಟಕೋತ್ಸವ





"ಬಹುರೂಪಿ ರಾಷ್ಟ್ರೀಯ ನಾಟಕೋತ್ಸವದ ಟಿಕೆಟ್ ಬಿಡುಗಡೆ ಮಾಡಲಾಗಿದ್ದು, ಆನ್‌ಲೈನ್ ಹಾಗೂ ಆಫ್‌ಲೈನ್ ಮೂಲಕ ಟಿಕೆಟ್ ಖರೀದಿಸಬಹುದಾಗಿದೆ. ನಾಟಕದ ಟಿಕೆಟ್ ಬೆಲೆ 100 ರೂ. ನಿಗದಿ ಮಾಡಲಾಗಿದೆ. ಪ್ರತಿ ನಾಟಕದ ಟಿಕೆಟ್‌ನಲ್ಲಿ ಶೇ.40 ರಷ್ಟು ಟಿಕೆಟ್ ಬುಕ್ ಮೈ ಶೋನಲ್ಲಿ, ಶೇ. 40ರಷ್ಟು ಟಿಕೆಟ್ ಅನ್ನು ರಂಗಾಯಣದಲ್ಲಿ ಮುಂಗಡವಾಗಿ ಮಾರಾಟ ಮಾಡಲು ನಿರ್ಧರಿಸಲಾಗಿದೆ. ಉಳಿದ ಶೇ.20ರಷ್ಟು ಟಿಕೆಟ್ ಅನ್ನು ನಾಟಕ ಪ್ರದರ್ಶನಗೊಳ್ಳುವ ದಿನ ಮಾರಾಟ ಮಾಡಲಾಗುತ್ತದೆ. ಮಾ.6ರಿಂದ 11ರವರೆಗೆ ನಡೆಯಲಿರುವ ಬಹುರೂಪಿಗೆ ಸಿದ್ಧತಾ ಕಾರ್ಯ ಅಂತಿಮ ಹಂತಕ್ಕೆ ತಲುಪಿದೆ.

–ನಿರ್ಮಲಾ ಮಠಪತಿ, ಉಪ ನಿರ್ದೇಶಕಿ, ರಂಗಾಯಣ



ಸಿದ್ಧತೆಗಳು ಪೂರ್ಣ

ಮೈಸೂರು,ಮಾ.4 (ಎಂಟಿವೈ)– ಮೈಸೂರಿನ ರಂಗಾಯಣದ ಆವರಣದಲ್ಲಿ ಪ್ರತಿಷ್ಠಿತ ಬಹುರೂಪಿ ನಾಟಕೋತ್ಸವಕ್ಕೆ ಕ್ಷಣಗಣನೆ ಆರಂಭವಾಗಿದ್ದು, ರಂಗಹಬ್ಬ ರಂಗಾಯಣ ಸಜ್ಜಾಗಿದೆ. ಮಾ.6 ರಿಂದ 11ರವರೆಗೆ ನಡೆಯಲಿರುವ 'ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ–2024' ರಂಗಾಸಕ್ತರಿಗೆ ಸದಭಿರುಚಿಯುಳ್ಳ ನಾಟಕಗಳ ಪ್ರದರ್ಶನ, ಜನಪದೋತ್ಸವ, ಚಲಚಿತ್ರೋತ್ಸವ ಹಾಗೂ ವಿಚಾರ ಸಂಕಿರಣಗಳು ಬಹುರೂಪಿಗೆ ಮೆರಗು ನೀಡಲಿವೆ.

ಪ್ರತಿ ವರ್ಷ ಸಂಕ್ರಾಂತಿ ಹಬ್ಬದ ದಿನವೇ ಚಾಲನೆಗೊಳ್ಳುತ್ತಿದ್ದ ಬಹುರೂಪಿ ನಾಟಕೋತ್ಸವ ಈ ಸಾಲಿನಲ್ಲಿ ಶಿವರಾತ್ರಿ ಎರಡು ದಿನ ಮುನ್ನ ಆರಂಭಗೊಳ್ಳುತ್ತಿದ್ದು, ವೈವಿಧ್ಯಮಯ ನಾಟಕಗಳ ಪ್ರದರ್ಶನಕ್ಕೆ ವೇದಿಕೆ ಕಲ್ಪಿಸಲಾಗಿದೆ. ವಿಶ್ವಗುರು ಬಸವಣ್ಣನವರ 'ಇವ ನಮ್ಮವ ಇವ ನಮ್ಮವ' ಎಂಬ ವಚನದ ಸಾಲಿನ ಆಶಯದ ಶೀರ್ಷಿಕೆಯೊಂದಿಗೆ ನಡೆಯಲಿರುವ ಬಹುರೂಪಿ ನಾಟಕೋತ್ಸವದಲ್ಲಿ ಈ ಬಾರಿ ಬಹುಭಾಷಾ ನಾಟಕೋತ್ಸವ, ರಾಷ್ಟ್ರೀಯ ವಿಚಾರ ಸಂಕಿರಣ, ಚಲನಚಿತ್ರೋತ್ಸವ, ಜನಪದ ಸಂಭ್ರಮ, ಪುಸ್ತಕ ಮೇಳ, ಕರಕುಶಲ ಮೇಳ ಮತ್ತು ಪ್ರಾತ್ಯಕ್ಷಿಕೆ, ದೇಸೀ ಆಹಾರ ಮೇಳ, ಚಿತ್ರಕಲಾ ಪ್ರದರ್ಶನ, ಚಾರಿತ್ರಿಕ ದಾಖಲೆಗಳ ಪ್ರದರ್ಶನ, ವಚನಾಂತರಂಗ ಮೇಳೈಸಲಿವೆ. ಬಹುರೂಪಿ ನಾಟಕೋತ್ಸವದಲ್ಲಿ ಉತ್ತರಪ್ರದೇಶ, ಮುಂಬೈ, ಕೊಲ್ಕೊತ್ತಾ, ಮಣಿಪುರ, ಕೇರಳ ಹಾಗೂ ಮಹಾರಾಷ್ಟ್ರ ರಾಜ್ಯಗಳ 6 ನಾಟಕಗಳು, ಕನ್ನಡ ಭಾಷೆಯ 10 ಮತ್ತು ತುಳು ಭಾಷೆಯ 1 ನಾಟಕವು ಸೇರಿದಂತೆ ಒಟ್ಟು 17 ನಾಟಕಗಳು ಭೂಮಿಗೀತ, ವನರಂಗ, ಕಲಾಮಂದಿರ ಮತ್ತು ಕಿರು ರಂಗಮಂದಿರದಲ್ಲಿ ಪ್ರದರ್ಶನಗೊಳ್ಳಲಿವೆ ಎಂದರು.



ಜನಪದ ಸಂಭ್ರಮ: ರಂಗಾಯಣದ ಉಪನಿರ್ದೇಶಕಿ ನಿರ್ಮಲಾ ಮಠಪತಿ ಮಾತನಾಡಿ, ಮಾ.6ರ ಸಂಜೆ 5ಕ್ಕೆ ಕಿಂದರಜೋಗಿ ಆವರಣದಲ್ಲಿ ಜನಪದ ಸಂಭ್ರಮ ಕಾರ್ಯಕ್ರಮಕ್ಕೆ ಹಿರಿಯ ಜಾನಪದ ಗಾಯಕ ಡಾ.ಮಳವಳ್ಳಿ ಮಹದೇವಸ್ವಾಮಿ ಚಾಲನೆ ನೀಡಲಿದ್ದಾರೆ. ಜಾನಪದ ವಿದ್ವಾಂಸರಾದ ಡಾ.ಜಯಲಕ್ಷ್ಮಿ ಸೀತಾಪುರೆ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. ಮಾ.11 ರವರೆಗೆ ಪ್ರತಿ ದಿನ ಸಂಜೆ 5.30ಕ್ಕೆ ವಿವಿಧ ಪ್ರಕಾರಗಳ ಜಾನಪದ ಕಾರ್ಯಕ್ರಮ ಜರುಗಲಿದೆ ಎಂದು ತಿಳಿಸಿದರು. ಬಹುರೂಪಿ ಚಲನಚಿತ್ರೋತ್ಸವವನ್ನು ಮಾ.7ರ ಬೆಳಗ್ಗೆ 10.30ಕ್ಕೆ ಶ್ರೀರಂಗದಲ್ಲಿ ವನ್ಯಜೀವಿ ಛಾಯಾಗ್ರಾಹಕ ಡಾ. ಲೋಕೇಶ್ ಮೊಸಳೆ ಉದ್ಘಾಟಿಸಲಿದ್ದಾರೆ ಎಂದರು. ಬಹುರೂಪಿ ನಾಟಕೋತ್ಸವವನ್ನು ಮಾ.7ರ ಸಂಜೆ 4.30ಕ್ಕೆ ವನರಂಗದಲ್ಲಿ ಸಾಹಿತಿ ಜಯಂತ್ ಕಾಯ್ಕಿಣಿ ಉದ್ಘಾಟಿಸುವರು. ಸಚಿವರಾದ ಡಾ.ಹೆಚ್.ಸಿ. ಮಹದೇವಪ್ಪ, ಶಿವರಾಜ್ ಎಸ್. ತಂಗಡಗಿ, ಸಂಸದ ಪ್ರತಾಪ್ ಸಿಂಹ, ಶಾಸಕ ಕೆ. ಹರೀಶ್ ಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಡಾ.ಅಜಯ್ ನಾಗಭೂಷಣ್, ನಿರ್ದೇಶಕಿ ಡಾ.ಧರಣಿದೇವಿ ಮಾಲಗತ್ತಿ, ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಭಾಗವಹಿಸುವರು ಎಂದು ಅವರು ತಿಳಿಸಿದರು.

ವಿಚಾರ ಸಂಕಿರಣ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ ಮಾತನಾಡಿ, 'ಇವ ನಮ್ಮವ ಇವ ನಮ್ಮವ' ಕುರಿತು ರಾಷ್ಟ್ರೀಯ ವಿಚಾರ ಸಂಕಿರಣವನ್ನು ಮಾ.9 ಮತ್ತು 10 ರಂದು ಆಯೋಜಿಸಿದ್ದು, ಮಾ.9ರ ಬೆಳಗ್ಗೆ 10ಕ್ಕೆ ಬಿ.ವಿ. ಕಾರಂತ ರಂಗಚಾವಡಿಯಲ್ಲಿ ಚಿಂತಕ ಪ್ರೊ.ಹೆಚ್.ಎಸ್.ಶಿವಪ್ರಕಾಶ್ ಉದ್ಘಾಟಿಸಲಿದ್ದಾರೆ. ಲೇಖಕ ಪ್ರೊ.ಓ.ಎಲ್. ನಾಗಭೂಷಣಸ್ವಾಮಿ ಅಧ್ಯಕ್ಷತೆ ವಹಿಸುವರು. ವಚನ ಸಾಹಿತ್ಯ ಹಾಗೂ ರಂಗಭೂಮಿ ಕುರಿತು ಎರಡೂ ದಿನಗಳ ಗೋಷ್ಠಿಗಳಲ್ಲಿ ನಾಡಿನ ಹೆಸರಾಂತ ವಿದ್ವಾಂಸರು ತಮ್ಮ ವಿಚಾರ ಮಂಡಿಸಲಿದ್ದಾರೆ. ಮಾ.10ರ ಸಂಜೆ 4ಕ್ಕೆ ಚಿಂತಕ ಪ್ರೊ.ಎಸ್.ಜಿ. ಸಿದ್ಧರಾಮಯ್ಯ ಸಮಾರೋಪ ನುಡಿಗಳನ್ನಾಡುವರು ಎಂದು ಅವರು ವಿವರಿಸಿದರು.

ನಕ್ಕರೆ ಅದೇ ಸ್ವರ್ಗ

ಶಿಷ್ಯ : ರೂಪವತಿಯೂ, ಗುಣವಂತೆಯೂ, ಬುದ್ಧಿವಂತಳೂ, ಗಂಡನ ಜೊತೆ ಜಗಳವಾಡದೇ ಅನುಸರಿಸಿಕೊಂಡು ಹೋಗುವ ಹೆಂಡತಿಗೆ ಏನಂತಾರೆ ಗುರೂಜಿ?

ಗುರೂಜಿ : ಅದಕ್ಕೆ 'ಮನಸ್ಸಿನ ಭ್ರಮೆ' ಎನ್ನುತ್ತಾರೆ ಕಣೋ ಶಿಷ್ಯ!"

ಮೈಸೂರು ಮಿತ್ರ
ಮಂಗಳವಾರ, 5 ಮಾರ್ಚ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ನೀನು ಮಾಡಿದ ದುಷ್ಕರ್ಮಗಳ ಪರಿಣಾಮದಿಂದ ತಪ್ಪಿಸಿಕೊಂಡು ಆಶ್ರಯ ಪಡೆಯಬಹುದಾದ ಸ್ಥಳ ಭೂಮಿಯಲ್ಲಾಗಲಿ ಆಕಾಶದಲ್ಲಾಗಲಿ ಸಮುದ್ರ ಗುಹೆಗಳಲ್ಲಾಗಲೀ ಇಲ್ಲ –ಭಗವಾನ್ ಬುದ್ಧ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತುಂಬಿದ ಕೆರೇನೂ ನಂಬಿದ ಮನೇನು ಒಡೆಯಬಾರದು.

ನಿಮ್ಮ ಪತ್ರಗಳು

ಪ್ರತಿಮೆ ಸ್ಥಾಪಿಸಿದರಾಯಿತೇ...?





ಮಾನ್ಯರೆ,

ಮಹನೀಯರ ಪ್ರತಿಮೆಯನ್ನು ಜಿಲ್ಲಾಡಳಿತ ಸ್ಥಾಪಿಸಿ ಬಿಟ್ಟರೆ ಸಾಕೆ? ಅದನ್ನು ಸ್ವಚ್ಛವಾಗಿ, ಸುಸ್ಥಿತಿಯಲ್ಲಿ ಇಡುವವರು ಯಾರು?

ಇತ್ತೀಚೆಗೆ ನಮ್ಮ ಟೀಂ ಮೈಸೂರು ತಂಡದ ಸ್ನೇಹಿತರು ಶ್ರೀಕೃಷ್ಣದೇವರಾಯರ ಜಯಂತಿ ಸಂದರ್ಭದಲ್ಲಿ ವಿಜಯನಗರದಲ್ಲಿ ಇರುವ ಶ್ರೀ ಕೃಷ್ಣದೇವರಾಯ ಪ್ರತಿಮೆಗೆ ಮಾಲಾರ್ಪಣೆ ಮಾಡಲು ತೆರಳಿದಾಗ ಅಲ್ಲಿಯ ಪರಿಸ್ಥಿತಿ ನೋಡಿ ನಿಜಕ್ಕೂ ಬೇಸರವಾಯಿತು. ಶ್ರೀ ಕೃಷ್ಣದೇವರಾಯರ ಪ್ರತಿಮೆಯಲ್ಲಿ ಎಂದೋ ಹಾಕಿದ ಒಂದು ಹಳೆಯ ಹೂವಿನಹಾರ ಹಾಗೇ ಒಣಗಿ ನೇತಾಡುತ್ತಿದೆ. ಪ್ರತಿಮೆ ಸುತ್ತಲೂ ಸಾಕಷ್ಟು ಕಸ, ಧೂಳಿನ ರಾಶಿ ತುಂಬಿದೆ. ಶ್ರೀ ಕೃಷ್ಣದೇವರಾಯರ ಜಯಂತಿಯ ಬಗ್ಗೆ ಜಿಲ್ಲಾಡಳಿತ ಅಥವಾ ಮೈಸೂರು ಮಹಾನಗರ ಪಾಲಿಕೆಗೆ ಕನಿಷ್ಠ ಪ್ರಜ್ಞೆ ಇಲ್ಲವೇ? ಇನ್ನು ಕೃಷ್ಣದೇವರಾಯರ ವಿಚಾರಕ್ಕೆ ಹೋದರೆ, ಇತಿಹಾಸದಲ್ಲಿ ತಮ್ಮದೇ ಆದಂತಹ ವೈಶಿಷ್ಟ್ಯಗಳಿಂದ ಅಜರಾಮರವಾಗಿ ಉಳಿಯುತ್ತಾರೆ ಶ್ರೀ ಕೃಷ್ಣದೇವ ರಾಯರು. ಇಂತಹ ಮಹಾರಾಜರ ಹೆಸರಿನಲ್ಲಿ ಮೈಸೂರಿನ ವಿಜಯನಗರದಲ್ಲಿ ವೃತ್ತ ಮತ್ತು ಅವರ ಪ್ರತಿಮೆ ಮಾಡಿರುವುದು ಸಂತೋಷದ ಮತ್ತು ಹೆಮ್ಮೆಯ ವಿಚಾರ. ಆದರೆ ಕೇವಲ ಮಹನೀಯರ ಹೆಸರಿನಲ್ಲಿ ವೃತ್ತಗಳನ್ನು ಮಾಡುವುದು, ಪ್ರತಿಮೆಗಳನ್ನು ಸ್ಥಾಪನೆ ಮಾಡುವುದಷ್ಟೇ ನಮ್ಮ ಕೆಲಸ ಎಂಬಂತಿದೆ ನಮ್ಮ ಜಿಲ್ಲಾಡಳಿತ ಅಥವಾ ಮೈಸೂರಿನ ಮಹಾನಗರ ಪಾಲಿಕೆಯ ವರ್ತನೆ.

–ಗೋಕುಲ್ ಗೋವರ್ಧನ್ ಕೆ ವಕೀಲರು, ಸಂಚಾಲಕರು ಟೀಂ ಮೈಸೂರು

ಇದೇನು ಸಸ್ಯ ಸಂರಕ್ಷಣೆಯೋ ಸಸ್ಯ ಸಂಹಾರವೋ...



ಮಾನ್ಯರೆ,

ಮೈಸೂರಿನ ಗೋಕುಲಂ ಮೂರನೇ ಹಂತದ ತ್ರಿನೇತ್ರ ವೃತ್ತದಿಂದ ವಿಜಯನಗರ ಎರಡನೇ ಹಂತದ ವಾಟರ್ ಟ್ಯಾಂಕ್‌ವರೆಗಿನ ರಸ್ತೆ ಅಗಲೀಕರಣ ಮಾಡಿ, ಅಭಿವೃದ್ಧಿಗೊಳಿಸಲಾಗಿದ್ದು, ಫುಟ್‌ಪಾತ್ ಅನ್ನು ಅಂದಗೊಳಿಸಲಾಗಿದೆ. ಈ ಫುಟ್‌ಪಾತ್ ಮೇಲೆ 'ಟೀಂ ಮೈಸೂರ್'ನವರು ಸಸಿಗಳನ್ನು ನೆಟ್ಟು ಬೆಳೆಸುತ್ತಿದ್ದಾರೆ. ಆದರೆ ಅಲ್ಲಿ ಭಾರಿ ಸಾಮರ್ಥ್ಯದ ವಿದ್ಯುತ್ ಲೈನ್ ಹಾದು ಹೋಗಿರುವುದನ್ನು ಕಂಡೂ ಅದರ ಕೆಳಗೆ ಉದ್ದಕ್ಕೂ ಸಸಿ ನೆಡಲಾಗಿದೆ. ಇದೇನು ಪರಿಸರ ಸ್ನೇಹಿ ನಡೆಯೋ ಇಲ್ಲ ಕಾಟಾಚಾರಕ್ಕೆ ಸಸಿ ನೆಡುವ ಶಾಸ್ತ್ರವೋ ಎಂಬ ಅನುಮಾನ ಬಾರದೇ ಇರದು. ಅರಣ್ಯ ಇಲಾಖೆಯವರು, ಚೆಸ್ಕಾಂ ಅಧಿಕಾರಿಗಳು ಇಂತಹ ಕಾರ್ಯಕ್ಕೆ ಅವಕಾಶ ನೀಡಬಾರದು. ಆದರೆ ಅವರು ಇಂತಹ ವಿಚಾರ ನಮಗೆ ಸಂಬಂಧಿಸಿದ್ದಲ್ಲ ಎಂದು ಸುಮ್ಮನಿದ್ದು ಕೊನೆಗೆ ಬೆಳೆದಾಗ ಕತ್ತರಿ ಹಾಕುವ ಕೆಲಸ ಮಾಡುತ್ತಾರೆ. ಸಸಿ ಬೆಳೆಸದೇ ಇದ್ದರೂ ಯಾವ ನಷ್ಟವಿಲ್ಲ. ಆದರೆ ಬೆಳೆದ ಸಸಿ ತುಂಡರಿಸುವುದು ಅಕ್ಷಮ್ಯ, ಪಾಪದ ಕೆಲಸ ಎಂಬ ಅರಿವಿರಲಿ. ಸಂಬಂಧಿಸಿದವರು ಕೂಡಲೇ ಇದರತ್ತ ಗಮನಹರಿಸಲಿ.

–ಕೃಷ್ಣ, ಮಹದೇಶ್ವರನಗರ, ಮೈಸೂರು.

ವಿದ್ಯುತ್ ಕಂಬ ಸರಿಪಡಿಸಿ



ಮಾನ್ಯರೆ,

ಮೈಸೂರಿನ ಮಂಚೇಗೌಡನಕೊಪ್ಪಲು ಕುಸುಮಾ ಸೊಸೈಟಿ ಹತ್ತಿರ ಇರುವ ವೈರಮುಡಿ ರವಿ ಅವರ ಮನೆಗೆ ಅಂಟಿಕೊಂಡಂತಿರುವ ರಸ್ತೆ ಬದಿಯ ವಿದ್ಯುತ್ ಕಂಬವು ತುಸು ಬಾಗಿ ಅಪಾಯಕ್ಕೆ ಆಹ್ವಾನ ನೀಡುವಂತಿದೆ. ಇಲ್ಲಿ ಪಡಿತರ ವಿತರಣೆ ಮಾಡುವ ಕುಸುಮಾ ನ್ಯಾಯಬೆಲೆ ಅಂಗಡಿ ಇರುವ ನಿಮಿತ್ತ ಇಲ್ಲಿ ಓಡಾಡುವ ಜನರ ಸಂಖ್ಯೆ ಸದಾ ಹೆಚ್ಚಾಗಿರುತ್ತದೆ. ಜೊತೆಗೆ ಮಕ್ಕಳು, ಮಹಿಳೆಯರು, ನಾಗರಿಕರು ಇಲ್ಲಿ ನಿತ್ಯವೂ ಓಡಾಡುತ್ತಿರುತ್ತಾರೆ. ಸಂಗಮ ಹಾಗೂ ಕಾವೇರಿ ವೃತ್ತಗಳ ಸಂಪರ್ಕ ಕಲ್ಪಿಸುವ ಚಿಕ್ಕ ರಸ್ತೆ ಸಹ ಇದಾಗಿರುವುದರಿಂದ ನರ್ಸರಿ ಶಾಲಾ ವ್ಯಾನ್‌ಗಳು, ಬೈಕ್ ಇತರೆ ವಾಹನಗಳ ಓಡಾಟ ಇರುವುದರಿಂದ ಅನಾಹುತ ಸಂಭವಿಸುವ ಮುನ್ನ ಮೊದಲೇ ಅಗತ್ಯ ಕ್ರಮ ಕೈಗೊಳ್ಳಬೇಕು ಎಂಬುದು ಇಲ್ಲಿನ ನಿವಾಸಿಗಳ ಮನವಿ. ಇದಕ್ಕೆ ಸಂಬಂಧಪಟ್ಟಂತೆ ನಗರಪಾಲಿಕೆ ಸದಸ್ಯರು, ಸ್ಥಳೀಯ ಮುಖಂಡರು ಹಾಗೂ ಕ್ಷೇತ್ರದ ಶಾಸಕರು ಆದಷ್ಟು ಬೇಗ ಇತ್ತ ಗಮನಹರಿಸಲು ಕೋರುತ್ತೇವೆ.


–ಎ ಎಸ್ ಗೋವಿಂದೇಗೌಡ, ಮಂಚೇಗೌಡನಕೊಪ್ಪಲು, ಮೈಸೂರು.

ಕೊರೊನಾ ಲಸಿಕೆ ಹೃದಯಾಘಾತಕ್ಕೆ ಕಾರಣವಲ್ಲ

ಮಾನ್ಯರೆ,

ಇತ್ತೀಚಿನ ದಿನಗಳಲ್ಲಿ ಯುವಜನರಲ್ಲಿ ಹೃದಯಾಘಾತ ಹೆಚ್ಚಾಗುತ್ತಿದ್ದು, ಅದಕ್ಕೆ ಕೋವಿಡ್ ಲಸಿಕೆ ಕಾರಣ ಎಂಬ ವದಂತಿಗೆ ಕೇಂದ್ರ ಆರೋಗ್ಯ ಸಚಿವರಾದ ಮನ್ಸುಖ್ ಮಾಂಡಾವಿಯಾ ಸ್ಪಷ್ಟನೆ ನೀಡಿದ್ದಾರೆ. ಅವರ ಹೇಳಿಕೆಯ ಪ್ರಕಾರ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್) ಇದರ ಬಗ್ಗೆ ವಿಸ್ತೃತ ಸಂಶೋಧನೆ ನಡೆಸಿದ್ದು, ಹೃದಯಾಘಾತಕ್ಕೆ ಕೋವಿಡ್ ಲಸಿಕೆ ಕಾರಣವಲ್ಲ. ಬದಲಾಗಿ ವ್ಯಕ್ತಿಯ ಜೀವನಶೈಲಿ ಮತ್ತು ಅತಿಯಾದ ಮದ್ಯಪಾನ, ಧೂಮಪಾನ ಕಾರಣವಾಗಿರಬಹುದೇ ವಿನಃ ಕೋವಿಡ್–19 ಲಸಿಕೆ ಕಾರಣವಲ್ಲ. ಇದು ತಪ್ಪು ಕಲ್ಪನೆ ಎಂಬ ತೀರ್ಮಾನ ಮಂಡಳಿಯದು. ಹಾಗಾಗಿ ಇಲ್ಲಸಲ್ಲದ ಆಪಾದನೆಗಳನ್ನು ಮಾಡುವ ಮುನ್ನ ಸೂಕ್ತವಾದ ವೈಜ್ಞಾನಿಕ ಸಂಶೋಧನೆ ಆಧಾರಿತವಾಗಿರಬೇಕು ಎಂದು ಮಾನ್ಯ ಮಂತ್ರಿಗಳು ತಿಳಿಸಿದ್ದಾರೆ. ಕೋವಿಡ್ ಲಸಿಕೆಯಿಂದ ಭಾರತದಲ್ಲಿ ಅನೇಕ ಯುವಜನರನ್ನು ರಕ್ಷಿಸಿದೆಯೇ ಹೊರತು ಪ್ರಾಣಾಪಾಯವಾಗಿಲ್ಲ.

–ಬ್ಯಾಂಕ್ ಶಿವಕುಮಾರ್, ಜೆ.ಪಿ.ನಗರ, ಮೈಸೂರು.



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ : 94482 08746 / 97421 79000

ಚಿಂತನೆ

ಮೂಡುವ ಸೂರ್ಯನಿಗೆ ಮಹತ್ವ; ಮುಳುಗುವ ಸೂರ್ಯನಿಗಲ್ಲ...!

ನಮ್ಮ ಜೀವನ ಪ್ರಗತಿಯಲ್ಲಿದೆ ಎಂದರೆ ನಾವು ಏನನ್ನಾದರೂ ಸಾಧಿಸಬೇಕು ಅಥವಾ ಸಾಧನೆಯ ಹಾದಿಯಲ್ಲಿರಬೇಕು. ಏನನ್ನೂ ಮಾಡದವರನ್ನು ಪ್ರಗತಿಯಲ್ಲಿದ್ದಾನೆ ಎಂದೂ ಯಾರೂ ಹೇಳುವುದಿಲ್ಲ. ತಂದೆ ಮಾಡಿಟ್ಟ ಆಸ್ತಿ, ಹಣಕಾಸು ಅಪಾರವಾಗಿದೆ ಎಂದಾದರೂ ಅದು ಪ್ರಗತಿ ಎನಿಸುವುದಿಲ್ಲ. 'ನನ್ನ ಹಣೆಬರಹವೇ ಇಷ್ಟು ಏನೂ ಮಾಡಲಾಗದು' ಎಂದು ಹಲ ಬುವವರು ಎಂದಿಗೂ ಪ್ರಗತಿ ಸಾಧಿಸಲಾರರು.



ಇಷ್ಟಕ್ಕೂ ಪ್ರಗತಿ ಎನ್ನುವುದು ಒಮ್ಮೆಲೇ ಏರ ಬಹುದಾದ ಲಿಫ್ಟ್‌ನಂತಲ್ಲ. ಅದು ಮೆಟ್ಟಿಲುಗಳ ದಾರಿ. ಮೆಟ್ಟಿಲು ಹಾಗೂ ಲಿಫ್ಟ್ ಎರಡು ಒಟ್ಟಿಗೇ ಇದ್ದಾಗ, ಮೆಟ್ಟಿಲುಗಳನ್ನು ಹತ್ತಿಯೇ ಮೇಲೇರುವುದು ಆರೋಗ್ಯಕಾರಿ ಎಂಬುದು ಹಲವು ವಿಷಯಗಳಲ್ಲಿ ನಿಜವೆನಿಸುತ್ತದೆ. (ಇತ್ತೀಚೆಗೆ ವೈದ್ಯರೂ ಅನಾರೋಗ್ಯದಿಂದಿರುವವರಿಗೆ ಮೆಟ್ಟಿಲು ಹತ್ತಿಯೇ ಹೋಗಲು ಸಲಹೆ ಮಾಡುತ್ತಿದ್ದಾರೆ. ಹಾಗೆ ಮಾಡಿದಾಗ ಆರೋಗ್ಯ ಸಮಸ್ಥಿತಿಯಲ್ಲಿರುತ್ತದೆ ಎಂದು ಅವರು ಹೇಳುತ್ತಾರೆ). ಲಿಫ್ಟ್ ಇದೆ, ಅದು ಬೇಗನೇ ನಮ್ಮನ್ನು ಮೇಲಕ್ಕೆ ಕರೆದುಕೊಂಡುಹೋಗುತ್ತದೆ ಎಂದರೆ ಜೀವನವೂ ಹಾಗೆಯೇ, ಲಿಫ್ಟ್ ಏರಿದಂತೆ ಏರಿದರೆ ಜೀವನ ಮೇಲಕ್ಕೇ ಸ್ವಾರಸ್ಯವೇ ಇಲ್ಲ. ಮೆಟ್ಟಿಲುಗಳ ವಿಚಾರ ಹಾಗಲ್ಲ. ಅದು ನಮ್ಮನ್ನು ಕ್ರಮೇಣ ಮೇಲಕ್ಕೇ ಕೊಂಡೊಯ್ಯುತ್ತದೆ. ಜೀವನವೂ ಹಾಗೆಯೇ. ಅದು ಮೆಟ್ಟಿಲುಗಳ ಏರಿಕೆಯಂತೆ ಇರಬೇಕು. ಸ್ವಲ್ಪ ದಣಿವಾದರೂ ಅಲ್ಲೇ ಕುಳಿತು ಸುಧಾರಿಸಿಕೊಂಡು ಮತ್ತೆ ಮೇಲೇರಬಹುದು. ಇದನ್ನು ನಾವು ಆದರ್ಶಕ್ಕೆ ಉದಾಹರಣೆಯಾಗಿ ಬಳಸಿಕೊಳ್ಳಬಹುದು.

ಇತ್ತೀಚೆಗೆ ಮೈಸೂರಿನಲ್ಲಿ ನಡೆದ ಸಾಧಕರೊಬ್ಬರ ಅಭಿನಂದನಾ ಸಮಾರಂಭದಲ್ಲಿ ಪತ್ರಕರ್ತರೊಬ್ಬರು ಹೇಳಿದ ಮಾತು ಮನನೀಯ. ನೀವು ಅಧಿಕಾರದಲ್ಲಿದ್ದಾಗ ನಿಮ್ಮನ್ನು ಓಲೈಸುವವರು ಹೆಚ್ಚಾಗಿ ಕಂಡುಬರುತ್ತಾರೆ. ಆದರೆ ಅವರೆಲ್ಲಾ ಅಭಿಮಾನಿಗಳಲ್ಲ ಎಂದು. ಇದು ನಿಜವಾದ ಮಾತು. ನಾವು ಅಧಕಾರದಲ್ಲಿರುವಾಗ, ನಮ್ಮಿಂದ ಹಲವರಿಗೆ ಹಲವು ಕೆಲಸಗಳು ಆಗಬೇಕಾಗಿರುತ್ತದೆ. ಹಾಗಾಗಿ ಅವರು ನಮ್ಮನ್ನು ಹೊಗಳುತ್ತಾ. ಇಂದ್ರ ಚಂದ್ರ ಎಂದೆಲ್ಲಾ ಹೇಳುತ್ತಾರೆ. ಅದನ್ನು ನಂಬಿ ನಾನೂ ಹಾಗೇ ಇದ್ದೇನೇನೋ ಎಂದುಕೊಂಡರೆ ಅದು ಮೂರ್ಖತನವಾಗುತ್ತದೆ. ಅದನ್ನು ಬಿಟ್ಟು ನನ್ನ ಗುಣ ಏನು ಎಂಬುದು ನನಗೇ ತಿಳಿದಿರಬೇಕು. ಆದ್ದರಿಂದಲೇ ಹೇಳುವುದು ಹೊಗಳಿಕೆಗೆ ಮರುಳಾಗಬೇಡಿ ಎಂದು. ನಮ್ಮಲ್ಲಿ ಹಣವಿದ್ದರೂ ಹೀಗೆ ಹಲವು ಜನರು, ನಮ್ಮನ್ನು ಹೊಗಳುವವರು ನಮ್ಮ ಸುತ್ತಾ ಸುತ್ತುತ್ತಾರೆ. ನಮ್ಮಲ್ಲಿ ಹಣ ಖಾಲಿಯಾಯಿತು ಎಂದರೆ ಅವರು ಯಾರೂ ನಮ್ಮ ಬಳಿ ಬರುವುದಿಲ್ಲ.

ಇತ್ತೀಚೆಗೆ ಕೆಲವರ ಹುಟ್ಟುಹಬ್ಬದ ಆಚರಣೆ ಬಗ್ಗೆ ಪತ್ರಿಕೆಗಳಲ್ಲಿ, ಮಾಧ್ಯಮಗಳಲ್ಲಿ ಪುಟಗಟ್ಟಲೇ ಜಾಹಿರಾತು ಬರುತ್ತದೆ. ಜೊತೆಗೆ ಆ ಪ್ರಕಟಣೆ ಮಾಡಿದವರು ಸ್ನೇಹ ಬಳಗದವರು ಎಂದೂ ಬರೆದುಕೊಂಡಿರುತ್ತಾರೆ. ನೋಡಿದಾಗ ಇವರೆಂತಹ ಪುಣ್ಯವಂತರು, ಇಷ್ಟೊಂದು ಸ್ನೇಹಿತರಿದ್ದಾರೆ, ಇಷ್ಟೊಂದು ಹಣ ಖರ್ಚು ಮಾಡಿ ಜಾಹಿರಾತು ನೀಡಿದ್ದಾರೆ ಎನ್ನಿಸುತ್ತದೆ. ಆದರೆ ನಿಜ ಸಂಗತಿಯೇ ಬೇರೆಯೇ ಇರುತ್ತದೆ. ಯಾರ ಬಗ್ಗೆ ಜಾಹಿರಾತು ಹಾಕಲಾಗಿದೆಯೋ ಅವರಿಂದಲೇ ಆ ಹಣ ವಸೂಲಾಗಿರುತ್ತದೆ. ಇದನ್ನು ನೋಡಿ ಅವರು ದೊಡ್ಡ ನಾಯಕ ಎಂದು ನಾವು ಭಾವಿಸಿದರೆ ಅದು ಸರಿಯಾದ ತಿಳುವಳಿಕೆ ಎನ್ನಿಸುವುದಿಲ್ಲ. ಹತ್ತು ವರ್ಷಗಳ ಹಿಂದೆ ಈ ರೀತಿ ಯಾರದ್ದೋ ಹುಟ್ಟುಹಬ್ಬಕ್ಕೆಂದು ಪುಟಗಟ್ಟಲೇ ಜಾಹಿರಾತು ಬಂದಿದ್ದು, ನಂತರ ಅವರ ಬಗ್ಗೆ ಯಾವ ಸುದ್ದಿಯೂ ಗೊತ್ತಾಗುವುದಿಲ್ಲ. ಇದಕ್ಕೆ ನಿಖರ ಕಾರಣ ವಿಚಾರಿಸಿದಾಗ ಅವರು ಇಂತಹ ಸುತ್ತುವರಿದ ಜನರಿಂದ ಮೋಸ ಹೋಗಿರುವುದು ತಿಳಿದು ಬಂದಿತ್ತು.

> ಮುಖ್ಯವಾಗಿ ನಾವು ಏನಾಗಬೇಕು? ಎಂಬುದನ್ನು ನಿರ್ಧರಿಸಬೇಕು. ನಂತರ ಅದಕ್ಕೆ ಏನೆಲ್ಲಾ ಹೊಂದಿಸುವುದು ಎಂದು ಚಿಂತಿಸಿ ಕಾರ್ಯಗತಗೊಳಿಸಬೇಕು. ಇಂತಹ ಸಮಯದಲ್ಲಿ ತನಗೆ ಅನುಕೂಲವಾಗಬಹುದಾದಂತಹವರನ್ನು ಮಾತ್ರ ಹತ್ತಿರಕ್ಕೆ ಸೇರಿಸಿ ಕೊಳ್ಳಬೇಕು. ತನ್ನ ಕನಸನ್ನು ಸಾಕಾರ ಗೊಳಿಸಲು ಪ್ರಯತ್ನಿಸಬೇಕು. ಅಂತಹವರು ಸಾಧನೆ ಮಾಡಲು ಸಹಕಾರಿಯಾಗಿರುತ್ತಾರೆ. ತನ್ನಲ್ಲಿ ಹಣವಿದೆ ಆದರೆ ಅನುಭವ ಹಾಗೂ ದಾರಿ ಕಂಡಿಲ್ಲ ಎಂದಾದಾಗ ಯಾರದೋ ಮಾತಿಗೆ ಮನ್ನಣೆ ನೀಡಿ, ಕಾರ್ಯಮಗ್ನರಾಗಬಾರದು.

ಆದರೆ ಸಾಧನೆ ಮಾಡುವವನು ಮಾತ್ರ ಜನರಿಂದ ಆಕರ್ಷಿತನಾಗುತ್ತಾನೆ. ಇಂದು ಹೊಸದಾಗಿ ಒಂದು ಉದ್ಯಮವನ್ನು ಸ್ಥಾಪಿಸಿದ್ದಾನೆ ಎಂದರೆ ಅವನ ಸುತ್ತಾ ಖಂಡಿತಾ ಈ ರೀತಿಯ 'ಅಭಿಮಾನಿ ಬಳಗ' ಇರುವುದಿಲ್ಲ. ಅದೇ ಅವನು ಒಂದಷ್ಟು ಹಣ ಸಂಪಾದಿಸಿದ್ದಾನೆ ಎಂದರೆ ಆಗ ಸುತ್ತಾ ಜನ ಸೇರುತ್ತಾರೆ. ಆದರೆ ಯಾರು ಶ್ರಮವಹಿಸಿ ತನ್ನ ಕನಸನ್ನು ನನಸು ಮಾಡಲು ಶ್ರಮವಹಿಸುವನೋ ಅವನು ಇಂತಹ ಸುತ್ತುವರಿಯುವ ಜನರಿಂದ ದೂರವೇ ಉಳಿಯುತ್ತಾನೆ. ಹಾಗೆಂದು ಅವರು ಮುಂದೆ ಯಾವುದೇ ಸಾಧನೆ ಮಾಡುವುದಿಲ್ಲವೆಂದಲ್ಲ. ಅವರ ಸಾಧನೆ ಜಗದ ಕಣ್ಣಿಗೆ ಬೀಳುವವರೆಗೂ ಅವರು ಯಾರ ಕಣ್ಣಿಗೂ ಬಿದ್ದಿರುವುದಿಲ್ಲ.

ಈಗ ದೇಶದಲ್ಲಿ ಹೊಸದಾಗಿ ಉದ್ಯಮ ಆರಂಭಿಸುವವರ ಸಂಖ್ಯೆ ಹೆಚ್ಚುತ್ತಿದೆ. 'ಮೇಕ್ ಇನ್ ಇಂಡಿಯಾ' ಯೋಜನೆಯಡಿ ಸಾವಿರಾರು ನೂತನ ಉದ್ಯಮಗಳು ಆರಂಭವಾಗುತ್ತಿರುವುದು ಕಂಡುಬರುತ್ತಿದೆ. ಬಹುರಾಷ್ಟ್ರೀಯ ಸಂಸ್ಥೆಗಳ ಬೃಹತ್ ಉದ್ಯಮ ಆರಂಭಿಸಿದರೆ ಅದರ ಯಶಸ್ಸಿನ ಹಿಂದೆ ಆ ಉದ್ಯಮಕ್ಕೆ ಬೇಕಾಗುವ ಸಾಮಗ್ರಿಗಳನ್ನು ತಯಾರಿಸಿ ನೀಡುವ ನೂರಾರು ಸಂಸ್ಥೆಗಳು ಹುಟ್ಟಿಕೊಳ್ಳುತ್ತವೆ. ಅಂತಹವರಿಂದ ಕಚ್ಚಾ ಸಾಮಗ್ರಿಗಳನ್ನು ಪಡೆದು ಅದನ್ನು ಜೋಡಿಸಿ ಅಥವಾ ಹೊಂದಿಸಿ ಆ ಬಹುರಾಷ್ಟ್ರೀಯ ಕಂಪನಿ ತನ್ನ ಉತ್ಪನ್ನವನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿ ತಾನು ಹೆಸರು ಸಂಪಾದಿಸುತ್ತದೆ. ಆದರೆ ಆ ಪ್ರಗತಿಗೆ ಕಾರಣ ಇಂತಹ ನೂರಾರು ಯುವ ಉದ್ಯಮಿಗಳು ಎಂಬುದು ಆ ಕಂಪನಿಗೆ ಗೊತ್ತಿರುತ್ತದೆ, ಆದರೆ ಸಮಾಜದ ಅರಿವಿಗೆ ಬರುವುದಿಲ್ಲ ಅಷ್ಟೇ.

ಒಬ್ಬ ಯಶಸ್ವಿ ಉದ್ಯಮಿ ಹೇಳಿದ ಮಾತು ನೆನಪಾಗುತ್ತದೆ. ನಾನು ವಿದ್ಯಾರ್ಥಿಯಾಗಿದ್ದಾಗ ಎಂದೂ ರ್‍ಯಾಂಕ್ ಪಡೆಯಲಿಲ್ಲ. ಆದರೆ ನಾನು ಸ್ಥಾಪಿಸಿದ ಉದ್ಯಮದಲ್ಲಿ ಹತ್ತಾರು ರ್‍ಯಾಂಕ್ ವಿಜೇತರಿಗೆ ಕೆಲಸ ಕೊಟ್ಟಿದ್ದೇನೆ. ಇದು ಅವರ ಕನಸು ಹಾಗೂ ಸಾಮರ್ಥ್ಯವನ್ನು ತೋರಿಸುತ್ತದೆ. ಅವರು ಹೇಗೆ ಯಶಸ್ವಿ ಉದ್ಯಮದಾರರಾದರು ಎಂಬುದನ್ನು ತಿಳಿಸಿಕೊಡುತ್ತದೆ.

ನಮ್ಮಲ್ಲಿ ಒಂದು ಮಾತಿದೆ. 'ಮೂಡುವ ಸೂರ್ಯನು ಹೊಗಳಿಸಿಕೊಳ್ಳುತ್ತಾನೆ. ಅದೇ ಮುಳುಗುವ ಸೂರ್ಯನನ್ನು ಯಾರೂ ಹೊಗಳುವುದಿಲ್ಲ'. ಮೂಡುವ ಸೂರ್ಯನು ಆಕರ್ಷಕವಾಗಿರುತ್ತಾನೆ. ನೋಡಿದರೆ ತಂಪು, ಹಿತಕಾರಿ ಎನ್ನಿಸುತ್ತದೆ, ಅವನು ಅಲ್ಲಿಯವರೆಗಿದ್ದ ಕತ್ತಲನ್ನು ಬದಿಗೆ ಸರಿಸಿ ಜಗತ್ತಿಗೆ ಬೆಳಕು ನೀಡುತ್ತಾನೆ ಎಂಬ ಕಾರಣದಿಂದ ಮೂಡುವ ಸೂರ್ಯನಿಗೆ ನಾವು ನಮಿಸುತ್ತೇವೆ. ಅದೇ ಸೂರ್ಯ ಇಡೀ ದಿನ ಜಗವನ್ನು ಬೆಳಗಿದರೂ ಮುಳುಗುವಾಗ ನಾವು ಆಸಕ್ತಿ ಕಳೆದುಕೊಳ್ಳುತ್ತೇವೆ. ಅವನು ಇಡೀ ದಿನ ಬೆಳಗಿ ಶಾಖ ನೀಡಿದ್ದರಿಂದ ಜೀವಕೋಟಿಗಳು ಬದುಕಲು ಸಾಧ್ಯವಾಗುವುದಾದರೂ, ಮುಳುಗುವಾಗ ಅದನ್ನು ಯಾರೂ ಕೃತಜ್ಞತೆಯಿಂದ ಸ್ಮರಿಸುವುದಿಲ್ಲ. ಇದು ನಮ್ಮ ಜೀವನಕ್ಕೂ ಅನ್ವಯವಾಗುತ್ತದೆ. ಹೊಸ ಉದ್ಯಮ ಆರಂಭಿಸುವವರಿಗೆ ಒಂದು ಬೆಲೆ ಇರುತ್ತದೆ. ಅದೇ ಅವರು ಯಶಸ್ಸು ಸಾಧಿಸಿ, ಪ್ರಸಿದ್ಧಿ ಎತ್ತುಂಗಕ್ಕೇರಿ ಕೊನೆಗೆ ನಿವೃತ್ತನಾದರೆ ಅಥವಾ ಅವನ ಉದ್ಯಮದ ಜಾಗದಲ್ಲಿ ಅವನ ಮಕ್ಕಳು ಕುಳಿತು ಅಧಿಕಾರ ನಡೆಸತೊಡಗಿದರೆ ಅವನು ಅಲ್ಲಿಯವರೆಗೆ ಮಾಡಿದ ಸಾಧನೆ, ಪಟ್ಟ ಕಷ್ಟ ಎಲ್ಲವೂ ಮರೆಯಾಗುತ್ತದೆ. ಅವನು ನಿವೃತ್ತಿಯಾದ ನಂತರ ಅಥವಾ ಮಕ್ಕಳು ಅಧಿಕಾರ ವಹಿಸಿಕೊಂಡ ನಂತರ ಅವರಿಗೆ ಈ ಹಿಂದೆ ಸಿಗುತ್ತಿದ್ದ ಗೌರವ ಸಿಗುವುದಿಲ್ಲ. ಅದೊಂದು ರೀತಿ ಮುಳುಗುವ ಸೂರ್ಯನಂತೆ ಮಣಿಯಾಗುತ್ತಾ ಹೋಗುತ್ತಾರೆ. ಅವರಿಂದ ಆವರೆವಿಗೆ ಸಹಾಯ ಪಡೆದವರೂ ಕ್ರಮೇಣ ಅವರನ್ನು ಮರೆಯುತ್ತಾ ಹೋಗುತ್ತಾರೆ.

ಇದರ ಅರ್ಥವೇ ಮೂಡುವ ಸೂರ್ಯನಿಗೆ ಸಿಗುವ ಗೌರವ ಮುಳುಗುವಾಗ ಸಿಗುವುದಿಲ್ಲ. ಹೇಗಿದ್ದರೂ ಅವರ ಅಧಿಕಾರ ಮುಗಿದೆ, ಸಮರ್ಥ್ಯ ಕುಂದಿದೆ. ಅಂತಹವರ ಹತ್ತಿರ ಹೋದರೆ, ಅವರನ್ನು ಹೊಗಳುತ್ತಾ ಕುಳಿತರೆ ನಮಗೆ ಯಾವ ಲಾಭವೂ ಆಗದು ಎಂದೇ ಜನರು ಭಾವಿಸುತ್ತಾರೆ. ಇನ್ನು ಸರ್ಕಾರಿ ಅಧಿಕಾರಿ/ನೌಕರರಿಗೆ ಈ ಮಾತು ಸರಿಯಾಗಿ ಅನ್ವಯವಾಗುತ್ತದೆ. ಇವರು ಹುದ್ದೆಯಲ್ಲಿದ್ದಾಗ ಅವರಿಂದ ಸಹಾಯವಾಗುತ್ತದೆ ಎಂದು ಹಲವರು ಅವರ ಸುತ್ತಾಮುತ್ತ ಸುಳಿಯುತ್ತಾ, ಹಾಡಿ ಹೊಗಳುತ್ತಾ ಇರುತ್ತಾರೆ. ಅದೇ ಅವರು ನಿವೃತ್ತಿ ಹೊಂದಿದ ನಂತರ ಎದುರಿಗೆ ಸಿಕ್ಕರೆ ಕನಿಷ್ಠ ಒಂದು ನಮಸ್ಕಾರವೂ ಇಲ್ಲ. ಅಂತಹ ಗೌರವ ಸಿಗಬೇಕಾದರೆ ಅವರು ತಾವು ಸಲ್ಲಿಸಿದ ಸೇವೆಯಲ್ಲಿ ಪಡೆದ ಅನುಭವದ ಆಧಾರದ ಮೇಲೆ ಮತ್ತೊಂದು ಕೆಲಸ ಆರಂಭಿಸುವುದು. ಆಗ ಜನರು ಮತ್ತೆ ಹತ್ತಿರ ಸುಳಿಯುತ್ತಾರೆ. ಆದರೆ ಇದು ಅಷ್ಟು ಸುಲಭದ ಕೆಲಸವಲ್ಲ.

ಮುಖ್ಯವಾಗಿ ನಾವು ಏನಾಗಬೇಕು? ಎಂಬುದ ನಿರ್ಧರಿಸಬೇಕು. ನಂತರ ಅದಕ್ಕೆ ಏನೆಲ್ಲಾ ಹೊಂದಿಸುವುದು ಎಂದು ಚಿಂತಿಸಿ ಕಾರ್ಯಗತಗೊಳಿಸಬೇಕು. ಇಂತಹ ಸಮಯದಲ್ಲಿ ತನಗೆ ಅನುಕೂಲವಾಗಬಹುದಾದಂತಹವರನ್ನು ಮಾತ್ರ ಹತ್ತಿರಕ್ಕೆ ಸೇರಿಸಿಕೊಳ್ಳಬೇಕು. ತನ್ನ ಕನಸನ್ನು ಸಾಕಾರ ಗೊಳಿಸಲು ಪ್ರಯತ್ನಿಸಬೇಕು. ಅಂತಹವರು ಸಾಧನೆ ಮಾಡಲು ಸಹಕಾರಿಯಾಗಿರುತ್ತಾರೆ. ತನ್ನಲ್ಲಿ ಹಣವಿದೆ ಆದರೆ ಅನುಭವ ಹಾಗೂ ದಾರಿ ಕಂಡಿಲ್ಲ ಎಂದಾದಾಗ ಯಾರದೋ ಮಾತಿಗೆ ಮನ್ನಣೆ ನೀಡಿ, ಕಾರ್ಯಮಗ್ನರಾಗಬಾರದು.

ಈ ಹಿಂದೆ ನಾನು ಕಂಡಂತಹ ಒಂದು ಘಟನೆ. ಅದು ಸುಮಾರು ಮೂವತ್ತು ವರ್ಷದ ಹಿಂದಿನ ಪ್ರಸಂಗ. ಅದೊಂದು ದಿನ ಬೇರೆ ಊರಿನಿಂದ ಬಸ್ಸಿನಲ್ಲಿ ಬರಬೇಕಾಗಿತ್ತು. ಆದರೆ ಬಹು ಸಮಯದವರೆಗೆ ಬಸ್ಸು ಬರಲಿಲ್ಲ. ಕೊನೆಗೆ ಒಂದು ಲಾರಿ ಹತ್ತಬೇಕಾಯಿತು. ಆ ಲಾರಿಯಲ್ಲಿ ಐದಾರು ಜನರು ಕುಳಿತುಕೊಳ್ಳುವ ಸೀಟುಗಳಿದ್ದವು. ಎಲ್ಲವೂ ಭರ್ತಿಯಾದಾಗ ಲಾರಿ ಹೊರಟಿತು. ಅದು ಸುಮಾರು ಎರಡು ಗಂಟೆಯ ಪ್ರಯಾಣ. ಲಾರಿ ಚಾಲಕ ಬಲು ವಾಚಾಳಿ. ಅವನು ಲಾರಿಗೆ ಹತ್ತಿದವರ ಬಳಿ ಎಲ್ಲಿಗೆ ಹೋಗುತ್ತೀರಿ, ಅದು ಎಷ್ಟು ದೂರ, ಬಸ್ಸಿನಲ್ಲಾದರೆ ಎಷ್ಟು ಹಣ ಕೊಡುತ್ತಿದ್ರಿ? ಹೀಗೆ ಅದೂ ಇದೂ, ಕೇಳುತ್ತಲೇ, ಒಂದಷ್ಟು ಅವರು ಇಳಿಯುವಾಗ ಬಸ್ ದರದಷ್ಟೇ ಹಣ ಕೇಳಿ ಪಡೆಯುತ್ತಿದ್ದ. ನಂತರ ಗೊತ್ತಾಗಿದ್ದು ಅವನು ಆ ದಾರಿಯಲ್ಲಿ ಮೊದಲ ಸಲ ಬರುತ್ತಿರುವುದು. ಅವನಿಗೆ ಆ ಪ್ರದೇಶದ ಮಾಹಿತಿಯೇ ಇಲ್ಲ. ಆದರೆ ಬುದ್ಧಿವಂತಿಕೆ ಎಂದರೆ ಲಾರಿ ಹತ್ತಿದವರಿಂದಲೇ ಮಾಹಿತಿ ಪಡೆದು ತನ್ನ ಕಾರ್ಯ ಸಾಧಿಸಿಕೊಳ್ಳುತ್ತಿದ್ದ. ಕೊನೆಗೆ ಆತನನ್ನು ಮಾತನಾಡಿಸಿದಾಗ ಗೊತ್ತಾಗಿದ್ದು; ನಿಜವಾಗಿ ಆತನೇ ಆ ಲಾರಿಯ ಕಂಪನಿ ಮಾಲೀಕನ ಮಗ. ಮುಂದೆ ಸಂಸ್ಥೆ ನಡೆಸಬೇಕಾಗಿದ್ದವನು. ನೀವೇ ಹೀಗೆ ಲಾರಿ ಚಾಲಕರಾಗಿದ್ದೀರಿ ಎಂದರೆ, ಅನುಭವಕ್ಕೆ, ಮುಂದೆ ನಾನು ಮಾಲೀಕನಾದಾಗ ನನ್ನ ಲಾರಿ ಚಾಲಕರು ಏನೇನು ಮಾಡುತ್ತಾರೆ, ಎಷ್ಟು ಹಣ ಸಂಪಾದಿಸುತ್ತಾರೆ, ಅವರ ಕಷ್ಟ–ಸುಖಗಳೇನು ಇವೆಲ್ಲಾ ನನಗೆ ಗೊತ್ತಾದರೆ ಒಳ್ಳೆಯದಲ್ಲವೇ? ಅದಕ್ಕಾಗಿ ಹೀಗೆ ಒಂದೆರಡು ವರ್ಷ ಬೇರೆಬೇರೆ ಮಾರ್ಗದಲ್ಲಿ ಸಂಚರಿಸಿ ಅನುಭವ ಪಡೆಯುತ್ತಿದ್ದೇನೆ. ಅನುಭವ ಆಗಬೇಕಾದರೆ ಈ ರೀತಿ ಪರಿಶ್ರಮಪಡಲೇಬೇಕಲ್ಲವೇ? ಎಂದು ಮರು ಪ್ರಶ್ನೆ ಹಾಕಿದ. ಇದು ನಮ್ಮ ಜೀವನದ ಯಶಸ್ಸಿನ ಗುಟ್ಟಾಗಬೇಕು. ಸ್ವಂತ ಪರಿಶ್ರಮದಿಂದ ಏನನ್ನಾದರೂ ಸಾಧಿಸಬಹುದೇ ಹೊರತು ನಮ್ಮ ಸುತ್ತಮುತ್ತಲ ಹೊಗಳುಭಟರಿಂದಲ್ಲ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು.

ದೇಶದ 140 ಕೋಟಿ ಜನರೇ ನನ್ನ ಕುಟುಂಬ...!

ನನ್ನ ಜೀವನ ತೆರೆದ ಪುಸ್ತಕ: ಪ್ರಧಾನಿ ಮೋದಿ

ಅದಿಲಾಬಾದ್(ತೆಲಂಗಾಣ): ಸ್ವಜನಪಕ್ಷಪಾತ ಮತ್ತು ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಪ್ರತಿಪಕ್ಷ 'INDIA' ಮೈತ್ರಿಯನ್ನು ಪ್ರಧಾನಿ ನರೇಂದ್ರ ಮೋದಿ ಟೀಕಿಸಿದ್ದಾರೆ. ದೇಶದ 140 ಕೋಟಿ ಜನ ನನ್ನ ಕುಟುಂಬವಾಗಿದ್ದು, ನನ್ನ ಜೀವನ ತೆರೆದ ಪುಸ್ತಕವಾಗಿದೆ ಎಂದು ಹೇಳಿದರು.



ಸೋಮವಾರ ತೆಲಂಗಾಣದ ಅದಿಲಾ ಬಾದ್‌ನಲ್ಲಿ ಮಾತನಾಡಿ, ಭ್ರಷ್ಟಾಚಾರ, ಸ್ವಜನಪಕ್ಷಪಾತ ಮತ್ತು ತುಷ್ಟೀಕರಣದ ರಾಜಕೀಯ ಬೇರುಬಿಟ್ಟಿರುವ ಕಾರಣ 'INDIA' ಮೈತ್ರಿಕೂಟವು ಆತಂಕದಲ್ಲಿದೆ ಎಂದು ಟೀಕಿಸಿದರು. ವಿರೋಧಿಗಳ ಒಕ್ಕೂಟ ಅವಕಾಶ ಸಿಕ್ಕಾಗಲ್ಲೆಲ್ಲ ಮೋದಿಗೆ ಕುಟುಂಬವೇ ಇಲ್ಲ ಎಂಬಂತೆ ಮಾತನಾಡುತ್ತಾರೆ. ನನ್ನ ಕುಟುಂಬದಲ್ಲಿ ದೇಶದ ಕೋಟಿಗಟ್ಟಲೆ ಹೆಣ್ಣುಮಕ್ಕಳು, ತಾಯಂದಿರು, ಸಹೋದರಿಯರು ಇದ್ದಾರೆ. ಪ್ರತಿಯೊಬ್ಬ ಬಡವನೂ ನನ್ನ ಕುಟುಂಬವೇ. ಇಲ್ಲ ಎಂದುಕೊಂಡವರಿಗೆ ಮೋದಿ ಇದ್ದಾರೆ. ಮೋದಿ ಅವರ ಮನುಷ್ಯ, ಎಂದರು.

ಮೋದಿ ಬಗ್ಗೆ ಎಲ್ಲರಿಗೂ ಗೊತ್ತಿದ್ದು, ನನ್ನ ಪ್ರತಿ ನಡೆಯನ್ನೂ ಗಮನಿಸುತ್ತಿದ್ದಾರೆ. ಕೆಲವೊಮ್ಮೆ ಮಧ್ಯರಾತ್ರಿಯವರೆಗೂ ಕೆಲಸ ಮಾಡುವಾಗ, ಇಷ್ಟು ಕಷ್ಟಪಟ್ಟು ಕೆಲಸ ಮಾಡಬೇಡಿ, ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಎಂದು ಕೆಲವರು ಪತ್ರ ಬರೆಯುತ್ತಿದ್ದರು. ಜನರ ಆಶೋತ್ತರಗಳನ್ನು ಈಡೇರಿಸಲು ತಮ್ಮ ಹೋರಾಟ ಮುಂದುವರಿಯಲಿದೆ ಎಂದರು. ನಾನು ಮೇರಾ ಭಾರತ್, ಮೇರಾ ಪರಿವಾರ್ ಪರಿಕಲ್ಪನೆಯೊಂದಿಗೆ ಬದುಕುತ್ತೇನೆ. ನಾನು ನಿನಗಾಗಿ ಬದುಕುತ್ತೇನೆ. ನಿನಗಾಗಿ ಹೋರಾಡುತ್ತಿದ್ದೇನೆ ನಾನು ನಿನಗಾಗಿ ಹೋರಾಡುತ್ತಲೇ ಇರುತ್ತೇನೆ. ದೃಢ ಸಂಕಲ್ಪದಿಂದ ನಿಮ್ಮ ಕನಸುಗಳನ್ನು ನನಸು ಮಾಡುತ್ತೇನೆ ಎಂದು ಮೋದಿ ಭರವಸೆ ನೀಡಿದರು.

ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರ ಸರ್ಕಾರ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳನ್ನು ಉಲ್ಲೇಖಿಸಿದ ಅವರು, ಇದುವರೆಗೆ 15 ಲಕ್ಷಕ್ಕೂ ಹೆಚ್ಚು ಜನರನ್ನು ವಿಕಾಸ್ ಭಾರತ್ ಕ್ರಿಯಾ ಯೋಜನೆಗೆ ಉಲ್ಲೇಖಿಸಲಾಗಿದೆ. ಈ ಯೋಜನೆಯಲ್ಲಿ 3,75,000 ಮಂದಿ ಸಕ್ರಿಯ ಭಾಗವಹಿಸುವವರು ಇದ್ದಾರೆ ಎಂದು ಹೇಳಿದರು. ವಿಕಾಸ್ ಭಾರತ್ ವಿಷನ್‌ಗಾಗಿ ಇದುವರೆಗೆ 3,000 ಕ್ಕೂ ಹೆಚ್ಚು ಸಭೆಗಳನ್ನು ನಡೆಸಲಾಗಿದೆ. ಕಳೆದ 15 ದಿನಗಳಲ್ಲಿ 2 ಐಐಟಿ, 1 ಐಐಐಟಿ, 3 ಐಐಎಂ, 1 ಐಐಎಸ್ ಮತ್ತು 5 ಎಐಐಎಂಎಸ್ ಆರಂಭವಾಗಿವೆ. ರೈತರಿಗಾಗಿ ವಿಶ್ವದಲ್ಲೇ ಅತಿ ದೊಡ್ಡ ಶೇಖರಣಾ ಯೋಜನೆ ಆರಂಭಿಸಲಾಗಿದೆ ಎಂದರು.

18 ಸಾವಿರ ಸಹಕಾರಿ ಸಂಘಗಳನ್ನು ಗಣಕೀಕರಣಗೊಳಿಸಲಾಗಿದೆ. 2,000 ರೈಲ್ವೆ ಯೋಜನೆಗಳಿಗೆ ಚಾಲನೆ ನೀಡಿ ಶಂಕುಸ್ಥಾಪನೆ ಮಾಡಲಾಗಿದೆ. ಕಳೆದ 15 ದಿನಗಳಲ್ಲಿ ಬರೋಬ್ಬರಿ 1.5 ಲಕ್ಷ ಕೋಟಿ ಮೌಲ್ಯದ ತೈಲ ಮತ್ತು ಅನಿಲ ವಲಯದ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಾಗಿದೆ. ಈ ಪಟ್ಟಿ ಇಲ್ಲಿಗೆ ನಿಲ್ಲುವುದಿಲ್ಲ, ಈ 15 ದಿನಗಳು ಆತ್ಮನಿರ್ಭರ ಭಾರತಕ್ಕೆ ಇನ್ನಷ್ಟು ಬಲ ನೀಡಿವೆ ಎಂದರು.

ಸೋಮವಾರ ಬೆಳಗ್ಗೆ ಆದಿಲಾಬಾದ್‌ನಲ್ಲಿ 56,000 ಕೋಟಿ ರೂ.ನ ಹಲವಾರು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಾಯಿತು. ಇವುಗಳಲ್ಲಿ ವಿದ್ಯುತ್, ರೈಲು ಮತ್ತು ರಸ್ತೆ ಕ್ಷೇತ್ರಗಳಲ್ಲಿನ ಅನೇಕ ಯೋಜನೆಗಳು ಸೇರಿವೆ. ತೆಲಂಗಾಣ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ, ರಾಜ್ಯ ಬಿಜೆಪಿ ಮುಖ್ಯಸ್ಥ, ಕೇಂದ್ರ ಸಚಿವ ಜಿ.ಕಿಶನ್ ರೆಡ್ಡಿ, ತೆಲಂಗಾಣ ರಾಜ್ಯಪಾಲ ತಮಿಳಿ ಸೈ ಸೌಂದರರಾಜನ್ ಮತ್ತಿತರರು ಭಾಗವಹಿಸಿದ್ದರು.

ತಾಯಿ ಸತ್ತಾಗ ತಲೆ ಬೋಳಿಸಿಕೊಳ್ಳದ ಪ್ರಧಾನಿ ಮೋದಿ ನಿಜವಾದ ಹಿಂದೂ ಅಲ್ಲ

ಪಾಟ್ನಾ: ತಾಯಿ ಸತ್ತಾಗ ಯಾವುದೇ ನೋವಿಲ್ಲದೆ ತಲೆ ಬೋಳಿಸಿಕೊಳ್ಳದ ಪ್ರಧಾನಿ ನರೇಂದ್ರ ಮೋದಿ ನಿಜವಾದ ಹಿಂದೂ ಅಲ್ಲ ಎಂದು ಆರ್ ಜೆಡಿ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ ಟೀಕಿಸಿದ್ದಾರೆ. ಹಿಂದೂ ಸಂಪ್ರದಾಯಗಳ ಪ್ರಕಾರ, ಪೋಷಕರು ಸತ್ತಾಗ ಪುರುಷರು ತಲೆ ಬೋಳಿಸಿಕೊಳ್ಳಬೇಕು. ಆದರೆ, 2022ರ ಡಿಸೆಂಬರ್‌ನಲ್ಲಿ ತಾಯಿ ಹೀರಾಬಾ ನಿಧನರಾದಾಗ ಮೋದಿ ಏಕೆ ತಲೆ ಬೋಳಿಸಿಕೊಳ್ಳಲಿಲ್ಲ ಎಂದು ಪ್ರಶ್ನಿಸಿದರು. ಈ ಹೇಳಿಕೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.



ಗಾಂಧಿ ಮೈದಾನದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸೇರಿದಂತೆ ಹಲವು ಪ್ರತಿಪಕ್ಷಗಳ ನಾಯಕರು ಭಾಗವಹಿಸಿದ್ದ 'ಜನ ವಿಶ್ವಾಸ ಮಹಾ ರ‍್ಯಾಲಿಯಲ್ಲಿ ಪ್ರಧಾನಿ ಮೋದಿ ಅವರ ಕುಟುಂಬ ರಾಜಕಾರಣ ಹೇಳಿಕೆ ಕುರಿತು ವಾಗ್ದಾಳಿ ನಡೆಸಿದರು. ಪ್ರಧಾನಿ ಮೋದಿಗೆ ಕುಟುಂಬವಿಲ್ಲದ ಕಾರಣ ಕುಟುಂಬ ರಾಜಕಾರಣ ಬಗ್ಗೆ ದಾಳಿ ಮಾಡುತ್ತಿದ್ದಾರೆ. ಇದರಿಂದ ಹೆಚ್ಚು ಮಕ್ಕಳನ್ನು ಹೊಂದಿರುವ ಜನರು ಅವಮಾನಕ್ಕೆ ಒಳಗಾಗುತ್ತಾರೆ ಎಂದು ಹೇಳಿದರು.

ತಮ್ಮ ಪುತ್ರಿ ರೋಹಿಣಿ ಕಿಡ್ನಿ ದಾನ ಮಾಡಿದ್ದಕ್ಕಾಗಿ ಪ್ರಶಂಸಿಸಿದ ಲಾಲು ಪ್ರಸಾದ್ ಯಾದವ್, ಅನೇಕ ಕಾಯಿಲೆಗಳ ಹೊರತಾಗಿಯೂ, ಜನರಿಗಾಗಿ ಅವರ ಕೆಲಸ ಮುಂದುವರೆದಿದೆ ಎಂದು ಪ್ರತಿಪಾದಿಸಿದರು. ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಸೋಲಿಸುವಂತೆ ಮನವಿ ಮಾಡಿದರು. ಮತ್ತೊಂದೆಡೆ ಪ್ರಧಾನಿ ಮೋದಿ ಕುರಿತ ಲಾಲು ಪ್ರಸಾದ್ ಯಾದವ್ ಅವರ ಹೇಳಿಕೆ ವಿರುದ್ಧ ಬಿಜೆಪಿ ಕಿಡಿಕಾರಿದೆ.

ಲಾಲು ಕೌಂಟರ್: ಬಿಜೆಪಿಯಿಂದ 'ಮೋದಿ ಕಾ ಪರಿವಾರ್' ಅಭಿಯಾನ!

ನವದೆಹಲಿ: ಪ್ರಧಾನಿ ಮೋದಿಗೆ ಕುಟುಂಬ ಇಲ್ಲ ಎಂಬ ಆರ್ ಜೆಡಿ ನಾಯಕ ಲಾಲು ಪ್ರಸಾದ್ ಯಾದವ್ ಹೇಳಿಕೆಗೆ ಬಿಜೆಪಿ ಭರ್ಜರಿ ಕೌಂಟರ್ ನೀಡಿದೆ. ಅಮಿತ್ ಶಾ, ಪಕ್ಷದ ಅಧ್ಯಕ್ಷ ಜೆಪಿ ನಡ್ಡಾ ಸೇರಿದಂತೆ ಬಿಜೆಪಿಯ ಹಿರಿಯ ನಾಯಕರು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹೆಸರಿನ ಪಕ್ಕ ಮೋದಿ ಕಾ ಪರಿವಾರ್ (ಮೋದಿ ಕುಟುಂಬದವರು) ಎಂದು ಬರೆದಿದ್ದಾರೆ.

ಇದನ್ನು ಮೋದಿ ಕಾ ಪರಿವಾರ್ ಅಭಿಯಾನವನ್ನಾಗಿ ಮಾಡಲಾಗಿದ್ದು, ದೇಶದ ಬಹುತೇಕ ಬಿಜೆಪಿ ನಾಯಕರು ಅಭಿಯಾನಕ್ಕೆ ಕೈ ಜೋಡಿಸಿದ್ದು ತಾವೂ ಸಹ ಮೋದಿ ಪರಿವಾರದವರು ಎಂದು ಬರೆದುಕೊಂಡಿದ್ದಾರೆ. ಲಾಲೂ ಆರೋಪಕ್ಕೆ ತೆಲಂಗಾಣದ ಆದಿಲಾಬಾದ್‌ನಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ತಿರುಗೇಟು ನೀಡಿದ್ದ ಪ್ರಧಾನಿ ಮೋದಿ, ದೇಶದಲ್ಲಿನ ಕುಟುಂಬ ರಾಜಕಾರಣದ ವಿರುದ್ಧ ವಾಗ್ದಾಳಿ ನಡೆಸಿದ್ದರು.



ಕುಟುಂಬ ರಾಜಕಾರಣ ನಡೆಸುತ್ತಿರುವವರಿಗೆ ಹಲವು ಮುಖಗಳಿರಬಹುದು ಆದರೆ ಸುಳ್ಳು ಮತ್ತು ಲೂಟಿ ಮಾಡುವುದು ಕುಟುಂಬ ರಾಜಕಾರಣದಲ್ಲಿ ತೊಡಗಿರುವವರಲ್ಲಿ ಕಾಣುವ ಸಾಮಾನ್ಯ ಅಂಶ ಎಂದು ಮೋದಿ ಗುಡುಗಿದ್ದರು. ಇದಷ್ಟೇ ಅಲ್ಲದೇ ದೇಶದ 140 ಕೋಟಿ ಮಂದಿ ತಮ್ಮ ಪರಿವಾರದವರೆಂದು ಮೋದಿ ಹೇಳಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಬೆಂಗಳೂರಿನ ರಾಮೇಶ್ವರಂ ಬಾಂಬ್ ಸ್ಫೋಟ ಟ್ರೈಲರ್ ಅಷ್ಟೆ; ಮುಂದೆ ಗಂಡಾಂತರ ಕಟ್ಟಿಟ್ಟಬುತ್ತಿ

ಸಂಸದ ಪ್ರತಾಪ್ ಸಿಂಹ ಎಚ್ಚರಿಕೆ

- ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಬಾಂಬ್ ಸ್ಫೋಟ
- ತಾಲಿಬಾನ್ ಸರ್ಕಾರದ ಆಡಳಿತಕ್ಕೆ ಇವೆಲ್ಲವೂ ಸಾಕ್ಷಿ
- ಬಿಜೆಪಿ ಗೆಲ್ಲಿಸಿ, ಕಾಂಗ್ರೆಸ್ ತೊಲಗಿಸಿ

ಮೈಸೂರು, ಮಾ.4(ಬಿಎಲ್‌ಯು)– ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ನಡೆದಿರುವ ಟೈಮ್ ಬಾಂಬ್ ಸ್ಫೋಟ ಬರೀ ಟ್ರೈಲರ್ ಆಗಿದ್ದು, ಮುಂದೆ ಕರ್ನಾಟಕಕ್ಕೆ ಗಂಡಾಂತರ ಕಾದಿದೆ ಎಂದು ಸಂಸದ ಪ್ರತಾಪ್ ಸಿಂಹ ಎಚ್ಚರಿಸಿದ್ದಾರೆ.

ಮೈಸೂರಿನ ಅಂಚೆ ಪ್ರಶಿಕ್ಷಣ ತರಬೇತಿ ಕೇಂದ್ರದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಈ ಹಿಂದೆ ಮನಮೋಹನ್ ಸಿಂಗ್ ಪ್ರಧಾನಿ ಆಗಿದ್ದಾಗ 10 ವರ್ಷ ಕಾಲ ಸರಣಿ ಬಾಂಬ್ ಬ್ಲಾಸ್ಟ್‌ಗಳು ನಡೆದವು. ಚಿನ್ನಸ್ವಾಮಿ ಸ್ಟೇಡಿಯಂ, ಜರ್ಮನ್ ಬೇಕರಿ, ಪುಣೆ, ಮುಂಬೈ, ದೆಹಲಿ, ಸೂರತ್ ಸೇರಿದಂತೆ ಹಲವು ಸ್ಥಳಗಳಲ್ಲಿ ಸರಣಿ ಸ್ಫೋಟಗಳು ಸಂಭವಿಸಿತ್ತು. ಈಗ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿರುವ ಕಾರಣ ಬಾಂಬ್ ಬ್ಲಾಸ್ಟ್‌ಗಳು ಮುಂದುವರೆದಿವೆ ಎಂದು ಆರೋಪಿಸಿದರು.

ನೀವು ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಿದರೆ ತಾಲಿಬಾನಿ ಸರ್ಕಾರ ಅಸ್ತಿತ್ವಕ್ಕೆ ಬರುತ್ತದೆ ಎಂದು 2023 ರ ವಿಧಾನಸಭಾ ಚುನಾವಣೆ ವೇಳೆಯೇ ಎಚ್ಚರಿಸಿದ್ದೆ. ಅಂದು ನಾನು ಭವಿಷ್ಯ ನುಡಿದಂತೆ ಈಗ ಆಗುತ್ತಿದೆ. ಇಂದು ರಾಜ್ಯದಲ್ಲಿ ತಾಲಿಬಾನಿ ಸರ್ಕಾರವಿದೆ ಎಂಬುವುದಕ್ಕೆ ಇಂತಹ ಬಹಳಷ್ಟು ಘಟನೆಗಳು ಸಾಕ್ಷಿಯಾಗಿವೆ ಎಂದು ಪ್ರತಾಪ್ ಸಿಂಹ ಆಕ್ರೋಶ ವ್ಯಕ್ತಪಡಿಸಿದರು.

ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ ಪ್ರಕರಣಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಕಾಂಗ್ರೆಸ್ ಪಕ್ಷದಿಂದ ಅಲ್ಪಸಂಖ್ಯಾತರ ತುಷ್ಟೀಕರಣದಿಂದ ದೇಶದ ವಿರೋಧಿಯಾದ ಇಂತಹ ಬೆಳವಣಿಗೆಗಳು ನಡೆಯುತ್ತಿವೆ ಎಂದು ಆಪಾದಿಸಿದರು.

ವಿಧಾನಸೌಧದ ಒಳಗೆ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಮೊಳಗುವ ಮೂಲಕ ಅಲ್ಲಿ ಯಾರು ಅಧಿಕಾರ ನಡೆಸುತ್ತಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗಿದೆ ಎಂದು ಹೇಳಿದರು.

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಅಭ್ಯರ್ಥಿಗಳು ರಾಜ್ಯದ 28 ಕ್ಷೇತ್ರದಲ್ಲೂ ಜಯಭೇರಿ ಬಾರಿಸಲಿದ್ದಾರೆ. ಇದು ಸಾಧ್ಯವಾಗಲು ರಾಜ್ಯದ ಜನರು ಪ್ರಧಾನಿ ನರೇಂದ್ರ ಮೋದಿ ಬೆಂಬಲಿಸಬೇಕು. ಈ ಮೂಲಕ ಕಾಂಗ್ರೆಸ್ ಸರ್ಕಾರ ತೊಲಗಲು ಅವಕಾಶ ಮಾಡಿಕೊಟ್ಟರೆ ಕರ್ನಾಟಕ ಉಳಿಯುತ್ತದೆ, ಇಲ್ಲವೆಂದರೆ ಗಂಡಾಂತರ ಕಟ್ಟಿಟ್ಟಬುತ್ತಿ ಎಂದು ಎಚ್ಚರಿಕೆ ನೀಡಿದರು.

ಪಾಕಿಸ್ತಾನ ಪರ ಘೋಷಣೆ ಕೂಗಿದರೂ ಇನ್ನು ಎಫ್‌ಎಸ್‌ಎಲ್ ರಿಪೋರ್ಟ್ ಬರಬೇಕು ಎನ್ನುತ್ತಾರೆ. ಈ ವಿಚಾರವನ್ನು ಸೋಷಿಯಲ್ ಮೀಡಿಯಾದಲ್ಲಿ ಕಾಂಗ್ರೆಸ್‌ನವರು ತಿರುಚಿದ್ದಾರೆ ಎಂದು ಪ್ರತಾಪ್ ಸಿಂಹ ದೂರಿದರು.

ಸಂಸದ ಪ್ರತಾಪ್‌ಸಿಂಹರಿಂದ ಅಂಚೆ ಪ್ರಶಿಕ್ಷಣ ಕೇಂದ್ರದಲ್ಲಿ ಮಹಿಳಾ ವಸತಿ ನಿಲಯ 'ಹಂಸ' ಉದ್ಘಾಟನೆ

ಲೋಕಸಭಾ ಚುನಾವಣಾ ಅಧಿಸೂಚನೆ ನಾಲ್ಕೈದು ದಿನದಲ್ಲಿ ಪ್ರಕಟ

- ಈ ಹಿನ್ನೆಲೆಯಲ್ಲಿ ಅಭಿವೃದ್ಧಿ ಕಾರ್ಯಗಳ ಲೋಕಾರ್ಪಣೆ
- ಮೋದಿ ಸರ್ಕಾರ ಅಂಚೆ ಇಲಾಖೆ ಸದೃಢಗೊಳಿಸಿದೆ

ಮೈಸೂರು, ಮಾ.4(ಬಿಎಲ್‌ಯು)– ಮೈಸೂರಿನ ನಜರ್‌ಬಾದ್‌ನ ಅಂಚೆ ಪ್ರಶಿಕ್ಷಣ ಸಂಸ್ಥೆಯಲ್ಲಿ 4.28 ಕೋಟಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಿರುವ ಮಹಿಳಾ ವಸತಿ ನಿಲಯ 'ಹಂಸ'ವನ್ನು ಸಂಸದ ಪ್ರತಾಪ್ ಸಿಂಹ ಇಂದು ಉದ್ಘಾಟಿಸಿದರು.

ತರುವಾಯ ಮಾತನಾಡಿದ ಅವರು, ಇನ್ನು ನಾಲ್ಕೈದು ದಿನದಲ್ಲಿ ಲೋಕಸಭಾ ಚುನಾವಣೆಯ ಅಧಿಸೂಚನೆ ಪ್ರಕಟವಾಗಲಿದೆ. ಈ ಹಿನ್ನೆಲೆಯಲ್ಲಿ ದೇಶದಲ್ಲಿ ಮೋದಿ ಸರ್ಕಾರದ ಅವಧಿಯಲ್ಲಿ ಆಗಿರುವ ಅಭಿವೃದ್ಧಿಯನ್ನು ಸಮರ್ಪಿಸಲಾಗುತ್ತಿದೆ ಎಂದರು.

ಮೈಸೂರಿನಲ್ಲಿ ಕೂಡ ಬಹಳಷ್ಟು ಅಭಿವೃದ್ಧಿ ಕಾರ್ಯಗಳಾಗಿದ್ದು, ಇದರ ಪರಿಣಾಮ ಬಹಳಷ್ಟು ಖಾಸಗಿ ಕಂಪನಿಗಳು ಮೈಸೂರಿನಲ್ಲಿ ಬಂಡವಾಳ ಹೂಡುತ್ತಿವೆ. ಇದರಿಂದ ಸಹಜವಾಗಿಯೇ ನಗರ ಅಭಿವೃದ್ಧಿ ಹೊಂದಿ, ಉದ್ಯೋಗಾವಕಾಶ ದೊರೆಯುತ್ತಿದೆ ಎಂದು ಅಭಿಪ್ರಾಯಪಟ್ಟರು.

ಹತ್ತು ವರ್ಷದ ಅವಧಿಯಲ್ಲಿ ಬಿಜೆಪಿ ಸರ್ಕಾರ ಮಾಡಿರುವ ಅಭಿವೃದ್ಧಿ ಪರಿಗಣಿಸಿ ಮತ್ತೆ ನಮ್ಮ ಸರ್ಕಾರವನ್ನು ಅಧಿಕಾರಕ್ಕೆ ತಂದರೆ ಮುಂದಿನ 5 ವರ್ಷದ ಅವಧಿಯಲ್ಲಿ ಭಾರತವನ್ನು ವಿಶ್ವದ 3ನೇ ಆರ್ಥಿಕ ಶಕ್ತಿಯಾಗಿ ಮಾಡಲಾಗುವುದು ಎಂದರು.

ಅಂಚೆ ಇಲಾಖೆ ಸತ್ವ ಕಳೆದುಕೊಂಡಿತ್ತು. ಅಂತಹ ಸಂದರ್ಭದಲ್ಲಿ ಪ್ರಧಾನಿ ಮೋದಿ ಸರ್ಕಾರ ಹತ್ತು ವರ್ಷದ ಅವಧಿಯಲ್ಲಿ ಅಂಚೆ ಇಲಾಖೆಯನ್ನು ಸದೃಢಗೊಳಿಸಿದೆ ಎಂದರು. ಅಂಚೆ ಇಲಾಖೆಯನ್ನು ಮೇಲ್ದರ್ಜೆಗೇರಿಸಿರುವ ಕಾರಣ ಈಗ ಗ್ರಾಹಕರಿಗೆ ಅಂಚೆ ಇಲಾಖೆಯಲ್ಲಿ ಆಧುನಿಕ ಸೌಲಭ್ಯಗಳು ದೊರಕುತ್ತಿವೆ. ಅಭಿವೃದ್ಧಿ ಮೂಲ ಅಜೆಂಡಾ ಎಂಬ ಧ್ಯೇಯವಾಕ್ಯದೊಂದಿಗೆ ನರೇಂದ್ರ ಮೋದಿ ಸರ್ಕಾರ ಅಭಿವೃದ್ಧಿ ಕಾರ್ಯದಲ್ಲಿ ದಾಖಲೆ ಬರೆದಿದೆ ಎಂದರು.

ಅಂಚೆ ಪ್ರಶಿಕ್ಷಣ ಕೇಂದ್ರದ ನಿರ್ದೇಶಕ ಡಾ.ಆಶಿಶ್ ಸಿಂಗ್ ಠಾಕೂರ್, ಉಪನಿರ್ದೇಶಕ ಕೆವಿಎಲ್ ಎನ್.ಮೂರ್ತಿ, ದಕ್ಷಿಣ ಕರ್ನಾಟಕ ಪ್ರಾಂತ್ಯದ ಅಂಚೆ ನಿರ್ದೇಶಕ ಅಶ್ವಥ್ ನಾರಾಯಣ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.






ಮೈಸೂರಿನ ನಜರ್‌ಬಾದ್‌ನ ಅಂಚೆ ಪ್ರಶಿಕ್ಷಣ ಸಂಸ್ಥೆಯಲ್ಲಿ ನೂತನವಾಗಿ ನಿರ್ಮಿಸಿರುವ ಮಹಿಳಾ ವಸತಿ ನಿಲಯ ಹಂಸವನ್ನು ಸಂಸದ ಪ್ರತಾಪ್ ಸಿಂಹ ಸೋಮವಾರ ಉದ್ಘಾಟಿಸಿದರು. (ಎಡಚಿತ್ರ), ನೂತನ ವಸತಿ ನಿಲಯವನ್ನು(ಬಲಚಿತ್ರ) ಕಾಣಬಹುದು.

ದೇಶದ ಮೊದಲ ಅಂಚೆ ಇಲಾಖೆ ವಸತಿನಿಲಯ

ಮೈಸೂರಿನ ಅಂಚೆ ಪ್ರಶಿಕ್ಷಣ ಕೇಂದ್ರದಲ್ಲಿ ಒಟ್ಟು 4.28 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಿರುವ ದೇಶದ ಮೊಟ್ಟ ಮೊದಲ ಅಂಚೆ ಇಲಾಖೆಯ ವಸತಿನಿಲಯ ಎಂಬ ಖ್ಯಾತಿಗೆ ಪಾತ್ರವಾಗಿದೆ. 36 ಕೊಠಡಿ ಹೊಂದಿರುವ ವಸತಿನಿಲಯದಲ್ಲಿ ಏಕಕಾಲಕ್ಕೆ ನೂರು ಮಹಿಳೆಯರಿಗೆ ವಸತಿ ಕಲ್ಪಿಸಬಹುದಾಗಿದೆ. ಇದಕ್ಕೆ ಪೌರಾಣಿಕ ಹಾಗೂ ಭಾವನಾತ್ಮಕತೆ ಬೆಸೆದಿರುವ ಹಂಸ ಎಂಬ ಹೆಸರನ್ನು ನಾಮಕರಣ ಮಾಡಲಾಗಿದೆ. ದಕ್ಷಿಣ ಭಾರತದ ಕರ್ನಾಟಕ, ಕೇರಳ, ಆಂಧ್ರ ಪ್ರದೇಶ, ತೆಲಂಗಾಣ, ತಮಿಳುನಾಡಿನ ಅಂಚೆ ಪ್ರಶಿಕ್ಷಣಾರ್ಥಿಗಳು ಕೇಂದ್ರದಲ್ಲಿ ತರಬೇತಿ ಪಡೆಯುವ ವೇಳೆ ವಾಸ್ತವ್ಯಕ್ಕಾಗಿ ಇದನ್ನು ನಿರ್ಮಾಣ ಮಾಡಲಾಗಿದೆ. ವಸತಿನಿಲಯದಲ್ಲಿ ವಸತಿ ಸೌಕರ್ಯದ ಜೊತೆಗೆ ಅಧ್ಯಯನ, ಕ್ರೀಡಾ ಚಟುವಟಿಕೆ, ಮನೋರಂಜನೆ, ಭೋಜನ ಸೇರಿದಂತೆ ಹಲವು ಸೌಲಭ್ಯ ಕಲ್ಪಿಸಲಾಗಿದೆ. ಸೌರವಿದ್ಯುತ್ ಉತ್ಪಾದನೆ ಮತ್ತು ಬಳಕೆ, ಸ್ವಚ್ಛ ಪ್ರಾಕೃತಿಕ ಹಸಿರಿನ ಪರಿಸರದಲ್ಲಿ ನಿರ್ಮಾಣವಾಗಿರುವ ವಸತಿನಿಲಯದಲ್ಲಿ ಜೈವಿಕ ಪದಾರ್ಥಗಳ ಮರು ಬಳಕೆ, ಅಂತರ್ಜಲ ವಿಕಸನಕ್ಕೆ ಒತ್ತು ನೀಡಲಾಗಿದೆ.

ಪ್ರೊ.ಭಾಷ್ಯಂ ಸ್ವಾಮೀಜಿಯವರಿಗೆ ಅಭಿಮಾನಿಗಳಿಂದ ಅಭಿನಂದನೆ



ಮೈಸೂರು ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ ಪುರಸ್ಕೃತರಾದ ಮೈಸೂರು ವಿಜಯನಗರದಲ್ಲಿರುವ ಶ್ರೀ ಯೋಗಾನರಸಿಂಹಸ್ವಾಮಿ ದೇವಸ್ಥಾನದ ಸಂಸ್ಥಾಪಕರಾದ ಪ್ರೊ.ಭಾಷ್ಯಂ ಸ್ವಾಮೀಜಿ ಅವರನ್ನು ಅಭಿಮಾನಿಗಳು ಕ್ರಾಫರ್ಡ್ ಹಾಲ್ ಮುಂದೆ ಫಲತಾಂಬೂಲ ನೀಡಿ, ಅಭಿನಂದಿಸಿದರು. ಚಿತ್ರದಲ್ಲಿ ದೇವಸ್ಥಾನದ ಆಡಳಿತಾಧಿಕಾರಿ ಶ್ರೀನಿವಾಸನ್, ಕಾಳಿದಾಸ ರಸ್ತೆಯಲ್ಲಿರುವ ಯದುಗಿರಿ ಯತಿರಾಜ ಶಾಖಾ ಮಠ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದ ಪ್ರಧಾನ ವ್ಯವಸ್ಥಾಪಕ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್), ಗಿರೀಶ್, ಕುಮಾರ್ ಹಾಗೂ ಇತರರಿದ್ದಾರೆ.

ಪಂಚಮಿತ್ರ ಪೋರ್ಟಲ್ ಸೇವೆಗೆ ಚಾಲನೆ



ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ 'ಪಂಚಮಿತ್ರ' ಪೋರ್ಟಲ್‌ನ ಪೋಸ್ಟರ್ ಬಿಡುಗಡೆ ಮಾಡಿದರು.

ಮೈಸೂರು, ಮಾ.4(ಎಸ್‌ಬಿಡಿ)– ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅಭಿವೃದ್ಧಿಪಡಿಸಿರುವ 'ಪಂಚಮಿತ್ರ' ಪೋರ್ಟಲ್ ಸೇವೆಗೆ ಮೈಸೂರಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಚಾಲನೆ ನೀಡಿದರು.

ನಗರದ ಜಲದರ್ಶಿನಿ ಅತಿಥಿಗೃಹದಲ್ಲಿ 'ಪಂಚಮಿತ್ರ' ಪೋರ್ಟಲ್ ಮಾಹಿತಿಯನ್ನೊಳಗೊಂಡ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಪೋರ್ಟಲ್‌ಗೆ ವಿಧ್ಯುಕ್ತವಾಗಿ ಚಾಲನೆ ನೀಡಿ ಮಾತನಾಡಿದ ಸಚಿವರು, ಸಾರ್ವಜನಿಕರು ತಮಗೆ ಅವಶ್ಯಕವಿರುವ ವಿವಿಧ ಮಾಹಿತಿ ಮತ್ತು ವಿವರ ಪಡೆಯಲು, ವಿವಿಧ ಸೌಲಭ್ಯಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು, ಅರ್ಜಿಯ ಸ್ಥಿತಿಗತಿ ಪರಿಶೀಲನೆ ಹಾಗೂ ಕುಂದುಕೊರತೆ ದಾಖಲಿಸಲು ಈ ಪೋರ್ಟಲ್ ವೇದಿಕೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯಿತ್ರಿ, ಅಪರ ಜಿಲ್ಲಾಧಿಕಾರಿ ಪಿ.ಶಿವರಾಜು, ಸಹಾಯಕ ಕಾರ್ಯದರ್ಶಿ ಕುಲದೀಪ್, ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಂ.ಎಸ್.ಗಿರಿಧರ್, ಬಿ.ಕೆ.ಮನು, ಸಿ.ಕೃಷ್ಣ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಕೆ.ರುಕ್ಮಾಂಗದ, ಪ್ರಕಾಶ್ ಇನ್ನಿತರರು ಹಾಜರಿದ್ದರು. ಸಾರ್ವಜನಿಕರಿಗೆ ಗ್ರಾಮಪಂಚಾಯಿತಿ ವ್ಯಾಪ್ತಿಯ ವಿವಿಧ ಸೇವೆಗಳನ್ನು ಒಂದೇ ವೇದಿಕೆಯಲ್ಲಿ ಕಲ್ಪಿಸುವ ನಿಟ್ಟಿನಲ್ಲಿ 'ಪಂಚಮಿತ್ರ' ಪೋರ್ಟಲ್ ಅಭಿವೃದ್ಧಿಪಡಿಸಿದ್ದು, ಸದ್ಯ ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭಿಸಬೇಕಿದೆ.

ಅಂತರ ಕಾಲೇಜು ಪುರುಷರ ಕ್ರಿಕೆಟ್ ಪಂದ್ಯಾವಳಿ: ಮಹಾಜನ ಪ್ರಥಮ ದರ್ಜೆ ಕಾಲೇಜಿಗೆ ಪ್ರಥಮ ಸ್ಥಾನ



ಮೈಸೂರು, ಮಾ. 4– ಮೈಸೂರು ವಿಶ್ವವಿದ್ಯಾನಿಲಯ ಆಯೋಜಿಸಿದ್ದ, ಪುರುಷರ ಅಂತರ ಕಾಲೇಜು ಮಟ್ಟದ ಕ್ರಿಕೆಟ್ ಪಂದ್ಯಾವಳಿಯಲ್ಲಿ, ಮಹಾಜನ ಪ್ರಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ ಪಡೆದಿದ್ದು, ಕಾಲೇಜಿನ ಪ್ರಾಂಶುಪಾಲರು, ಆಡಳಿತ ಮಂಡಳಿ ಹಾಗೂ ದೈಹಿಕ ಶಿಕ್ಷಣ ವಿಭಾಗದ ವತಿಯಿಂದ ಅಭಿನಂದಿಸಲಾಯಿತು. ಈ ವೇಳೆ ದೈಹಿಕ ಶಿಕ್ಷಣ ನಿರ್ದೇಶಕರಾದ ಪಿ.ಎಸ್.ಮಧುಸೂದನ, ಡಾ.ಹೆಚ್.ಎನ್.ಭಾಸ್ಕರ್, ಪ್ರಾಂಶುಪಾಲರಾದ ಡಾ.ಬಿ.ಆರ್.ಜಯಕುಮಾರಿ, ಶೈಕ್ಷಣಿಕ ಸಲಹೆಗಾರರು ಹಾಗೂ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆರ್.ರಮೇಶ್, ತಂಡದ ನಾಯಕ ಸಿಪ್ಪನ್ ಅಲಿ, ಕನಿಷ್ಕ್ ಎಂ, ಚೇತನ್ ಎಸ್, ಭುವನೇಶ್ವರ್ ಪಿ ನಾಯಕ್, ಕಿಶೋರ್, ರಾಜಶೇಖರ್ ಸ್ವಾಮಿ, ಆರ್ಯನ್ ಎಲ್.ಎನ್, ಕಿಶೋರ್, ಕೌಶಿಕ್ ಜೆ, ಕಾರ್ತಿಕ್ ಎಸ್.ಯು, ಸೋಹನ್ ಪಿ ಹೆಗ್ಡೆ, ಸಂಜು ದಬ್ಲಾಪುರ್, ಉಮೇಶ್, ಚಂದನ್ ಎನ್, ಜತನ್ ಕೆ, ಶ್ರೀವತ್ಸ ಎನ್.ಟಿ, ಸುಮನ್ ಎಸ್ ಹಾಗೂ ನಿಖಿತ್‌ಗೌಡ ಇನ್ನಿತರರು ಉಪಸ್ಥಿತರಿದ್ದರು.

ಮಾ.15ರಂದು ಶ್ರೀ ಸುತ್ತೂರು ಕ್ಷೇತ್ರದಲ್ಲಿ ಸಾಮೂಹಿಕ ವಿವಾಹ

ಸುತ್ತೂರು,ಮಾ.4–ಶ್ರೀ ಸುತ್ತೂರು ಕ್ಷೇತ್ರದಲ್ಲಿ ಮಾ.15ರಂದು ಮಾಸಿಕ ಸಾಮೂಹಿಕ ವಿವಾಹ ಕಾರ್ಯಕ್ರಮ ಏರ್ಪಡಿಸಲಾಗಿದೆ.



ವಿವಾಹದಲ್ಲಿ ಭಾಗವಹಿಸುವ ವರನಿಗೆ 21 ವರ್ಷ, ವಧುವಿಗೆ 18 ವರ್ಷ ಪೂರ್ಣಗೊಂಡಿರಬೇಕು. ಅರ್ಜಿ ನಮೂನೆಯಲ್ಲಿ ವರ ಮತ್ತು ವಧುವಿನ ಭಾವಚಿತ್ರಗಳನ್ನು ಲಗತ್ತಿಸಿರಬೇಕು. ಜಾತಿ ದೃಢೀಕರಣ ಪತ್ರ, ವಧು–ವರರ ವಯಸ್ಸಿನ ಬಗ್ಗೆ ಶಾಲೆಯಿಂದ ಪಡೆದ ದಾಖಲಾತಿ ಪತ್ರ, ದೃಢೀಕರಣ ಪತ್ರ ಲಗತ್ತಿಸಿರಬೇಕು. ಬಾಲ್ಯವಿವಾಹಕ್ಕೆ ಅವಕಾಶವಿರುವುದಿಲ್ಲ. ಆಸಕ್ತರು 8 ದಿನಗಳ ಮುಂಚಿತವಾಗಿ ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಸುತ್ತೂರು ಇವರನ್ನು ನೇರವಾಗಿ ಸಂಪರ್ಕಿಸಿ ಅಥವಾ ದೂರವಾಣಿ: 08221–232217, 232033, 9741342222, ಸಂಪರ್ಕಿಸಿ, ಮಾಹಿತಿ ಪಡೆಯಬಹುದು.

ಬಿಜೆಪಿಗೆ ನೇಮಕ



ಮೈಸೂರು: ಮೈಸೂರಿನ ಬಿಜೆಪಿ ಪರಿಶಿಷ್ಟ ಪಂಗಡ (ಎಸ್.ಟಿ) ಮೋರ್ಚಾ ನೂತನ ಅಧ್ಯಕ್ಷರಾಗಿ ವಕೀಲ ಹಾಗೂ ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಪಡುವಾರಹಳ್ಳಿ ಎಂ.ರಾಮಕೃಷ್ಣ ಅವರನ್ನು ನೇಮಕ ಮಾಡಲಾಗಿದೆ.

ಕ್ಯಾನ್ಸರ್ ತಪಾಸಣಾ ಶಿಬಿರ

ಮೈಸೂರು,ಮಾ.4–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಮಾ. 7ರಂದು ಬೆಳಗ್ಗೆ 10ರಿಂದ ರಾತ್ರಿ 8ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–4259259 ಸಂಪರ್ಕಿಸಬಹುದು.

ಕನ್ನಡ ಗೀತೋತ್ಸವ ಪ್ರತಿಭಾ ಪುರಸ್ಕೃತರು



ಮೈಸೂರಿನ ಮಹಾರತ್ನ ಟ್ರಸ್ಟ್‌ನ ವತಿಯಿಂದ ನಡೆದ ರಾಜ್ಯ ಮಟ್ಟದ ಕನ್ನಡ ಗೀತೋತ್ಸವ ಕಾರ್ಯಕ್ರಮದಲ್ಲಿ ಕುಮಾರಿ ಎನ್.ಚಿನ್ಮಯಿ, ಶ್ರೀಮತಿ ಸುಪ್ರಿಯ ಎಂ.ಎಸ್, ಶ್ರೀ ಯಶಸ್, ಕುಮಾರಿ ನಾಗಮಣಿ.ವೈ ಅವರನ್ನು ಅವರ ಸಂಗೀತ ಪ್ರತಿಭೆಯನ್ನು ಗುರುತಿಸಿ ಟ್ರಸ್ಟ್‌ನ ವತಿಯಿಂದ ಗೌರವಿಸಲಾಯಿತು. ಅಧ್ಯಕ್ಷ ಎಂ.ಮಹಾಲಿಂಗು, ಚಲನಚಿತ್ರ ನಟ ಶಂಕರ್ ಅಶ್ವಥ್, ಪ್ರೊ.ಮೈಸೂರು ಕೃಷ್ಣಮೂರ್ತಿ, ಕವಿಯತ್ರಿ ಶ್ರೀಮತಿ ಮ.ನ.ಲತಾಮೋಹನ್, ಕಾರ್ಯದರ್ಶಿ ಶ್ರೀಮತಿ ರೂಪ, ಸಹಕಾರ್ಯದರ್ಶಿ ನಾಗಶ್ರೀ ಮತ್ತಿತರರು ಚಿತ್ರದಲ್ಲಿದ್ದಾರೆ.



ಮೈಸೂರಿನ ಛಾಯಾದೇವಿ ಶಿಕ್ಷಣ ಸಂಸ್ಥೆಯಲ್ಲಿ ಪೋಲಿಯೊ ಲಸಿಕೆ ಅಭಿಯಾನಕ್ಕೆ ಮಾಜಿ ಮೇಯರ್ ಸಂದೇಶ್ ಸ್ವಾಮಿ ಚಾಲನೆ ನೀಡಿದರು. ಈ ವೇಳೆ ಸ್ಥಳೀಯ ಮುಖಂಡರಾದ ಭಾನುಪ್ರಕಾಶ್, ಮುರುಳಿ ಮತ್ತಿತರರು ಉಪಸ್ಥಿತರಿದ್ದರು.

ಕಟ್ಟಡ ಕಾರ್ಮಿಕರಿಗೆ ಮೀಸಲಿಟ್ಟಿರುವ ಅನುದಾನ ಬೇರೆ ಯೋಜನೆಗೆ ಬಳಸಬಾರದು

ಎಐಟಿಯುಸಿ ರಾಜ್ಯ ಕಾರ್ಯದರ್ಶಿ ಗಿರೀಶ್ ತುಮಕೂರು



ಮೈಸೂರಿನ ಗಾಂಧಿ ವೃತ್ತದಲ್ಲಿ ಎಐಟಿಯುಸಿಯ ಎರಡನೇ ಜಿಲ್ಲಾ ಸಮ್ಮೇಳನದ ಅಂಗವಾಗಿ ಬಹಿರಂಗ ಸಭೆ ನಡೆಯಿತು.

> "ರಾಜ್ಯದ ಕಾರ್ಮಿಕ ಇಲಾಖೆಯಲ್ಲಿ 44 ಲಕ್ಷ ಮಂದಿ ಕಾರ್ಮಿಕರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಹೇಳುತ್ತಾರೆ. ಆದರೆ, ಮತ್ತೊಂದೆಡೆ ಇದರಲ್ಲಿಯೂ ನಕಲಿ ಕಾರ್ಮಿಕರು ಇದ್ದಾರೆ ಎಂದು ತಿಳಿಸಿದ್ದಾರೆ. ಹಾಗದರೆ, ಕಿಟ್‌ಗಳು ನೈಜ ಕಾರ್ಮಿಕರಿಗೆ ನೀಡುತ್ತಿದ್ದಾರೋ ಅಥವಾ ನಕಲಿ ಕಾರ್ಮಿಕರಿಗೆ ವಿತರಿಸುತ್ತಿದ್ದಾರೋ ತಿಳಿಯದಂತಾಗಿದೆ. ಹಾಗೇ ರಾಜ್ಯದಲ್ಲಿ 15 ಲಕ್ಷ ಕಾರ್ಮಿಕರು ಶೈಕ್ಷಣಿಕ ನೆರವು ಕೋರಿದ್ದರು. ಆದರೆ, ಕೇವಲ 7 ಸಾವಿರ ಲ್ಯಾಪ್‌ಟಾಪ್ ಖರೀದಿ ಮಾಡಿದ್ದಾರೆ. ಕಾರ್ಮಿಕರ ನಡುವೇ ತಾರತಮ್ಯ ಮಾಡುತ್ತಿದ್ದಾರೆ. ಕಾರ್ಮಿಕರಿಗೆ ಸಮಾನವಾದ ಸೌಲಭ್ಯ ದೊರೆಯಬೇಕು.
> –ಗಿರೀಶ್ ತುಮಕೂರು

ಮೈಸೂರು, ಮಾ.4(ಜಿಎ)–ಕರ್ನಾಟಕ ರಾಜ್ಯ ಕಟ್ಟಡ ಕಟ್ಟುವ ಮತ್ತು ಕಲ್ಲು ಒಡೆಯುವ ಕ್ವಾರಿ ಮಾಲೀಕರ ಸಂಘಟನೆ ವತಿಯಿಂದ ಎಐಟಿಯುಸಿಯ ಎರಡನೇ ಜಿಲ್ಲಾ ಸಮ್ಮೇಳನದ ಅಂಗವಾಗಿ ಮೈಸೂರಿನ ಗಾಂಧಿ ವೃತ್ತದಲ್ಲಿ ಬಹಿರಂಗ ಸಭೆ ನಡೆಯಿತು.

ಈ ವೇಳೆ ಎಐಟಿಯುಸಿಯ ರಾಜ್ಯ ಕಾರ್ಯದರ್ಶಿ ಗಿರೀಶ್ ತುಮಕೂರು ಮಾತನಾಡಿ, ಕಟ್ಟಡ ಕಾರ್ಮಿಕರಿಗೆ ಮೀಸಲಿಟ್ಟಿರುವ ಅನುದಾನವನ್ನು ಯಾವುದೇ ಸರ್ಕಾರವು ಬೇರೆ ಯೋಜನೆಗಳಿಗೆ ಬಳಸಿಕೊಳ್ಳಬಾರದು. ಕಾರ್ಮಿಕರಿಗೆ ಇರುವ ಶೇ.1ರಷ್ಟು ಸೆಸ್ ಹಣವನ್ನು ಕಾಯ್ದೆ ಮೂಲಕ ಶೇ.2ರಷ್ಟು ಮಾಡಲು ಅವಕಾಶವಿದೆ. ಅದನ್ನು ಮಾಡಬೇಕಿದೆ ಎಂದು ಆಗ್ರಹಿಸಿದರು.

ಕಾರ್ಮಿಕ ಸಚಿವರು ಕಟ್ಟಡ ಕಾರ್ಮಿಕರಿಗೆ ಅನಗತ್ಯವಿರುವ ಕಿಟ್‌ಗಳನ್ನು ನೀಡಲು ಮುಂದಾಗಿದ್ದಾರೆ. ಮತ್ತೊಂದೆಡೆ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ಮಾಡಲು 400 ಕೋಟಿ ರೂ. ಹಣ ಮೀಸಲಿಟ್ಟಿದ್ದಾರೆ. ಆದರೆ, ರಾಜ್ಯ ಸರ್ಕಾರ 30 ಸಾವಿರ ಕೋಟಿ ರೂ. ಗಳನ್ನು ಬಜೆಟ್ ಮೂಲಕ ಆರೋಗ್ಯ ಇಲಾಖೆಗೆ ನೀಡಿದೆ. ಈ 400 ಕೋಟಿ ರೂ. ಹಣದ ಆರೋಗ್ಯ ತಪಾಸಣೆಯನ್ನು ಖಾಸಗಿ ಆಸ್ಪತ್ರೆಗಳಲ್ಲಿ ಮಾಡಲು ಮುಂದಾಗಿದ್ದು ಇದು ಭ್ರಷ್ಟಾಚಾರಕ್ಕೆ ದಾರಿ ಮಾಡಿಕೊಟ್ಟಂತೆ ಕಾಣುತ್ತಿದೆ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರ ಕಾರ್ಮಿಕ ಇಲಾಖೆಯನ್ನು ವಶಪಡಿಸಿಕೊಳ್ಳಲು 2020ರಲ್ಲಿ 'ಸಾಮಾಜಿಕ ಸುರಕ್ಷಾ' ಮಸೂದೆ ತಂದಿದ್ದು, ಇದು ಜಾರಿಯಾದರೆ, ರಾಜ್ಯದ ಕಾರ್ಮಿಕರು ಕೇಂದ್ರದ ಅಧೀನಕ್ಕೆ ಸೇರುತ್ತಾರೆ. ನಂತರ ಕೇಂದ್ರವು ಕಾರ್ಮಿಕ ಇಲಾಖೆಯನ್ನು ಖಾಸಗೀಕರಣ ಮಾಡುವ ಉದ್ದೇಶ ಹೊಂದಿದೆ. ಈ ಬಗ್ಗೆ ಈಗಾಗಲೇ ಎಐಟಿಯುಸಿ ಪ್ರತಿಭಟನೆ ಮಾಡಿದ್ದು, ಎಚ್ಚರಿಕೆ ಮೂಡಿಸಿದೆ ಎಂದು ತಿಳಿಸಿದರು.

ಸಭೆಯಲ್ಲಿ ಮೈಸೂರು ಜಿಲ್ಲಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಹೆಚ್.ಆರ್.ಶೇಷಾದ್ರಿ, ಎಐಟಿಯುಸಿಯ ಸೋಮರಾಜೇ ಅರಸ್, ಹೆಚ್.ಬಿ.ರಾಮಕೃಷ್ಣ, ಎನ್.ಕೆ.ದೇವದಾಸ್, ಮುಜಾಹಿದ್ ಪಾಷ, ಮಹಾದೇವಮ್ಮ, ಹೊನ್ನೇಶ ಉಪಸ್ಥಿತರಿದ್ದರು.

ಖಾಸಗಿ ಆಸ್ಪತ್ರೆಗಳಲ್ಲಿ ಏಕರೂಪ ದರ ನಿಗದಿ ಬಗ್ಗೆ ಕೇಂದ್ರಕ್ಕೆ ಸುಪ್ರೀಂಕೋರ್ಟ್ ನಿರ್ದೇಶನ

ಸರ್ಕಾರಿ ಯೋಜನೆಗಳ ಅನುದಾನಿತ ಖಾಸಗಿ ಆಸ್ಪತ್ರೆಗಳ ಸಂಘ ಸ್ವಾಗತ



ಮೈಸೂರು,ಮಾ.4–ವೆಟರನ್ಸ್ ಫೋರಂ ಫಾರ್ ಟ್ರಾನ್ಸ್‌ಫರೆನ್ಸಿ ಇನ್ ಪಬ್ಲಿಕ್ ಲೈಫ್ ಎಂಬ ಸರ್ಕಾರೇತರ ಸಂಸ್ಥೆ ಹೂಡಿದ್ದ ಸಾರ್ವಜನಿಕ ಹಿತಾಸಕ್ತಿಯ ಮೊಕದ್ದಮೆಯಲ್ಲಿ ದೇಶದ ಸರ್ವೋಚ್ಚ ನ್ಯಾಯಾಲಯವು 1 ತಿಂಗಳ ಒಳಗೆ ದೇಶದ ಖಾಸಗಿ ಆಸ್ಪತ್ರೆಗಳಲ್ಲಿ ಏಕರೂಪ ದರ ನಿಗದಿಪಡಿಸುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಿರುವುದನ್ನು ಸರ್ಕಾರಿ ಯೋಜನೆಗಳ ಅನುಷ್ಠಾನಿತ ಖಾಸಗಿ ಆಸ್ಪತ್ರೆಗಳ ಸಂಘವು ಸ್ವಾಗತಿಸುತ್ತದೆ ಎಂದು ಸಂಘದ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕೇಂದ್ರ ಸರ್ಕಾರದ ಕ್ಲಿನಿಕಲ್ ಎಸ್ಟಾಬ್ಲಿಷ್‌ಮೆಂಟ್ ಕಾಯ್ದೆಯಡಿ ರಾಷ್ಟ್ರಾದ್ಯಂತ ಖಾಸಗಿ ಆಸ್ಪತ್ರೆಗಳಲ್ಲಿ ನೀಡುವ ಸೇವೆಗಳ ದರವನ್ನು 2018ರಲ್ಲಿ ಪರಿಷ್ಕರಿಸಿದ್ದು, ಅದನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನುಷ್ಠಾನಗೊಳಿಸದಿರುವುದು ವಿಷಾದನೀಯ ಎಂದಿದ್ದಾರೆ.

ಒಂದೊಂದು ಆಸ್ಪತ್ರೆಗಳ ಮೂಲ ಸೌಕರ್ಯಗಳು ಮತ್ತು ತಜ್ಞರ ವೈದ್ಯಕೀಯ ಸೇವೆಯ ಗುಣಮಟ್ಟ ವಿಭಿನ್ನವಾಗಿದ್ದು, ಅದಕ್ಕನುಗುಣವಾಗಿ ಖಾಸಗಿ ಆಸ್ಪತ್ರೆಗಳನ್ನು ವಿಂಗಡಿಸಿ, ಆಯಾಯ ಆಸ್ಪತ್ರೆಗಳ ಸೇವಾ ದರವನ್ನು ನಿಗದಿಪಡಿಸಬೇಕಾಗಿರುವುದು ವೈಜ್ಞಾನಿಕ. ಈ ಬಗ್ಗೆ ಕೇಂದ್ರ ಸರ್ಕಾರ ವೈದ್ಯರು, ಸಾರ್ವಜನಿಕ ಪ್ರತಿನಿಧಿಗಳು, ವೈದ್ಯಕೀಯ ಸಂಘಟನೆಗಳ ಪ್ರತಿನಿಧಿಗಳು ಮತ್ತು ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳನ್ನೊಳಗೊಂಡ ಉನ್ನತ ಸಮಿತಿಯೊಂದನ್ನು ರಚಿಸಿ ಉಭಯತ್ರಯರಿಗೂ ಅನುಕೂಲವಾಗುವಂತೆ ಖಾಸಗಿ ಆಸ್ಪತ್ರೆಗಳ ದರಗಳನ್ನು ನಿಗದಿಪಡಿಸಬೇಕೆಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಸಂಘವು ಒತ್ತಾಯಿಸುತ್ತದೆ ಎಂದು ತಿಳಿಸಿದ್ದಾರೆ.



ಕರ್ನಾಟಕ ರಾಜ್ಯ ಸರ್ಕಾರವೂ ಸಹ ತನ್ನ ಆರೋಗ್ಯ ಯೋಜನೆಗಳಾದ ಯಶಸ್ವಿನಿ, ಆಯುಷ್ಮಾನ್ ಭಾರತ್, ಇಎಸ್‌ಐ ಕಾರ್ಮಿಕರ ಆರೋಗ್ಯ ಸೇವೆಗಳಡಿ ಸಾರ್ವಜನಿಕರಿಗೆ ಖಾಸಗಿ ಆಸ್ಪತ್ರೆಗಳ ಮೂಲಕ ನೀಡುತ್ತಿರುವ ಆರೋಗ್ಯ ಸೇವಾ ದರಗಳೂ ಸಹ ಕಳೆದ 14 ವರ್ಷಗಳಿಂದ ಪರಿಷ್ಕರಣೆಯಾಗದ ಕಾರಣ ಖಾಸಗಿ ಆಸ್ಪತ್ರೆಗಳು ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಮುಂದೆ ಬಾರದ ಕಾರಣ ಸಾರ್ವಜನಿಕರು ತುಂಬಾ ಕಷ್ಟಗಳನ್ನು ಅನುಭವಿಸುತ್ತಿದ್ದಾರೆ. ರಾಜ್ಯ ಸರ್ಕಾರ ಸಹ ಈ ಬಗ್ಗೆ ಅಧ್ಯಯನ ಮಾಡಲು ತಜ್ಞರ ಸಮಿತಿಯೊಂದನ್ನು ರಚಿಸಿ ಸೂಕ್ತ ದರ ನಿಗದಿ ಮಾಡಿ ಎಲ್ಲಾ ಖಾಸಗಿ ಆಸ್ಪತ್ರೆಗಳಲ್ಲೂ ಸಾರ್ವಜನಿಕರಿಗೆ ಉಚಿತ ಆರೋಗ್ಯ ಸೇವೆ ಲಭಿಸುವಂತೆ ಕ್ರಮಕೈಗೊಳ್ಳಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ವಿನಂತಿಸಿಕೊಳ್ಳುತ್ತೇವೆ ಎಂದಿದ್ದಾರೆ.

ದೇಶದಲ್ಲಿ ಮತ್ತು ಕರ್ನಾಟಕದಲ್ಲಿ ಶೇ85ರಷ್ಟು ಆರೋಗ್ಯಸೇವೆ ಖಾಸಗಿ ಆರೋಗ್ಯ ಸೇವಾ ವಲಯದಿಂದ ಲಭಿಸುತ್ತಿದ್ದು, ಸರ್ಕಾರಗಳಿಂದ ಕೇವಲ ಶೇ 15ರಷ್ಟು ಮಾತ್ರ ಆರೋಗ್ಯಸೇವೆ ಲಭಿಸುತ್ತಿರುವ ಹಿನ್ನೆಲೆಯಲ್ಲಿ ಖಾಸಗಿ ಆಸ್ಪತ್ರೆಗಳ ಆರೋಗ್ಯ ಸೇವೆಯನ್ನು ಸರ್ಕಾರ ಪಡೆಯುವುದು ಅನಿವಾರ್ಯ. ಈ ಹಿನ್ನೆಲೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಜ್ಞರ ಸಮಿತಿಯನ್ನು ತುರ್ತಾಗಿ ರಚಿಸಿ ಖಾಸಗಿ ಆಸ್ಪತ್ರೆಗಳ ಸೇವಾ ದರವನ್ನು ನಿಗದಿಪಡಿಸುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಡಾ.ಎಸ್.ಪಿ.ಯೋಗಣ್ಣ ತಿಳಿಸಿದ್ದಾರೆ.

ಬೂದನೂರು ಉತ್ಸವಕ್ಕೆ 'ವೈಭವದ ತೆರೆ'



ಬೂದನೂರು ಉತ್ಸವದ ಸಮಾರೋಪ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿದರು.



ಹಿನ್ನೆಲೆ ಗಾಯಕ ಅರ್ಜುನ್ ಜನ್ಯ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ.

ಮಂಡ್ಯ,ಮಾ.4– ತಾಲೂಕಿನ ಬೂದನೂರು ಗ್ರಾಮದ ಶ್ರೀ ಕಾಶಿವಿಶ್ವಾಥ ದೇವಾಲಯದ ಮೈದಾನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪ್ರವಾಸೋದ್ಯಮ ಇಲಾಖೆ ಸಹಯೋಗದಲ್ಲಿ ಎರಡು ದಿನ ಆಯೋಜಿಸಿದ್ದ ಬೂದನೂರು ಉತ್ಸವಕ್ಕೆ ಭಾನುವಾರ ರಾತ್ರಿ ವೈಭವದ ತೆರೆ ಬಿದ್ದಿತು.

ಉತ್ಸವದ ಹಿನ್ನೆಲೆಯಲ್ಲಿ ಶ್ರೀ ಕಾಶಿವಿಶ್ವನಾಥ ಸ್ವಾಮಿ ಹಾಗೂ ಶ್ರೀ ಅನಂತ ಪದ್ಮನಾಭಸ್ವಾಮಿ ದೇವಸ್ಥಾನಗಳಿಗೆ ವರ್ಣಮಯ ದೀಪಾಲಂಕಾರ ಮಾಡಲಾಗಿತ್ತು. ದೇವಾಲಯಗಳ ಆವರಣಗಳು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಕಂಗೊಳಿಸುತ್ತಿದ್ದವು. ಗ್ರಾಮಗಳ ಪ್ರಮುಖ ರಸ್ತೆಗಳನ್ನು ಸ್ವಚ್ಛಗೊಳಿಸಿ ಮನೆಗಳ ಮುಂಭಾಗ ಬಣ್ಣ ಬಣ್ಣದ ರಂಗೋಲಿಯನ್ನು ಮಹಿಳೆಯರು ಬಿಟ್ಟು ಸಂಭ್ರಮಿಸಿದರು. ಎರಡೂ ದಿನಗಳು ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸಾವಿರಾರು ಜನರು ಬೆಳಿಗ್ಗೆಯಿಂದ ಸಂಜೆವರೆಗೂ ಇತಿಹಾಸ ಪ್ರಸಿದ್ಧ ಎರಡೂ ದೇವಾಲಯಗಳಿಗೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಪ್ರಥಮ ಬಾರಿಗೆ ಉತ್ಸವ: 13ನೇ ಶತಮಾನದಲ್ಲಿ ಹೊಯ್ಸಳರ ದೊರೆ ವೀರ ಬಲ್ಲಾಳನ ಕಾಲದಲ್ಲಿ ನಿರ್ಮಾಣಮಾಡಲಾಗಿರುವ ಶ್ರೀ ಕಾಶಿವಿಶ್ವನಾಥ ಸ್ವಾಮಿ ಮತ್ತು ಶ್ರೀ ಅನಂತಪದ್ಮನಾಭಸ್ವಾಮಿ ದೇವಾಲಯಗಳಿರುವುದು ಪ್ರಸಿದ್ಧಿಯಾಗಿರಲಿಲ್ಲ. ಕಳೆದ ಹತ್ತು ವರ್ಷಗಳ ಹಿಂದೆ ಈ ಎರಡೂ ದೇವಾಲಯಗಳ ಮೇಲೆ ಮತ್ತು ಸುತ್ತಮುತ್ತ ಗಿಡ–ಗಂಟಿಗಳು ಬೆಳೆದು ಮುಚ್ಚಿ ಹೋಗಿದ್ದವು. ಇದನ್ನು ಮನಗಂಡ ಶ್ರೀ ಧರ್ಮಸ್ಥಳ ಸಂಸ್ಥೆಯವರು ಗಿಡ–ಗಂಟಿಗಳನ್ನು ಸ್ವಚ್ಛಗೊಳಿಸಿ, ಜೀರ್ಣೋದ್ಧಾರ ಮಾಡಿದ್ದರು. ಆದರೂ ಪ್ರವಾಸಿಗರಿಗೆ ಈ ದೇವಾಲಯಗಳ ಬಗ್ಗೆ ಪರಿಚಯವೇ ಇರಲಿಲ್ಲ. ಇದನ್ನು ಮನಗಂಡ ಮಂಡ್ಯ ಕ್ಷೇತ್ರದ ಶಾಸಕ ಪಿ.ರವಿಕುಮಾರ್ ಅವರು ಇತಿಹಾಸವನ್ನು ಅರಿತು ವಿಶ್ವ ಮಟ್ಟದಲ್ಲಿ ಈ ದೇವಾಲಯಗಳನ್ನು ಪರಿಚಯಿಸಬೇಕೆಂದು ಪಣತೊಟ್ಟು ಪ್ರವಾಸೋದ್ಯಮ ಇಲಾಖೆ ಸಹಯೋಗದಲ್ಲಿ ಪ್ರಥಮ ಬಾರಿಗೆ 'ಬೂದನೂರು ಉತ್ಸವ' ಏರ್ಪಡಿಸಿ ಜನತೆಗೆ ವಿಷಯ ಮುಟ್ಟಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಉತ್ಸವದ ಕೊನೆಯ ದಿನವಾದ ಭಾನುವಾರ ವಿವಿಧ ಶಾಲಾ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ರಾಜ್ಯ ಮಟ್ಟದ ಕಲೋತ್ಸವ ಪ್ರಶಸ್ತಿ ಪುರಸ್ಕೃತೆ ಗುರುದೇವ ಲಲಿತಕಲಾ ಅಕಾಡೆಮಿಯ ಬಿ.ಎಂ. ನವ್ಯಶ್ರೀ ಅವರು, ತಾಯಿ ಮಹೇಶ್ವರಿಯು 'ಮಹಿಷಾಸುರನನ್ನು ಸಂಹಾರ' ಮಾಡುವ ಭರತನಾಟ್ಯ ಪ್ರದರ್ಶಿಸಿದರು. ಖ್ಯಾತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ತಂಡದವರು ರಸಮಂಜರಿ ಕಾರ್ಯಕ್ರಮ ನಡೆಸಿಕೊಟ್ಟರು. ಖ್ಯಾತ ನಿರೂಪಕಿ ಅನುಶ್ರೀ ಕಾರ್ಯಕ್ರಮದ ನಿರೂಪಣೆ ಮಾಡಿದರು.

ಶಾಸಕ ರವಿಕುಮಾರ್ ಗಣಿಗ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ, ಎ.ಬಿ.ರಮೇಶ್ ಬಾಬು ಬಂಡಿಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಮೈಸುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಮುಖಂಡರಾದ ರವಿ ಬೋಜೇಗೌಡ, ಲೋಕಸಭಾ ಕ್ಷೇತ್ರದ ಸಂಭವನೀಯ ಅಭ್ಯರ್ಥಿ ಸ್ಟಾರ್ ಚಂದ್ರು (ವೆಂಕಟರಮಣೇಗೌಡ), ಜಿಲ್ಲಾಧಿಕಾರಿ ಡಾ. ಕುಮಾರ, ಎಸ್ಪಿ ಎನ್.ಯತೀಶ್, ತಹಸಿಲ್ದಾರ್ ಶಿವಕುಮಾರ ಬಿರಾದಾರ್, ಸಮಾಜ ಕಲ್ಯಾಣ ಅಧಿಕಾರಿ ಸಿದ್ದಲಿಂಗೇಶ್, ಗ್ರಾಪಂ ಅಧ್ಯಕ್ಷೆ ಮಾನಸ, ಉಪಾಧ್ಯಕ್ಷೆ ಜಯಲಕ್ಷ್ಮಿ, ಸದಸ್ಯ ಹಾಗೂ ಕಾರ್ಯಕ್ರಮದ ರೂವಾರಿ ಕೆಂಪೇಗೌಡ ಉಪಸ್ಥಿತರಿದ್ದರು.



ಶ್ರೀರಂಗಪಟ್ಟಣ ತಾಲೂಕಿನ ಪಾಲಹಳ್ಳಿಯಲ್ಲಿ ಮೈಸೂರು ಜೆಎಸ್ಎಸ್ ದಂತ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ವತಿಯಿಂದ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ಎನ್ಎಸ್ಎಸ್ ಶಿಬಿರಾಧಿಕಾರಿ ಡಾ. ತಿಪ್ಪೇಸ್ವಾಮಿ, ಡಾ.ರವಿಶಂಕರ್, ಗ್ರಾಪಂ ಸದಸ್ಯ ಟೆಂಪೋ ಪ್ರಕಾಶ್, ಲೋಕೇಶ್ ಹಾಗೂ ಜೆಎಸ್ಎಸ್ ದಂತ ವೈದ್ಯಕೀಯ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೈಷುಗರ್ ಅಧ್ಯಕ್ಷರಾಗಿ ಗಂಗಾಧರ್ ಅಧಿಕಾರ ಸ್ವೀಕಾರ

ಮಂಡ್ಯ: ಮೈಷುಗರ್ ಕಾರ್ಖಾನೆಯ ಉನ್ನತಿಗೆ ಶ್ರಮಿಸುವುದಾಗಿ ಕಾರ್ಖಾನೆ ನೂತನ ಅಧ್ಯಕ್ಷ ಸಿ.ಡಿ.ಗಂಗಾಧರ್ ಹೇಳಿದರು.

ಸೋಮವಾರ ನಗರದ ಮೈಷುಗರ್ ಕಾರ್ಖಾನೆಯ ಆಡಳಿತ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು, ಮೈಸೂರಿನ ದೊರೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಂದ ಸ್ಥಾಪಿತವಾದ ಮೈಷುಗರ್ ಕಾರ್ಖಾನೆಗೆ ತನ್ನದೇ ಇತಿಹಾಸ ಇದೆ. ನನ್ನ ಅಧಿಕಾರದ ಅವಧಿಯಲ್ಲಿ ಎಲ್ಲರ ಸಹಕಾರದೊಂದಿಗೆ ಮೈಷುಗರ್ ಕಾರ್ಖಾನೆಯ ಗತವೈಭವ ಮರುಕಳಿಸುವಂತೆ ಕಾರ್ಖಾನೆಯ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಮೈಷುಗರ್ ಕಾರ್ಖಾನೆಯ ಅಭಿವೃದ್ಧಿಗೆ ಕೋಲ್ಮನ್, ಜಿ.ಮಾದೇಗೌಡ, ಕೆ.ಎನ್.ನಾಗೇಗೌಡ, ರಾಜಣ್ಣ ಎಂ.ಬಿ.ಶ್ರೀಕಾಂತ್, ರಮೇಶ್ ರಾಜು, ಶಿವಾನಂದ ಇತರರು ಶ್ರಮಿಸಿದ್ದಾರೆ. ಇದೀಗ ರಾಜ್ಯ ಸರ್ಕಾರ ಹೊಸದಾಗಿ ಕಾರ್ಖಾನೆ ಸ್ಥಾಪನೆ ಮಾಡಲಿದೆ. ಹಗಲಿರುಳು ಕಾರ್ಖಾನೆ ಉನ್ನತಿಗೆ ದುಡಿಯುವ ಮೂಲಕ ರೈತರಿಗೆ ಅನುಕೂಲವಾಗುವಂತೆ ಮಾಡಲಾಗುವುದು ಎಂದರು.

ಅಧಿಕಾರ ಸ್ವೀಕಾರ ಮಾಡುವ ಮೊದಲು ನಾಲ್ವಡಿ ಕೃಷ್ಣರಾಜ ಒಡೆಯರ್, ಕಾವೇರಿ ಮಾತೆ ಹಾಗೂ ಕೋಲ್ಮನ್ ಅವರ ಪ್ರತಿಮೆಗಳಿಗೆ ಅಧ್ಯಕ್ಷ ಸಿ.ಡಿ.ಗಂಗಾಧರ್ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು. ಬಳಿಕ ಆಡಳಿತ ಕಚೇರಿಯಲ್ಲಿ ಪೂಜೆ ಸಲ್ಲಿಸಿದ ಬಳಿಕ ಗಂಗಾಧರ್ ಅಧಿಕಾರ ಸ್ವೀಕಾರ ಮಾಡಿದರು.

ಈ ವೇಳೆ ಮಾಜಿ ಸಚಿವ ಎಂ.ಎಸ್. ಆತ್ಮಾನಂದ, ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷ ಜೋಗಿಗೌಡ, ಕೆಪಿಸಿಸಿ ಸದಸ್ಯರಾದ ವಿಜಯಲಕ್ಷ್ಮಿ, ಎಚ್.ತ್ಯಾಗರಾಜು, ಸಿ.ಜೆ.ನಾಗರಾಜು, ಮುಖಂಡರಾದ ಕೆ.ಆರ್.ಪೇಟೆ ದೇವರಾಜು, ಎಂ.ಪುಟ್ಟೇಗೌಡ, ವಿಜಯ ರಾಮೇಗೌಡ, ಹಾಲಹಳ್ಳಿ ರಾಮಲಿಂಗೇಗೌಡ, ರುದ್ರಪ್ಪ, ನಗರಸಭೆ ಸದಸ್ಯರಾದ ಪೂರ್ಣಿಮಾ, ನಯೀಂ, ಶ್ರೀಧರ್, ಉಸ್ತುವಾರಿಗಳಾದ ದ್ಯಾವಪ್ಪ ಅಜ್ಜಹಳ್ಳಿ ರಾಮಕೃಷ್ಣ, ಸಿ.ಆರ್.ರಮೇಶ್ ಇತರರು ಉಪಸ್ಥಿತರಿದ್ದರು.



ಮೈಷುಗರ್ ಕಾರ್ಖಾನೆಯ ನೂತನ ಅಧ್ಯಕ್ಷ ಸಿ.ಡಿ. ಗಂಗಾಧರ್ ಅವರನ್ನು ಅಭಿನಂದಿಸಿದ ಅಭಿಮಾನಿಗಳು.

ಕಸಾಪ ಜಿಲ್ಲಾಧ್ಯಕ್ಷ ಸಿ.ಕೆ.ರವಿಕುಮಾರ್ ಇನ್ನಿಲ್ಲ



ಜಿಲ್ಲಾ ಕಸಾಪ ಅಧ್ಯಕ್ಷ ಸಿ.ಕೆ.ರವಿಕುಮಾರ್ ಚಾಮಲಾಪುರ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಅಂತಿಮ ನಮನ ಸಲ್ಲಿಸುತ್ತಿರುವುದು.

ಮಂಡ್ಯ,ಮಾ.4– ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿ.ಕೆ.ರವಿಕುಮಾರ್ ಚಾಮಲಾಪುರ(54) ಸೋಮವಾರ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತ್ನಿ, ಮಕ್ಕಳನ್ನು ಅಗಲಿದ್ದಾರೆ.

ವೃತ್ತಿಯಲ್ಲಿ ಉಪನ್ಯಾಸಕರಾಗಿದ್ದ ರವಿಕುಮಾರ್ ಕಳೆದ ಎರಡು ಅವಧಿಯಿಂದ ಕನ್ನಡ ಸಾಹಿತ್ಯ ಪರಿಷತ್ತಿನ ಮಂಡ್ಯ ಜಿಲ್ಲಾ ಘಟಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದರು. ಜಿಲ್ಲೆ ಹಾಗೂ ತಾಲೂಕು ಸಾಹಿತ್ಯ ಸಮ್ಮೇಳನಗಳು, ವಿವಿಧ ದತ್ತಿ ಪ್ರಶಸ್ತಿ ಪುರಸ್ಕಾರ ಸೇರಿದಂತೆ ಸಾಹಿತ್ಯ ಸೇವೆಯಲ್ಲಿ ತೊಡಗಿಕೊಂಡಿದ್ದ ಅವರು, 30 ವರ್ಷಗಳ ಬಳಿಕ ಮಂಡ್ಯ ಜಿಲ್ಲೆಗೆ ಅಖಿಲ ಭಾರತ ಸಾಹಿತ್ಯ ಸಮ್ಮೇಳನ ತರಲು ಯಶಸ್ವಿಯಾಗಿದ್ದರು.

ಮಂಡ್ಯದ ಕಾವೇರಿ ನಗರದ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಮಧ್ಯಾಹ್ನ 3 ಗಂಟೆಗೆ ಸ್ವಗ್ರಾಮ ಚಾಮಲಾಪುರದಲ್ಲಿ ಅಂತ್ಯಸಂಸ್ಕಾರ ನೆರವೇರಿತು.

ಇದಕ್ಕೂ ಮುನ್ನ ಮಂಡ್ಯ ನಗರದ ಕಲ್ಲಹಳ್ಳಿಯಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನಕ್ಕೆ ಮೃತ ರವಿ ಪಾರ್ಥಿವ ಶರೀರವನ್ನು ತರಲಾಗಿತ್ತು. ಅಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಮಹೇಶ್ ಜೋಷಿ, ಶಾಸಕರಾದ ರಮೇಶ್‌ಬಾಬು ಬಂಡಿಸಿದ್ದೇಗೌಡ, ಗಣಿಗ ರವಿಕುಮಾರ್, ಮರಿತಿಬ್ಬೇಗೌಡ ಸೇರಿದಂತೆ ಹಲವು ಮಂದಿ ಗಣ್ಯರು ಅಂತಿಮ ದರ್ಶನ ಪಡೆದರು.

ಸ್ವಾಮೀಗೌಡ ನಿಧನ

ಕೆ.ಆರ್.ಪೇಟೆ,ಮಾ.4– ತಾಲೂಕಿನ ದೊಡ್ಡಯಾಚೇನಹಳ್ಳಿ ಗ್ರಾಮದ ಹಿರಿಯ ಮುಖಂಡರಾದ ಸ್ವಾಮೀಗೌಡ(82) ಅವರು ಸೋಮವಾರ ನಿಧನ ಹೊಂದಿದ್ದಾರೆ.



ಮೃತರು ಲೆಕ್ಕ ಪರಿಶೋಧಕ ಪ್ರದೀಪ್ ಸೇರಿದಂತೆ ಇಬ್ಬರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಸೋಮವಾರ ಸಂಜೆ 4 ಗಂಟೆ ಸಮಯದಲ್ಲಿ ದೊಡ್ಡಯಾಚೇನಹಳ್ಳಿ ಗ್ರಾಮದಲ್ಲಿ ನಡೆಯಿತು. ಮೃತರ ನಿಧನಕ್ಕೆ ತಾಲೂಕಿನ ವಿವಿಧ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಖದೀಮನ ಬಂಧನ: 9.35 ಲಕ್ಷ ಮೌಲ್ಯದ ಚಿನ್ನಾಭರಣ ವಶ

ನಾಗಮಂಗಲ, ಮಾ.4– ಮನೆಯಲ್ಲಿ ಒಡವೆಗಳನ್ನು ಕಳವು ಮಾಡಿದ್ದ ಖದೀಮನನ್ನು ಕೇವಲ 24 ಗಂಟೆಯೊಳಗೆ ಬಂಧಿಸಿ ಒಡವೆಗಳನ್ನು ವಶಪಡಿಸಿಕೊಳ್ಳುವಲ್ಲಿ ಬೆಳ್ಳೂರು ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಪ್ರಕರಣದ ವಿವರ: ಬೆಳ್ಳೂರು ಹೋಬಳಿಯ ವರಾಹಸಂದ್ರ ಗ್ರಾಮದ ಶ್ರೀಮತಿ ಪ್ರಮೀಳ ಎಂಬುವವರು ಬೆಂಗಳೂರಿನ ಆಸ್ಪತ್ರೆಯಲ್ಲಿ ದಾಖಲಾಗಿದ್ದ ಪತಿಯನ್ನು ನೋಡಲು ಹೋಗಿದ್ದ ವೇಳೆ ಅವರ ಮನೆಯ ಕೆಲಸಗಾರ ಬಿಹಾರ ಮೂಲದ ಶಂಕರ್ ಮುಖಿಯ ಎಂಬಾತ ಮನೆಯ ಹೆಂಚು ತೆಗೆದು ಒಳ ಪ್ರವೇಶಿಸಿ 9.35 ಲಕ್ಷ ಮೌಲ್ಯದ 170 ಗ್ರಾಂ ಚಿನ್ನದ ಒಡವೆ ಕಳವು ಮಾಡಿದ್ದಾನೆಂದು ದೂರು ನೀಡಲಾಗಿತ್ತು.

ಡಿವೈಎಸ್‌ಪಿ ಸುಮಿತ್ ಮಾರ್ಗದರ್ಶನದಲ್ಲಿ ಭರತ್‌ಗೌಡ ನೇತೃತ್ವದ ತಂಡ ರಾಮನಗರ ಜಿಲ್ಲೆ ಸೋಲೂರು ಗ್ರಾಮದ ಗೋಪಾಲಕೃಷ್ಣ ಎಂಬುವವರ ಮನೆಯಲ್ಲಿದ್ದ ಆರೋಪಿಯನ್ನು ಬಂಧಿಸಿ 9.35 ಲಕ್ಷದ ಚಿನ್ನದ ಒಡವೆಗಳನ್ನು ವಶಪಡಿಸಿಕೊಂಡಿದ್ದಾರೆ.

ತಂಡದಲ್ಲಿ ಬೆಳ್ಳೂರು ಪಿಎಸ್‌ಐ ಬಸವರಾಜ್ ಚಿಂಚೋಳಿ, ಪುನೀತ್, ಪ್ರಶಾಂತ್, ಕಿರಣ್‌ಕುಮಾರ್ ಶಂಕರ್ ನಾಯ್ಕೆ, ರವಿಕಿರಣ್ ಮತ್ತು ಲೋಕೇಶ್ ಮುಂತಾದವರಿದ್ದರು.

ಬಿಸಿಲಿನ ಬೇಗೆ, ಬರಗಾಲಕ್ಕೆ ತತ್ತರಿಸಿದ ಕರ್ನಾಟಕದಲ್ಲಿ ಮಳೆಯ ಮುನ್ಸೂಚನೆ

ಬೆಂಗಳೂರು, ಮಾ.4: ಬರಗಾಲ ಹಾಗೂ ಬಿಸಿಲಿನ ಧಗೆಗೆ ತತ್ತರಿಸಿದ್ದ ಕರ್ನಾಟಕದಲ್ಲಿ ಮಳೆಯ ಸಿಂಚನವಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಮಳೆಯ ಕೊರತೆಯಿಂದ ಉಂಟಾದ ಬರಗಾಲಕ್ಕೆ ಕರ್ನಾಟಕವು ತತ್ತರಿಸಿದ್ದು, ರಾಜಧಾನಿ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಬರಗಾಲದಿಂದ ನೀರಿಗಾಗಿ ಹಾಹಾಕಾರ ಎದ್ದಿದೆ.

ಇದರ ಜೊತೆಗೆ ಬೇಸಿಗೆಯ ಬಿಸಿಲಿನ ತಾಪಕ್ಕೆ ಜನರು ಕಂಗೆಟ್ಟಿದ್ದಾರೆ. ರಾಜ್ಯದ ಸಮತಟ್ಟಾದ ಪ್ರದೇಶಗಳಲ್ಲಿ ಅತೀ ಗರಿಷ್ಠ ಉಷ್ಣಾಂಶ 37.4 ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ. ಈ ನಡುವೆ ರಾಜ್ಯದಲ್ಲಿ ಮಳೆಯಾಗಲಿದೆ ಎನ್ನುವ ಹರ್ಷದಾಯಕ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

ಅಲ್ಲದೆ, ಕರ್ನಾಟಕದಲ್ಲಿ ಮುಂದಿನ ಕೆಲವು ದಿನಗಳಲ್ಲಿ ಅಲ್ಲಲ್ಲಿ ಮಳೆಯಾಗುವ ನಿರೀಕ್ಷೆಯಿದೆ. ಮಾರ್ಚ್ ತಿಂಗಳ ಮೊದಲ 10 ದಿನ ದಾವಣಗೆರೆ, ಬೆಂಗಳೂರು, ಮೈಸೂರು, ಕೊಡಗು ಚಿಕ್ಕಮಗಳೂರು, ಕರಾವಳಿಯ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರ್ನಾಟಕದಲ್ಲಿ ತಾಪಮಾನ ಹೇಗಿರಲಿದೆ: ರಾಜ್ಯಾದ್ಯಂತ ಒಂದೆರಡು ಕಡೆಗಳಲ್ಲಿ ಗರಿಷ್ಠ ತಾಪಮಾನವು ಸಾಮಾನ್ಯಕ್ಕಿಂತ 2 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ 48 ಗಂಟೆಗಳ ಕಾಲ ರಾಜ್ಯಾದ್ಯಂತ ಒಣ ಹವೆ ಇರುವ ಸಾಧ್ಯತೆ ಇದೆ. ಗುಡುಗು ಮತ್ತು ಮಳೆಯಾಗುವುದಿಲ್ಲ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಬೆಂಗಳೂರಿನಲ್ಲಿ ಹೇಗಿದೆ ತಾಪಮಾನ: ಬರಗಾಲಕ್ಕೆ ಬೆಂಗಳೂರು ಕೂಡ ತತ್ತರಿಸಿದ್ದು, ಕೆಲವೆಡೆ ನೀರಿಗಾಗಿ ಹಾಹಾಕಾರ ಎದ್ದಿದೆ. ಜನರು ಕುಡಿಯುವ ನೀರಿಗಾಗಿ ಟ್ಯಾಂಕರ್ ಮೊರೆ ಹೋಗಿದ್ದಾರೆ. ಮುಂದಿನ 48 ಗಂಟೆಗಳ ಬೆಂಗಳೂರಿನ ತಾಪಮಾನದ ಹೇಗಿರಲಿದೆ ಎಂಬುದನ್ನು ನೋಡುವುದಾದರೆ, ನಗರದಲ್ಲಿ ಮುಖ್ಯವಾಗಿ ನಿರ್ಮಲ ಆಕಾಶವಿರುತ್ತದೆ. ಗರಿಷ್ಠ ಉಷ್ಣಾಂಶ 33 ಮತ್ತು ಕನಿಷ್ಠ ಉಷ್ಣಾಂಶ 19 ಡಿಗ್ರಿ ಸೆಲ್ಸಿಯಸ್ ಇರುವ ಸಾಧ್ಯತೆ ಇದೆ.

ಟ್ರಯಲ್ ಬ್ಲಾಸ್ಟ್‌ಗೆ ತಜ್ಞರ ತಂಡ ಆಗಮನ

ರೈತ ಮುಖಂಡರ ತೀವ್ರ ವಿರೋಧ

ಮಂಡ್ಯ, ಮಾ.4– ಕೃಷ್ಣರಾಜಸಾಗರ ಅಣೆಕಟ್ಟೆಯ ಸುಮಾರು 20 ಕಿಲೋಮೀಟರ್ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಿಷೇಧಿಸಿರುವ ಹಿನ್ನೆಲೆಯಲ್ಲಿ ಕೆಆರ್‌ಎಸ್ ಪಕ್ಕದ ಬೇಬಿಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್‌ಗೆ ಸದ್ದಿಲ್ಲದೇ ತಯಾರಿ ನಡೆಯುತ್ತಿದ್ದು, ಜಾರ್ಖಂಡ್ ಮೂಲದ ತಜ್ಞರ ತಂಡ ಬ್ಲಾಸ್ಟ್ ಸಿದ್ಧತೆಗಾಗಿ ಮಂಡ್ಯಕ್ಕೆ ಆಗಮಿಸಿದ್ದಾರೆ.

ಸೋಮವಾರ ಸಂಜೆ 5.30ಕ್ಕೆ ಬೆಂಗಳೂರಿಗೆ ಆಗಮಿಸಿದ ತಜ್ಞರ ತಂಡ ರಾತ್ರಿ 9ಗಂಟೆ ಸುಮಾರಿಗೆ ಕೆಆರ್‌ಎಸ್‌ಗೆ ಆಗಮಿಸಿ ಖಾಸಗಿ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಿದ್ದಾರೆ. ಮಂಗಳವಾರ ಬೆಳಿಗ್ಗೆ ಬೇಬಿಬೆಟ್ಟದ ಬಳಿ ಟ್ರಯಲ್ ಬ್ಲಾಸ್ಟ್‌ಗೆ ತಜ್ಞರ ತಂಡ ಪರಿಶೀಲನೆ ನಡೆಸಲಿದ್ದು, ಎಲ್ಲವೂ ಅಂದುಕೊಂಡಂತೆ ಆದರೆ ಗೌಪ್ಯವಾಗಿ ಶೀಘ್ರವೇ ಟ್ರಯಲ್ ಬ್ಲಾಸ್ಟ್ ನಡೆಸಲು ಸಿದ್ಧತೆ ನಡೆಸಿದ್ದಾರೆ.

ಈ ವಿಚಾರ ತಿಳಿಯುತ್ತಿದ್ದಂತೆ ಆಕ್ರೋಶ ವ್ಯಕ್ತಪಡಿಸಿದ್ದು, ಬೇಬಿಬೆಟ್ಟ ವ್ಯಾಪ್ತಿಯಲ್ಲಿ ಟ್ರಯಲ್ ಬ್ಲಾಸ್ಟ್‌ಗೆ ನಮ್ಮ ವಿರೋಧವಿದ್ದು, ತಜ್ಞರ ತಂಡ ವಾಪಸ್ ಹೋಗುವಂತೆ ಆಗ್ರಹಿಸಿ ಕೆಆರ್‌ಎಸ್‌ನ ನಾರ್ತ್ ಬ್ಯಾಂಕ್ ಬಳಿ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ರೈತ ಸಂಘ, ಪ್ರಗತಿಪರ ಸಂಘಟನೆಗಳು ಪ್ರತಿಭಟನೆ ನಡೆಸಲಿದ್ದೇವೆ ಎಂದು ಜಿಲ್ಲಾ ರೈತ ಸಂಘದ ಅಧ್ಯಕ್ಷ ಎ.ಎಲ್.ಕೆಂಪೂಗೌಡ ಹೇಳಿದ್ದಾರೆ.

ತಜ್ಞರ ತಂಡ ಪರಿಶೀಲನೆಗೂ ಮುನ್ನ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಿ, ಬಳಿಕ ಬೇಬಿ ಬೆಟ್ಟಕ್ಕೆ ತೆರಳಿ ಪರಿಶೀಲನೆ ನಡೆಸಿ, ತಜ್ಞರು ಗುರುತಿಸುವ ಸ್ಥಳದಲ್ಲಿ ಟ್ರಯಲ್ ಬ್ಲಾಸ್ಟ್‌ಗೆ ಸಿದ್ಧತೆ ಮಾಡಿಕೊಂಡಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಟ್ರಯಲ್ ಬ್ಲಾಸ್ಟ್‌ಗೆ ಕೋರ್ಟ್ ಆದೇಶ ಇದೆ. ನಾಳೆ ಟ್ರಯಲ್ ಬ್ಲಾಸ್ಟ್ ಮಾಡಬೇಕೆ ಬೇಡವೆ? ಅನ್ನೋದನ್ನ ಸಭೆ ನಡೆಸಿ ಚರ್ಚೆ ಮಾಡಲಿದ್ದು, ಪೂರ್ಣ ಪ್ರಮಾಣದಲ್ಲಿ ಸಭೆ ನಡೆಸಿ ಎಲ್ಲರನ್ನೂ ಮನವೊಲಿಸಿ ಮಾಡಬೇಕಿದೆ. ತಜ್ಞರ ಜೊತೆ ನಾಳೆ ಸಭೆ ನಡೆಸಲಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯಸಭಾ ಸದಸ್ಯ ಸ್ಥಾನಕ್ಕೆ ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ ರಾಜೀನಾಮೆ

ನವದೆಹಲಿ: ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರು ತಮ್ಮ ರಾಜ್ಯಸಭಾ ಸದಸ್ಯ ಸ್ಥಾನಕ್ಕೆ ಸೋಮವಾರ ರಾಜೀನಾಮೆ ನೀಡಿದ್ದು, ಅವರ ರಾಜೀನಾಮೆಯನ್ನು ರಾಜ್ಯಸಭಾ ಅಧ್ಯಕ್ಷರು ಅಂಗೀಕರಿಸಿದ್ದಾರೆ.



ಹಿಮಾಚಲಪ್ರದೇಶದಿಂದ ರಾಜ್ಯಸಭೆಗೆ ಆಯ್ಕೆಯಾಗಿದ್ದ ಜೆಪಿ ನಡ್ಡಾ ಅವರ ಅವಧಿಯು ಏಪ್ರಿಲ್‌ನಲ್ಲಿ ಕೊನೆಗೊಳ್ಳಲಿದೆ. ಆದರೆ ಇತ್ತೀಚೆಗೆ ನಡೆದ ರಾಜ್ಯಸಭೆ ಚುನಾವಣೆಯಲ್ಲಿ ನಡ್ಡಾ ಅವರು ಗುಜರಾತ್‌ನಿಂದ ಸಂಸತ್ತಿನ ಮೇಲ್ಮನೆಗೆ ಅವಿರೋಧವಾಗಿ ಆಯ್ಕೆಯಾಗಿದ್ದರು.

ಈ ಹಿನ್ನೆಲೆಯಲ್ಲಿ ಇಂದು ಅವರು ಹಿಮಾಚಲ ಪ್ರದೇಶದಿಂದ ಆಯ್ಕೆಯಾಗಿದ್ದ ರಾಜ್ಯಸಭಾ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ಅದನ್ನು ರಾಜ್ಯಸಭಾ ಅಧ್ಯಕ್ಷ ಜಗದೀಪ್ ಧನಕರ್ ಅಂಗೀಕರಿಸಿದ್ದಾರೆ.

ಈ ಮಧ್ಯೆ, 2020 ರಿಂದ ಬಿಜೆಪಿ ಅಧ್ಯಕ್ಷರಾಗಿರುವ ಜೆಪಿ ನಡ್ಡಾ ಅವರು ಲೋಕಸಭೆ ಚುನಾವಣೆಗೆ ಸ್ಪರ್ಧಿಸುತ್ತಾರೆ ಎಂಬ ವದಂತಿಗಳನ್ನು ತಳ್ಳಿಹಾಕಿದ ಗುಜರಾಜ್ ಬಿಜೆಪಿ, ಗುಜರಾತ್‌ನ ರಾಜ್ಯಸಭಾ ಸಂಸದ ಸ್ಥಾನಕ್ಕೆ ಅವರು ರಾಜೀನಾಮೆ ನೀಡಿಲ್ಲ ಎಂದು ಸ್ಪಷ್ಟಪಡಿಸಿದೆ.

ಅವಿರೋಧ ಆಯ್ಕೆ



ವೈ.ಎಸ್.ಹರ್ಷ



ಬಿ.ಪ್ರಕಾಶ್

ಮೈಸೂರು,ಮಾ.4–ಮೈಸೂರು ವಿಶ್ವವಿದ್ಯಾನಿಲಯದ ನೌಕರರ ಸಹಕಾರಿ ಪತ್ತಿನ ಸಂಘದ ಅಧ್ಯಕ್ಷರಾಗಿ ವೈ.ಎಸ್.ಹರ್ಷ ಮತ್ತು ಉಪಾಧ್ಯಕ್ಷರಾಗಿ ಬಿ.ಪ್ರಕಾಶ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾ.7, ಹನಕೆರೆ ಬಳಿ ಅಂಡರ್‌ಪಾಸ್‌ಗೆ ಆಗ್ರಹಿಸಿ ಎನ್‌ಹೆಚ್ ಕಚೇರಿ ಮುಂದೆ ಉಪವಾಸ

ಶಾಸಕ ರವಿಕುಮಾರ್ ಗಣಿಗ ಘೋಷಣೆ

ಮಂಡ್ಯ,ಮಾ.4– ತಾಲೂಕಿನ ಹನಕೆರೆ ಬಳಿ ಮೈಸೂರು–ಬೆಂಗಳೂರು ಹೆದ್ದಾರಿಯಲ್ಲಿ ಅಂಡರ್ ಪಾಸ್ ನಿರ್ಮಿಸುವಂತೆ ಆಗ್ರಹಿಸಿ ರಾಮನಗರದ ಬಸವನಪುರ ಬಳಿ ಇರುವ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಚೇರಿ ಬಳಿ ಮಾ.7ರಂದು ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಶಾಸಕ ಪಿ. ರವಿಕುಮಾರ್ ಗಣಿಗ ಘೋಷಿಸಿದರು.



ಸುದ್ದಿಗೋಷ್ಠಿಯಲ್ಲಿ ಶಾಸಕ ಪಿ. ರವಿಕುಮಾರ್ ಗಣಿಗ ಮಾತನಾಡಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹನಕೆರೆ ಸಮೀಪ ಅಂಡರ್‌ಪಾಸ್ ಬದಲು ಮೇಲ್‌ಸೇತುವೆ ನಿರ್ಮಾಣ ಮಾಡಲು ಯೋಜನೆ ಬದಲಾವಣೆ ಮಾಡಲಾಗಿದೆ. ಇದರಿಂದ ಈ ಭಾಗದ ರೈತರಿಗೆ ಸಾಕಷ್ಟು ಅನಾನುಕೂಲವಾಗಲಿದೆ. ಆದ್ದರಿಂದ ಅಂಡರ್‌ಪಾಸ್ ನಿರ್ಮಾಣ ಮಾಡಬೇಕು. ಈಗಾಗಲೇ ಸಾಕಷ್ಟು ಬಾರಿ ಹೋರಾಟ ನಡೆಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಈ ಹೋರಾಟ ಅನಿವಾರ್ಯ. ಅಂಡರ್‌ಪಾಸ್ ಕಾಮಗಾರಿ ಮಾಡುವವರೆಗೂ ಉಪವಾಸ ಸತ್ಯಾಗ್ರಹ ಕೈಬಿಡುವುದಿಲ್ಲ ಎಂದು ಎಚ್ಚರಿಸಿದರು.

ಏಕಾಏಕಿ ಅಂಡರ್‌ಪಾಸ್ ಬದಲು ಮೇಲ್ ಸೇತುವೆ ರಸ್ತೆ ಮಾಡಲು ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು ಮುಂದಾಗಿರುವುದನ್ನು ತೀವ್ರವಾಗಿ ಖಂಡಿಸುತ್ತೇವೆ. ಅಂಡರ್‌ಪಾಸ್ ನಿರ್ಮಿಸಿ ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ಒತ್ತಾಯಿಸಿದರು.

ಮಾ.10ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ. ಮಂಡ್ಯ ವಿಶ್ವವಿದ್ಯಾಲಯ ಆವರಣದಲ್ಲಿ ಗ್ಯಾರಂಟಿ ಯೋಜನಾ ಸಮಾವೇಶ ನಡೆಯಲಿದೆ. ಅಂದು ನ್ಯೂ ತಮಿಳು ಕಾಲೋನಿ ನಿವಾಸಿಗಳಿಗೆ ಹಕ್ಕುಪತ್ರ ವಿತರಣೆ ಹಾಗೂ ಶ್ರೀನಿವಾಸ್‌ಪುರ ಗೇಟ್‌ನಿಂದ ಜ್ಯೋತಿ ಇಂಟರ್‌ನ್ಯಾಷನಲ್ ಹೋಟೆಲ್‌ವರೆಗೆ ಹೈವೇ ಹೆದ್ದಾರಿ ಕಾಮಗಾರಿಗೆ ಚಾಲನೆ ನೀಡಲಾಗುವುದು. ಮೈಷುಗರ್ ವೃತ್ತ, ಮಹಾವೀರ ವೃತ್ತ ಹಾಗೂ ಚಾಮರಾಜೇಂದ್ರ ವೃತ್ತಗಳನ್ನು ಅತ್ಯಾಧುನಿಕ ವಿಶ್ವದರ್ಜೆ ವೃತ್ತಗಳನ್ನಾಗಿ ಪರಿವರ್ತಿಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ಜಯರಾಂ, ಬಿ.ಟಿ. ಚಂದ್ರಶೇಖರ್ ಸತೀಶ್, ಅಶ್ವತ್ ಹಾಜರಿದ್ದರು.

ಏನನ್ನೂ ಮುಚ್ಚಿಡುತ್ತಿಲ್ಲವೆಂದರೆ ಎಫ್‌ಎಸ್‌ಎಲ್ ವರದಿ ಬಹಿರಂಗ ಮಾಡಲು ಸರ್ಕಾರಕ್ಕೆ ಹಿಂಜರಿಕೆ ಯಾಕೆ

ಬೆಂಗಳೂರು, ಮಾ.4: ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದ ಪ್ರಕರಣ ಸಂಬಂಧ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಲಾಗಿದೆ. ಆದರೆ, ಎಫ್‌ಎಸ್‌ಎಲ್ ವರದಿಯನ್ನು ಇದುವರೆಗೆ ಬಹಿರಂಗಪಡಿಸದೇ ಇರುವುದಕ್ಕೆ ವಿಪಕ್ಷ ನಾಯಕ ಆರ್.ಅಶೋಕ ಎಕ್ಸ್ ಖಾತೆಯಲ್ಲಿ ಆಕ್ರೋಶ ಹೊರಹಾಕಿದ್ದಾರೆ.



ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಖಾಸಗಿ ವರದಿ ಬಂದ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಕಡೆಗೂ ಜನಾಕ್ರೋಶಕ್ಕೆ ಮಣಿದು ಮೂವರು ಆರೋಪಿಗಳನ್ನು ಬಂಧಿಸಿದೆ ಎಂದರು.

FSL ವರದಿಯಲ್ಲಿ ಘೋಷಣೆ ಕೂಗಿದ್ದು ಧೃಢಪಟ್ಟ ನಂತರವೇ ಈ ಮೂವರು ಆರೋಪಿಗಳ ಬಂಧನವಾಗಿರುವುದು ಸ್ಪಷ್ಟವಾಗಿದ್ದರೂ, ಸರ್ಕಾರ ಇನ್ನೂ FSL ವರದಿ ಬಹಿರಂಗ ಮಾಡದಿರುವುದು ಅನೇಕ ಅನುಮಾನಗಳಿಗೆ ಎಡೆಮಾಡಿಕೊಡುತ್ತಿದೆ. ಸರ್ಕಾರ ಏನನ್ನೂ ಮುಚ್ಚಿಡುತ್ತಿಲ್ಲ, ಯಾರನ್ನೂ ರಕ್ಷಿಸುತ್ತಿಲ್ಲ ಎನ್ನುವುದಾದರೆ ವರದಿ ಬಹಿರಂಗ ಮಾಡಲು ಹಿಂಜರಿಕೆ ಏಕೆ ಎಂದು ಪ್ರಶ್ನಿಸಿದ್ದಾರೆ.

ದೇಶದ್ರೋಹ ಪ್ರಕರಣ ದಾಖಲಿಸಲು ಒತ್ತಾಯ: ಸರ್ಕಾರ ಈ ಮೂವರು ಆರೋಪಿಗಳನ್ನು ಬಂಧಿಸಿದರೆ ಸಾಲದು, ಇವರ ಮೇಲೆ IPC ಸೆಕ್ಷನ್ 124A ಅಡಿ ದೇಶದ್ರೋಹ ಪ್ರಕರಣ ದಾಖಲಿಸಿ, ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಅವರನ್ನೂ ಈ ಪ್ರಕರಣದಲ್ಲಿ ಶಾಮೀಲು ಮಾಡಬೇಕು. ಇದರ ಜೊತೆಗೆ 25 ಜನರಿಗೆ ಪಾಸ್ ನೀಡಿ ಸುಮಾರು ನೂರು ಜನ ಬೆಂಬಲಿಗರಿಗೆ ವಿಧಾನಸೌಧದ ಒಳಗೆ ಪ್ರವೇಶ ನೀಡಿ ಕರ್ತವ್ಯ ಲೋಪ ಎಸಗಿದ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿ ವಿಚಾರಣೆ ನಡೆಸಬೇಕು ಎಂದು ಒತ್ತಾಯಿಸಿದರು.

ಈ ಇಡೀ ಪ್ರಕರಣ ಕಾಂಗ್ರೆಸ್ ಪಕ್ಷದ ದೇಶಪ್ರೇಮಕ್ಕೆ, ರಾಷ್ಟ್ರ ನಿಷ್ಠೆಗೆ ಒಂದು ಅಗ್ನಿಪರೀಕ್ಷೆಯಾಗಿದ್ದು, ಕಾಂಗ್ರೆಸ್ ಸರ್ಕಾರದ ನಡೆಯನ್ನ ಬರೀ ಕರ್ನಾಟಕ ಅಲ್ಲ, ಇಡೀ ದೇಶದ ಜನತೆ ಅತ್ಯಂತ ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದರು.

ಬೆಲ್ಟ್ ತಯಾರಿಕಾ ಕಾರ್ಖಾನೆಯಲ್ಲಿ ಅಗ್ನಿ ಅನಾಹುತ

ಮಂಡ್ಯ,ಮಾ.4– ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬೆಲ್ಟ್ ತಯಾರಿಕಾ ಕಾರ್ಖಾನೆಯಲ್ಲಿ ಅಗ್ನಿ ಅವಘಡ ಸಂಭವಿಸಿ ಯಂತ್ರೋಪಕರಣಗಳು ಸೇರಿದಂತೆ ಕೋಟ್ಯಾಂತರ ರೂ. ಮೌಲ್ಯದ ಕಚ್ಚಾವಸ್ತುಗಳು ಬೆಂಕಿಗಾಹುತಿಯಾಗಿರುವ ಘಟನೆ ತಾಲೂಕಿನ ತೂಬಿನಕೆರೆ ಕೈಗಾರಿಕಾ ಪ್ರದೇಶದಲ್ಲಿ ನಡೆದಿದೆ.

ತೂಬಿನಕೆರೆ ಕೈಗಾರಿಕಾ ಪ್ರದೇಶದಲ್ಲಿರುವ ಹರಿ ಬೆಲ್ಟ್ ಅಂಡ್ ಕನ್ವೇಯರ್ಸ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಭಾನುವಾರ ಮುಂಜಾನೆ ಸುಮಾರು 2.30 ಗಂಟೆ ವೇಳೆಗೆ ಶಾರ್ಟ್ ಸರ್ಕ್ಯೂಟ್ ಸಂಭವಿಸಿರುವುದಾಗಿ ತಿಳಿದುಬಂದಿದ್ದು, ಬೆಂಕಿ ದುರಂತದಲ್ಲಿ ಕಾರ್ಖಾನೆಯ ಒಂದು ಯೂನಿಟ್‌ನ ಶೆಲ್ಟರ್ ಸಂಪೂರ್ಣವಾಗಿ ಕುಸಿದುಬಿದ್ದಿದೆ. 6 ಸಾಮಾನ್ಯ ಅಗ್ನಿಶಾಮಕ ವಾಹನಗಳು, 2 ಕೈಗಾರಿಕಾ ಅಗ್ನಿಶಾಮಕ ವಾಹನಗಳು ಸೇರಿ 14 ವಾಹನಗಳು ಹಾಗೂ 70 ಅಗ್ನಿಶಾಮಕ ಸಿಬ್ಬಂದಿ ನಿರಂತರವಾಗಿ ಎಂಟು ಗಂಟೆಗಳ ಕಾಲ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಶಾರ್ಟ್‌ಸರ್ಕ್ಯೂಟ್ ಸಂಭವಿಸಿದ ಸಮಯದಲ್ಲಿ ಕಾರ್ಖಾನೆಯೊಳಗೆ ಯಾರೊಬ್ಬರೂ ಇರಲಿಲ್ಲವಾದ್ದರಿಂದ ಯಾವುದೇ ಪ್ರಾಣಹಾನಿಯಾಗಿಲ್ಲ. ಬೆಂಕಿ ಅವಘಡದಲ್ಲಿ ಯೂನಿಟ್‌ವೊಂದರ ಬಲಭಾಗದ ಯಂತ್ರೋಪಕರಣಗಳಿಗೆ ಸಾಕಷ್ಟು ಹಾನಿ ಸಂಭವಿಸಿರುವುದು ಕಂಡುಬಂದಿದೆ. ದುರಂತದ ನಡುವೆಯೂ ಬೆಲೆಬಾಳುವ ಲಕ್ಷಾಂತರ ರೂ. ಮೌಲ್ಯದ ಸಿದ್ಧಪಡಿಸಿದ ಬೆಲ್ಟ್‌ಗಳನ್ನು ರಕ್ಷಿಸುವಲ್ಲಿ ಅಗ್ನಿಶಾಮಕ ದಳದವರು ಸಫಲರಾಗಿದ್ದಾರೆ.

ಈ ಕಾರ್ಖಾನೆಯಲ್ಲಿ 43 ಮಂದಿ ಕೆಲಸಗಾರರು ಕಾರ್ಯನಿರ್ವಹಿಸುತ್ತಿದ್ದು, ಶನಿವಾರ ರಾತ್ರಿ ಕೆಲಸ ಮುಗಿದ ನಂತರ ಎಲ್ಲರೂ ಮನೆಗೆ ತೆರಳಿದ್ದಾರೆ. ಮಧ್ಯರಾತ್ರಿ 2.30 ಗಂಟೆಗೆ ಬೆಂಕಿ ಅನಾಹುತ ಸಂಭವಿಸಿದೆ.

ಕಾರ್ಖಾನೆಯೊಳಗೆ ಬೆಂಕಿ ಧಗಧಗಿಸುತ್ತಿರುವುದು, ದಟ್ಟವಾದ ಹೊಗೆ ಬರುತ್ತಿರುವ ದೃಶ್ಯ ಕಂಡ ಭದ್ರತಾ ಸಿಬ್ಬಂದಿ ಕೂಡಲೇ ಮಾಲೀಕರಿಗೆ ವಿಷಯ ಮುಟ್ಟಿಸಿದರು. ನಂತರ ಅಗ್ನಿಶಾಮಕ ದಳ ಇಲಾಖೆಗೆ ಕರೆ ಮಾಡಿ ವಿಷಯ ಮುಟ್ಟಿಸಿದರು.

ಅಗ್ನಿಶಾಮಕ ದಳದ ಪ್ರಾದೇಶಿಕ ಅಧಿಕಾರಿ ಗುರುರಾಜ್ ಅವರು ಶ್ರೀರಂಗಪಟ್ಟಣ, ಪಾಂಡವಪುರ, ಮಂಡ್ಯ, ಮೈಸೂರಿನಿಂದ ತಲಾ ಎರಡು ಅಗ್ನಿಶಾಮಕ ವಾಹನಗಳು ಮತ್ತು 2 ಕೈಗಾರಿಕಾ ಪಡೆಯ ಅಗ್ನಿಶಾಮಕ ವಾಹನಗಳನ್ನು ಸ್ಥಳಕ್ಕೆ ಕರೆಸಿ ಕಾರ್ಯಾಚರಣೆ ನಡೆಸಿದರು.

ಮುಕ್ತ ವಿವಿಯಲ್ಲಿ ಇಂದಿನಿಂದ ಸುಸ್ಥಿರ ಅಭಿವೃದ್ಧಿ ಕುರಿತು 2 ದಿನಗಳ ರಾಷ್ಟ್ರೀಯ ಸಮ್ಮೇಳನ




ಮೈಸೂರು,ಮಾ.4(ಆರ್‌ಕೆ)–ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ನಾಳೆ (ಮಾ.5)ಯಿಂದ ಸಿಸ್ಥಿರ ಅಭಿವೃದ್ಧಿ ಹಾಗೂ ನಿರ್ವಹಣಾ ಶಾಸ್ತ್ರದ ನಾವೀನ್ಯ ಅನುಸರಣೆಗಳು ಎಂಬ ವಿಷಯ ಕುರಿತು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ.

ಮಂಗಳವಾರ ಬೆಳಗ್ಗೆ 10.30ಕ್ಕೆ ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಅವರು ಸಮ್ಮೇಳನ ಉದ್ಘಾಟಿಸಲಿದ್ದು, ಬಳ್ಳಾರಿಯ ಶ್ರೀ ಕೃಷ್ಣದೇವ ರಾಯ ವಿಶ್ವವಿದ್ಯಾನಿಲಯ ವಿಶ್ರಾಂತ ಕುಲಪತಿ ಪ್ರೊ.ಎಂ.ಎಸ್.ಸುಭಾಷ್ ಮುಖ್ಯ ಭಾಷಣ ಮಾಡುವರು. ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸುವ ಕಾರ್ಯಕ್ರಮದಲ್ಲಿ ಇನ್ಫೋಸಿಸ್ ಅಭಿವೃದ್ಧಿ ಕೇಂದ್ರದ ಮುಖ್ಯಸ್ಥ ವಿನಾಯಕ್ ಹೆಗ್ಡೆ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕುಲಸಚಿವ ಪ್ರೊ.ಕೆ.ಎಲ್.ಎನ್.ಮೂರ್ತಿ, ಪರೀಕ್ಷಾಂತ ಕುಲಸಚಿವ ಪ್ರೊ.ಕೆ.ವಿ. ಪ್ರವೀಣ್, ಡೀನ್ (ಶೈಕ್ಷಣಿಕ) ಪ್ರೊ. ಎನ್. ಲಕ್ಷ್ಮೀ, ಅಧ್ಯಯನ ಕೇಂದ್ರದ ಡೀನ್ ಪ್ರೊ ಎಂ.ರಾಮನಾಥಂ ನಾಯ್ಡು, ಪ್ರಭಾರ ಹಣಕಾಸು ಅಧಿಕಾರಿ ಡಾ.ಪಿ.ಎಂ.ರಮೇಶ್ ಸಮ್ಮೇಳನದಲ್ಲಿ ಪಾಲ್ಗೊಂಡು ನಿರ್ವಹಣಾ ಶಾಸ್ತ್ರದ ಸುಸ್ಥಿರ ಅಭಿವೃದ್ಧಿ ಮತ್ತು ತಂತ್ರಗಾರಿಕೆ ಕುರಿತು ವಿಸ್ತೃತ ಚರ್ಚೆ ನಡೆಸುವರು.

ದೇಶದ ಹಲವು ಭಾಗಗಳಿಂದ ನಿರ್ವಹಣಾ ತಜ್ಞರು ಸಮ್ಮೇಳನದಲ್ಲಿ ಭಾಗವಹಿಸುತ್ತಿದ್ದು, ವಿಮರ್ಶೆಗೊಳಪಟ್ಟ 80ಕ್ಕೂ ಹೆಚ್ಚು ಸಂಶೋಧನಾ ವಿಷಯಗಳು ಮಂಡನೆ ಮಾಡುವರು. ಸಾಮಾನ್ಯ ನಿರ್ವಹಣಾಶಾಸ್ತ್ರ, ಹಣಕಾಸು, ಮಾನವ ಸಂಪನ್ಮೂಲ, ಮಾಹಿತಿ ತಂತ್ರಜ್ಞಾನ, ಮಾರುಕಟ್ಟೆಗಳಿಗೆ ಸಂಬಂಧಿಸಿದಂತೆ ಎರಡು ದಿನಗಳ ಕಾಲ ಚರ್ಚೆ ನಡೆಯಲಿದೆ ಎಂದು ಮುಕ್ತ ವಿವಿ ನಿರ್ವಹಣಾ ಶಾಸ್ತ್ರ ನಿಕಾಯದ ನಿರ್ದೇಶಕ ಪ್ರೊ. ಸಿ. ಮಹದೇವಮೂರ್ತಿ ಹಾಗೂ ನಿರ್ವಹಣಾ ಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥರಾದ ಡಾ.ಪಿ. ಸವಿತಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರಿನ ವಿವಿಧೆಡೆ 23 ಮರ ಕಡಿಯಲು ನೀಡಿರುವ ಅನುಮತಿ ರದ್ದುಪಡಿಸಲು ಎಂಜಿಪಿ ಆಗ್ರಹ







ಮೈಸೂರು,ಮಾ.4(ಎಂಟಿವೈ)–ಮೈಸೂರಿನ ವಿವಿಧೆಡೆ 23 ಮರ ಹಾಗೂ ಎರಡು ಕೊಂಬೆ ಕಡಿಯಲು ಅರಣ್ಯ ಇಲಾಖೆ ಅನುಮತಿ ನೀಡಿರುವುದನ್ನು ಮೈಸೂರು ಗ್ರಾಹಕ ಪರಿಷತ್ ಹಾಗೂ ಪರಿಸರವಾದಿಗಳು ತೀವ್ರವಾಗಿ ವಿರೋಧಿಸಿದ್ದು, ಅನುಮತಿಯನ್ನು ರದ್ದು ಮಾಡುವಂತೆ ಆಗ್ರಹಿಸಿದ್ದಾರೆ.

ಉತ್ತಮ ಸ್ಥಿತಿಯಲ್ಲಿರುವ, ಯಾವುದೇ ಅಪಾಯಕ್ಕೆ ಆಸ್ಪದವಿಲ್ಲದ ಮರಗಳನ್ನು ಅಪಾಯಕಾರಿ ಮರ, ಮಳೆ–ಗಾಳಿಗೆ ಉರುಳಿ ಬೀಳುವ ಸಾಧ್ಯತೆ ಇದೆ ಎಂದು ಹಣೆಪಟ್ಟಿ ಕಟ್ಟಿ ಕಡಿಯಲು ಅನುಮತಿ ನೀಡಿ, ಟೆಂಡರ್ ಕೊಡಲಾಗಿದೆ. ಇಂತಹ ಮರಗಳನ್ನು ಮೈಸೂರು ಗ್ರಾಹಕರ ಪರಿಷತ್ (ಎಂಜಿಪಿ) ನಿಯೋಗ ಪರಿಶೀಲಿಸಿದ್ದು, ಎಲ್ಲಾ ಮರಗಳು ಸುಸ್ಥಿತಿಯಲ್ಲಿವೆ. ಆದರೂ ಕಡಿಯಲು ಅನುಮತಿ ನೀಡಿರುವುದು ಅನುಮಾನಕ್ಕೆ ಎಡೆಮಾಡಿದೆ ಎಂದು ಎಂಜಿಪಿ ಆಕ್ರೋಶ ವ್ಯಕ್ತಪಡಿಸಿದೆ.

ಮೈಸೂರು ಪ್ರಾದೇಶಿಕ ಅರಣ್ಯ ವಲಯ ವ್ಯಾಪ್ತಿಗೆ ಸೇರುವ ಮೈಸೂರಿನ ದಕ್ಷಿಣ ಗ್ರಾಮಾಂತರ ಪೊಲೀಸ್ ಠಾಣೆ ಆವರಣದ ಶಿವಲಿಂಗ ಮರ, ವಿಜಯನಗರ 4ನೇ ಹಂತದ ಆರ್‌ಎಂಡಿ ಬಡಾವಣೆಯಲ್ಲಿ ಬೇವಿನ ಮರ, ಸರಸ್ವತಿಪುರಂನ ಪ್ರಧಾನ ಅಂಚೆ ಕಚೇರಿ ಕಟ್ಟಡದ ಹಿಂಭಾಗದ ಆವರಣದಲ್ಲಿರುವ 1 ತೇಗ, ಎರಡು ಸಿಸ್ಸು, 1 ನೀಲಗಿರಿ, 1 ಅಶೋಕ ಮರ, 1 ಹೊಂಗೆ ಮರ, ಎರಡು ಗುಲ್ ಮಹರ್ ಮರ ಹಾಗೂ ಎರಡು ಕೊಂಬೆ ಕಡಿತ, ಕೆಆರ್‌ಎಸ್ ರಸ್ತೆಯಲ್ಲಿರುವ ಪಿಕೆಟಿಬಿ ಆಸ್ಪತ್ರೆ ಆವರಣದಲ್ಲಿ 7 ರೈನ್ ಟ್ರೀ, 1 ಮಾವಿನ ಮರ, 5 ಫೆಲ್ಟೋ ಫಾರಂ ಮರ ಕಡಿಯಲು ಆಯಾ ಸಂಸ್ಥೆ ವತಿಯಿಂದ ಅನುಮತಿ ಕೇಳಲಾಗಿತ್ತು. ಈ ಎಲ್ಲಾ ಮರಗಳಿಗೆ 1,61,955 ರೂ.ಗಳಿಗೆ ಬಿಡ್ ಕೂಗಲಾಗಿದೆ.

ಪರಿಶೀಲನೆ ಮಾಡಲಾಗಿದೆ: ಈ ಕುರಿತಂತೆ ಎಸಿಎಫ್ ಲಕ್ಷ್ಮೀಕಾಂತ್ ಸ್ಪಷ್ಟನೆ ನೀಡಿದ್ದು, ಅಂಚೆ ಕಚೇರಿ, ಆರೋಗ್ಯ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಕಳೆದ ಒಂದು ವರ್ಷದಿಂದ ತಮ್ಮ ಕಚೇರಿ, ಆಸ್ಪತ್ರೆ ಹಾಗೂ ಪೊಲೀಸ್ ಠಾಣಾ ಆವರಣದಲ್ಲಿರುವ ಮರಗಳು ಅಪಾಯಕಾರಿ ಹಂತ ತಲುಪಿದ್ದು, ಸಂಭಾವ್ಯ ಅನಾಹುತ ತಡೆಗಟ್ಟಲು ಕೆಲವು ಮರಗಳನ್ನು ಕಡಿಯಲು ಅನುಮತಿ ನೀಡುವಂತೆ ಪಟ್ಟಿ ಸಲ್ಲಿಸಿದ್ದರು. ಸ್ಥಳಕ್ಕೆ ಹೋಗಿ ಪರಿ ಶೀಲಿಸಲಾಗಿದ್ದು, ಅಪಾಯಕಾರಿ ಮರಗಳನ್ನು ಕಡಿಯಲು ಅನುಮತಿ ನೀಡಲಾಗಿದೆ. ಯಾವ ಮರದಿಂದ ತೊಂದರೆ ಆಗುವುದಿಲ್ಲವೋ ಅಂತಹ ಮರಗಳನ್ನು ಕಡಿಯಲು ಬಿಡುವುದಿಲ್ಲ ಎಂದು ತಿಳಿಸಿದರು.

ಆದೇಶ ಹಿಂಪಡೆಯಲು ಮನವಿ: ಮರ ಕಡಿಯಲು ಸಿದ್ಧತೆ ಮಾಡಿಕೊಳ್ಳುತ್ತಿರುವ ಬೆನ್ನಲ್ಲೇ ಸೋಮವಾರ ಮೈಸೂರು ಗ್ರಾಹಕ ಪರಿಷತ್ ವತಿಯಿಂದ ಮೈಸೂರಿನ ಅರಣ್ಯ ಭವನದಲ್ಲಿ ಡಿಸಿಎಫ್ ಡಾ.ಕೆ.ಎನ್. ಬಸವರಾಜು ಅವರಿಗೆ ಮನವಿ ಸಲ್ಲಿಸಿ, ಅನುಮತಿ ನೀಡಿರುವುದು ಅವೈಜ್ಞಾನಿಕ ಕ್ರಮ. ಕೂಡಲೇ ಹಿಂಪಡೆಯಬೇಕು ಎಂದು ಮನವಿ ಸಲ್ಲಿಸಿದ್ದಾರೆ.

> ಕಡಿಯಲು ಗುರುತಿಸಿರುವ ಮರಗಳು ಆರೋಗ್ಯವಾಗಿವೆ. ಸ್ಥಳಕ್ಕೆ ತೆರಳಿ ಪರಿಶೀಲಿಸದೆ ಅವುಗಳ ಕಡಿಯಲು ಅನುಮತಿ ನೀಡಿರುವ ಅನುಮಾನವಿದೆ. ಯಾವ ಆಧಾರದಲ್ಲಿ ಆ ಮರಗಳು ದುಸ್ಥಿತಿ, ಅಪಾಯಕಾರಿ ಹಾಗೂ ಶಿಥಿಲಾವಸ್ಥೆಯಲ್ಲಿವೆ ಎಂದು ಹೇಳಿದ್ದಾರೆ? ನಿಯಮಾನುಸಾರ 20ಕ್ಕೂ ಹೆಚ್ಚು ಮರ ಕಡಿಯಲು ಸಾರ್ವಜನಿಕರಿಂದ ಅಭಿಪ್ರಾಯ ಕೇಳಬೇಕು. ಆದರೆ, ಈ ಪ್ರಕರಣದಲ್ಲಿ ಯಾವುದೇ ನಿಯಮ ಪಾಲನೆ ಆಗಿಲ್ಲ. ಕೇಳಿದ ಕೂಡಲೇ ಮರ ಕಡಿಯಲು ಅನುಮತಿ ನೀಡಿರುವುದು ಎಷ್ಟು ಸರಿ?
> **–ಭಾಮಿ ವಿ. ಶೆಣೈ, ಮೈಸೂರು ಗ್ರಾಹಕ ಪರಿಷತ್**



ಕರ್ನಾಟಕ ವೈನ್ಸ್ ಪ್ರೆಸಿಡೆಂಟ್ ಮತ್ತು ಮೈಸೂರು ಮದ್ಯ ಮಾರಾಟಗಾರರ ಸಂಘದ ಅಧ್ಯಕ್ಷ ಎಸ್.ಗುರುಸ್ವಾಮಿ ನೇತೃತ್ವದಲ್ಲಿ ಮೈಸೂರು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ಮೈಸೂರು ನಗರ ಅಬಕಾರಿ ಡಿ.ಸಿ.ನಾಗರಾಜಪ್ಪ ಮತ್ತು ಮೈಸೂರು ಗ್ರಾಮಾಂತರ ಅಬಕಾರಿ ಡಿ.ಸಿ.ಮಹಾದೇವಿ ಬಾಯಿ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ, ಮದ್ಯ ಮಾರಾಟಗಾರರ ಕುಂದು ಕೊರತೆಯ ಅಹವಾಲುಗಳನ್ನು ಪರಿಹರಿಸುವಂತೆ ಮನವಿ ಪತ್ರ ನೀಡಿದರು. ಮೈಸೂರು ಜಿಲ್ಲಾ ಮದ್ಯಮಾರಾಟಗಾರರ ಸಂಘದ ಉಪಾಧ್ಯಕ್ಷ ಕೆ.ಪಿ.ಪರಮೇಶ್, ಎಸ್.ಆರ್ ವೈನ್ಸ್ ಮಾಲೀಕ ಎಸ್.ಶ್ರೀಕಾಂತ್, ಪ್ರಧಾನ ಕಾರ್ಯದರ್ಶಿ ಆರ್.ಲಕ್ಷ್ಮಣ್, ಖಜಾಂಚಿ ಶ್ರೀನಿವಾಸ್, ಅರುಣ್ ಪೂಜಾರ್, ಕೆ.ದಿನೇಶ್ ಮತ್ತು ಶ್ರೀನಿವಾಸ್ ಉಪಸ್ಥಿತರಿದ್ದರು.



ಮೈಸೂರಿನ ಕನ್ನೆಗೌಡ ಕೊಪ್ಪಲಿನ ಯುವ ಮುಖಂಡರಾದ ರಾಕೇಶ್ ಗೌಡ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಗ್ರಾಮದ ಮುಖಂಡರುಗಳಾದ ವಿಕ್ರಾಂತ್ ಪಿ. ದೇವೇಗೌಡ, ಕಾಳಬೋರಪ್ಪ ಸಿರಿ ಚಿಕನ್ ರಾಜು, ಮಹಾದೇವ್, ಸೊಸೈಟಿ ರಾಜು, ಮೋಹನ್, ವೆಂಕಟೇಶ್, ಮಾದೇವ್, ಕುಮಾರ್, ಸತೀಶ್ ಇತರರು ಅಭಿನಂದಿಸಿ, ಶುಭಾಷಯ ಕೋರಿದರು.

ಮಹಿಳಾ ದಿನಾಚರಣೆ: ಅಂಗವಾಗಿ ವಿವಿಧ ಕ್ರೀಡಾ ಸ್ಪರ್ಧೆಗಳ ಆಯೋಜನೆ

ಮೈಸೂರು, ಮಾ.4– ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಮಾ.5 ರಂದು ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಮಹಿಳೆಯರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಶೂಟ್ ಇನ್ ದಿ ಬಾಸ್ಕೆಟ್(ಬಾಸ್ಕೆಟ್‌ಬಾಲ್), ಡ್ರಿಬ್ಲಿಂಗ್ ರೇಸ್ (ಬಾಸ್ಕೆಟ್‌ಬಾಲ್), ಪೆನಾಲ್ಟಿ ಶೂಟ್ (ಹಾಕಿ), ಮ್ಯೂಸಿಕಲ್ ಛೇರ್, ಥ್ರೋಬಾಲ್, ಹಗ್ಗ–ಜಗ್ಗಾಟ, ಅಥ್ಲೆಟಿಕ್ಸ್ (100 ಮೀ, 400 ಮೀ, ಶಾಟ್‌ಪುಟ್ ಮತ್ತು ಲಾಂಗ್ ಜಂಪ್), ಬಾಸ್ಕೆಟ್‌ಬಾಲ್, ಹ್ಯಾಂಡ್‌ಬಾಲ್, ಕ್ರಿಕೆಟ್ ಮತ್ತು ವಾಲಿಬಾಲ್ ಕ್ರೀಡೆಗಳನ್ನು ನಡೆಸಲಾಗುತ್ತದೆ. ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದವರಿಗೆ ಮೆಡಲ್ಸ್ ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ದೂ.ಸಂ: 0821–2546179 ನ್ನು ಸಂಪರ್ಕಿಸಬಹುದು. ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್ ನಾಯಕ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





ಮೈಸೂರಿನ ಶಿಕ್ಷಕರ ಬಡಾವಣೆಯ ಮೌಲಾನ ಆಜಾದ್ ಶಾಲೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ ನಡೆಯಿತು. ಈ ವೇಳೆ ಕುರುಬಾರಹಳ್ಳಿಯ ಆರೋಗ್ಯ ಕೇಂದ್ರದಿಂದ ನಂದಿನಿ ಸಿಸ್ಟರ್, ಮಂಜುನಾಥ್ ಆರೋಗ್ಯ ಸಹಾಯಕ, ಗೋಪಾಲಗೌಡ ಆಸ್ಪತ್ರೆಯ ನರ್ಸಿಂಗ್ ವಿದ್ಯಾರ್ಥಿಗಳು ಸಮಾಜ ಸೇವಕ ಮೈಕ್ ಪ್ರಕಾಶ್ ಉಪಸ್ಥಿತರಿದ್ದರು

ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಸಂಬಂಧ ಬಿಜೆಪಿಯಿಂದ ಎಫ್‌ಎಸ್‌ಎಲ್ ವರದಿ ಬಿಡುಗಡೆ

ಟ್ವೀಟ್ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯರ ತರಾಟೆಗೆ ತೆಗೆದುಕೊಂಡ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ



ಬೆಂಗಳೂರು,ಮಾ.4(ಕೆಎಂಶಿ)–ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಯ 4 ಸ್ಥಾನಗಳಿಗೆ ನಡೆದ ಚುನಾವಣೆ ಫಲಿತಾಂಶ ವೇಳೆ ಕಾಂಗ್ರೆಸ್‌ನ ವಿಜಯೀ ಅಭ್ಯರ್ಥಿ ನಾಸಿರ್ ಹುಸೇನ್ ಪರ ಸಂಭ್ರಮಾಚರಣೆ ಸಂದರ್ಭದಲ್ಲಿ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಎಫ್‌ಎಸ್‌ಎಲ್ ವರದಿಯನ್ನು ಬಿಡುಗಡೆ ಮಾಡಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಈ ಸಂಬಂಧ ಟ್ವೀಟ್ ಮಾಡಿದ್ದು, ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಬಿ.ವೈ.ವಿಜಯೇಂದ್ರ ಟ್ವೀಟ್‌ನಲ್ಲಿ, ಸಿದ್ದರಾಮಯ್ಯನವರೇ, ರಾಜ್ಯ ಹಾಗೂ ಜನರ ಹಿತಾಸಕ್ತಿಯೇ ನಮ್ಮ ಮೊದಲ ಆದ್ಯತೆ, ದೇಶದ್ರೋಹಿ ಉಗ್ರರು ಹಾಗೂ ಪಾತಕಿಗಳಿಗೆ ಕರ್ನಾಟಕ ನೆಲೆಯಾಗಬಾರದೆಂಬುದಷ್ಟೇ ನಮ್ಮ ಪ್ರಾಮಾಣಿಕ ಕಾಳಜಿ. ಪ್ರಜಾಪ್ರಭುತ್ವದ ಹೃದಯ ಮಂದಿರ ವಿಧಾನಸೌಧ ಪ್ರವೇಶಿಸಿ, ಪೊಲೀಸರ ಎದುರೇ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗುವಷ್ಟರ ಮಟ್ಟಿಗೆ ದೇಶದ್ರೋಹಿಗಳು ಧೈರ್ಯ ತೋರುತ್ತಾರೆ. ಇದರ ಬೆನ್ನಲ್ಲೇ ರಾಜಧಾನಿಯಲ್ಲಿ ಬಾಂಬ್ ಸ್ಫೋಟ ವಾಗುತ್ತದೆ, ಈ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎಲ್ಲಿ ಅಡಗಿ ಕುಳಿತಿದೆ ಎಂಬುದು ಬಹು ದೊಡ್ಡ ಪ್ರಶ್ನೆಯಾಗಿ ರಾಜ್ಯದ ಜನರನ್ನು ಕಾಡುತ್ತಿದೆ ಎಂದಿದ್ದಾರೆ. ರಾಜ್ಯದ ಜನತೆ ಆತಂಕದ ನೆರಳಿನಲ್ಲಿ ಬದುಕುವ ಸ್ಥಿತಿ ಬಂದಿದೆ, ಪ್ರಕರಣದ ಎಫ್‌ಎಸ್‌ಎಲ್ ವರದಿ ತಲುಪಿದರೂ ಸುಳ್ಳು ಹೇಳುತ್ತಿದ್ದೀರಿ, ಇದು ನಿಮ್ಮ ರಾಷ್ಟ್ರ ಬದ್ಧತೆಯನ್ನು ಪ್ರಶ್ನಿಸುವಂತಾಗಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಭೂಗತ ಶಕ್ತಿಗಳಿಗೆ ಸ್ವಾತಂತ್ರ್ಯ ದೊರೆತ ವಾತಾವರಣ ನಿರ್ಮಾಣವಾಗಿದೆ.

ಬೆಂದ ಮನೆಯಲ್ಲಿ ಗಳ ಹಿರಿಯುವ ರಾಜಕಾರಣ ಮಾಡುವ ದುರ್ಗತಿ ಬಿಜೆಪಿಗೆ ಬಂದಿಲ್ಲ, ವಿಧಾನಸೌಧದಲ್ಲೇ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೇಳಿಬಂದರೆ ನಾವು ಕೈಕಟ್ಟಿ ಕೂರಬೇಕೇ, ಮಾಧ್ಯಮಗಳ ವರದಿಯನ್ನೂ ನೀವು ನಂಬಲಿಲ್ಲ, ಪ್ರತ್ಯಕ್ಷದರ್ಶಿಗಳ ಹೇಳಿಕೆಯನ್ನೂ ಆಲಿಸಲಿಲ್ಲ, ರಾಷ್ಟ್ರ ಹಿತಾಸಕ್ತಿಯ ಈ ಗಂಭೀರ ಪ್ರಕರಣದ ಬಗ್ಗೆ ತಾತ್ಸಾರ ತೋರುತ್ತಿರುವುದರ ನಿಮ್ಮ ವರ್ತನೆ ರಾಷ್ಟ್ರ ದ್ರೋಹಿಗಳನ್ನು ರಕ್ಷಿಸಲು ಆದ್ಯತೆ ನೀಡುತ್ತಿರುವಂತಿದೆ ಎಂದು ಟೀಕಿಸಿದ್ದಾರೆ.

ಖಾಸಗಿ ಎಫ್‌ಎಸ್‌ಎಲ್ ವರದಿ ಈಗಾಗಲೇ ಪ್ರಕರಣ ಕುರಿತು ದೃಢೀಕರಣ ನೀಡಿದೆ, ಸರ್ಕಾರಿ ವರದಿ ಸಹ ಸರ್ಕಾರದ ಕೈ ಸೇರಿದೆ, ಆದರೂ, ವರದಿ ಇನ್ನೂ ತಲುಪಿಲ್ಲ ಎಂಬ ಹಸೀ ಸುಳ್ಳು ಹೇಳುತ್ತಿರುವ ನಿಮ್ಮ ನಡೆ, ನಿಮ್ಮ ರಾಷ್ಟ್ರ ಬದ್ಧತೆಯನ್ನು ಪ್ರಶ್ನಿಸುವಂತಾಗಿದೆ ಎಂದು ವಿಜಯೇಂದ್ರ ಟ್ವೀಟ್‌ನಲ್ಲಿ ಕುಟುಕಿದ್ದಾರೆ.

ನಾಳೆ ನಿವೇಶನ, ಮನೆಗೆ ಆಗ್ರಹಿಸಿ ಪ್ರತಿಭಟನೆ

ಮೈಸೂರು, ಮಾ.4(ಎಂಟಿವೈ)– ವಸತಿ ಹೀನರಿಗೆ ನಿವೇಶನ ಅಥವಾ ಮನೆ ಮಂಜೂರು ಮಾಡುವಂತೆ ಆಗ್ರಹಿಸಿ ಮಾ.6ರಂದು ಬೆಳಗ್ಗೆ 10.30ಕ್ಕೆ ಪುರಭವನದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದು ಸಿಪಿಐ ರಾಜ್ಯ ಮಂಡಳಿ ಕಾರ್ಯದರ್ಶಿ ಸಾತಿ ಸುಂದರೇಶ್ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಘೋಷಿಸಿರುವಂತೆ ರಾಜ್ಯದಾದ್ಯಂತ ವಸತಿ ರಹಿತರ ಮತ್ತು ನಿವೇಶನ ರಹಿತರ ಗಣತಿ ನಡೆಸಬೇಕು. ಎಲ್ಲಾ ಪಂಚಾಯಿತಿ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ನಿವೇಶನ ಮತ್ತು ವಸತಿ ರಹಿತರ ಅರ್ಜಿಗಳನ್ನು ಸ್ವೀಕರಿಸಿ ರಾಜೀವ್‌ಗಾಂಧಿ ವಸತಿ ನಿಗಮದ ವೆಬ್‌ಸೈಟ್‌ನಲ್ಲಿ ದಾಖಲಿಸಬೇಕು. ಅಪೂರ್ಣಗೊಂಡಿರುವ ಮನೆಗಳ ನಿರ್ಮಾಣಕ್ಕೆ ಕಾಲಾವಕಾಶ ನೀಡಿ ಬಾಕಿ ಅನುದಾನ ಬಿಡುಗಡೆಗೊಳಿಸಬೇಕು. ಈ ಎಲ್ಲಾ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ, ಮಾ.6ರಂದು ಪುರಭವನದಿಂದ ಈಡೇರಿಕೆಗಾಗಿ ಜಿಲ್ಲಾಧಿಕಾರಿಗೆ ಮೆರವಣಿಗೆ ನಡೆಸಿ ಮನವಿ ಸಲ್ಲಿಸುವುದಾಗಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವಸತಿ ಮತ್ತು ನಿವೇಶನ ರಹಿತರ ಹೋರಾಟ ಸಮಿತಿ ಪದಾಧಿಕಾರಿಗಳಾದ ಹೆಚ್.ಬಿ. ರಾಮಕೃಷ್ಣ, ಕೆ.ಜಿ.ಸೋಮರಾಜೇ ಅರಸ್, ಲಕ್ಷ್ಮೀ, ಎನ್.ಕೆ. ದೇವದಾಸ್ ಇದ್ದರು.

ಪಿಎಚ್.ಡಿ ಪದವೀಧರರು



ಸಾವಿತ್ರಿ ಪೂಜಾರಿ

ಪ್ರೊ.ಸಿ.ಪಾಲಯ್ಯ ಅವರ ಮಾರ್ಗದರ್ಶನದಲ್ಲಿ ಸಾವಿತ್ರಿ ಪೂಜಾರಿ ಅವರು ಸಂಶೋಧನೆ ನಡೆಸಿ ಸಾದರಪಡಿಸಿದ ಕಾಳಿದಾಸಸ್ಯ ಕಾವ್ಯೇಷು ಸ್ತ್ರೀ ಸಮಾಜಸ್ಯ ಸಮೀಕ್ಷಾತ್ಮಕಂ ಅಧ್ಯಯನಮ್ ಮಹಾಪ್ರಬಂಧವನ್ನು ಕರ್ನಾಟಕ ಸಂಸ್ಕೃತ ವಿವಿ ವಿದ್ಯಾವಾರಿಧಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ಎನ್.ಆಶಾ

ಡಾ.ರಾಮೇಶ್ವರಿ ರಾಮಚಂದ್ರ ಅವರ ಮಾರ್ಗದರ್ಶನದಲ್ಲಿ ಎನ್. ಆಶಾ ಅವರು ವಾಣಿಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಕೊಯಮತ್ತೂರು ಭಾರತಿಯಾರ್ ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ಸಮೀನಾ ಬಾನು

ಡಾ. ಬಿ.ಹೆಚ್. ಸುರೇಶ್ ಅವರ ಮಾರ್ಗದರ್ಶನದಲ್ಲಿ ಸಮೀನಾ ಬಾನು ಅವರು ವಾಣಿಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.



ಡಿ.ಪರಶಿವಮೂರ್ತಿ

ಡಾ.ಕೆ.ವಿ.ಸುರೇಶ್ ಅವರ ಮಾರ್ಗದರ್ಶನದಲ್ಲಿ ಡಿ. ಪರಶಿವಮೂರ್ತಿ ಅವರು ವಾಣಿಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಸಿಇಟಿ, ನೀಟ್ ಪರೀಕ್ಷೆಗಳಿಗೆ ತರಬೇತಿ

ಮೈಸೂರು, ಮಾ.4– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ವಿಜಯ ವಿಠ್ಠಲ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಪಿಯುಸಿ ನಂತರದ ವೃತ್ತಿಪರ ಉನ್ನತ ಶಿಕ್ಷಣಕ್ಕಾಗಿ ಕರ್ನಾಟಕ ಸರ್ಕಾರ ನಡೆಸಲಿರುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ (ಕೆ–ಸಿಇಟಿ ಮತ್ತು ನೀಟ್) 30 ದಿನಗಳ ತರಬೇತಿಯನ್ನು ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಹಾಗೂ ಪೋಷಕರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಕಛೇರಿಯಲ್ಲಿ ಮಾ.7 ರೊಳಗೆ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821–2515944 ಅಥವಾ 9964760090 ನ್ನು ಸಂಪರ್ಕಿಸಬಹುದು ಎಂದು ಕರಾಮುವಿ ಕುಲಸಚಿವ ಪ್ರೊ.ಕೆ.ಎಲ್.ಎನ್.ಮೂರ್ತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ ಸಿ.ವಿ.ರಾಮನ್ ಕರ್ಮಭೂಮಿ ಕರ್ನಾಟಕವೇ ಆಗಿತ್ತು

ಸಾಹಿತಿ ಬನ್ನೂರು ರಾಜು ಹೇಳಿಕೆ



ಮೈಸೂರಿನ ನೇತಾಜಿ ಸುಭಾಷ್ ಚಂದ್ರಬೋಸ್ ಸರ್ಕಾರಿ ಆವಾಸೀಯ ವಿದ್ಯಾಲಯದಲ್ಲಿ ನಡೆದ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯಲ್ಲಿ ರಸಪ್ರಶ್ನೆ ಹಾಗೂ ವಿಜ್ಞಾನ ಪ್ರಯೋಗ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಮೈಸೂರು, ಮಾ.4(ಎಸ್‌ಬಿಡಿ)– ಸಾಧನೆಯ ಶಿಖರವೇರಿದ ಜಗದ್ವಿಖ್ಯಾತ ವಿಜ್ಞಾನಿ, ಭಾರತರತ್ನ ಸರ್ ಸಿ.ವಿ. ರಾಮನ್ ಅವರ ಬದುಕು ಯುವ ವಿಜ್ಞಾನಿಗಳಿಗೆ ಮಾದರಿಯಾಗಿದೆ ಎಂದು ಸಾಹಿತಿ ಬನ್ನೂರು ಕೆ.ರಾಜು ಹೇಳಿದರು.

ಮೈಸೂರಿನ ಹಿರಣ್ಮಯಿ ಪ್ರತಿಷ್ಠಾನ ಮತ್ತು ಕಾವೇರಿ ಬಳಗ ಸಹಯೋಗದಲ್ಲಿ ನಜರ್‌ಬಾದ್‌ನಲ್ಲಿನ ನಿರ್ದಿಷ್ಟ ವರ್ಗದ ಮಕ್ಕಳ ಸರ್ಕಾರಿ ವಸತಿ ಶಾಲೆ 'ನೇತಾಜಿ ಸುಭಾಷ್ ಚಂದ್ರಬೋಸ್ ಸರ್ಕಾರಿ ಆವಾಸೀಯ ವಿದ್ಯಾಲಯ'ದಲ್ಲಿ ಬುಧವಾರ ಏರ್ಪಡಿಸಿದ್ದ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯಲ್ಲಿ ಮಾತನಾಡಿ, ಏಷ್ಯಾ ಖಂಡದಲ್ಲಿಯೇ ಮೊಟ್ಟ ಮೊದಲ ಬಾರಿಗೆ ಭೌತ ವಿಜ್ಞಾನದಲ್ಲಿ ವಿಶ್ವದ ಪ್ರತಿಷ್ಠಿತ ನೊಬೆಲ್ ಪ್ರಶಸ್ತಿ ಪಡೆದು ಭಾರತದ ಕೀರ್ತಿಯನ್ನು ಜಗತ್ತಿನ ಉದ್ದಗಲಕ್ಕೂ ಬೆಳಗುವ ಮೂಲಕ ನಮ್ಮ ಕರ್ನಾಟಕಕ್ಕೂ ಕೀರ್ತಿ ತಂದ ಸರ್ ಸಿ.ವಿ.ರಾಮನ್ ಅವರು ವಿಜ್ಞಾನ ಲೋಕದ ಮಹಾ ಬೆಳಕಾಗಿದ್ದಾರೆ ಎಂದರು.

ರಾಮನ್ ಅವರು ಮೂಲತಃ ತಮಿಳುನಾಡಿನವರಾದರೂ ವಿಜ್ಞಾನದ ಎಲ್ಲಾ ರೀತಿಯ ಅಧ್ಯಯನ, ಅಧ್ಯಾಪನ, ಶೋಧನೆ, ಸಂಶೋಧನೆಗಳಿಗೂ ನಮ್ಮ ಕರ್ನಾಟಕ ಕರ್ಮಭೂಮಿ ಆಗಿತ್ತು. ನೊಬೆಲ್ ಪ್ರಶಸ್ತಿ ತಂದುಕೊಟ್ಟ ಬೆಳಕಿನ ಆವಿಷ್ಕಾರವಾದ ರಾಮನ್ ಎಫೆಕ್ಟ್ ಅಥವಾ ರಾಮನ್ ಪರಿಣಾಮದ ಸಂಶೋಧನೆ ನಡೆಸಿದ್ದು ಬೆಂಗಳೂರಿನಲ್ಲಿ ಎಂದರು.

ಬೆಂಗಳೂರಿನ ಸುಪ್ರಸಿದ್ಧ ಸೆಂಟ್ರಲ್ ಕಾಲೇಜಿನ ಭೌತಶಾಸ್ತ್ರ ಸಂಘದವರು ಭೌತವಿಜ್ಞಾನಿ ಸಿ.ವಿ.ರಾಮನ್ ಅವರನ್ನು ವಿಜ್ಞಾನದ ಬಗ್ಗೆ ಉಪನ್ಯಾಸ ನೀಡಲು 1928 ಫೆ.28ರಂದು ಕರೆಸಿದ್ದರು. ಆ ಸಂದರ್ಭದಲ್ಲಿ ರಾಮನ್ ಅವರು ಬೆಳಕನ್ನು ಕುರಿತು ತಮ್ಮದೇ ಆದ ಆವಿಷ್ಕಾರದ ಹೊಸ ಸಿದ್ಧಾಂತವನ್ನು ಪ್ರತಿಪಾದಿಸಿದ್ದರು. ಇದೇ ವಿಷಯ ಮುಂದೆ ಬೆಳಕಿನ ಬಗೆಗಿನ ಮಹತ್ವಪೂರ್ಣ ಸಂಶೋಧನೆಯಾಗಿ ರಾಮನ್ ಪರಿಣಾಮ ಎಂದು ಪ್ರಸಿದ್ಧಿಯಾಗುವುದರ ಜೊತೆಗೆ 1930ರಲ್ಲಿ ನೊಬೆಲ್ ಪುರಸ್ಕಾರಕ್ಕೆ ಅವರು ಭಾಜನರಾದರು. ಈ ಕಾರಣಕ್ಕೆ ಫೆ.28ರಂದು ದೇಶದಲ್ಲಿ ರಾಷ್ಟ್ರೀಯ ವಿಜ್ಞಾನ ದಿನವನ್ನಾಗಿ ಆಚರಿಸಿಕೊಂಡು ಬರಲಾಗುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿಜ್ಞಾನ ರಸಪ್ರಶ್ನೆ ಮತ್ತು ವಿಜ್ಞಾನ ಪ್ರಯೋಗ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಕಾವೇರಿ ಬಳಗದ ಅಧ್ಯಕ್ಷೆ ಎನ್.ಕೆ.ಕಾವೇರಿಯಮ್ಮ ಬಹುಮಾನ ವಿತರಿಸಿದರು. ನಂತರ ವಿಜ್ಞಾನ ಶಿಕ್ಷಕಿ ಟಿ.ಸಿ.ಜಗದಾಂಬ ಅವರನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಹಿರಣ್ಮಯಿ ಪ್ರತಿಷ್ಠಾನದ ಅಧ್ಯಕ್ಷ ಎ.ಸಂಗಪ್ಪ, ಮುಕ್ತಕ ಕವಿ ಎಂ.ಮುತ್ತುಸ್ವಾಮಿ, ಶಾಲೆ ಮುಖ್ಯ ಶಿಕ್ಷಕಿ ನಾಗರತ್ನ, ಅಗಸ್ತ್ಯ ಫೌಂಡೇಶನ್‌ನ ಕೃಷ್ಣ, ಹೇಮಾವತಿ, ಶಿಕ್ಷಕಿಯರಾದ ಕಲ್ಪನಾ, ಎನ್.ಆರ್.ಭವಾನಿ, ಟಿ.ಸಿ. ಜಗದಾಂಬ, ಚಂದ್ರಿಕಾ, ಲೀಲಾವತಿ, ದೈಹಿಕ ಶಿಕ್ಷಣ ಶಿಕ್ಷಕ ಪಿ.ಪ್ರಸಾದ್ ಕುಮಾರ್ ಮತ್ತು ರೂಪಾ ಹಾಗೂ ಬಿ.ಆರ್.ಆಶಾರಾಣಿ ಇನ್ನಿತರರು ಭಾಗವಹಿಸಿದ್ದರು. ಅಗಸ್ತ್ಯ ಫೌಂಡೇಶನ್ ಸಹಯೋಗದಿಂದ ಶಾಲೆಯ ಆವರಣದಲ್ಲಿ ವಿಜ್ಞಾನ ವಸ್ತುಪ್ರದರ್ಶನ ಏರ್ಪಡಿಸಲಾಗಿತ್ತು. ಇದೇ ವೇಳೆ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವೈಜ್ಞಾನಿಕ ಮನೋಭಾವನೆ ಅಳವಡಿಸಿಕೊಳ್ಳುವ ಕುರಿತು ಪ್ರತಿಜ್ಞಾವಿಧಿ ಬೋಧಿಸಲಾಯಿತು.

ಮಕ್ಕಳ ಪಾಲನಾ ಸಂಸ್ಥೆಗಳ ನೋಂದಣಿಗೆ ಸೂಚನೆ

ಮೈಸೂರು, ಮಾ.4– ಕಾನೂನಿನೊಡನೆ ಸಂಘರ್ಷದಲ್ಲಿರುವ, ಪೋಷಣೆ ಮತ್ತು ರಕ್ಷಣೆ ಅವಶ್ಯಕತೆಯಿರುವ ಮಕ್ಕಳನ್ನು ಅರೆಕಾಲಿಕ ಅಥವಾ ಪೂರ್ಣವಾಗಿ ಯಾವುದೇ ಸ್ವಯಂ ಸೇವಾ ಸಂಸ್ಥೆಗಳು ಸರ್ಕಾರದಿಂದ ಅನುದಾನ ಪಡೆಯುತ್ತಿರಲಿ ಅಥವಾ ಇಲ್ಲದಿರಲಿ ಬಾಲನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಅಡಿಯಲ್ಲಿ ನೋಂದಣಿಯಾಗದೇ ಮಕ್ಕಳನ್ನು ಸಂಸ್ಥೆಯಲ್ಲಿ ಹೊಂದಿದ್ದರೆ ಅಂತಹ ಸಂಸ್ಥೆಗಳು ಆರು ತಿಂಗಳೊಳಗೆ ನೋಂದಾಯಿಸಿಕೊಳ್ಳುವಂತೆ ಸೂಚಿಸಲಾಗಿದೆ. ನೋಂದಣಿಯಾಗದೇ ಪೋಷಣೆ ಮತ್ತು ರಕ್ಷಣೆಯ ಅವಶ್ಯಕತೆಯಿರುವ ಹಾಗೂ ಕಾನೂನಿನೊಡನೆ ಸಂಘರ್ಷದಲ್ಲಿರುವ ಮಕ್ಕಳನ್ನು ಇರಿಸಿಕೊಂಡಿರುವ ವ್ಯಕ್ತಿ ಅಥವಾ ವ್ಯಕ್ತಿಗಳು, ಸಂಸ್ಥೆಯ ಮುಖ್ಯಸ್ಥರು 1 ವರ್ಷದವರೆಗೆ ವಿಸ್ತರಿಸಬಹುದಾದ ಕಾರಾ ಗೃಹವಾಸ ಅಥವಾ ಒಂದು ಲಕ್ಷಕ್ಕೆ ಕಡಿಮೆಯಿಲ್ಲದಂತೆ ದಂಡ ಅಥವಾ ಎರಡನ್ನೂ ವಿಧಿಸಲಾಗುತ್ತದೆ. ಇದುವರೆಗೂ ನೋಂದಣಿಯಾಗದ ಯಾವುದೇ ಮಕ್ಕಳ ಪಾಲನಾ ಸಂಸ್ಥೆಗಳು ಕೂಡಲೇ ವಿಜಯನಗರದ ಅಂಜನಾದ್ರಿ ಮುಖ್ಯರಸ್ತೆ, 2ನೇ ಘಟ್ಟ, 4ನೇ ಹಂತದ ಮೊದಲನೇ ಮಹಡಿಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಯ ದೂ.ಸಂ: 0821–2543003 ಸಂಪರ್ಕಿಸ ಬಹುದು ಅಥವಾ ವಿಳಾಸಕ್ಕೆ ಭೇಟಿ ನೀಡಿ ನೋಂದಣಿ ಮಾಡಿಕೊಳ್ಳುವಂತೆ 1 ತಿಂಗಳ ಕಾಲಾವಕಾಶ ನೀಡಲಾಗಿದೆ

ಪಂಚಮಿತ್ರ ವಾಟ್ಸಾಪ್ ಚಾಟ್ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಿ: ದರ್ಶನ್ ಧ್ರುವನಾರಾಯಣ್



ಪಂಚಮಿತ್ರ ಪೋರ್ಟಲ್ ಹಾಗೂ ಪಂಚಮಿತ್ರ ವಾಟ್ಸಾಪ್ ಚಾಟ್‌ಗೆ ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ್ ಲೋಕಾರ್ಪಣೆಗೊಳಿಸಿದರು. ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಇನ್ನಿತರರಿದ್ದಾರೆ.

ಮೈಸೂರು,ಮಾ.4–ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ ಕುಂದುಕೊರತೆಗಳನ್ನು ದಾಖಲಿಸಿ, ಪರಿಹಾರ ಪಡೆಯಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಅಭಿವೃದ್ಧಿಪಡಿಸಿರುವ ಪಂಚಮಿತ್ರ ಪೋರ್ಟಲ್ ಹಾಗೂ ಪಂಚಮಿತ್ರ ವಾಟ್ಸಾಪ್ ಚಾಟ್‌ಗೆ ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ್ ಲೋಕಾರ್ಪಣೆಗೊಳಿಸಿದರು.

ತಾಲೂಕು ಪಂಚಾಯಿತಿಯ ತಮ್ಮ ಕಚೇರಿಯಲ್ಲಿ ಚಾಲನೆ ನೀಡಿ ಬಳಿಕ ಮಾತನಾಡಿದ ಅವರು, ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ ಯಾವುದೇ ಕುಂದುಕೊರತೆಗಳಿಗೆ ಕಚೇರಿಗಳಿಗೆ ಅಲೆಯುವ ಅವಶ್ಯಕತೆ ಇಲ್ಲ. ಬದಲಿಗೆ ಇನ್ನು ಮುಂದೆ ಗ್ರಾಮಸ್ಥರು ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ ಎಲ್ಲಾ ಸಮಸ್ಯೆಗಳಿಗೆ ಮನೆಯಲ್ಲಿಯೇ ಕುಳಿತು watsapp chat ಮೂಲಕ ಪರಿಹಾರವನ್ನು ಕಂಡುಕೊಳ್ಳಬಹುದಾಗಿದ್ದು, ಗ್ರಾಮೀಣ ಭಾಗದ ಜನರು ಈ ಪೋರ್ಟಲ್ ಅನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಶಾಸಕರು ತಿಳಿಸಿದರು.

ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ, ತಾಲೂಕು ಲೆಕ್ಕಾಧಿಕಾರಿ ಶ್ರೀಕಂಠನಾಯಕ, ಸಹಾಯಕ ನಿರ್ದೇಶಕ ಶಿವಕುಮಾರ್ ಉಪಸ್ಥಿತರಿದ್ದರು.

ಮಾಹಿತಿ ಪಡೆಯೋದು ಹೇಗೆ?

ನಿಮ್ಮ ಮೊಬೈಲ್‌ನಲ್ಲಿ ಇಲಾಖೆ ವಾಟ್ಸ್‌ಅಪ್ ಚಾಟ್ ನಂಬರ್– 8277506000 ಅನ್ನು ಸೇವ್ ಮಾಡಿಕೊಂಡು ಚಾಟ್ ಆರಂಭಿಸಿದರೆ. ಮೊದಲಿಗೆ ಭಾಷೆಯ ಆಯ್ಕೆ, ನಂತರ ನಿಮ್ಮ ಹೆಸರು, ವಿಳಾಸ, ಮೊಬೈಲ್ ನಂಬರ್ ಮಾಹಿತಿ ನೀಡಿ ಲಾಗಿನ್ ಆಗಬೇಕು. ನಂತರ ತಾನಾಗಿಯೇ ಕೆಲ ಆಯ್ಕೆಗಳು ಆರಂಭವಾಗುತ್ತಾ ಸಾಗುತ್ತದೆ. ಕ್ರಮ ಸಂಖ್ಯೆಗಳನ್ನು ನಮೂದಿಸುವ ಮೂಲಕ ಜಿಲ್ಲೆ, ತಾಲೂಕು ಹಾಗೂ ಗ್ರಾಮ ಆಯ್ಕೆ ಮಾಡಿಕೊಂಡು ನೀವು ಬಯಸುವ ಗ್ರಾಮ ಪಂಚಾಯಿತಿ ಆಯ್ಕೆ ಮಾಡಿಕೊಂಡು ಅಲ್ಲಿನ ಚುನಾಯಿತಿ ಪ್ರತಿನಿಧಿಗಳು, ಸಿಬ್ಬಂದಿಯ ಮಾಹಿತಿ ಪಡೆಯಬಹುದು. ಸ್ವಾಧೀನ ಪ್ರಮಾಣಪತ್ರ, ರಸ್ತೆ ಅಗೆವುದಕ್ಕಾಗಿ ಅನುಮತಿ, ಕೈಗಾರಿಕೆ, ಕೃಷಿ ಆಧಾರಿತ ಉತ್ಪಾದನಾ ಘಟಕ ಸ್ಥಾಪನೆಗೆ ಅನುಮತಿ, ನಿರಾಕ್ಷೇಪಣಾ ಪತ್ರ, ನರೇಗಾ ಅಡಿಯಲ್ಲಿ ಕಾರ್ಮಿಕರಿಗೆ ಜಾಬ್ ಕಾರ್ಡ್ ವಿತರಣೆ, ಕಾರ್ಮಿಕರಿಗೆ ಉದ್ಯೋಗ ಒದಗಿಸುವುದು, ನಮೂನೆ 9/11ಎ, ನಮೂನೆ 11 ಬಿ ಸೇರಿ ಎಲ್ಲಾ ಸೇವೆಗಳಿಗೆ ಅರ್ಜಿ ಸಲ್ಲಿಸಬಹುದು. ಕುಂದುಕೊರತೆಗಳನ್ನು ದಾಖಲಿಸಬಹುದು.

> ಪಂಚಮಿತ್ರ ಪೋರ್ಟಲ್ ಲಿಂಕ್: https://panchamitra.karnataka.gov.in/

ಅರಣ್ಯ ಇಲಾಖೆ ವಿರುದ್ಧ ಆದಿವಾಸಿಗಳ ಪ್ರತಿಭಟನೆ



ಸಂಚಾರಕ್ಕೆ ಅಡ್ಡಿ ಪಡಿಸಲಾಗುತ್ತಿದೆ ಎಂದು ಆರೋಪಿಸಿ ಆದಿವಾಸಿಗಳು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ದ್ವಾರದ ಎದುರು ಪ್ರತಿಭಟನೆ ನಡೆಸಿದರು.


ಮಡಿಕೇರಿ, ಮಾ.4–ನಾಗರಹೊಳೆ ರಾಷ್ಟ್ರೀಯ ಉದ್ಯಾನವನದ ವನ್ಯಜೀವಿ ವಲಯ ಅರಣ್ಯ ಪ್ರದೇಶದಲ್ಲಿ ತಲತಲಾಂತರದಿಂದ ವಾಸವಿರುವ ಆದಿವಾಸಿ ಸಮುದಾಯದವರ ಸಂಚಾರಕ್ಕೆ ನಾಗರಹೊಳೆ ಚೆಕ್‌ಪೋಸ್ಟ್‌ನ ನಾಣಚ್ಚಿ ಪ್ರವೇಶದ ಗೇಟ್‌ನಲ್ಲಿ ಅಡ್ಡಿ ಪಡಿಸಲಾಗುತ್ತಿದೆ ಎಂದು ಆರೋಪಿಸಿ ಅಲ್ಲಿನ ನಿವಾಸಿಗಳು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ದ್ವಾರದ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ನಾಗರಹೊಳೆ ಆದಿವಾಸಿ ಜಮ್ಮಾಪಾಳೆ ಹಕ್ಕು ಸ್ಥಾಪನಾ ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ಆದಿವಾಸಿಗಳು, ನಮ್ಮ ಸಂಚಾರಕ್ಕೆ ಅಡ್ಡಿಪಡಿಸುತ್ತಿರುವ ಅರಣ್ಯ ಇಲಾಖೆ ಸಿಬ್ಬಂದಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಇದೇ ವೇಳೆ ಪ್ರತಿಭಟಿಸುತ್ತಿದ್ದ ಗೇಟ್ ಬಳಿ ದಾರಿ ಬಿಡುವ ವಿಚಾರಕ್ಕೆ ಪ್ರವಾಸಿಗರು ಮತ್ತು ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ನಡೆಯಿತು. ಅರಣ್ಯ ಇಲಾಖೆ ಸಿಬ್ಬಂದಿ ಮಧ್ಯಪ್ರವೇಶಿಸಿ ಪ್ರತಿಭಟನಾಕಾರರನ್ನು ಸಮಾಧಾನ ಪಡಿಸಿದರು.

ಆದಿವಾಸಿ ಮುಖಂಡ ಶಿವು ಮಾತನಾಡಿ, ನಾಗರಹೊಳೆ ವನ್ಯಜೀವಿ ವಲಯದ ಅರಣ್ಯ ಪ್ರದೇಶವಾದ ತುಂಡುಮುಂಡಗೆ ಕೊಲ್ಲಿ ಗದ್ದೆ ಹಾಡಿಯಲ್ಲಿ ವಾಸವಿರುವ ನಾಗರಹೊಳೆ ಆದಿವಾಸಿ ಜಮ್ಮಾಪಾಳೆ ಹಕ್ಕು ಸ್ಥಾಪನಾ ಸಮಿತಿ ಅಧ್ಯಕ್ಷ ಜೆ.ಕೆ.ತಿಮ್ಮ ಅವರು ಅರಣ್ಯ ಇಲಾಖೆಗೆ ಸಮುದಾಯದ ಜನರ ಸಮಸ್ಯೆ ತಿಳಿಸಿ, ರಾತ್ರಿ ತಡವಾಗಿ ಬಂದಾಗ ನಾಗರಹೊಳೆ ಚೆಕ್‌ಪೋಸ್ಟ್‌ನ ನಾಣಚ್ಚಿ ಪ್ರವೇಶದ ಗೇಟ್‌ನಲ್ಲಿ ಇದ್ದ ವಾಚರ್ ತಡೆದು ಮೇಲಧಿಕಾರಿ ಅನುಮತಿ ಪಡೆದ ಬಳಿಕವೇ ಬಿಡುವುದಾಗಿ ತಿಳಿಸಿದ್ದಾರೆ. ಪ್ರತಿನಿತ್ಯ ಕಾಡಿನ ಒಳ ಭಾಗದಲ್ಲಿ ಇರುವ ಆದಿವಾಸಿಗಳು ತಮ್ಮ ಕೆಲಸ ಕಾರ್ಯಗಳಿಗೆ ತೆರಳಿ, ಹಾಗೆಗೆ ಹಿಂತಿರುಗಿ ಬರುವಾಗ ಸಂಚಾರಕ್ಕೆ ಅಡ್ಡಿಪಡಿಸುತ್ತಿದ್ದಾರೆ. ಡಿಸಿಎಫ್ ಆದಿವಾಸಿಗಳ ಸಂಚಾರಕ್ಕೆ ತೊಂದರೆ ಮಾಡುವುದಿಲ್ಲವೆಂದು ಹೇಳಿದ್ದರೂ ಚೆಕ್‌ಪೋಸ್ಟ್‌ಗಳಲ್ಲಿ ಸಂಚಾರಕ್ಕೆ ಅಡ್ಡಿಪಡಿಸಲಾಗುತ್ತಿದೆ ಎಂದು ಆರೋಪಿಸಿದರು.

ನಂತರ ಪ್ರತಿಭಟನಾಕಾರರು, ಆದಿವಾಸಿಗಳ ಸಂಚಾರಕ್ಕೆ ಅಡ್ಡಿಪಡಿಸಿದ ಸಿಬ್ಬಂದಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಆದಿವಾಸಿಗಳ ಸಂಚಾರಕ್ಕೆ ಅಧಿಕೃತವಾಗಿ ಜ್ಞಾಪನ ಪತ್ರ ಹೊರಡಿಸಿ ಸಾಮಾಜಿಕ ನ್ಯಾಯ ಒದಗಿಸುವಂತೆ ಉಪವಲಯ ಅರಣ್ಯಾಧಿಕಾರಿಗೆ ಮನವಿ ಸಲ್ಲಿಸಿದರು.

ಅರಣ್ಯ ರಕ್ಷಕನ ಮೇಲೆ ಹಲ್ಲೆ ನಡೆಸಿದ ವ್ಯಕ್ತಿಗೆ 10 ವರ್ಷ ಜೈಲು



ತಿಮ್ಮಯ್ಯ

ಮಡಿಕೇರಿ, ಮಾ.4– ಅರಣ್ಯ ರಕ್ಷಕನ ಮೇಲೆ ಕತ್ತಿಯಿಂದ ಹಲ್ಲೆ ನಡೆಸಿ ಗಂಭೀರವಾಗಿ ಗಾಯಗೊಳಿಸಿದ ಅಪರಾಧಿಗೆ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ 10 ವರ್ಷ ಕಠಿಣ ಶಿಕ್ಷೆ ಮತ್ತು 15,500 ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ಗಾಳಿಬೀಡು ಕಾನೆಕಂಡಿ ನಿವಾಸಿ ತಿಮ್ಮಯ್ಯ ಎಂಬಾತನೇ ಶಿಕ್ಷೆಗೆ ಗುರಿಯಾದ ಅಪರಾಧಿ. ಈತ 2022ರ ಮೇ 11ರಂದು ಗಾಳಿಬೀಡು ಕಾಲೂರು ರಸ್ತೆಯಲ್ಲಿ ಹೋಗುತ್ತಿದ್ದ ಅರಣ್ಯ ರಕ್ಷಕ ಅಪ್ಪಣ್ಣ ರೈ ಅವರನ್ನು ತಡೆದು, ಗಾಳಿಬೀಡು ಪಂಚಾಯಿತಿಗೆ ಕಸ ವಿಲೇವಾರಿಗೆ ನನ್ನ ಮನೆಯ ಪಕ್ಕದ ಜಾಗವನ್ನು ತೋರಿಸಿದ್ದೀಯಾ? ಎಂದು ಕತ್ತಿಯಿಂದ ಹಲ್ಲೆ ನಡೆಸಿದ್ದ. ಈ ವೇಳೆ ಅಪ್ಪಣ್ಣ ರೈ ಅವರ ಎಡಗೈನ ಬೆರಳುಗಳು ತುಂಡಾಗಿದ್ದವು.

ಈ ಸಂಬಂಧ ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ತಿಮ್ಮಯ್ಯ ವಿರುದ್ಧ ಪ್ರಕರಣ ದಾಖಲಾಗಿತ್ತು. ತನಿಖೆ ನಡೆಸಿದ ಠಾಣಾಧಿಕಾರಿ ವಾಣಿಶ್ರೀ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶ ಹೆಚ್.ಸಿ.ಶ್ಯಾಮ್ ಪ್ರಸಾದ್, ಆರೋಪಿಗೆ 10 ವರ್ಷ ಕಠಿಣ ಶಿಕ್ಷೆ ಮತ್ತು 15,500 ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಕೆ.ಜೆ.ಅಶ್ವಿನಿ ವಾದ ಮಂಡಿಸಿದರು.

ಕಾವೇರಿ ನಾಡಿನಲ್ಲೂ ದಿನೇ ದಿನೆ ಬತ್ತುತ್ತಿದೆ ನೀರು

• ನೀರಿಗಾಗಿ ಹಾಹಾಕಾರ ಎದುರಾಗುವ ಆತಂಕ • ಜಿಲ್ಲೆಯಲ್ಲಿ ಬರದ ಪರಿಸ್ಥಿತಿ ನಿರ್ಮಾಣ

ಮಡಿಕೇರಿ, ಮಾ.4–ರಾಜ್ಯದ ಕೋಟ್ಯಾಂತರ ಜನರಿಗೆ ಕುಡಿಯುವ ನೀರು ಒದಗಿಸುವ ಕಾವೇರಿ ನದಿಯ ತವರು ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಉಷ್ಣಾಂಶ ಹೆಚ್ಚಾಗುತ್ತಿರುವುದರಿಂದ ಜಲ ಮೂಲಗಳು ಬತ್ತಲು ಆರಂಭಿಸಿವೆ. ಇದರಿಂದ ಮುಂದಿನ ದಿನಗಳಲ್ಲಿ ಕಾವೇರಿ ನಾಡಿನಲ್ಲೂ ಕುಡಿಯುವ ನೀರಿಗಾಗಿ ಹಾಹಾಕಾರ ಎದುರಾಗುವ ಆತಂಕ ಮೂಡಿದೆ.

ಕೊಡಗು, ಮೈಸೂರು, ಮಂಡ್ಯ, ಬೆಂಗಳೂರು ಮಾತ್ರವಲ್ಲದೆ ನೆರೆಯ ತಮಿಳುನಾಡಿಗೂ ನೀರುಣಿಸುವ ಕಾವೇರಿಯ ತವರು ಕೊಡಗಿನಲ್ಲಿ ಕಳೆದ ಮುಂಗಾರಿನಲ್ಲಿ ಆವರಿಸಿದ ಬರದ ಪರಿಣಾಮವಾಗಿ ಈ ಬಾರಿ ಅಂತರ್ಜಲ ತೀವ್ರವಾಗಿ ಬತ್ತುತ್ತಿದೆ.

ಕಳೆದ ಸಾಲಿನಲ್ಲಿ ಮುಂಗಾರು ಮಳೆ ಕೈಕೊಟ್ಟ ಕಾರಣ ಜಿಲ್ಲೆಯ ಕೊಳವೆ ಬಾವಿಗಳ ಅಂತರ್ಜಲ ದಶಕದಲ್ಲೇ ಅತಿ ಕನಿಷ್ಠ ಮಟ್ಟಕ್ಕೆ ತಲುಪಿದ್ದು, 13–14 ಮೀಟರ್ ಆಸುಪಾಸಿನಲ್ಲಿದ್ದ ಕೊಡಗಿನ ಅಂತರ್ಜಲ ಮಟ್ಟ ಈ ಸಾಲಿನಲ್ಲಿ 15.79 ಮೀಟರ್‌ಗೆ ತಲುಪಿರುವುದಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಂದಾಜಿಸಿದೆ. ವಿಶೇಷವೆಂದರೆ ಹಿಂದಿನ ವರ್ಷಗಳಲ್ಲಿ ಬರ ಪರಿಸ್ಥಿತಿ ಇದ್ದಾಗ ಅಂತರ್ಜಲ ಸ್ಥಿರವಾಗಿತ್ತು. ಆದರೆ, 2023ನೇ ಇಸವಿಯಲ್ಲಿ ಮಳೆ ಪ್ರಮಾಣ ಮತ್ತು ಮಳೆ ದಿನಗಳು ಕಡಿಮೆಯಾದ ಹಿನ್ನೆಲೆಯಲ್ಲಿ ದಶಕದಲ್ಲೇ ನೀರು ಅತಿ ಬತ್ತಿದೆ.

ಕಳೆದ ವರ್ಷ ಸೇರಿದಂತೆ ಕಳೆದ ಒಂದು ದಶಕದಲ್ಲಿ ಕೊಡಗು ಜಿಲ್ಲೆ 3 ಬಾರಿ ಬರ ಪರಿಸ್ಥಿತಿ ಎದುರಿಸಿದೆ. 2015 ಮತ್ತು 2017ರಲ್ಲೂ ಜಿಲ್ಲೆಯಲ್ಲಿ ಮಳೆ ಕೊರತೆ ಉಂಟಾಗಿತ್ತು. ಆದರೆ, 2015ರಲ್ಲಿ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ 14.35 ಮತ್ತು 2017ರಲ್ಲಿ 14.27 ಮೀ.ಗಳಷ್ಟಿತ್ತು. ಇತ್ತೀಚಿನ ವರ್ಷಗಳಲ್ಲಿ 2015ರ ಅಂತರ್ಜಲ (14.35ಮೀ.) ಅತಿ ಕಡಿಮೆಯಾಗಿತ್ತು.

ಕೊಡಗಿನಲ್ಲಿ 2022ರ ಜುಲೈ, ಆಗಸ್ಟ್‌ನಲ್ಲಿ ಉತ್ತಮ ಮಳೆಯಾಗಿತ್ತು. ಇದರ ಪರಿಣಾಮವಾಗಿ ವರ್ಷಾಂತ್ಯದಲ್ಲಿ 13.86 ಮೀ. ಆಳದಲ್ಲಿ ಅಂತರ್ಜಲವಿತ್ತು. ಆದರೆ, 2023ರಲ್ಲಿ ಜುಲೈ ಒಂದು ವಾರ ಹೊರತುಪಡಿಸಿದರೆ ಉಳಿದೆಲ್ಲ ಸಮಯದಲ್ಲೂ ಮಳೆ ಕೊರತೆ ಎದುರಾಗಿದೆ. ಮಳೆಯ ದಿನಗಳು ತೀರಾ ಕಡಿಮೆಯಾದ ಹಿನ್ನೆಲೆಯಲ್ಲಿ 2022ಕ್ಕೆ ಹೋಲಿಸಿದರೆ 2023ರ ವರ್ಷಾಂತ್ಯಕ್ಕೆ ಅಂತರ್ಜಲ 1.93 ಮೀ.ಗಳಷ್ಟು ಇಳಿಕೆ ಕಂಡಿದೆ.

ಕಳೆದ ಬರಗಾಲದ ವರ್ಷಗಳಲ್ಲಿ ಜಿಲ್ಲೆಯ ಸೋಮವಾರಪೇಟೆ ತಾಲೂಕು ಹಾಗೂ ದಕ್ಷಿಣ ಕೊಡಗಿನ ಕೆಲವು ಗ್ರಾಮಗಳು ಮಾತ್ರ ಮಳೆಯ ಕೊರತೆ ಎದುರಿಸುತ್ತಿದ್ದವು. ಈ ಬಾರಿ ಜಿಲ್ಲೆಯ ಎಲ್ಲಾ 5 ತಾಲೂಕುಗಳಲ್ಲೂ ಮಳೆಯ ಕೊರತೆ ಕಂಡು ಬಂದಿರುವುದರಿಂದ ಈ ವರ್ಷ ಅಂತರ್ಜಲದ ಸ್ಥಿರ ಮಟ್ಟ 15.79ಕ್ಕೆ ತಲುಪಿದೆ. 15 ಮೀ.ಗಿಂತಲೂ ಕೆಳಮಟ್ಟದಲ್ಲಿರುವುದರಿಂದ ನೀರಿನ ನಿರ್ವಹಣೆಗೆ ಸಮರ್ಪಕ ಕ್ರಮಕೈಗೊಳ್ಳದಿದ್ದಲ್ಲಿ ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೆ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಲಿದೆ.

ಜಿಲ್ಲೆಯಲ್ಲಿ ತೋಡು, ಬಾವಿಗಳ ಅಂತರ್ಜಲ ಸ್ಥಿರ ಮಟ್ಟದಲ್ಲೂ ಇಳಿಕೆ ಕಂಡು ಬಂದಿದ್ದು, ಕೊಡಗಿನ ಜಿಲ್ಲಾ ಕೇಂದ್ರ ಮಡಿಕೇರಿಗೆ ನೀರು ಒದಗಿಸುವ ಕೂಟು ಹೊಳೆಯಲ್ಲಿ ನೀರು ತೀವ್ರ ಕಡಿಮೆಯಿದೆ. ಪರ್ಯಾಯವಾಗಿ ಕುಂಡಾಮೇಸ್ತ್ರಿ ಯೋಜನೆಯ ಮೂಲದಿಂದ ನೀರನ್ನು ಪಂಪ್ ಮಾಡಿ ಕೂಟು ಹೊಳೆಗೆ ಹರಿಸಬೇಕಾಗಿದೆ. ಈ ಪ್ರಕಿಯೆ ಏಪ್ರಿಲ್‌ನಲ್ಲಿ ನಡೆಯುತ್ತಿತ್ತು. ಆದರೆ, ಈ ಬಾರಿ ಮಾರ್ಚ್ ಮೊದಲ ವಾರದಿಂದಲೇ ಆರಂಭಿಸಬೇಕಾದ ಅನಿವಾರ್ಯತೆ ಎದುರಾಗಬಹುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.



ಮಡಿಕೇರಿ ನಗರಕ್ಕೆ ನೀರು ಒದಗಿಸುವ ಕೂಟು ಹೊಳೆಯಲ್ಲಿ ನೀರು ತೀವ್ರ ಕಡಿಮೆ ಇರುವುದು.

> ಕಳೆದ ಒಂದು ದಶಕದ ಅಂಕಿ ಅಂಶಗಳಿಗೆ ಹೋಲಿಸಿದರೆ 1.71 ಮೀಟರ್ ನಷ್ಟು ಮತ್ತು 2022ಕ್ಕಿಂತ 0.94 ಮೀ.ನಷ್ಟು ನೀರು ಇಳಿಮುಖವಾಗಿದೆ. 2014ರ ಹೊತ್ತಿಗೆ 6.02 ಮೀ.ನಷ್ಟಿದ್ದ ಅಂತರ್ಜಲ 2023ರ ಅಂತ್ಯದಲ್ಲಿ 6.73 ಮೀಗೆ ತಲುಪಿದೆ. ಗಟ್ಟಿ ಬಂಡೆ ಪ್ರದೇಶಗಳು, ಅಂತರ್ಜಲ ಕಡಿಮೆ ಇರುವ ಪ್ರದೇಶಗಳಲ್ಲಿ ಮಾರ್ಚ್, ಏಪ್ರಿಲ್ ವೇಳೆಗೆ ಕೊಳವೆ ಬಾವಿಗಳು ಬತ್ತುವ ಸಾಧ್ಯತೆಯಿದೆ. ಈ ವರ್ಷವೂ ಮುಂಗಾರು ಕೈಕೊಟ್ಟರೆ ಪರಿಸ್ಥಿತಿ ಸ್ವಲ್ಪ ಕಷ್ಟವಾಗಬಹುದು.
>
> –ಕೆ.ಜಿ.ಸೌಮ್ಯ, ಜಿಲ್ಲಾ ಅಂತರ್ಜಲ ಕಚೇರಿಯ ಹಿರಿಯ ಭೂ ವಿಜ್ಞಾನಿ(ಪ್ರಭಾರ)

ಯುವಕರು ಹಠ, ಚಟ ಬಿಡಬೇಕು



ಅರಮೇರಿ ಕಳಂಚೇರಿ ಮಠದ ಲಿಂಗರಾಜೇಂದ್ರ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ ಚಿಂತನ ಗೋಷ್ಠಿಯಲ್ಲಿ ಪಕ್ಷಿ ವೀಕ್ಷಕ ಡಾ.ಎಸ್.ವಿ.ನರಸಿಂಹನ್ ಅವರನ್ನು ಸನ್ಮಾನಿಸಲಾಯಿತು. ಶ್ರೀ ಶಾಂತಮಲ್ಲಿಕಾರ್ಜುನಸ್ವಾಮೀಜಿ, ಚೋಟು ಅಪ್ಪಯ್ಯ, ಕಾಳಿಮಾಡ ಡಾ.ಶಿವಪ್ಪ ಇದ್ದರು.

ವಿರಾಜಪೇಟೆ: ಯುವಕರು ಹಠ ಮತ್ತು ಚಟಗಳನ್ನು ಬಿಟ್ಟು, ಜೀವನದಲ್ಲಿ ತಾಳ್ಮೆ ಮತ್ತು ಸಹನೆಯಿಂದ ಜೀವನ ನಡೆಸುವಂತಾಗಬೇಕು ಎಂದು ನಿವೃತ್ತ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚೋಟು ಅಪ್ಪಯ್ಯ ಹೇಳಿದರು.

ಸಮೀಪದ ಅರಮೇರಿ ಕಳಂಚೇರಿ ಮಠದ ಶ್ರೀ ಲಿಂಗರಾಜೇಂದ್ರ ಭವನದ ಸಭಾಂಗಣದಲ್ಲಿ ಆಯೋಜಿಸಿದ್ದ ಹೊಂಬೆಳಕು ಮಾಸಿಕ ತತ್ತ್ವ ಚಿಂತನ ಗೋಷ್ಠಿಯಲ್ಲಿ 'ಯುವ ಜನಾಂಗದಲ್ಲಿ ಆಕಸ್ಮಿಕ ಮರಣಗಳು ಮತ್ತು ಪರಿಹಾರ' ಕುರಿತು ಉಪನ್ಯಾಸ ನೀಡಿದ ಅವರು, ಯುವಕರು ದುಷ್ಚಟಗಳಿಗೆ ಬಲಿಯಾಗದೆ ಧೈರ್ಯದಿಂದ ಬದುಕು ರೂಪಿಸಿಕೊಳ್ಳಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಯುವಕರು ನದಿಗಳಲ್ಲಿ ಸ್ನಾನ ಮಾಡಲು ಹೋದಾಗ ಹಾಗೂ ಅಪಾಯ ಸ್ಥಳಗಳಲ್ಲಿ ಸೆಲ್ಫಿ ತೆಗೆಯುವಾಗ ಹೆಚ್ಚು ಘಟನೆಗಳು ನಡೆಯುತ್ತಿವೆ. ತಮ್ಮ ಮಕ್ಕಳು ವಿದ್ಯೆ ಕಲಿತು ಉತ್ತಮ ವ್ಯಕ್ತಿಗಳಾಗಬೇಕೆಂದು ಪೋಷಕರು ಕಷ್ಟಪಟ್ಟು ತಮ್ಮ ಜೀವವನ್ನು ಮುಡಿಪಾಗಿಟ್ಟು ಶಾಲೆ–ಕಾಲೇಜಿಗೆ ಕಳಿಸುತ್ತಾರೆ. ಅದನ್ನು ಅರಿಯದ ಯುವಕರು ದುಷ್ಚಟಗಳಿಗೆ ಮಾರು ಹೋಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಟಿ.ಪಿ.ರಮೇಶ್ ಮಾತನಾಡಿ, ಮಠಾಧೀಶರು ಸಮಾಜಕ್ಕೆ ಉತ್ತಮ ಸಂದೇಶ ನೀಡುವ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿ ಮೂಡಿಸುವಂತ ಕಾರ್ಯಗಳನ್ನು ನಡೆಸುತ್ತಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಮುಂದಿನ ದಿನದಲ್ಲಿ ದತ್ತಿ ಕಾರ್ಯಕ್ರಮವನ್ನು ಮಠದ ಸಭಾಂಗಣದಲ್ಲಿ ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ಶ್ರೀ ಶಾಂತಮಲ್ಲಿಕಾರ್ಜುನಸ್ವಾಮೀಜಿ ಮಾತನಾಡಿ, ಕಷ್ಟ ಬರುವುದು ಸಹಜ ಅದನ್ನು ಎದುರಿಸಬೇಕು. ವಿದ್ಯಾರ್ಥಿಗಳು ಶಿಕ್ಷಣದ ಕಡೆಗೆ ಹೆಚ್ಚು ಗಮನ ಹರಿಸುವ ಮೂಲಕ ಭವಿಷ್ಯ ರೂಪಿಸಿಕೊಳ್ಳಬೇಕು. ಪೋಷಕರು ಮಕ್ಕಳು ಸರಿದಾರಿಯಲ್ಲಿ ನಡೆಯುವಂತೆ ಅವರಿಗೆ ಮಾರ್ಗದರ್ಶಕರಾಗಿ ಜೀವನದ ತಿಳುವಳಿಕೆ ಮತ್ತು ಧೈರ್ಯ ನೀಡಬೇಕು ಎಂದರು.

ಇದೇ ವೇಳೆ ಪಕ್ಷಿ ವೀಕ್ಷಕ ಡಾ.ಎಸ್.ವಿ.ನರಸಿಂಹನ್ ಅವರನ್ನು ಸನ್ಮಾನಿಸಲಾಯಿತು. ಗೋಣಿಕೊಪ್ಪಲಿನ ಕಾಳಿಮಾಡ ಡಾ.ಶಿವಪ್ಪ ವಚನ ಗಾಯನ ನೀಡಿದರು. ಹುಣಸೂರಿನ ದಂತ ತಜ್ಞ ಡಾ.ಎಂ.ಶಿವಕುಮಾರ್, ವಿದ್ಯಾರ್ಥಿಗಳಾದ ದುರೀನ್, ಕಿರಣ್, ಹೇಮಂತ್ ಮತ್ತಿತರರಿದ್ದರು.

ಅಂಬಾಡಿ ಪೈಸರಿಯಲ್ಲಿ ಮನೆ ಕುಸಿತ



ಕೂಲಿ ಕಾರ್ಮಿಕ ಲೋಕೇಶ್ ಮತ್ತು ಭವಾನಿ ಅವರ ಮನೆ ಕುಸಿದಿರುವುದು.

ನಾಪೋಕ್ಲು, ಮಾ.4– ಕೋಕೇರಿ ಗ್ರಾಮದ ಅಂಬಾಡಿ ಪೈಸರಿಯಲ್ಲಿ ವಾಸವಾಗಿದ್ದ ಕೂಲಿ ಕಾರ್ಮಿಕರ ಮನೆ ಸಂಪೂರ್ಣವಾಗಿ ಕುಸಿದಿದೆ.

ಚೈಯಂಡಣೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೋಕೇರಿ ಗ್ರಾಮದ ಅಂಬಾಡಿ ಪೈಸರಿಯ ಕೂಲಿ ಕಾರ್ಮಿಕ ಲೋಕೇಶ್ ಮತ್ತು ಭವಾನಿ ದಂಪತಿಗೆ ಸೇರಿದ ಮನೆ. ಭವಾನಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮನೆಯಲ್ಲಿದ್ದ ಪಾತ್ರೆ ಹಾಗೂ ಸಾಮಾಗ್ರಿಗಳು ಚಾವಣಿಯ ಕೆಳಗೆ ಸಿಲುಕಿ ನಾಶವಾಗಿವೆ.

ನಾಪೋಕ್ಲು ಕಂದಾಯ ಪರಿವೀಕ್ಷಕ ರವಿ ಕುಮಾರ್ ಸ್ಥಳ ಪರಿಶೀಲಿಸಿದರು. ಸೂಕ್ತ ಪರಿಹಾರ ನೀಡುವುದಾಗಿ ಭರವಸೆ ನೀಡಿದರು.

ಸರ್ಕಾರಿ ನೌಕರರು ದಕ್ಷತೆ ಮೆರೆಯಬೇಕು



ಚಾಮರಾಜನಗರದ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಶಿಲ್ಪನಾಗ್ ಥ್ರೋಬಾಲ್ ಎಸೆಯುವ ಚಾಲನೆ ನೀಡಿದರು.

ಚಾಮರಾಜನಗರ, ಮಾ.4–ಸರ್ಕಾರಿ ನೌಕರರ ದೈನಂದಿನ ಕೆಲಸ–ಕಾರ್ಯಗಳ ಒತ್ತಡ ರಹಿತ ಚಟುವಟಿಕೆಗೆ ಕ್ರೀಡೆ ಸಹಕಾರಿಯಾಗಿದ್ದು, ಕ್ರೀಡೆಯಲ್ಲಿ ಭಾಗವಹಿಸಿ ದೈಹಿಕ ಹಾಗೂ ಮಾನಸಿಕ ಸುಸ್ಥಿತಿ ಕಾಪಾಡಿ ಕೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪನಾಗ್ ಸಲಹೆ ನೀಡಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆ ವತಿಯಿಂದ ಆಯೋಜಿಸಿದ್ದ ಜಿಲ್ಲಾಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜೀವನ ಭದ್ರತೆಗಾಗಿ ಸರ್ಕಾರಿ ಕೆಲಸಕ್ಕೆ ಬರುವ ನೌಕರರಿಗೆ ಮೊದಮೊದಲು ಅನೇಕ ಸವಾಲುಗಳು ಎದುರಾಗಬಹುದು. ನೌಕರರು ಮನೆಯಲ್ಲಿ ವೃದ್ಧರನ್ನು ನೋಡಿಕೊಳ್ಳುವ ಜವಾಬ್ದಾರಿ ಸೇರಿದಂತೆ ಇತರೆ ಸಮಸ್ಯೆಗಳನ್ನು ಮೀರಿ ಕೆಲಸದಲ್ಲಿ ದಕ್ಷತೆ ಮೆರೆಯಬೇಕಾಗುತ್ತದೆ. ಇಂತಹ ಒತ್ತಡಗಳ ನಿರ್ವಹಣೆಗೆ ನೌಕರರು ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳಬೇಕು. ಕ್ರೀಡೆಯಿಂದ ಮನೋಲ್ಲಾಸ ಮೂಡಲಿದೆ ಎಂದರು.

ಆರಂಭದಲ್ಲಿ ಜಿಲ್ಲಾಧಿಕಾರಿ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಜಿಲ್ಲೆಯ ಐದು ತಾಲೂಕುಗಳ ತಂಡಗಳನ್ನು ಪರಿಚಯ ಮಾಡಿಕೊಂಡರು. ಬಳಿಕ ಥ್ರೋಬಾಲ್ ಎಸೆಯುವ ಮೂಲಕ 2 ದಿನಗಳ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕ್ರೀಡಾ ಜ್ಯೋತಿ ಸ್ವೀಕರಿಸಿದ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಪಿ.ಲಕ್ಷ್ಮೀ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಮತದಾನ ಮಾಡುವ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಚಿದಂಬರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶಿವಸ್ವಾಮಿ, ಕೃಷಿಜಂಟಿ ನಿರ್ದೇಶಕ ಅಬೀಬ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕಿ ಸವಿತಾ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಚಂದ್ರಶೇಖರ್, ಕಾರ್ಯದರ್ಶಿ ಎಸ್.ಮಹದೇವಸ್ವಾಮಿ, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಎಚ್.ಎಸ್.ಪ್ರಸಾದ್, ಕೊಳ್ಳೇಗಾಲ ತಾಲೂಕು ಅಧ್ಯಕ್ಷ ಜೋಸೆಫ್ ಅಲೆಗ್ಸಾಂಡರ್, ಹನೂರು ತಾಲೂಕು ಅಧ್ಯಕ್ಷ ಗುರುಸ್ವಾಮಿ, ಯಳಂದೂರು ತಾಲೂಕು ಅಧ್ಯಕ್ಷ ವೈ.ಎಂ.ಮಂಜುನಾಥ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಾದಪ್ಪ, ತಾಲೂಕು ಅಧ್ಯಕ್ಷ ರಾಮಸ್ವಾಮಿ ಉಪಸ್ಥಿತರಿದ್ದರು.

ಬಿಆರ್‌ಟಿ ಅರಣ್ಯ ಪ್ರದೇಶದಲ್ಲಿ ಕಾಳ್ಗಿಚ್ಚು

ಹತ್ತಾರು ಎಕರೆ ಅರಣ್ಯ ಬೆಂಕಿಗಾಹುತಿ



ಬಿಳಿಗಿರಿರಂಗನಾಥಸ್ವಾಮಿ ಹುಲಿ ಸಂರಕ್ಷಿತ ಪ್ರದೇಶದ ಪುಣಜನೂರು ವಲಯದಲ್ಲಿ ಸೋಮವಾರ ಕಾಳ್ಗಿಚ್ಚು ಕಾಣಿಸಿಕೊಂಡಿರುವುದು.

ಚಾಮರಾಜನಗರ, ಮಾ.4–ಬಿಳಿಗಿರಿ ರಂಗನಾಥಸ್ವಾಮಿ ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ ಪುಣಜನೂರು ವಲಯದಲ್ಲಿ ಸೋಮವಾರ ಕಾಳ್ಗಿಚ್ಚಿನಿಂದ ಹತ್ತಾರು ಎಕರೆ ಸುಟ್ಟು ಹೋಗಿದೆ.

ಪುಣಜನೂರಿನಿಂದ ಬೇಡಗುಳಿಗೆ ಹೋಗುವ ರಸ್ತೆಯ ಕುರಿಮಂದೆ, ಕುಂಬಳಕಾಯಿ ಗುಡ್ಡ ಪ್ರದೇಶದ ಮೂರ್ನಾಲ್ಕು ಕಡೆಗಳಲ್ಲಿ ಕಾಳ್ಗಿಚ್ಚು ಕಾಣಿಸಿಕೊಂಡಿದ್ದು, ಬೆಂಕಿ ನಂದಿಸಲು ಅರಣ್ಯ ಇಲಾಖೆ ಸಿಬ್ಬಂದಿ ಹರಸಾಹಸ ಪಡುತ್ತಿದ್ದಾರೆ.

ಬೆಳಗ್ಗೆಯೇ ಬೆಂಕಿ ಹೊತ್ತಿಕೊಂಡಿದ್ದು, ಸಂಜೆಯಾದರೂ ನಂದಿಸಲು ಸಾಧ್ಯವಾಗಿಲ್ಲ. ಬಿಸಿಲಿನಿಂದ ಅರಣ್ಯ ಪ್ರದೇಶ ಒಣಗಿದೆ. ಹಾಗಾಗಿ, ಬೆಂಕಿ ವೇಗವಾಗಿ ಹರಡುತ್ತಿದೆ. ಕನಿಷ್ಠ 50 ಎಕರೆ ಬೆಂಕಿಗೆ ಆಹುತಿಯಾಗಿದೆ ಎಂದು ಅರಣ್ಯ ಅಧಿಕಾರಿಗಳು ಹೇಳುತ್ತಿದ್ದರೆ, ನೂರಾರು ಎಕರೆ ಭಸ್ಮವಾಗಿದೆ ಎಂದು ಪುಣಜನೂರಿನ ನಿವಾಸಿಗಳು ಹೇಳಿದ್ದಾರೆ. ಬೆಂಕಿ ಬಿದ್ದಿರುವುದು ಅಂದಾಜು ಸಿಗುತ್ತಿಲ್ಲ. ಆದರೆ, ದಟ್ಟಹೊಗೆ ದೂರದಿಂದಲೇ ಕಾಣಿಸುತ್ತಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದ ಡಿಸಿಎಫ್ ದೀಪ ಜೆ.ಕಾಂಟ್ರ್ಯಾಕ್ಟರ್, ಕನಿಷ್ಠ 50 ಎಕರೆಗೆ ಬೆಂಕಿ ಬಿದ್ದಿರಬಹುದು. ನೆಲ ಬೆಂಕಿಯಾಗಿದ್ದು, ಎತ್ತರಕ್ಕೆ ವ್ಯಾಪಿಸಿಲ್ಲ. ಬೆಂಕಿ ನಂದಿಸಲು ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಸ್ಥಳೀಯರೇ ಬೆಂಕಿ ಹಾಕಿರುವ ಅನುಮಾನ ಇದ್ದು, ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಿದ್ದೇವೆ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಿದ್ದೇವೆ ಎಂದು ತಿಳಿಸಿದರು.

ಕಡವೆ ಮಾಂಸ ಸಾಗಣೆ: 6 ಜನರ ಬಂಧನ



ಕಡವೆ ಮಾಂಸ ಸಾಗಿಸುತ್ತಿದ್ದಾಗ ಆರೋಪಿಗಳುನ್ನು ಬಂಧಿಸಿರುವುದು.

ಹನೂರು, ಮಾ.4–ಕಡವೆ ಮಾಂಸ ಸಾಗಿಸುತ್ತಿದ್ದ 6 ಜನರನ್ನು ಅರಣ್ಯಾಧಿಕಾರಿಗಳು ಭಾನುವಾರ ರಾತ್ರಿ ಬಂಧಿಸಿ, ಮಾಂಸ, ನಾಡಬಂದೂಕು ಮತ್ತು ಕೃತ್ಯಕ್ಕೆ ಬಳಸಿದ ಉಪಕರಣಗಳನ್ನು ವಶಪಡಿಸಿಕೊಂಡಿದ್ದಾರೆ.

ತಾಲೂಕಿನ ಬಸಪ್ಪನದೊಡ್ಡಿ ಗ್ರಾಮದ ಇರ್ಫಾನ್‌ಬೇಗ್, ಅಂಬಿಕಾಪುರ ಗ್ರಾಮದ ಕುಮಾರಸ್ವಾಮಿ, ಕಾಂಚಳ್ಳಿ ಗ್ರಾಮದ ಯಶವಂತ್, ಬಸಪ್ಪನದೊಡ್ಡಿ ಗ್ರಾಮದ ವಹೀದ್, ಕುರುಬರದೊಡ್ಡಿ ಗ್ರಾಮದ ಸಯ್ಯದ್ ಆರಿಸ್ ಹಾಗೂ ಮಂಚಾಪುರ ಗ್ರಾಮದ ಅಪ್ಪು ಬಂಧಿತ ಆರೋಪಿಗಳು.

ರಾಮಾಪುರ ವನ್ಯಜೀವಿ ವಲಯ ಅರಣ್ಯಾಧಿಕಾರಿ ಕೌದಳ್ಳಿಯ ಕಾಂತರಾಜ ಎಸ್. ಚವ್ಹಾಣ, ಉಪ ವಲಯ ಅರಣ್ಯಾಧಿಕಾರಿ ಹೆಚ್.ರಾಮ್ ಹಾಗೂ ಸಿಬ್ಬಂದಿ ರಾತ್ರಿ ಗಸ್ತಿನಲ್ಲಿದ್ದಾಗ ವಡಕೆಹಳ್ಳ ಗ್ರಾಮದಿಂದ ಕೋಣನಕೆರೆ ಗ್ರಾಮದ ಕಡೆಗೆ ಅರಣ್ಯ ಪ್ರದೇಶದಲ್ಲಿ ಹಾದುಹೋಗುವ ಮಲೆ ಮಹದೇಶ್ವರಬೆಟ್ಟದ ಮುಖ್ಯ ರಸ್ತೆಯಲ್ಲಿ ಆರೋಪಿಗಳು ಕಡವೆ ಮಾಂಸ ಸಾಗಣೆ ಮಾಡುತ್ತಿದ್ದರು.

ನಂತರ ಆರೋಪಿಗಳನ್ನು ಬಂಧಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಲಾಯಿತು.

ಬೆಂಗಳೂರಿನಲ್ಲಿ ನಡೆದ ಬಾಂಬ್ ಸ್ಫೋಟ ಖಂಡಿಸಿ

ಬಿಜೆಪಿ ಯುವ ಮೋರ್ಚಾದಿಂದ ತಿರಂಗಯಾತ್ರೆ

ಚಾಮರಾಜನಗರ, ಮಾ.4–ಕರ್ನಾಟಕವನ್ನು ಭಯೋತ್ಪಾದನೆಯಿಂದ ರಕ್ಷಣೆ ಮಾಡಿ ಎಂದು ಒತ್ತಾಯಿಸಿ, ಬೆಂಗಳೂರಿನಲ್ಲಿ ನಡೆದ ಬಾಂಬ್ ಸ್ಫೋಟ ಖಂಡಿಸಿ ಬಿಜೆಪಿ ಜಿಲ್ಲಾ ಯುವ ಮೋರ್ಚಾ ಕಾರ್ಯಕರ್ತರು ನಗರದಲ್ಲಿ ಸೋಮವಾರ ತಿರಂಗಯಾತ್ರೆ ನಡೆಸಿದರು.

ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಿಂದ ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸೂರ್ಯ ಬಾಲರಾಜ್ ನೇತೃತ್ವದಲ್ಲಿ ಹೊರಟ ತ್ರಿರಂಗ ಯಾತ್ರೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಜನರಲ್ಲಿ ಜಾಗೃತಿ ಮೂಡಿಸಿತು.

ಸೂರ್ಯ ಬಾಲರಾಜ್ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಭಯೋತ್ಪಾದನೆ ಜಾಸ್ತಿಯಾಗುತ್ತಿದೆ. ಕಾಂಗ್ರೆಸ್ ಸರ್ಕಾರದ ತೃಷ್ಟೀಕರಣ ರಾಜಕಾರಣದಿಂದಾಗಿ ರಾಜ್ಯದಲ್ಲಿ ಅರಾಜಕತೆ ಹೆಚ್ಚಾಗುತ್ತಿದೆ. ವಿಧಾನಸೌಧದಲ್ಲೇ ಪಾಕಿಸ್ತಾನ ಪರ ಘೋಷಣೆ ಕೂಗಿದ ವ್ಯಕ್ತಿಗಳ ರಕ್ಷಣೆಗೆ ಸರ್ಕಾರ ನಿಂತಿದೆ. ಎಸ್‌ಎಲ್‌ಆರ್ ವರದಿ ಬಂದರು ಸಹ ಅದನ್ನು ಬಿಡುಗಡೆ ಮಾಡದೇ ವಿಳಂಬ ಮಾಡುವ ಮೂಲಕ ತಪ್ಪಿಸ್ಥರನ್ನು ರಕ್ಷಣೆ ಮಾಡುವ ಜೊತೆಗೆ ಭಯೋತ್ಪಾದನೆಗೆ ಪರೋಕ್ಷವಾಗಿ ಕುಮ್ಮಕ್ಕು ನೀಡಿದೆ ಎಂದು ಆರೋಪಿಸಿದರು.

ಗೃಹ ಸಚಿವ ಡಾ.ಪರಮೇಶ್ವರ್, ಬೆಂಗಳೂರಿನ ರಾಮೇಶ್ವರ ಕೆಫೆಯಲ್ಲಿ ನಡೆದ ಬಾಂಬ್ ಸ್ಫೋಟ ಪ್ರಕರಣದಲ್ಲಿ ವ್ಯಾಪಾರ ದೃಷ್ಟಿಯಿಂದ ನಡೆದ ಘಟನೆ ಎಂದಿರುವುದು ಹಾಸ್ಯಾಸ್ಪದ ಹಾಗೂ ಬೇಜವಾಬ್ದಾರಿ ಹೇಳಿಕೆಯಾಗಿದೆ. ಪ್ರಮುಖ ಹೋಟೆಲ್‌ಗಳಲ್ಲಿ ವ್ಯಾಪಾರ ದೃಷ್ಟಿಯಿಂದ ಎಷ್ಟು ಬ್ಲಾಸ್ಟ್ ಪ್ರಕರಣಗಳು ನಡೆದಿವೆ ಎಂಬುದನ್ನು ಸಚಿವರು ಸಾಬೀತು ಮಾಡಲಿ ಎಂದು ಸವಾಲು ಹಾಕಿದರು.

ತಿರಂಗಯಾತ್ರೆಯಲ್ಲಿ ಜಿಲ್ಲಾ ಬಿಜೆಪಿ ಕಾರ್ಯದರ್ಶಿ ನಟರಾಜು, ನಗರ ಮಂಡಲ ಅಧ್ಯಕ್ಷ ಶಿವರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮೂಡ್ನಾಕೂಡು ಪ್ರಕಾಶ್, ಹೊಂಗನೂರು ಮಹದೇವಸ್ವಾಮಿ, ಮುಖಂಡರಾದ ಆನಂದ್ ಭಗೀರಥ್, ಯಳಂದೂರು ಅನಿಲ್, ಮಹೇಶ್, ಕಾಡಹಳ್ಳಿ ಮಹೇಶ್, ಎಸ್‌ಟಿ ಮೋರ್ಚಾ ಚಂದ್ರು, ಬೇಡರಪುರ ಬಸವಣ್ಣ, ಶಿವು ವಿರಾಟ್, ಬೂದಂಬಳ್ಳಿ ರಾಜೇಶ್, ಬುಲೆಟ್ ಚಂದ್ರು, ನಗರಸಭಾ ಸದಸ್ಯೆ ಮಮತಾ ಬಾಲಸುಬ್ರಹ್ಮಣ್ಯ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಕಮಲಮ್ಮ, ವಿಶಾಲಾಕ್ಷಿ, ಕಾರ್ಯಕರ್ತರು ಮೊದಲಾದವರು ಇದ್ದರು.



ಬೆಂಗಳೂರಿನಲ್ಲಿ ನಡೆದ ಬಾಂಬ್ ಸ್ಫೋಟ ಖಂಡಿಸಿ ಬಿಜೆಪಿ ಜಿಲ್ಲಾ ಯುವ ಮೋರ್ಚಾ ಕಾರ್ಯಕರ್ತರು ಚಾಮರಾಜನಗರದಲ್ಲಿ ತ್ರಿರಂಗ ಯಾತ್ರೆ ನಡೆಸಿದರು.

ನಾಳೆ ರೈತರೇ ಆರೋಗ್ಯವಂತರಾಗಿ ಕೃತಿ ಬಿಡುಗಡೆ



ಚಾಮರಾಜನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರಲಕ್ಷ ಆಸ್ಪತ್ರೆ ಸಂಸ್ಥಾಪಕ ನಿರ್ದೇಶಕ ಡಾ. ಎನ್.ಎಸ್. ಮೋಹನ್ ಮಾತನಾಡಿದರು.

ಚಾಮರಾಜನಗರ, ಮಾ.4–ಪ್ರಲಕ್ಷ ಆಸ್ಪತ್ರೆ ಸಂಸ್ಥಾಪಕ ನಿರ್ದೇಶಕ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಆಕಾಂಕ್ಷಿ ಡಾ.ಎನ್.ಎಸ್. ಮೋಹನ್ ಅವರ 'ರೈತರೇ ಆರೋಗ್ಯವಂತರಾಗಿ' ಎರಡನೇ ಕೃತಿ ಮಾ.6ರಂದು ಬೆಳಗ್ಗೆ 10.30ಕ್ಕೆ ಎಚ್.ಡಿ.ಕೋಟೆಯ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಲೋಕಾರ್ಪಣೆಯಾಗಲಿದೆ.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಾ.ಎನ್.ಎಸ್. ಮೋಹನ್, ವೈದ್ಯಕೀಯ ಕ್ಷೇತ್ರದಲ್ಲಿ ನನ್ನ ಅನುಭವ ಹಾಗೂ ರೈತರೊಂದಿಗಿನ ಒಡನಾಟವನ್ನು ಗಮನಿಸಿ, ರೈತರು ನಮ್ಮ ದೇಶದ ಅನ್ನದಾತರು, ಸೈನಿಕರು ದೇಶವನ್ನು ಕಾಯುವವರು, ಈ ಇವರಿಬ್ಬರು ಆರೋಗ್ಯವಂತರಾದರೆ, ದೇಶದ ಪ್ರಗತಿ ಸಾಧ್ಯವಾಗಲಿದೆ ಎಂದರು.

ನಾನು ಹವ್ಯಾಸಿ ಬರಹಗಾರನಾಗಿದ್ದು, ವೈದ್ಯ ವೃತ್ತಿಯ ಬಿಡುವಿನ ವೇಳೆಯಲ್ಲಿ ಕೃತಿಗಳನ್ನು ಬರೆಯುತ್ತೇನೆ. ನನ್ನ ಎರಡನೇ ಕೃತಿ 'ರೈತರೇ ಆರೋಗ್ಯವಂತರಾಗಿ' ಎಂಬ ಶೀರ್ಷಿಕೆಯಡಿ ರೈತರ ಆರೋಗ್ಯದ ಸಮಸ್ಯೆಗಳು ಅದಕ್ಕೆ ಪರಿಹಾರೋಪಾಯಗಳನ್ನು ಕೃತಿಯಲ್ಲಿ ದಾಖಲಿಸುವ ಮೂಲಕ ಉಪಯುಕ್ತ ಅಂಶಗಳನ್ನು ತಿಳಿಸಲಾಗಿದೆ ಎಂದರು.

ರಾಜ್ಯ ರೈತ ಕಿಸಾನ್ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ ಸಮಾರಂಭ ಉದ್ಘಾಟಿಸಲಿದ್ದು, ಶಾಸಕ ಜಿ.ಟಿ.ದೇವೇಗೌಡ ಕೃತಿ ಬಿಡುಗಡೆ ಮಾಡಲಿದ್ದಾರೆ. ಸಂಸದ ವಿ.ಶ್ರೀನಿವಾಸಪ್ರಸಾದ್ ಅಧ್ಯಕ್ಷತೆ ವಹಿಸಲಿದ್ದು, ಆರ್‌ಎಸ್‌ಎಸ್ ಹಿರಿಯ ಮುಖಂಡ ಮಾ.ವೆಂಕಟರಾಮ್ ಮತ್ತಿತರರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ರಾಜೀನಾಮೆ: ಸಂಜಯ್ ಗಾಂಧಿ ಆಸ್ಪತ್ರೆಯ ಕೀಲು ಮತ್ತು ಮೂಳೆ ವಿಭಾಗದ ಮುಖ್ಯಸ್ಥರ ಹುದ್ದೆಗೆ ಸ್ವಇಚ್ಛೆಯಿಂದ ರಾಜೀನಾಮೆ ನೀಡಿದ್ದೇನೆ. ಚಾ.ನಗರ ಲೋಕಸಭಾ ಕ್ಷೇತ್ರಕ್ಕೆ ಬಿಜೆಪಿಯಿಂದ ಆಕಾಂಕ್ಷಿಯಾಗಿದ್ದು, ಕಳೆದ ಬಾರಿ ವಿ. ಶ್ರೀನಿವಾಸಪ್ರಸಾದ್ ಸ್ಪರ್ಧಿಸಿದ್ದರಿಂದ ನಾನು ಹಿಂದೆ ಸರಿದಿದ್ದೆ. ಈ ಬಾರಿ ಪಕ್ಷದ ವರಿಷ್ಠರು ನನಗೆ ಟಿಕೆಟ್ ನೀಡುತ್ತಾರೆ ಎಂಬ ವಿಶ್ವಾಸದಿಂದ ಹುದ್ದೆಗೆ ರಾಜೀನಾಮೆ ನೀಡಿದ್ದೇನೆ ಎಂದರು.

ಸುದ್ದಿಗೋಷ್ಠಿಯಲ್ಲಿ ಡಾ.ಎಂ.ಎಸ್. ಮೋಹನ್ ಬಳಗದ ಅಧ್ಯಕ್ಷ ಕೆ.ಆರ್. ಲೋಕೇಶ್, ಮುಖಂಡರಾದ ಕೂಡ್ಲೂರು ಹನುಮಂತಶೆಟ್ಟಿ, ಪಣ್ಯದಹುಂಡಿ ರಾಜು, ಜಯರಾಮಶೆಟ್ಟಿ ಇತರರರು ಇದ್ದರು.

ಮೈಸೂರು ಮಿತ್ರ

ನೀವೊಬ್ಬ ಮಿನಿಸ್ಟರು, ಜವಾಬ್ದಾರಿ ಇರಲಿ

ಸನಾತನ ಧರ್ಮ ಅಳಿಸಬೇಕೆಂದಿದ್ದ ಉದಯನಿಧಿ ಸ್ಟಾಲಿನ್‌ಗೆ ಸುಪ್ರೀಂ ಎಚ್ಚರಿಕೆ



ನವದೆಹಲಿ, ಮಾ.4–ಸನಾತನ ಧರ್ಮದ ವಿರುದ್ಧ ಕಟುವಾಗಿ ಮಾತನಾಡಿದ್ದ ತಮಿಳುನಾಡಿನ ಸಚಿವ ಉದಯನಿಧಿ ಸ್ಟಾಲಿನ್ ಅವರಿಗೆ ಸುಪ್ರೀಂಕೋರ್ಟ್ ಜವಾಬ್ದಾರಿಯ ಪಾಠ ಹೇಳಿದೆ. ಸೂಕ್ಷ್ಮ ವಿಚಾರಗಳಲ್ಲಿ ಯಾವ ರೀತಿ ಮಾತನಾಡಬೇಕು ಎಂಬ ಜವಾಬ್ದಾರಿ ಸಚಿವರಾದವರಿಗೆ ಇರಬೇಕು. ಪದಪ್ರಯೋಗದಲ್ಲಿ ಎಚ್ಚರಿಕೆ ವಹಿಸಬೇಕಿತ್ತು ಎಂದು ಸಿಎಂ ಸ್ಟಾಲಿನ್ ಅವರ ಮಗನಾದ ಉದಯನಿಧಿಗೆ ಕೋರ್ಟ್ ತಿಳಿಹೇಳಿದೆ. ಸನಾತನ ಧರ್ಮ ವಿರುದ್ಧ ಸ್ಟಾಲಿನ್ ನೀಡಿದ ಹೇಳಿಕೆಗಳ ವಿರುದ್ಧ ದೇಶದ ವಿವಿಧೆಡೆ ಎಫ್‌ಐಆರ್‌ಗಳು ದಾಖಲಾಗಿವೆ. ಅವೆಲ್ಲವನ್ನೂ ಒಂದು ಸೇರಿಸಬೇಕು ಎಂದು ಸ್ಟಾಲಿನ್ ಮಾಡಿಕೊಂಡ ಮನವಿಯ ವಿಚಾರಣೆಯನ್ನು ಸರ್ವೋಚ್ಚ ನ್ಯಾಯಾಲಯ ನಡೆಸುತ್ತಿದೆ. ಮಾರ್ಚ್ 15ಕ್ಕೆ ಮುಂದಿನ ವಿಚಾರಣೆ ನಡೆಯಲಿದೆ.

ಉತ್ತರಪ್ರದೇಶ, ಕರ್ನಾಟಕ ಸೇರಿದಂತೆ ಆರು ರಾಜ್ಯಗಳಲ್ಲಿ ಉದಯನಿಧಿ ಮೇಲೆ ಎಫ್‌ಐಆರ್‌ಗಳು ದಾಖಲಾಗಿವೆ. ಈ ಸಂಬಂಧ ಜಾಮೀನು ನೀಡುವಂತೆ ಉದಯನಿಧಿ ಪರ ವಕೀಲ ಅಭಿಷೇಕ್ ಮನು ಸಿಂಘ್ವಿ ಅರ್ಜಿ ಹಾಕಿದ್ದರು. ಸಂಜೀವ್ ಖನ್ನ ಮತ್ತು ದೀಪಾಂಕರ್ ದತ್ತ ಅವರಿರುವ ಸರ್ವೋಚ್ಚ ನ್ಯಾಯಪೀಠ ಇದರ ವಿಚಾರಣೆ ನಡೆಸಿ, ಸಂಬಂಧಪಟ್ಟ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸುವಂತೆ ಸ್ಟಾಲಿನ್ ಪರ ವಕೀಲರಿಗೆ ತಿಳಿಸಿತು.

ಆದರೆ, ಆರು ರಾಜ್ಯಗಳಲ್ಲಿ ಪ್ರಕರಣಗಳಿರುವುದರಿಂದ ಆರು ಹೈಕೋರ್ಟ್‌ಗಳಿಗೆ ಹೋಗಬೇಕಾಗುತ್ತದೆ ಎಂದು ಹತಾಶೆ ತೋರ್ಪಡಿಸಿದ ಸಿಂಘ್ವಿ ನೂಪುರ್ ಶರ್ಮಾ ಪ್ರಕರಣವನ್ನು ಉಲ್ಲೇಖಿಸಿ ವಿವಿಧ ಎಫ್‌ಐಆರ್‌ಗಳನ್ನು ಒಂದುಗೂಡಿಸುವಂತೆ ಕೇಳಿಕೊಂಡರು. ಇದಕ್ಕೆ ನ್ಯಾಯಪೀಠ, ಹೇಳಿಕೆ ಕೊಡುವ ಮುಂಚೆ ಯೋಚಿಸಬೇಕಿತ್ತು ಎಂದು ತಿವಿಯಿತು.

ಸಂವಿಧಾನದಲ್ಲಿ ವಾಕ್ ಸ್ವಾತಂತ್ರ್ಯದ ಹಕ್ಕನ್ನು ದುರ್ಬಳಕೆ ಮಾಡಿಕೊಂಡಿದ್ದೀರಿ. ಧಾರ್ಮಿಕ ಸ್ವಾತಂತ್ರ್ಯದ ಹಕ್ಕನ್ನು ದುರ್ಬಳಕೆ ಮಾಡಿಕೊಂಡಿದ್ದೀರಿ. ಈಗ ಸಂವಿಧಾನದ 32ನೇ ಆರ್ಟಿಕಲ್ ಅಡಿಯಲ್ಲಿ ನಿಮ್ಮ ಹಕ್ಕು ಪಡೆಯಲು ಹೊರಟಿದ್ದೀರಾ ನೀವು ಹೇಳಿದ ಪರಿಣಾಮಗಳೇನು ಗೊತ್ತಾ, ಎಂದು ವಕೀಲ ಸಿಂಘ್ವಿ ಮೂಲಕ ಉದಯನಿಧಿ ಸ್ಟಾಲಿನ್‌ಗೆ ಕೋರ್ಟ್ ಪ್ರಶ್ನೆ ಮಾಡಿತು.

ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರ ಮಗ ಮತ್ತು ಆ ಸರ್ಕಾರದಲ್ಲಿ ಸಚಿವರೂ ಆಗಿರುವ ಉದಯನಿಧಿ ಸ್ಟಾಲಿನ್ ಅವರು ಕೆಲ ತಿಂಗಳ ಹಿಂದೆ, ಸನಾತನ ಧರ್ಮದ (ಹಿಂದೂ ಧರ್ಮ) ವಿರುದ್ಧ ವಾಗ್ದಾಳಿ ನಡೆಸಿದ್ದರು.

ಮಲೇರಿಯಾ, ಡೆಂಗಿ ರೋಗ ತರುವ ವೈರಾಣುಗಳನ್ನು ನಾಶ ಮಾಡುತ್ತೇವೆ. ಸನಾತನ ಧರ್ಮ ಕೂಡ ಕೊರೋನಾ ವೈರಸ್, ಮಲೇರಿಯಾದಂತೆ. ಆ ಧರ್ಮವು ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾಗಿದೆ. ಅದನ್ನು ನಾಶಪಡಿಸಬೇಕು ಎಂದು ಉದಯನಿಧಿ ಸ್ಟಾಲಿನ್ ಹೇಳಿಕೆ ನೀಡಿದ್ದರು. ತಮ್ಮ ಹೇಳಿಕೆಯನ್ನು ಅವರು ಹಲವು ಬಾರಿ ಸಮರ್ಥಿಸಿಕೊಂಡಿರುವುದೂ ಹೌದು.

ಮೈಸೂರಿನ 31 ಆರೋಗ್ಯ ಕೇಂದ್ರಗಳಲ್ಲಿ ಹಾವು ಕಡಿತಕ್ಕೆ ಚಿಕಿತ್ಸಾ ವ್ಯವಸ್ಥೆ

2024ರ ಜನವರಿ, ಫೆಬ್ರವರಿಯಲ್ಲಿ ಜಿಲ್ಲೆಯಾದ್ಯಂತ 32 ಹಾವು ಕಚ್ಚಿದ ಪ್ರಕರಣ ವರದಿ

ಮೈಸೂರು, ಮಾ.4(ಆರ್‌ಕೆ)–ಮೈಸೂರು ಜಿಲ್ಲೆಯಾದ್ಯಂತ ಎಲ್ಲಾ ತಾಲೂಕು ಸಾರ್ವಜನಿಕ ಆಸ್ಪತ್ರೆ ಸೇರಿದಂತೆ 31 ಆರೋಗ್ಯ ಕೇಂದ್ರಗಳಲ್ಲಿ ಹಾವು ಕಡಿತಕ್ಕೆ ಚಿಕಿತ್ಸೆ ನೀಡುವ ವ್ಯವಸ್ಥೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಲ್ಪಿಸಿದೆ.

ಈ ಮೊದಲು ಮೈಸೂರಿನ ಕೆ.ಆರ್. ಆಸ್ಪತ್ರೆ, ಜಿಲ್ಲಾಸ್ಪತ್ರೆಯಲ್ಲಿ ಮಾತ್ರ ಹಾವು ಕಡಿದರೆ ಚಿಕಿತ್ಸೆಗಾಗಿ ಆಂಟಿವೆನಮ್ ಚುಚ್ಚುಮದ್ದು ನೀಡಲಾಗುತ್ತಿತ್ತು ಆದರೆ ಹೆಚ್‌ಡಿಕೋಟೆ, ಹುಣಸೂರು, ಪಿರಿಯಾಪಟ್ಟಣ ಸೇರಿದಂತೆ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಂತಿರುವ ತಾಲ್ಲೂಕಿನ ಗ್ರಾಮಗಳಲ್ಲಿ ಹಾವು ಕಚ್ಚಿದ ಪ್ರಕರಣಗಳು ಜಾಸ್ತಿಯಾಗುತ್ತಿರುವ ಹಿನ್ನಲೆಯಲ್ಲಿ ತಕ್ಷಣ ಚಿಕಿತ್ಸೆ ನೀಡಿ ಅಪಾಯದಿಂದ ಪಾರು ಮಾಡುವ ಉದ್ದೇಶದಿಂಥ ತಾಲೂಕು ಕೇಂದ್ರದ ಕೆಲ ಆಯ್ದ ಪ್ರಾಥಮಿಕ ಆರೋಗ್ಯ ಕೇಂದ್ರ (PHC) ಸಮುದಾಯ ಆರೋಗ್ಯ ಕೇಂದ್ರ (CHC) ಗಳಲ್ಲೂ ಚಿಕಿತ್ಸಾ ವ್ಯವಸ್ಥೆ ಮಾಡಲಾಗಿದೆ.

ಆಶಾ ಮತ್ತು ಆರೋಗ್ಯ ಕಾರ್ಯಕರ್ತರು ಹಾವು ಕಡಿತಕ್ಕೊಳಗಾದವರನ್ನು ತಕ್ಷಣ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದು ಚಿಕಿತ್ಸೆ ಕೊಡಿಸಬೇಕೆಂದು ಸರ್ಕಾರ ಜವಾಬ್ದಾರಿ ವಹಿಸಿದೆ. ಜಿಲ್ಲಾ ಆರೋಗ್ಯಾಧಿಕಾರಿಗಳು ಈ ಕುರಿತು ತರಬೇತಿ ನೀಡಿ ಸಜ್ಜುಗೊಳಿಸುವಂತೆ ಸರ್ಕಾರ ಸಂಬಂಧಿಸಿದ ಆರೋಗ್ಯ ಅಧಿಕಾರಿಗಳಿಗೆ ಸೂಚನೆ ನೀಡಿದೆ.



ಈ ಬಗ್ಗೆ ಮಾಹಿತಿ ನೀಡಿದ ಮೈಸೂರು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರ ಸ್ವಾಮಿ, ಸರ್ಕಾರದ ಮಾರ್ಗಸೂಚಿಯಂತೆ ಜಿಲ್ಲೆಯ 16 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 9 ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ 6 ತಾಲೂಕು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಹಾವು ಕಡಿತಕ್ಕೆ ಆಂಟಿವೆನಮ್ ಇಂಜೆಕ್ಷನ್ ನೀಡುವ ಸೌಲಭ್ಯ ಕಲ್ಪಿಸಲಾಗಿದೆ ಎಂದರು.

ತಿ.ನರಸೀಪುರ, ನಂಜನಗೂಡು, ಹೆಚ್‌ಡಿ.ಕೋಟೆ, ಹುಣಸೂರು, ಪಿರಿಯಾಪಟ್ಟಣ ಹಾಗೂ ಕೆ.ಆರ್ ನಗರ ಸಾರ್ವಜನಿಕ ಆಸ್ಪತ್ರೆಗಳು, ಬನ್ನೂರು, ತಲಕಾಡು, ಜಯಪುರ, ಜಯನಗರ, ಸಾಲಿಗ್ರಾಮ, ಹುಲ್ಲಹಳ್ಳಿ, ತಗಡೂರು, ಸರಗೂರು ಮತ್ತು ಮುಂಗೂರು ಸಮುಧಾಯ ಆರೋಗ್ಯ ಕೇಂದ್ರ (CHC) ಗಳಲ್ಲಿ ಚುಚ್ಚು ಮದ್ದು ನೀಡಲಾಗುವುದು ಎಂದು ಅವರು ತಿಳಿಸಿದರು.

2022ರ ಜನವರಿಯಿಂದ ಡಿಸೆಂಬರ್ ವರೆಗೆ ಮೈಸೂರು ಜಿಲ್ಲೆಯಲ್ಲಿ 183 ಹಾವು ಕಚ್ಚಿದ ಪ್ರಕ ರಣ ವರದಿಯಾಗಿದ್ದು ಆ ಪೈಕಿ 3 ಮೈಸೂರು ನಗರ, 8 ಗ್ರಾಮಂತರ, 43 ತಿ.ನರಸೀಪುರ, 19 ನಂಜನ ಗೂಡು, 22 ಹೆಚ್‌ಡಿ.ಕೋಟೆ, 28 ಹುಣಸೂರು, 27 ಪಿರಿಯಾ ಪಟ್ಟಣ ಮತ್ತು ಕೆಆರ್. ನಗದಲ್ಲಿ 33 ಸ್ನೇಕ್ ಬೈಟ್ ಪ್ರಕರಣ ಗಳು ವರದಿಯಾಗಿದ್ದವು. ತಾಲೂಕಲ್ಲಿ 13, ತಿ.ನರಸೀಪುರದಲ್ಲಿ 35, ನಂಜನಗೂಡಲ್ಲಿ 23, ಹೆಚ್.ಡಿ. ಕೋಟೆಯಲ್ಲಿ 38, ಹುಣಸೂರಲ್ಲಿ 32, ಪಿರಿಯಾಪಟ್ಟಣದಲ್ಲಿ 29 ಹಾಗೂ ಕೆಆರ್. ನಗರದಲ್ಲಿ 27 ಪ್ರಕರಣಗಳು ವರದಿಯಾಗಿ ದ್ದವು. 2024ರ ಜನವರಿಯಿಂದ ಫೆಬ್ರವರಿ 29 ರ ವರೆಗೆ 32 ಪ್ರಕರಣಗಳು ವರದಿ ಯಾಗಿದ್ದು ಚಿಕಿತ್ಸೆ ನೀಡಲಾಗಿದೆ ಎಂದೂ ತಿಳಿಸಿದರು.

ಹೆರಿಟೇಜ್ ಗಾಲ್ಫ್ ಕ್ಲಬ್‌ಗೆ ಭೂಮಿ ನೀಡಿದ ರೈತರ ಸಮಸ್ಯೆ ಇತ್ಯರ್ಥಕ್ಕೆ ವಾರದ ಗಡುವು



ಜಿಲ್ಲಾ ಪತ್ರಕರ್ತರ ಭವನದಲ್ಲಿ ಹೆರಿಟೇಜ್ ಗಾಲ್ಫ್‌ಕ್ಲಬ್ ನಿರ್ಮಾಣಕ್ಕೆ ಭೂಮಿ ನೀಡಿದ ಕುಟುಂಬಗಳಿಗೆ ನ್ಯಾಯ ಒದಗಿಸುವಂತೆ ರೈತ ಮುಖಂಡ ಉಗ್ರ ನರಸಿಂಗಹೇಗೌಡ ಸುದ್ದಿಗೋಷ್ಠಿಯಲ್ಲಿ ನಡೆಸಿದರು.

ಮೈಸೂರು,ಮಾ.4(ಎಂಟಿವೈ)– ಕೋಚನಹಳ್ಳಿಯಲ್ಲಿ ಹೆರಿಟೇಜ್ ಗಾಲ್ಫ್ ಕ್ಲಬ್‌ಗಾಗಿ ಭೂಮಿ ನೀಡಿ ವಂಚನೆಗೊಳಗಾಗಿರುವ ರೈತರ ಸಮಸ್ಯೆಯನ್ನು ಒಂದು ವಾರದೊಳಗೆ ಬಗೆಹರಿಸದಿದ್ದರೆ ಗಾಲ್ಫ್‌ಕ್ಲಬ್ ಬೇಲಿ ಕಿತ್ತು ಹಾಕುವುದಾಗಿ ರೈತ ಮುಖಂಡ ಉಗ್ರ ನರಸಿಂಹೇಗೌಡ ಎಚ್ಚರಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಕೋಚನಹಳ್ಳಿ ಭೂಮಿ ಕಳೆದುಕೊಂಡ ರೈತರ ಹೋರಾಟ ಸಮಿತಿ ವತಿಯಿಂದ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 18 ವರ್ಷದ ಹಿಂದೆ ಕೋಚನಹಳ್ಳಿಯಲ್ಲಿ ರೈತರಿಂದ ಹೆರಿಟೇಜ್ ಗಾಲ್ಫ್ ಕ್ಲಬ್ ನಿರ್ಮಾಣಕ್ಕಾಗಿ ಭೂಮಿ ಖರೀದಿಸಲಾಗಿದೆ. ಈ ವೇಳೆ ಭೂಮಿ ನೀಡಿದ ರೈತರ ಕುಟುಂಬದ ಸದಸ್ಯರಿಗೆ ಖಾಯಂ ಉದ್ಯೋಗ ನೀಡುವುದಾಗಿ ಭರವಸೆ ನೀಡಲಾಗಿತ್ತು. ಆದರೆ ಗಾಲ್ಫ್ ಕ್ಲಬ್ ನಿರ್ಮಾಣ ಮಾಡದೆ, ಬೇನಾಮಿ ವ್ಯಕ್ತಿಗಳ ಅಕ್ರಮ ವ್ಯವಹಾರಕ್ಕಾಗಿ ಭೂಮಿ ಖರೀದಿಸಿರುವುದು ತಿಳಿದು ಬಂದಿದೆ. ಈ ಕುರಿತ ಹೋರಾಟ ಮೂರು ವರ್ಷಗಳಿಂದ ನಡೆಯುತ್ತಿದ್ದರೂ ವಿವಾದ ಬಗೆಹರಿಸಿಲ್ಲ. ಇದರಿಂದ ಭೂಮಿ ಕಳೆದುಕೊಂಡ ರೈತ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ ಎಂದು ಆರೋಪಿಸಿದರು.

ಗ್ರಾಮದ 110 ಕುಟುಂಬಗಳು 220 ಎಕರೆ ಭೂಮಿಯನ್ನು ಹೆರಿಟೇಜ್ ಗಾಲ್ಫ್ ಕ್ಲಬ್ ಹೆಸರಿನ ಸಂಸ್ಥೆಗೆ ನೀಡಿವೆ. ಭೂಮಿ ಪಡೆದಿದ್ದರೂ ಗಾಲ್ಫ್ ಕ್ಲಬ್ ನಿರ್ಮಾಣವಾಗಿಲ್ಲ, ಅಲ್ಲದೆ, ಆ ಕಂಪನಿಯನ್ನು ಮುಚ್ಚಲಾಗಿದೆ. ಗಾಲ್ಫ್ ಕ್ಲಬ್ ಹೆಸರಲ್ಲಿ ಪ್ರಮುಖ ಮೂರೂ ಪಕ್ಷಗಳ ಮುಖಂಡರು ಬೇನಾಮಿ ಹೆಸರಿನಲ್ಲಿ ರೈತರ ಭೂಮಿ ಖರೀದಿಸಿರುವ ಶಂಕೆಯಿದೆ. ಹೀಗಾಗಿ ಇನ್ನು ಒಂದು ವಾರದೊಳಗೆ ಸಮಸ್ಯೆ ಬಗೆಹರಿಸದಿದ್ದರೆ ಈಗ ಹಾಕಿರುವ ತಂತಿ ಬೇಲಿ ಕಿತ್ತು ರೈತರು ಹೋರಾಟ ನಡೆಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಭೂಮಿ ಕಳೆದುಕೊಂಡವರ ಹೋರಾಟ ಸಮಿತಿಯ ಮುಖಂಡರಾದ ಚಂದ್ರಶೇಖರ ಮೇಟಿ, ಆನಂದೂರು ಪ್ರಭಾಕರ್, ಮಹೇಶ್, ನಾಗನಹಳ್ಳಿ ವಿಜೇಂದ್ರ ಇದ್ದರು.

ಮಾ.15ರಂದು ಕದಂಬ ರಂಗ ಪ್ರಶಸ್ತಿ ಪ್ರದಾನ ಸಮಾರಂಭ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ರಂಗಕರ್ಮಿ ರಾಜಶೇಖರ ಕದಂಬ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು,ಮಾ.4(ಎಂಟಿವೈ)– ಮೈಸೂರಿನ ಕಲಾಮಂದಿರದ ಕಿರುರಂಗ ಮಂದಿರದಲ್ಲಿ ಮಾ.15ರಂದು ಸಂಜೆ 6.30ಕ್ಕೆ ಕದಂಬ ರಂಗ ವೇದಿಕೆ ವತಿಯಿಂದ ರೋಟರಿ ಕದಂಬ ರಂಗ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಕದಂಬ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2024ನೇ ಸಾಲಿನ ರೋಟರಿ ಕದಂಬ ರಂಗ ಪ್ರಶಸ್ತಿಯನ್ನು ನಟಿ ಶೈಲಜಾ ಹಾಗೂ ನಾಟಕಕಾರ ಉದಯ್‌ಕುಮಾರ್ ಗೆಜ್ಜೆಹೆಜ್ಜೆ ಅವರಿಗೆ ನೀಡಲಾಗುತ್ತಿದೆ. ಮಾ.15ರಂದು ಸಂಜೆ 6.30ಕ್ಕೆ ಈ ಪ್ರಶಸ್ತಿಯನ್ನು ಹಿರಿಯ ನಟಿ ಗಿರಿಜಾ ಲೋಕೇಶ್ ಪ್ರದಾನ ಮಾಡಲಿದ್ದಾರೆ. ಕದಂಬ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ, ರೋಟರಿ ವಲಯ–8ರ ಸಹಾಯಕ ಗೌವರ್ನರ್ ಎಂ.ಕೆ.ನಂಜಯ್ಯ, ರೋಟರಿ ಮೈಸೂರು ಉತ್ತರದ ಅಧ್ಯಕ್ಷ ಎಂ.ಕೆ. ಶ್ರೀಧರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದ ಬಳಿಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಬೆಂಗಳೂರಿನ ಪಯಣ ತಂಡದಿಂದ ಅರುಣ್ ಸೂರ್ಯ ನಿರ್ದೇಶನ ಹಾಸ್ಯಮಯ ಹಾಗೂ ಸಂಗೀತಮಯ ನಾಟಕ 'ನಮ್ಗೇನ್ ಬೆಲೆನೇ ಇಲ್ವಾ' ಪ್ರದರ್ಶನ ಜರುಗಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರೋಟರಿ ಸಂಸ್ಥೆಯ ಎಂ.ಕೆ. ನಂಜಯ್ಯ, ರಾಜು, ಸುಬ್ಬನರಸಿಂಹ, ಡಿ. ತಿಪ್ಪಣ್ಣ ಇದ್ದರು.

ಚುನಾವಣಾ ಬಾಂಡ್ ನಿಷೇಧ: ಮಾಹಿತಿ ನೀಡಲು ಗಡುವು ವಿಸ್ತರಿಸುವಂತೆ ಕೋರಿ ಸುಪ್ರೀಂ ಮೆಟ್ಟಿಲೇರಿದ ಎಸ್‌ಬಿಐ



ನವದೆಹಲಿ: ಚುನಾವಣಾ ಬಾಂಡ್‌ಗಳನ್ನು ನಿಷೇಧಿಸಿರುವ ಸುಪ್ರೀಂಕೋರ್ಟ್, ಮಾರ್ಚ್ 6 ರೊಳಗೆ ರಾಜಕೀಯ ಪಕ್ಷಗಳು ನಗದೀಕರಿಸಿದ ಪ್ರತಿ ಚುನಾವಣಾ ಬಾಂಡ್‌ಗಳ ವಿವರಗಳ ನೀಡುವಂತೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಎಸ್‌ಬಿಐ)ಗೆ ಸೂಚಿಸಿದೆ. ಆದರೆ ವಿವರ ನೀಡಲು ಜೂನ್ 30 ರವರೆಗೆ ಗಡುವು ವಿಸ್ತರಿಸಬೇಕು ಎಂದು ಕೋರಿ ಎಸ್‌ಬಿಐ ಸೋಮವಾರ ಸುಪ್ರೀಂಕೋರ್ಟ್‌ಗೆ ಮನವಿ ಸಲ್ಲಿಸಿದೆ. ಉನ್ನತ ನ್ಯಾಯಾಲಯಕ್ಕೆ ಸಲ್ಲಿಸಿದ ಅರ್ಜಿಯಲ್ಲಿ, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ(ಎಸ್‌ಬಿಐ) 'ಪ್ರತಿ ಸಿಲೋ'ದಿಂದ ಮಾಹಿತಿಯನ್ನು ಮರುಪಡೆಯುವುದು ಮತ್ತು ಒಂದು ಸಿಲೋದ ಮಾಹಿತಿಯನ್ನು ಇನ್ನೊಂದಕ್ಕೆ ಹೊಂದಿಸುವ ಪ್ರಕ್ರಿಯೆಗೆ ಸಾಕಷ್ಟು ಸಮಯ ತೆಗೆದುಕೊಳ್ಳುತ್ತದೆ ಎಂದು ಪ್ರತಿಪಾದಿಸಿದೆ. ದಾನಿಗಳ ಗುರುತನ್ನು ಅನಾಮಧೇಯವಾಗಿ ಇಡುವುದನ್ನು ಖಚಿತಪಡಿಸಿಕೊಳ್ಳಲು ಕೈಗೊಂಡ ಕಟ್ಟುನಿಟ್ಟಿನ ಕ್ರಮಗಳಿಂದಾಗಿ ಚುನಾವಣಾ ಬಾಂಡ್‌ಗಳನ್ನು 'ಡಿಕೋಡಿಂಗ್' ಮಾಡುವುದು ಮತ್ತು ನೀಡಿದ ದೇಣಿಗೆಗಳಿಗೆ ದಾನಿಗಳನ್ನು ಹೊಂದಿಸುವುದು ಸಂಕೀರ್ಣ ಪ್ರಕ್ರಿಯೆಯಾಗಿದೆ. ಹೀಗಾಗಿ ಮಾಹಿತಿ ನೀಡಲು ಜೂನ್ 30ರವರೆಗೆ ಸಮಯ ನೀಡುವಂತೆ ಎಸ್‌ಬಿಐ ಕೇಳಿಕೊಂಡಿದೆ.

ರಾಜಕೀಯ ಪಕ್ಷಗಳು ನಗದಾಗಿ ಪರಿವರ್ತಿಸಿಕೊಂಡ ಪ್ರತಿಯೊಂದು ಚುನಾವಣಾ ಬಾಂಡ್‌ಗಳ ಕುರಿತು ಎಸ್‌ಬಿಐ ನಗದಿನ ದಿನಾಂಕ, ಮುಖಬೆಲೆ ಸೇರಿದಂತೆ ಪ್ರತಿಯೊಂದು ಮಾಹಿತಿಯನ್ನು ಬಹಿರಂಗಗೊಳಿಸಬೇಕು ಎಂದು ಸುಪ್ರೀಂ ಕೋರ್ಟ್ ಆದೇಶಿಸಿದೆ.

ಕೃಷಿಕ್ ಸರ್ವೋದಯ ಪ್ರತಿಷ್ಠಾನದಿಂದ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಕೃಷಿಕ್ ಸರ್ವೋದಯ ಪ್ರತಿಷ್ಠಾನದ ವತಿಯಿಂದ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಕಾರ್ಯಾಗಾರದ ಕುರಿತು ಕೃಷಿಕ್ ಪ್ರತಿಷ್ಠಾನದ ಅಧ್ಯಕ್ಷ ಎಂ.ಕೆ.ಶಂಕರಲಿಂಗೌಡ ಮಾತನಾಡಿದರು.

ಮೈಸೂರು,ಮಾ.4(ಎಂಟಿವೈ)– ಮೈಸೂರಿನ ವಿಜಯನಗರ ಎರಡನೇ ಹಂತದಲ್ಲಿರುವ ಕೃಷಿಕ್ ಸರ್ವೋದಯ ಪ್ರತಿಷ್ಠಾನದ ವತಿಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆ ಎಂದು ನಿವೃತ್ತ ಐಎಎಸ್ ಅಧಿಕಾರಿ, ಸಂಸ್ಥೆಯ ಅಧ್ಯಕ್ಷ ಎಂ.ಕೆ. ಶಂಕರಲಿಂಗೇಗೌಡ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ತರಬೇತಿ ಕಾರ್ಯಾಗಾರದಲ್ಲಿ ಐಎಎಸ್, ಐಪಿಎಸ್. ಐಎಫ್‌ಎಸ್, ಕೆಎಎಸ್, ಕೆಇಎಸ್, ಕೆಪಿಎಸ್‌ಸಿ ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉತ್ತಮ ತರಬೇತಿ ನೀಡಲಾಗುತ್ತಿದೆ. 1998ರಲ್ಲಿ ಮೈಸೂರು ಶಾಖೆಯನ್ನು ಆರಂಭಿಸಲಾಗಿದ್ದು, ಇದುವರೆಗೆ 206ಕ್ಕೂ ಹೆಚ್ಚು ತರಬೇತಿ ಕಾರ್ಯಾಗಾರ ನಡೆಸಲಾಗಿದೆ. ತರಬೇತಿ ಪಡೆದ ಗ್ರಾಮೀಣ ಪ್ರದೇಶದ ಹಲವು ಅಭ್ಯರ್ಥಿಗಳು ಸರ್ಕಾರಿ ಉದ್ಯೋಗ ಪಡೆದಿದ್ದಾರೆ. ಇದೊಂದು ಸ್ವಯಂ ಸೇವಾ ಟ್ರಸ್ಟ್ ಆಗಿದ್ದು, ಸಮಾಜದ ಆರ್ಥಿಕವಾಗಿ ಹಿಂದುಳಿದ ಹಾಗೂ ಗ್ರಾಮೀಣ ಪ್ರದೇಶದ ಪ್ರತಿಭಾವಂತರು ಯಶಸ್ವಿಯಾಗಿ ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ನೆರವಾಗುತ್ತಿದೆ. ಹೀಗಾಗಿ ಆಸಕ್ತರು ಪ್ರಯೋಜನ ಪಡೆಯಬೇಕೆಂದು ಸಲಹೆ ನೀಡಿದರು.

ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುತ್ತದೆ. ಅಭ್ಯರ್ಥಿಗಳಿಗೆ ವಸತಿ ನಿಲಯ(ಪುರುಷರಿಗೆ 25, ಮಹಿಳೆಯರಿಗೆ 25ಮಂದಿಗೆ)ದ ವ್ಯವಸ್ಥೆಯಿದೆ. ಡಿಜಿಟಲ್ ಸ್ಟುಡಿಯೋ ರೂಮ್, ಡಿಜಿಟಲ್ ಲೈಬ್ರರಿ, ಸ್ಟಡಿ ಮೆಟಿರಿಯಲ್, ರಿಯಾಯಿತಿ ದರದಲ್ಲಿ ಉಪಾಹಾರ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನೂ ನೀಡಲಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0821-2301564, 0821-2301564563 ಸಂಪರ್ಕಿಸುವಂತೆ ಕೋರಿದರು.

ಸುದ್ದಿಗೋಷ್ಠಿಯಲ್ಲಿ ಕೃಷಿಕ್ ಸರ್ವೋದಯ ಪ್ರತಿಷ್ಠಾನದ ಪದಾಧಿಕಾರಿಗಳಾದ ಡಾ.ಕೆ. ಚಿದಾನಂದಗೌಡ, ಕೆ.ಎಂ. ಚಂದ್ರಶೇಖರ್, ಪಿ. ಶಾರದಮ್ಮ, ಹೆಚ್. ಕಿಶೋರ್‌ಚಂದ್ರ ವೈಕೆ ಕೆಂಚೇಗೌಡ ಇದ್ದರು.

ವಿಧಾನಸೌಧ ಆವರಣದಲ್ಲಿ ಪಾಕ್ ಪರ ಘೋಷಣೆ ಕೂಗಿರುವುದು ದೃಢ


ಬಿಜೆಪಿ ಟ್ವೀಟ್ ಮೂಲಕ ಸರ್ಕಾರದ ವಿರುದ್ಧ ವಾಗ್ದಾಳಿ

ಬೆಂಗಳೂರು: ರಾಜ್ಯಸಭೆ ಚುನಾವಣೆಯಲ್ಲಿ ಗೆದ್ದ ಕಾಂಗ್ರೆಸ್‌ನ ಡಾ.ನಾಸಿರ್ ಹುಸೇನ್ ಪರ ಬೆಂಬಲಿಗರು ವಿಧಾನಸೌಧ ಆವರಣದಲ್ಲಿ ಸಂಭ್ರಮಾಚರಣೆ ಮಾಡುವ ವೇಳೆ 'ಪಾಕಿಸ್ತಾನ ಜಿಂದಾಬಾದ್' ಘೋಷಣೆ ಕೂಗಿರುವುದು ವಿಧಿ ವಿಜ್ಞಾನ ಪ್ರಯೋಗಾಲಯ ಪರೀಕ್ಷೆಯಲ್ಲಿ ದೃಢವಾಗಿದೆ ಎಂದು ಬಿಜೆಪಿ ಹೇಳುತ್ತಿದೆ.

ಈ ಕುರಿತು ಟ್ವೀಟ್ ಮಾಡಿರುವ ಬಿಜೆಪಿ ವಿಧಾನಸೌಧದ ಒಳಗೆ ಪಾಕಿಸ್ತಾನ ಪರ ಘೋಷಣೆ ಕೂಗಿರುವುದು ಎಫ್‌ಎಸ್‌ಎಲ್ ವರದಿಯಲ್ಲಿ ಬಹಿರಂಗವಾಗಿದೆ. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗಿದ್ದನ್ನು 'ನಾಸೀರ್ ಸಾಬ್ ಜಿಂದಾಬಾದ್' ಎಂದು ತಿರುಚಿ ಕನ್ನಡಿಗರಿಗೆ ಟೋಪಿ ಹಾಕಲು ಹೊರಟ ಹುನ್ನಾರ ಈಗ FSL ವರದಿಯಲ್ಲಿ ಬಟಾ ಬಯಲಾಗಿದೆ ಎಂದು ಕಾಂಗ್ರೆಸ್ ವಿರುದ್ಧ ಕಿಡಿಕಾರಿದೆ.

ಸತ್ಯವನ್ನೇ ತಿರುಚಿ ಸುಳ್ಳು ಪ್ರಚಾರ ಮಾಡಿದ ಕಾಂಗ್ರೆಸ್ಸಿಗರೇ ಸುಳ್ಳು ಸುದ್ದಿಗಳ ಸೃಷ್ಟಿಕರ್ತರು ಎಂಬುದನ್ನು ವೈಜ್ಞಾನಿಕ ವರದಿ ಬಹಿರಂಗಪಡಿಸಿದೆ. ರಾಷ್ಟ್ರ ವಿರೋಧಿ ಧೋರಣೆಯ ಕಾಂಗ್ರೆಸ್ ಹಾಗೂ ಸುಳ್ಳು ಸುದ್ದಿ ಕಾರ್ಖಾನೆಯ ಮುಖ್ಯಸ್ಥ ಪ್ರಿಯಾಂಕ್ ಖರ್ಗೆ ಅವರು ಈಗಲಾದರೂ ತಮ್ಮ ದೇಶದ್ರೋಹದ ಕೃತ್ಯವನ್ನು ಒಪ್ಪಿಕೊಂಡು ವಿಧಾನಸೌಧದ ಎದುರು ಸಾಷ್ಟಾಂಗ ನಮಸ್ಕಾರ ಮಾಡಿ ಕನ್ನಡಿಗರ ಕ್ಷಮೆ ಕೋರಬೇಕು ಎಂದು ಹೇಳಿದೆ.

ಆದರೆ ಈ ವರದಿಯನ್ನು ಸಂವಾದ ಫೌಂಡೇಶನ್ ಎಂಬ ಖಾಸಗಿ ಸಂಸ್ಥೆ ತಯಾರಿಸಿದೆ ಎಂದು ಹೇಳಲಾಗುತ್ತಿದ್ದು ಇದರ ಸತ್ಯಾಸತ್ಯತೆ ಬಗ್ಗೆ ಪರಿಶೀಲಿಸಬೇಕಿದೆ.



ಗೃಹ ಸಚಿವರು ಹೇಳುವುದೇನು: ಎಫ್‌ಎಸ್‌ಎಲ್ ವರದಿ ಇನ್ನಷ್ಟೇ ಬರಬೇಕಿದೆ. ಆದಷ್ಟು ಬೇಗ ವರದಿ ಕೇಳಿದ್ದೇವೆ. ಇದರಲ್ಲಿ ಮುಚ್ಚಿಡುವಂಥದ್ದೇನಿಲ್ಲ, FSLಗೆ ನೀಡಲಾದ ವೀಡಿಯೊಗಳು ಒಂದು ಚಾನಲ್ ಅಥವಾ ಒಂದು ಕ್ಲಿಪ್‌ನಿಂದ ಅಲ್ಲ. ಹಲವಾರು ಕ್ಲಿಪ್ಪಿಂಗ್‌ಗಳನ್ನು ಭದ್ರಪಡಿಸಿ ಎಫ್‌ಎಸ್‌ಎಲ್‌ಗೆ ನೀಡಲಾಗಿದೆ. ವರದಿ ಬರಬೇಕಿದ್ದು, ವರದಿ ಬಂದರೆ ತಕ್ಷಣ ಕ್ರಮ ಕೈಗೊಳ್ಳುತ್ತೇವೆ ಎಂದು ಗೃಹ ಸಚಿವ ಡಾ ಜಿ ಪರಮೇಶ್ವರ್ ಹೇಳಿದ್ದಾರೆ.

ಈವರೆಗೆ ಏಳು ಮಂದಿಯನ್ನು ಕರೆಸಿ ಹೇಳಿಕೆ ಪಡೆಯಲಾಗಿದೆ. ಜೊತೆಗೆ ಅವರ ಧ್ವನಿ ಮಾದರಿಗಳನ್ನು ಕ್ಲಿಪ್‌ನಲ್ಲಿ ಹೋಲಿಸಲು ದಾಖಲು ಮಾಡಿಕೊಳ್ಳಲಾಗಿದೆ. ಶಂಕಿತನೊಬ್ಬನನ್ನು ವಶಕ್ಕೆ ಪಡೆಯಲಾಗಿದ್ದು, ಆತನ ಧ್ವನಿ ಮಾದರಿಯನ್ನು ಪರೀಕ್ಷೆಗೆ ಕಳುಹಿಸಲಾಗಿದೆ. ಎಫ್‌ಎಸ್‌ಎಲ್ ವರದಿ ಬಂದ ನಂತರ ನಾವು ಮುಂದಿನ ತನಿಖೆಯ ಬಗ್ಗೆ ತಿಳಿಸುತ್ತೇವೆ ಎಂದಿದ್ದಾರೆ.

ಒಂದನೇ ಪುಟದಿಂದ

ಅಶೋಕಪುರಂ ರೈಲ್ವೆ ನಿಲ್ದಾಣ ಲೋಕಾರ್ಪಣೆ

ರೈಲ್ವೆ ನಿಲ್ದಾಣ ತ್ಯಾಜ್ಯಯುಕ್ತ ಪ್ರದೇಶವಾಗಿತ್ತು. ಗುಜರಿ ಅಂಗಡಿಯಂತಿದ್ದ ಈ ನಿಲ್ದಾಣವನ್ನು ಇಂದು ಉನ್ನತೀಕರಣಗೊಳಿಸಲಾಗಿದೆ. ಇದು ಮೈಸೂರಿನ ಎರಡನೇ ರೈಲ್ವೆ ನಿಲ್ದಾಣವಾಗಿದ್ದು, ಮೈಸೂರಿನ ದಕ್ಷಿಣ ಭಾಗದ ಜನರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಅಮೃತ್ ಯೋಜನೆಯಡಿ ಅಶೋಕಪುರಂ ರೈಲ್ವೆ ನಿಲ್ದಾಣವನ್ನು ಅಮೃತ್ ಸ್ಟೇಷನ್ ಆಗಿ ಪರಿವರ್ತಿಸಲಾಗುವುದು. ಇದರ ಅಭಿವೃದ್ಧಿಗೆ ಮತ್ತೆ 40 ಕೋಟಿಗೆ ರೈಲ್ವೆ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಇದು ಅನುಷ್ಠಾನಗೊಂಡರೆ ಅಶೋಕಪುರಂ ರೈಲ್ವೆ ನಿಲ್ದಾಣ ಮಾದರಿ ರೈಲ್ವೆ ನಿಲ್ದಾಣವಾಗಲಿದೆ ಎಂದರು.

ಅಶೋಕಪುರಂ ರೈಲ್ವೆ ನಿಲ್ದಾಣದಿಂದ 4 ಮೆಮು ರೈಲು, ಕಾವೇರಿ ಹಾಗೂ ಮಾಲ್ಗುಡಿ ಎಕ್ಸ್‌ಪ್ರೆಸ್ ಸಂಚಾರ ಆರಂಭಿಸಲು ರೈಲ್ವೆ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಜೊತೆಗೆ ಚಾಮರಾಜನಗರದಿಂದ ಬರುವ ತಿರುಪತಿ ಎಕ್ಸ್‌ಪ್ರೆಸ್ ರೈಲನ್ನು ಇಲ್ಲಿ ನಿಲುಗಡೆ ಮಾಡಲು ಕೂಡ ಕೋರಲಾಗಿದೆ. ಅಲ್ಲದೆ ಇಲ್ಲಿ ಲಿಫ್ಟ್ ಹಾಗೂ ಎಸ್ಕಲೇಟರ್ ಕೂಡ ಅಳವಡಿಸಲಾಗುವುದು. ಇದಲ್ಲದೆ ಕಡಕೊಳ ರೈಲ್ವೆ ನಿಲ್ದಾಣವನ್ನು ಅಭಿವೃದ್ಧಿ ಮಾಡಲಾಗುವುದು ಎಂದರು.

ಮೈಸೂರು ರೈಲ್ವೆ ನಿಲ್ದಾಣವನ್ನು 356 ಕೋಟಿ ವೆಚ್ಚದಲ್ಲಿ ಒಟ್ಟು 12 ಲೇನ್‌ಗಳನ್ನು ನಿರ್ಮಾಣ ಮಾಡಲಾಗುವುದು ಎಂದು ಹೇಳಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಸರ್ಕಾರದಲ್ಲಿ ಅಭಿವೃದ್ಧಿಗೆ ಹಣದ ಕೊರತೆ ಇಲ್ಲ. ಜೊತೆಗೆ ಇಚ್ಛಾಸಕ್ತಿಯ ಕೊರತೆ ಕೂಡ ಇಲ್ಲ. ದುಡಿಯುವ ಎತ್ತಿಗೆ ಹೊರೆ ಹೆಚ್ಚು ಎಂಬಂತೆ ಎಲ್ಲಾ ಕೆಲಸ ಮಾಡಲು ನಮ್ಮ ಸರ್ಕಾರ ಸಮರ್ಥವಾಗಿದೆ ಎಂದು ಪ್ರತಾಪ್ ಸಿಂಹ ತಿಳಿಸಿದರು.

ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್, ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ವಿಜಯ ಹಾಗೂ ವಿನಯ್ ನಾಯಕ್ ವೇದಿಕೆಯಲ್ಲಿದ್ದರು.

ಈ ತನಕ ಯಾವ ಗುತ್ತಿಗೆದಾರನಲ್ಲಿ ಕೈ ಚಾಚಿಲ್ಲ

ನಾನು ಕಳೆದ ಹತ್ತು ವರ್ಷದ ಹಿಂದೆ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಮೈಸೂರಿಗೆ ಬಂದಾಗ ನಿನ್ನ ಹಿನ್ನೆಲೆ ಏನು, ನಿನ್ನ ಅಪ್ಪ, ಅಮ್ಮ ಯಾರು, ನಿನ್ನಲ್ಲಿ ಎಷ್ಟು ಹಣವಿದೆ ಎಂದು ಇಲ್ಲಿ ಜನರು ಕೇಳದೆ ನನ್ನ ಕೈ ಹಿಡಿದರು. ಈಗಲೂ ನನ್ನ ಅಭಿವೃದ್ಧಿ ಕಾರ್ಯ ನೋಡಿ ಪುನರಾಯ್ಕೆ ಮಾಡುತ್ತಾರೆ ಎಂಬ ವಿಶ್ವಾಸವಿದೆ. ಈ ತನಕ ನಾನು ಯಾವ ಗುತ್ತಿಗೆದಾರನಲ್ಲಿಯೂ ಕೈ ಚಾಚಿಲ್ಲ. ಆಸ್ತಿ ಮಾಡಲು, ಲೇ ಔಟ್ ಮಾಡಲು ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ಹೈವೆ ಮಾಡಿಸಿಲ್ಲ. ಜನತೆ ಕೊಟ್ಟ ಜವಾಬ್ದಾರಿಯನ್ನು ನಿಭಾಯಿಸಿದ್ದೇನೆ. ನಿಸ್ವಾರ್ಥದಿಂದ ಕೆಲಸ ಮಾಡಿದ್ದೇನೆ. ವಿದ್ಯಾರಣ್ಯಪುರಂನ ಸೀವೇಜ್ ಕಸವನ್ನು ಒಂದೂವರೆ ವರ್ಷದ ಒಳಗೆ ವಿಲೇವಾರಿ ಮಾಡಲಾಗುವುದು. ಎಂ.ಜಿ.ರಸ್ತೆಯ ರೈತ ಸಂತೆಯಲ್ಲಿ ಸುಸಜ್ಜಿತ ಮಾರುಕಟ್ಟೆ ನಿರ್ಮಾಣ ಮಾಡುವ ಯೋಜನೆ ರೂಪಿಸಲಾಗುವುದು. ನಂಜನಗೂಡು ರಸ್ತೆ 6 ಲೇನ್‌ಗೆ ಕ್ರಮ ಕೈಗೊಳ್ಳಲಾಗಿದೆ. ಕಳೆದ ಹತ್ತು ವರ್ಷದ ಅವಧಿಯಲ್ಲಿ ನಾನು ಮಾಡಿರುವ ಅಭಿವೃದ್ಧಿ ಕಾರ್ಯಗಳ ರಿಪೋರ್ಟ್ ಕಾರ್ಡ್ ಮುಂದಿಟ್ಟು ಚುನಾವಣೆಯಲ್ಲಿ ಮತ ಕೇಳುತ್ತೇನೆ.

– ಪ್ರತಾಪ್‌ಸಿಂಹ, ಸಂಸದ

22 ಲಕ್ಷ ರೂ. ಆಮಿಷವೊಡ್ಡಿ ವ್ಯಕ್ತಿಗೆ 2.5 ಲಕ್ಷ ರೂ ವಂಚನೆ

ಮೈಸೂರು,ಮಾ.4(ಆರ್‌ಕೆ)–ಕಂತಿನಲ್ಲಿ 22,38,800 ರೂ ಹಣ ನೀಡುವುದಾಗಿ ಅಮಿಷ ತೋರಿ ವ್ಯಕ್ತಿಯೊಬ್ಬರಿಂದ 2,50,000ರೂ ಪಡೆದು ವಂಚಿಸಿರುವ ಪ್ರಕರಣ ಮೈಸೂರಿನಲ್ಲಿ ಬೆಳಕಿಗೆ ಬಂದಿದೆ.

ಮೈಸೂರಿನ ಶ್ರೀರಾಂಪುರ ನಿವಾಸಿ ರಮಾನಂದ ಅವರ ಮಗ ಕೆ.ವಿವೇಕಾನಂದ ಅತೀ ಹೆಚ್ಚಿನ ಹಣದ ಆಸೆಗಾಗಿ 2,50,000ರೂ ಕಳೆದುಕೊಂಡವರು. ಮೈಸೂರಿನ ಚಾಮರಾಜಪುರಂನ ವಾಣಿವಿಲಾಸ ರಸ್ತೆಯಲ್ಲಿರುವ ಶ್ರೀ ಪರ್ಫೆಕ್ಟ್ ವೆಂಚರ್ಸ್ ಸಿಇಓ ಎನ್ನಲಾದ ರವಿತೇಜ ಹಾಗೂ ನೌಕರ ಸುರೇಶ್, ಹಣ ಪಡೆದು ಮೋಸ ಮಾಡಿದ್ದಾರೆ ಎಂದು ವಿವೇಕಾನಂದ ಅವರು ಲಕ್ಷ್ಮೀಪುರಂ ಠಾಣೆಗೆ ದೂರು ನೀಡಿದ್ದಾರೆ.

ಕಂಪ್ಯೂಟರ್ ಬ್ಯುಸಿನೆಸ್ ಮಾಡಿಕೊಂಡಿರುವ ತನಗೆ ಹುಣಸೂರಿನ ಸುರೇಶ್ ಎಂಬುವರು ಪರಿಚಯವಾಗಿ ರವಿತೇಜರ ಕಂಪನಿಯಲ್ಲಿ 2.5 ಲಕ್ಷರೂ. ಪಾವತಿಸಿದರೆ ನಿಮಗೆ 22,38,800ರೂ ಹಣ ನೀಡುತ್ತಾರೆ ಎಂದು ಹೇಳಿ, 27,000 ರೂ ನಂತೆ 8 ತಿಂಗಳು ಹಣ ಹಿಂದಿರುಗಿಸಿ ಉಳಿದ ಹಣವನ್ನು 32 ಕಂತುಗಳಲ್ಲಿ ಪಾವತಿಸುವಂತೆ ತಿಳಿಸಿದರು ಎಂದು ವಿವೇಕಾನಂದ ದೂರಿನಲ್ಲಿ ಹೇಳಿದ್ದಾರೆ.

ಅದನ್ನು ನಂಬಿದ ನಾನು 2,50,000 ರೂ ನಗದು ಪಾವತಿಸಿದೆ. ಅದರ ಬಗ್ಗೆ ಕಂಪನಿಯ ರವಿತೇಜ ಅಗ್ರಿಮೆಂಟ್ ಮಾಡಿ ಜೆರಾಕ್ಸ್ ಪ್ರತಿಯನ್ನು ನನಗೂ ಕೊಟ್ಟಿದ್ದಾರೆ. 2023ರ ಜುಲೈನಿಂದ ನವೆಂಬರ್‌ವರೆಗೆ 27,000 ರೂ ಗಳನ್ನು ನನ್ನ ಬ್ಯಾಂಕ್ ಖಾತೆಗೆ ಆರ್‌ಟಿಜಿಎಸ್ ಮಾಡಿ ನಂತರ ಹಣ ನೀಡಿಲ್ಲ. ರವಿತೇಜ ಹಾಗೂ ಸುರೇಶ ಸಂಪರ್ಕಕ್ಕೆ ಸಿಗುವುದಿಲ್ಲ. ಫೋನ್ ಸಹ ಸ್ವಿಚ್ ಆಫ್ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ. ನನ್ನಂತೆ ಹಣ ಕಳೆದುಕೊಂಡಿರುವ ಹಲವು ಮಂದಿ ಕಂಪನಿ ಕಚೇರಿಯಲ್ಲಿ ಪ್ರತೀ ದಿನ ಬಂದು ಕಾದು ವಾಪಸ್ಸಾಗುತ್ತಿದ್ದಾರೆ ಎಂದು ವಿವೇಕಾನಂದ ನೀಡಿರುವ ದೂರಿನನ್ವಯ ಫೆಬ್ರವರಿ 28ರಂದು ಐಪಿಸಿ ಸೆಕ್ಷನ್ 406, 420 ರೀತ್ಯಾ ಪ್ರಕರಣ ದಾಖಲಿಸಿಕೊಂಡಿರುವ ಲಕ್ಷ್ಮೀಪುರಂ ಠಾಣೆ ಪೊಲೀಸರು ಈ ವಂಚನೆ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

12 ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನಕ್ಕೆ ಅವಕಾಶ

ಮೈಸೂರು, ಮಾ.4(ಎಸ್‌ಪಿಎನ್)–88ನೇ ತ್ರಿಮೂರ್ತಿ ಶಿವಜಯಂತಿ ಮಹೋತ್ಸವ ಹಾಗೂ ಮಹಾಶಿವರಾತ್ರಿ ಪ್ರಯುಕ್ತ ಮಾ.4ರಿಂದ 9ರವರೆಗೆ ದೇಶದ ಪ್ರಸಿದ್ಧ '12 ದ್ವಾದಶ ಜ್ಯೋತಿರ್ಲಿಂಗಗಳ ಪುಣ್ಯ ದರ್ಶನ'ಕ್ಕೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಮೈಸೂರು ಘಟಕ ಅವಕಾಶ ಮಾಡಿಕೊಟ್ಟಿದೆ. ಮೈಸೂರಿನ ವಿಜಯನಗರದ ರೈಲ್ವೆ ಬಡಾವಣೆ ಆಟದ ಮೈದಾನ, ಜಯಲಕ್ಷ್ಮೀಪುರಂ ಚಂದ್ರಕಲಾ ಆಸ್ಪತ್ರೆ ಪಕ್ಕದ ಮೈದಾನ, ಸರಸ್ವತಿಪುರಂನಲ್ಲಿ ಐದು ದಿನಗಳ ದ್ವಾದಶ ಜ್ಯೋತಿರ್ಲಿಂಗ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗಿದೆ.

ಸರಸ್ವತಿಪುರಂನಲ್ಲಿ ಮಧ್ಯಪ್ರದೇಶದ ಉಜ್ಜಯಿನಿಯ ಮಹಾಕಾಳೇಶ್ವರ ದೇವಸ್ಥಾನ ಮಾದರಿ, ಜಯಲಕ್ಷ್ಮೀಪುರಂನಲ್ಲಿ 21 ಅಡಿ ಎತ್ತರ ಬೃಹತ್ ಶಿವಲಿಂಗ ಸ್ಥಾಪಿಸಲಾಗಿದೆ. ಅಲ್ಲದೇ ಗುಜರಾತಿನ ಸೋಮನಾಥ, ಆಂಧ್ರ ಪ್ರದೇಶದ ಶ್ರೀಶೈಲ ಮಲ್ಲಿಕಾರ್ಜುನ, ಮಧ್ಯ ಪ್ರದೇಶದ ಉಜ್ಜಯಿನಿಯ ಮಹಾಕಾಳೇಶ್ವರ, ಓಂಕಾರೇಶ್ವರ, ಬಿಹಾರದ ವೈದ್ಯನಾಥ, ತಮಿಳುನಾಡಿನ ರಾಮೇಶ್ವರಂ, ವಾರಣಾಸಿಯ ಕಾಶಿ ವಿಶ್ವನಾಥ, ಮಹಾರಾಷ್ಟ್ರದ ತ್ರಯಂಬಕೇಶ್ವರ, ಉತ್ತರಾಂಚಲದ ಕೇದಾರನಾಥ, ಗುಜರಾತಿನ ನಾಗೇಶ್ವರ, ಮಹಾರಾಷ್ಟ್ರದ ಭೀಮಾಶಂಕರ, ಗ್ರಿಶನೇಶ್ವರ ಶಿವಲಿಂಗ ಮಾದರಿಗಳನ್ನು ಭಕ್ತರು ವೀಕ್ಷಿಸಬಹುದಾಗಿದೆ.



ವಿಜಯನಗರದ ರೈಲ್ವೆ ಬಡಾವಣೆ ಆಟದ ಮೈದಾನದಲ್ಲಿ ಅರ್ಜುನ ಅವಧೂತ ಮಹಾರಾಜ್, ಬ್ರಹ್ಮಾಕುಮಾರೀಸ್ ಮೈಸೂರು ಉಪವಲಯದ ರಾಜಯೋಗಿನಿ ಬಿ.ಕೆ.ಲಕ್ಷ್ಮೀಜಿ ಹಾಗೂ ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಶ್ರೀಧರ್ ನೇತೃತ್ವದಲ್ಲಿ ಮಾದರಿ ಶಿವಲಿಂಗಕ್ಕೆ ಪೂಜೆ ಸಲ್ಲಿಸಿ ಜ್ಯೋತಿರ್ಲಿಂಗ ದರ್ಶನಕ್ಕೆ ಚಾಲನೆ ನೀಡಿದರು.

ಈ ವೇಳೆ ನಗರ ಪಾಲಿಕೆ ಮಾಜಿ ಸದಸ್ಯೆ ಪ್ರೇಮ ಶಂಕರೇಗೌಡ, ಬ್ರಹ್ಮಾಕುಮಾರೀಸ್ ಸಂಧ್ಯಾಜೀ ಸೇರಿದಂತೆ ಇನ್ನು ಅನೇಕರಿದ್ದರು. ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಲೋಕಸಭೆ ಚುನಾವಣೆಗೂ ಮುನ್ನ ಸಿಎಎ ಜಾರಿ: ಕೇಂದ್ರ ಸಚಿವ ಶಾಂತನು ಠಾಕೂರ್

ನವದೆಹಲಿ: 2019 ರ ಡಿಸೆಂಬರ್‌ನಲ್ಲಿ ಸಂಸತ್ತು ಅಂಗೀಕರಿಸಿದ ಪೌರತ್ವ ತಿದ್ದುಪಡಿ ಕಾಯ್ದೆ(ಸಿಎಎ) ಲೋಕಸಭೆ ಚುನಾವಣೆಗೂ ಮುನ್ನ ಜಾರಿಗೆ ಬರಲಿದೆ ಎಂಬ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಯನ್ನು ಕೇಂದ್ರ ಸಚಿವ ಶಾಂತನು ಠಾಕೂರ್ ಅವರು ಸೋಮವಾರ ಪುನರುಚ್ಚರಿಸಿದ್ದಾರೆ.

ನಾವು ಗಡಿಯಾಚೆಯಿಂದ ಬರುವ ಜನರಿಗೆ ಆಶ್ರಯ ನೀಡಬೇಕು ಮತ್ತು ಅವರು ಇಲ್ಲಿಯೇ ಉಳಿದುಕೊಳ್ಳಬೇಕು. ಸಿಎಎ ಪ್ರಸ್ತುತ ಇರುವ ನಾಗರಿಕರ ಪೌರತ್ವವನ್ನು ಕಸಿದುಕೊಳ್ಳುವುದಿಲ್ಲ. ಸಿಎಎ ಅನ್ನು ರಾಜ್ಯ ಸರ್ಕಾರಗಳ ಯಾವುದೇ ಪಾತ್ರವಿಲ್ಲದ ರೀತಿಯಲ್ಲಿ ಜಾರಿಗೊಳಿಸಲಾಗುವುದು. ದೇಶದಲ್ಲಿ ಗೊಂದಲದ ವಾತಾವರಣವನ್ನು ಸೃಷ್ಟಿಸಲು ಅವರಿಗೆ ಯಾವುದೇ ಅವಕಾಶ ಸಿಗುವುದಿಲ್ಲ ಎಂದು ಠಾಕೂರ್ ಅವರು ಎಎನ್‌ಐಗೆ ತಿಳಿಸಿದ್ದಾರೆ. ಈ ವರ್ಷದ ಫೆಬ್ರವರಿಯಲ್ಲಿ ಅಮಿತ್ ಶಾ ಅವರು ಮುಂಬರುವ ಲೋಕಸಭೆ ಚುನಾವಣೆಗೂ ಮುನ್ನ ಸಿಎಎ ಅಧಿಸೂಚನೆಯನ್ನು ಜಾರಿಗೊಳಿಸಲಾಗುವುದು ಎಂದು ಹೇಳಿದ್ದರು.

ಮೈಸೂರು ಮಿತ್ರ

ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ 'ಗುರುಗ್ರಹ' ವೀಕ್ಷಣೆ



ಮಾನಸಗಂಗೋತ್ರಿ ವಿಜ್ಞಾನ ಭವನದ ಎದುರು ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ 'ಗುರುಗ್ರಹ' ವೀಕ್ಷಣೆ ಕಾರ್ಯಕ್ರಮ ನಡೆಯಿತು.

ಮೈಸೂರು, ಮಾ.4(ಎಂಕೆ)– ಕಾಸ್ಮಾಲಜಿ ಶಿಕ್ಷಣ ಮತ್ತು ಸಂಶೋಧನಾ ತರಬೇತಿ ಕೇಂದ್ರ, ಮೈಸೂರು ವಿವಿ ಭಾರತೀಯ ಖಗೋಳ ಭೌತ ವಿಜ್ಞಾನ ಸಂಸ್ಥೆ ವತಿಯಿಂದ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಟೆಲಿಸ್ಕೋಪ್ (ದೂರದರ್ಶಕ) ಮೂಲಕ 'ಗುರುಗ್ರಹ' ವೀಕ್ಷಣೆ ಕಾರ್ಯಕ್ರಮ ನಡೆಸಲಾಯಿತು.

ಮೈಸೂರು ವಿವಿ ಮಾನಸಗಂಗೋತ್ರಿ ವಿಜ್ಞಾನ ಭವನದ ಎದುರು ಸೋಮವಾರ ಸಂಜೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 200ಕ್ಕೂ ವಿದ್ಯಾರ್ಥಿಗಳು ಹಾಗೂ ಪೋಷಕರು ಭಾಗವಹಿಸಿದ್ದರು. ಈ ವೇಳೆ ಗುರುಗ್ರಹ ಮೇಲಿನ ಚಿತ್ರಣ ಹಾಗೂ ಗುರುಗ್ರಹದ ಉಪಗ್ರಹಗಳಾದ ಗ್ಯಾನಿಮೇಡ್, ಯುರೋಪ್ ಮತ್ತು ಕ್ಯಾಲಿಸ್ಟೊಗಳನ್ನು ತೋರಿಸಲಾಯಿತು.

ನಿವೃತ್ತ ಪ್ರಾಧ್ಯಾಪಕ ಡಾ.ಎಸ್.ಎನ್.ಪ್ರಸಾದ್ ಮಾತನಾಡಿ, ಗುರುಗ್ರಹ ಸೌರಮಂಡಲದಲ್ಲಿಯೇ ದೊಡ್ಡ ಗ್ರಹವಾಗಿದ್ದು, ಅತ್ಯಂತ ಹೆಚ್ಚು ಉಪಗ್ರಹಗಳನ್ನು ಹೊಂದಿದೆ ಎಂದು ಗುರುಗ್ರಹದ ಪರಿಚಯ ಮಾಡಿಕೊಟ್ಟರು. ಬಳಿಕ ಹವ್ಯಾಸಿ ಖಗೋಳ ವೀಕ್ಷಕ ಎಂ.ಕೃಷ್ಣಮೂರ್ತಿ ಮಾತನಾಡಿ, ಗ್ರಹಕ್ಕೂ ನಕ್ಷತ್ರಕ್ಕೂ ಇರುವ ವ್ಯತ್ಯಾಸಗಳ ಕುರಿತು ತಿಳಿಸಿಕೊಟ್ಟರು. ಕಾಸ್ಮಾಲಜಿ ಶಿಕ್ಷಣ ಮತ್ತು ಸಂಶೋಧನಾ ತರಬೇತಿ ಕೇಂದ್ರದ ಎನ್.ಅಮೋಘವರ್ಷ, ಆರ್.ಪುನೀತ್ ಮತ್ತಿತರರು ಉಪಸ್ಥಿತರಿದ್ದರು.

ಅದ್ಧೂರಿಯಾಗಿ ನೆರವೇರಿದ ತೊಣಚಿಕೊಪ್ಪಲು ಶ್ರೀ ಬಿಸಿಲು ಮಾರಮ್ಮನವರ ಜಾತ್ರಾ ಮಹೋತ್ಸವ

ಸಾವಿರಾರು ಭಕ್ತ ಮಹಾಶಯರಿಂದ ದೇವಿ ದರ್ಶನ; ವಿಶೇಷ ಪೂಜಾ ಕೈಂಕರ್ಯ

ಮೈಸೂರು, ಮಾ.4(ಎಂಕೆ)– ಇತಿಹಾಸ ಪ್ರಸಿದ್ಧ ಮೈಸೂರಿನ ತೊಣಚಿಕೊಪ್ಪಲು ಶ್ರೀ ಬಿಸಿಲು ಮಾರಮ್ಮನವರ ಜಾತ್ರಾ ಮಹೋತ್ಸವ ಅಪಾರ ಭಕ್ತ ಸಮೂಹದೊಂದಿಗೆ ಅದ್ಧೂರಿಯಾಗಿ ನೆರವೇರಿತು.

ವಿಶೇಷ ಪೂಜಾ ಕೈಂಕರ್ಯ, ಹೋಮ–ಹವನದೊಂದಿಗೆ ಮುಂಜಾನೆ 4 ಗಂಟೆಯಿಂದಲೇ ಆರಂಭವಾದ ಜಾತ್ರಾ ಮಹೋತ್ಸವಕ್ಕೆ ತೊಣಚಿಕೊಪ್ಪಲಿನ ಹುಚ್ಚಮ್ಮ ದೇವಸ್ಥಾನದಿಂದ ಮೂಲ ಉತ್ಸವಮೂರ್ತಿಯನ್ನು ವಾದ್ಯಗೋಷ್ಠಿಯೊಂದಿಗೆ ತಂದು ಪ್ರತಿಷ್ಠಾಪಿಸಿ, ವಿಶೇಷ ಆಭರಣಗಳಿಂದ ಸಿಂಗರಿಸಿ ಪೂಜೆ ಸಲ್ಲಿಸಲಾಯಿತು.

ಬೆಳಗ್ಗೆ 11 ಗಂಟೆಗೆ ಸಾವಿರಾರು ಮಹಿಳೆಯರು, ಯುವತಿಯರು ಅಮ್ಮನವರಿಗೆ ಹೊಂಬಾಳೆ ಹಾಗೂ ತಂಬಿಟ್ಟು ತಂದು ಆರತಿ ಬೆಳಗಿ ಇಷ್ಟಾರ್ಥಗಳನ್ನು ಸಿದ್ಧಿಸುವಂತೆ ಪ್ರಾರ್ಥನೆ ಸಲ್ಲಿಸಿದರು. ಬಳಿಕ ಅಮ್ಮನವರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು. ರಾತ್ರಿ 9 ಗಂಟೆಯವರೆಗೆ ಸರತಿ ಸಾಲಿನಲ್ಲಿ ತಂಡೋಪತಂಡವಾಗಿ ಬಂದ ಲಕ್ಷಾಂತರ ಭಕ್ತರು ಶ್ರೀ ಬಿಸಿಲು ಮಾರಮ್ಮನವರ ದರ್ಶನ ಪಡೆದು ಹಣ್ಣು–ಕಾಯಿ ಅರ್ಪಿಸಿ ಪೂಜೆ ಸಲ್ಲಿಸಿದರು.

ಉತ್ಸವಮೂರ್ತಿ ಮೆರವಣಿಗೆ: ರಾತ್ರಿ 9 ಗಂಟೆಗೆ ದೇವಸ್ಥಾನದ ಆವರಣದಿಂದ ಆರಂಭವಾದ ಶ್ರೀ ಬಿಸಿಲು ಮಾರಮ್ಮನವರ ಉತ್ಸವಮೂರ್ತಿ ಮೆರವಣಿಗೆ ವೈಭವಯುತವಾಗಿ ನೆರವೇರಿತು. ದೇವಸ್ಥಾನದ ಆವರಣದಿಂದ ಸಾಗಿ ತೊಣಚಿಕೊಪ್ಪಲಿನ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಸಾಗಿತು. ಸೋಮವಾರ ತಡರಾತ್ರಿ ಹುಚ್ಚಮ್ಮ ದೇವಸ್ಥಾನಕ್ಕೆ ತಲುಪುವ ಮೂಲಕ ಜಾತ್ರಾಮಹೋತ್ಸವ ಸಂಪನ್ನಗೊಂಡಿತು.

ಅಪಾರ ಸಂಖ್ಯೆಯ ಭಕ್ತರು: ಇತಿಹಾಸ ಪ್ರಸಿದ್ಧ ಮೈಸೂರಿನ ತೊಣಚಿಕೊಪ್ಪಲು ಶ್ರೀ ಬಿಸಿಲು ಮಾರಮ್ಮನವರ ಜಾತ್ರಾ ಮಹೋತ್ಸವಕ್ಕೆ ಅಪಾರ ಸಂಖ್ಯೆಯ ಭಕ್ತ ಸಮೂಹವೇ ಹರಿದು ಬಂದಿತು. ಸರತಿ ಸಾಲಿನಲ್ಲಿ ನೂಕು–ನುಗ್ಗಲು ಹೆಚ್ಚಾಗಿತ್ತು. ದೇವಸ್ಥಾನದ ಒಳಗೆ ಹೋಗಲಾರದ ಭಕ್ತರು, ಗರ್ಭಗುಡಿ ಎದುರು ಪೂಜೆ ಸಲ್ಲಿಸಿದರು. ಸರಸ್ವತಿಪುರಂ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಪುರುಷೋತ್ತಮ್ ನೇತೃತ್ವದಲ್ಲಿ ಬಂದೋಬಸ್ತ್ ಏರ್ಪಡಿಸಲಾಗಿತ್ತು. ದೇವಸ್ಥಾನದ ಆವರಣದಲ್ಲಿ ಮಕ್ಕಳ ಆಟಿಕೆಗಳು, ಹೆಣ್ಣು ಮಕ್ಕಳ ಅಲಂಕಾರಿಕ ವಸ್ತುಗಳ ಭರ್ಜರಿ ವ್ಯಾಪಾರವೂ ನಡೆಯಿತು.

ತೊಣಚಿಕೊಪ್ಪಲು ಶ್ರೀ ಬಿಸಿಲು ಮಾರಮ್ಮನವರ ದೇವಸ್ಥಾನ ನಿರ್ವಹಣಾ ಜವಾಬ್ದಾರಿ ಹೊತ್ತಿರುವ ಶ್ರೀ ಬೀರೇಶ್ವರ ಸ್ವಾಮಿ ಟ್ರಸ್ಟ್ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಅಚ್ಚುಕಟ್ಟಿನ ವ್ಯವಸ್ಥೆ ಕಲ್ಪಿಸಿತ್ತು. ಟ್ರಸ್ಟ್ ಅಧ್ಯಕ್ಷ ಯಜಮಾನ್ ಸಿ.ಜವರಪ್ಪ, ಕಾರ್ಯದರ್ಶಿ ಯಜಮಾನ್ ಜೆ.ಕಾಳಪ್ಪ, ಖಜಾಂಚಿ ಯಜಮಾನ್ ಜೆ.ರವಿ, ಉಪಾಧ್ಯಕ್ಷ ಹೊಂಬಯ್ಯ, ಗುಡ್ಡಪ್ಪನವರಾದ ಬೀರಲಿಂಗಣ್ಣ, ಲಿಂಗಪ್ಪ, ಶಿವಬೀರಪ್ಪ, ಅರ್ಚಕರಾದ ಅಲ್ಲೆ ಬೀರಯ್ಯ, ಬೀರಪ್ಪ, ಹೇಮಂತ್ ಕುಮಾರ್, ರವಿ, ಟ್ರಸ್ಟ್‌ನ ನಿರ್ದೇಶಕರು ಉಪಸ್ಥಿತರಿದ್ದರು.







ಮಾ.8ಕ್ಕೆ ಅನ್ನಸಂತರ್ಪಣೆ...

ತೊಣಚಿಕೊಪ್ಪಲು ಶ್ರೀ ಬಿಸಿಲು ಮಾರಮ್ಮನವರ ದೇವಸ್ಥಾನದ ಆವರಣದಲ್ಲಿ ಶಿವರಾತ್ರಿ ಹಬ್ಬದ ದಿನದಂದು(ಮಾ.8) ಮಧ್ಯಾಹ್ನ ದೇವಸ್ಥಾನದ ಶ್ರೀ ಬೀರೇಶ್ವರ ಸ್ವಾಮಿ ಟ್ರಸ್ಟ್ ವತಿಯಿಂದ 'ಅನ್ನಸಂತರ್ಪಣೆ' ಏರ್ಪಡಿಸಲಾಗಿದೆ. ಅಂದು ಬೆಳಗ್ಗೆಯಿಂದ ದೇವಸ್ಥಾನದ ಪೂಜಾ ಪರಿಕರಗಳನ್ನು ಬಲಮುರಿಯಲ್ಲಿ ಶುಚಿಗೊಳಿಸಲಾಗುವುದು. ನಂತರ ದೇವಸ್ಥಾನದ ಆವರಣದಲ್ಲಿ ಸಾವಿರಾರು ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಯಜಮಾನ್ ಸಿ.ಜವರಪ್ಪ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ನಾಳೆ ಚಕ್ರ ಇನಾಮ್ ಭೂಮಿ ವರ್ಗಾವಣೆ ರದ್ಧತಿಗೆ ಆಗ್ರಹಿಸಿ ಪ್ರತಿಭಟನೆ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಕರ್ನಾಟಕ ಸಮತಾ ಸೈನಿಕ ದಳ ಜಿಲ್ಲಾಧ್ಯಕ್ಷ ಗೋವಿಂದರಾಜು ಮಾತನಾಡಿದರು.

ಮೈಸೂರು,ಮಾ.4(ಎಂಟಿವೈ)– ಚಕ್ರ ಇನಾಮ್ ಭೂಮಿ ವರ್ಗಾವಣೆ ರದ್ದು ಮಾಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಇದೇ ಮಾ. 6ರಂದು ಬೆಳಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಸಮತಾ ಸೈನಿಕ ದಳ ಜಿಲ್ಲಾಧ್ಯಕ್ಷ ಗೋವಿಂದರಾಜು ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಕ್ರ ಇನಾಮ್ ಜಮೀನಿಗೆ ಸಂಬಂಧಿಸಿದಂತೆ ಅವಧಿ ಪೂರ್ಣ ಮಾರಾಟ ಹಾಗೂ ಚಕ್ರ ಇನಾಮ್ ಇಲ್ಲದವರು, ಇನಾಮ್ ಭೂಮಿಗಳನ್ನು ವರ್ಗಾವಣೆ ಮಾಡಿಕೊಂಡಿದ್ದು ಇದನ್ನು ರದ್ದುಪಡಿಸಿ ಚಕ್ರ ಇನಾಮ್ದಾರರಿಗೆ ಮರು–ಮಂಜೂರು ಮಾಡಬೇಕು. ಹುಣಸೂರಿನ ಸರ್ವೆ ನಂ 352, 385ರ ಜಮೀನಿನ ಪರಿಶಿಷ್ಟ ಜಾತಿಯವರ ಜಮೀನು ಖರೀದಿಯನ್ನು ರದ್ದು ಮಾಡಿ ಮೂಲ ಮಂಜೂರುದಾರರಿಗೆ ನೀಡಬೇಕು. ದಲಿತರ ಭೂಮಿ ಖರೀದಿಸದಂತೆ ತಡೆಯಬೇಕು. ಮೈಸೂರು ತಾಲೂಕು ದೊಡ್ಡಮಾರೆಗೌಡನಹಳ್ಳಿ ಸರ್ವೆ ನಂ.186ರ ಜಮೀನನ್ನು 30 ಮಂದಿ ಬಡ ದಲಿತ ಸಾಗುವಳಿದಾರರ ಪತ್ರದ ರದ್ದತಿ ವಾಪಸು ಪಡೆದು ಮತ್ತೆ ಅವರಿಗೇ ನೀಡಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿರುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಸಮತಾ ಸೈನಿಕ ದಳ ಪದಾಧಿಕಾರಿಗಳಾದ ಸಿ. ಮರಿಸ್ವಾಮಿ, ಬಸವಯ್ಯ, ದೊಡ್ಡ ತಿಮ್ಮಯ್ಯ, ಮಹೇಶ್, ರಾಜಶೇಖರ್, ಸುರೇಶ್ ಹಾಗೂ ಸಿದ್ದಪ್ಪಾಜಿ ಇದ್ದರು.

ಕೆಎಸ್‌ವೈಡಬ್ಲ್ಯೂಎಂ ಉದ್ಘಾಟನಾ ಕಪ್–2024 ಹಾಕಿ ಪಂದ್ಯಾವಳಿ

ಮೈಸೂರು ಚಾಮುಂಡಿ ವಾರಿಯರ್ಸ್ ಚಾಂಪಿಯನ್



ಕೆಎಸ್‌ವೈಡಬ್ಲೂಎಂ ಉದ್ಘಾಟನಾ ಕಪ್–2024 ಹಾಕಿ ಪಂದ್ಯಾವಳಿಯಲ್ಲಿ ಮೈಸೂರು ಚಾಮುಂಡಿ ವಾರಿಯರ್ಸ್ ಚಾಂಪಿಯನ್ ಆಯಿತು. ಶಾಸಕ ಕೆ.ಹರೀಶ್‌ಗೌಡ, ತೀತಿರ ಶರ್ಮಿಲಿ ಅಪ್ಪಚ್ಚು ಮತ್ತಿತರರಿದ್ದರು

ಮೈಸೂರು, ಮಾ.4(ಎಂಕೆ)– ಕೊಡವ ಸಮಾಜ ಯೂತ್ ವಿಂಗ್ ಮೈಸೂರು ವತಿಯಿಂದ ಆಯೋಜಿಸಿದ್ದ ಕೆಎಸ್ ವೈಡಬ್ಲ್ಯೂಎಂ(KSYWM) 'ಉದ್ಘಾಟನಾ ಕಪ್–2024' ಹಾಕಿ ಪಂದ್ಯಾವಳಿಯಲ್ಲಿ ಮೈಸೂರಿನ ಚಾಮುಂಡಿ ವಾರಿಯರ್ಸ್ ಚಾಂಪಿಯನ್ ಆಗಿ ಹೊರಹೊಮ್ಮಿತು.

ನಗರದ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಬೆಂಗಳೂರು ಕೂರ್ಗ್ ಪ್ಲಾಂಟರ್ಸ್ ಕ್ಲಬ್ ವಿರುದ್ಧ ಮೈಸೂರು ಚಾಮುಂಡಿ ವಾರಿಯರ್ಸ್ ಭರ್ಜರಿ ಗೆಲುವಿನೊಂದಿಗೆ ಉದ್ಘಾಟನಾ ಟ್ರೋಫಿ ತನ್ನದಾಗಿಸಿಕೊಂಡಿತು. ಪ್ರಬಲ ಪೈಪೋಟಿ ನೀಡಿದ ಕೂರ್ಗ್ ಪ್ಲಾಂಟರ್ಸ್ ಕ್ಲಬ್ ರನ್ನರ್ ಅಪ್ ಆಯಿತು.

ಮಹಿಳೆಯರ ವಿಭಾಗದಲ್ಲಿ ನಡೆದ ಏಕೈಕ ಪಂದ್ಯದಲ್ಲಿ ಕಾವೇರಿ ತಂಡ ವಿನ್ನರ್ ಆಯಿತು. ಪ್ರಬಲ ಪೈಪೋಟಿ ನಡೆಸಿದ ಕೆಎಸ್ಎ ಮೈಸೂರು ರನ್ನರ್ ಅಪ್ ಸ್ಥಾನವನ್ನು ಪಡೆದುಕೊಂಡಿತು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಸಂಸದ ಪ್ರತಾಪ್ ಸಿಂಹ, ಶಾಸಕ ಕೆ.ಹರೀಶ್ ಗೌಡ, ಮೈಸೂರು ಕೊಡವ ಸಮಾಜ ಅಧ್ಯಕ್ಷ ಪೊಂಜಂಡ ಗಣಪತಿ, ಕೊಡವ ಸಮಾಜ ಸಾಂಸ್ಕೃತಿಕ ಮತ್ತು ಕ್ರೀಡಾ ಕೂಟದ ಅಧ್ಯಕ್ಷ ಕುಟ್ಟಿಮಾಡ ಮುತ್ತಪ್ಪ ಪಂದ್ಯಾವಳಿಗೆ ಶುಭ ಹಾರೈಸಿದರು.

ವಿಜೇತರಿಗೆ ತೀತಿರ ಸಿನಿ ಕ್ರಿಯೇಷನ್(ಟಿಸಿಸಿ)ನ ತೀತಿರ ಶರ್ಮಿಲಿ ಅಪ್ಪಚ್ಚು ಬಹುಮಾನ ವಿತರಣೆ ಮಾಡಿದರು. ಮುಖ್ಯ ಎಲೆಕ್ಟ್ರಿಕಲ್ ಇನ್ಸ್‌ಪೆಕ್ಟರ್ ತೀತಿರ ರೋಶನ್ ಅಪ್ಪಚ್ಚು, ಉದ್ಯಮಿ ಕುಟ್ಟಿಮಾಡ ಕಾರ್ಯಪ್ಪ, ಕ್ರೀಡಾಪಟುಗಳಾದ ಕಾಡ್ಯಮಾಡ ರಿಂಯಾ ಅಚ್ಚಯ್ಯ, ಪಾಂಡಂಡ ದೇಚಮ್ಮ, ಖ್ಯಾತ ವಿನ್ಯಾಸಕ ಸುಳ್ಳಿಮಾಡ ದರ್ಶನ್ ಪೂವಪ್ಪ, ಕೊಡವ ಸಮಾಜ ಯೂತ್ ವಿಂಗ್ ಅಧ್ಯಕ್ಷ ಕೋಟೆರ ವೇದಿತ್ ಉತ್ತಯ್ಯ, ಕಾರ್ಯದರ್ಶಿ ಪಟ್ಟಿರ ಬೋಜಣ್ಣ, ಖಜಾಂಚಿ ಅಂಚೆಟ್ಟಿರ ವರುಣ್, ಯೂತ್ ವಿಂಗ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಶ್ರೀ ಮನೆ ಮಂಚಮ್ಮ ದೇವಸ್ಥಾನ ಗೋಪುರ ಕಳಸ ಪ್ರತಿಷ್ಠಾಪನೆ

ಮಹಿಳಾ ಕಲಾವಿದೆಯರಿಂದ ಇಂದು 'ಕುರುಕ್ಷೇತ್ರ' ನಾಟಕ

ಮೈಸೂರು, ಮಾ.4– ತಾಲೂಕಿನ ಇಲವಾಲ ಹೋಬಳಿ, ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ ದೇವಸ್ಥಾನದ 16ನೇ ವಾರ್ಷಿಕೋತ್ಸವ ಹಾಗೂ ನೂತನ ಗೋಪುರದ ಕಳಸ ಪ್ರತಿಷ್ಠಾಪನೆ ಪ್ರಯುಕ್ತ ಮಂಗಳವಾರ ರಾತ್ರಿ 8ಕ್ಕೆ ನಾಗಮಂಗಲ ತಾಲೂಕು ಅಲಪನಹಳ್ಳಿ ಗ್ರಾಮದ ಮಹಿಳಾ ಕಲಾವಿದೆಯರ 'ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ' ಪೌರಾಣಿಕ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ.



ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ಅಧ್ಯಕ್ಷತೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪನವರು ನಾಟಕ ಪ್ರದರ್ಶನವನ್ನು ಉದ್ಘಾಟಿಸಲಿದ್ದು, ಕೆಪಿಸಿಸಿ ಕಾರ್ಯದರ್ಶಿ ಸಿ.ನರೇಂದ್ರ, ನಾಗವಾಲ ಗ್ರಾಪಂ ಅಧ್ಯಕ್ಷೆ ಕಾಮಾಕ್ಷಮ್ಮ ಬಸವ ನಾಯಕ, ಉಪಾಧ್ಯಕ್ಷೆ ಭಾಗ್ಯ ರಮೇಶ್ ಸೇರಿದಂತೆ ಎಲ್ಲಾ ಸದಸ್ಯರು, ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಗ್ರಾಮದ ಮುಖಂಡರು ಉಪಸ್ಥಿತರಿರಲಿದ್ದಾರೆ ಎಂದು ಟ್ರಸ್ಟ್‌ನ ಅಧ್ಯಕ್ಷರೂ ಆದ ರಂಗಭೂಮಿ ಕಲಾವಿದ ಹುಯಿಲಾಳು ರಾಮಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಲ್ವರು ಖದೀಮರ ಬಂಧನ; 6 ಲಕ್ಷ ಮೌಲ್ಯದ 9 ದ್ವಿಚಕ್ರ ವಾಹನ ವಶಕ್ಕೆ



ಮೈಸೂರು, ಮಾ.4(ಎಸ್‌ಬಿಡಿ)– ಮೈಸೂರಿನ ಮೇಟಗಳ್ಳಿ ಠಾಣೆ ಪೊಲೀಸರು ನಾಲ್ವರನ್ನು ಬಂಧಿಸಿ, 9 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ.

ಕೆಲ ದಿನಗಳ ಹಿಂದೆ ಬೆಲವತ್ತ ಬಳಿಯ ವರುಣ ನಾಲೆ ಬ್ರಿಡ್ಜ್ ಬಳಿ ನಂಬರ್ ಪ್ಲೇಟ್ ಇಲ್ಲದ ಎರಡು ದ್ವಿಚಕ್ರ ವಾಹನಗಳಲ್ಲಿ ಬರುತ್ತಿದ್ದ ಇಬ್ಬರನ್ನು ಗಸ್ತಿನಲ್ಲಿದ್ದ ಪೊಲೀಸರು ತಡೆದು ವಿಚಾರಣೆ ನಡೆಸಿದ್ದಾರೆ. ಆಗ ಅವರು ದ್ವಿಚಕ್ರ ವಾಹನ ಕಳವು ಮಾಡಿರುವುದು ಗೊತ್ತಾಗಿದೆ. ಬಳಿಕ ಅವರು ನೀಡಿದ ಸುಳಿವಿನ ಮೇರೆಗೆ ಇನ್ನಿಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ. ಇವರು ವಿವಿಧೆಡೆ ಕಳವು ಮಾಡಿದ್ದ ಸುಮಾರು 6 ಲಕ್ಷ ಮೌಲ್ಯದ 9 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಈ ಮೂಲಕ ಮೇಟಗಳ್ಳಿ ಪೊಲೀಸ್ ಠಾಣೆ, ಶ್ರೀರಂಗಪಟ್ಟಣ ಹಾಗೂ ಪಾಂಡವಪುರ ಠಾಣೆಯ ತಲಾ 2 ಪ್ರಕರಣ, ಕೆಆರ್‌ಎಸ್ ಠಾಣೆ, ಮೇಲುಕೋಟೆ ಠಾಣೆ, ಹಾಸನ ಎಕ್ಸ್‌ಟೆನ್ಷನ್ ಪೊಲೀಸ್ ಠಾಣೆಯ ತಲಾ ಒಂದು ದ್ವಿಚಕ್ರ ವಾಹನ ಕಳವು ಪ್ರಕರಣಗಳು ಪತ್ತೆಯಾಗಿವೆ.

ನಗರ ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಎಸ್.ಜಾಹ್ನವಿ ಮಾರ್ಗದರ್ಶನ, ವಿಜಯನಗರ ಉಪವಿಭಾಗದ ಎಸಿಪಿ ಗಜೇಂದ್ರ ಪ್ರಸಾದ್ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಮೇಟಗಳ್ಳಿ ಠಾಣೆಯ ಇನ್ಸ್‌ಪೆಕ್ಟರ್ ಶಾಂತಾರಾಮ್, ಸಬ್‌ಇನ್ಸ್‌ಪೆಕ್ಟರ್‌ಗಳಾದ ಶಬರೀಶ್, ಜ್ಯೋತ್ಸ್ನಾರಾಜ್, ಎಎಸ್‌ಐ ಜೋಸೆಫ್ ನರ್ಹೊನಾ, ಸಿಬ್ಬಂದಿ ಅಭಿಜಿತ್, ಪರಶುರಾಮ, ಹರೀಶ್, ಮಾಣಿಕ ಪಾಲ್ಗೊಂಡಿದ್ದರು.

ಮೈಸೂರಲ್ಲಿ ನಿರ್ವಹಣೆ ಇಲ್ಲದೆ ಗಬ್ಬೆದ್ದು ನಾರುತ್ತಿರುವ ಶೌಚಾಲಯಗಳು

ಮೈಸೂರು, ಮಾ.4(ಎಸ್‌ಪಿಎನ್)–ಮೈಸೂರಿನ ಬಹುತೇಕ ಉದ್ಯಾನವನಗಳು, ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಿಸಿರುವ ಶೌಚಾಲಯಗಳು ನಿರ್ವಹಣೆ, ಸ್ವಚ್ಛತೆ ಇಲ್ಲದೆ ಗಬ್ಬು ನಾರುತ್ತಿವೆ ಎಂಬ ಆರೋಪ ಸಾರ್ವಜನಿಕರಿಂದ ಕೇಳಿ ಬರುತ್ತಿದೆ.

ಸರಸ್ವತಿಪುರಂನ ದೇ.ಜವರೇಗೌಡ ಪಾರ್ಕ್, ಶ್ರೀರಾಮಪಾರ್ಕ್, ಕುವೆಂಪುನಗರದ ಲವಕುಶ ಪಾರ್ಕ್, ವಿದ್ಯಾರಣ್ಯಪುರಂ ಸ್ನೇಕ್ ಪಾರ್ಕ್, ನಿವೇದಿತಾ ನಗರ ಸುಬ್ಬರಾವ್ ಪಾರ್ಕ್ ಸೇರಿದಂತೆ ನಗರದ ಇತರೆಡೆ ಉದ್ಯಾನವನಗಳಲ್ಲಿನ ಶೌಚಾಲಯಗಳ ನಿರ್ವಹಣೆ, ಸ್ವಚ್ಛತೆ ಬಗ್ಗೆ ಪಾಲಿಕೆ ಅಧಿಕಾರಿಗಳು ಗಮನಹರಿಸುತ್ತಿಲ್ಲ ಎಂದು ಹಿರಿಯ ನಾಗರಿಕರಾದ ಬಸವರಾಜ್ ಅವರು 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ನಗರದ ಉದ್ಯಾನವನ, ರಸ್ತೆ ಬದಿಗಳಲ್ಲಿ ಕೆಲ ಶೌಚಾಲಯಗಳು ನಿರ್ಮಾಣಗೊಂಡಿದ್ದರೂ ನಿರ್ವಹಣೆ ಸಮಸ್ಯೆಯಿಂದಾಗಿ ಕೆಲವೆಡೆ ಬೀಗ ಜಡಿಯಲಾಗಿದೆ. ಸಾರ್ವಜನಿಕರ ಅನುಕೂಲವಾಗಿ ನಿರ್ಮಿಸಿರುವ ಶೌಚಾಲಯಗಳ ನಿರ್ವಹಣೆಗೆ ಸಿಬ್ಬಂದಿ ನೇಮಿಸಬೇಕು. ಇಲ್ಲವೇ ಪರ್ಯಾಯ ವ್ಯವಸ್ಥೆ ಮಾಡಿ, ಶೌಚಾಲಯಗಳ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಸ್ವಚ್ಛನಗರಿ ಮೈಸೂರಿನಲ್ಲೇ ಈ ಪರಿಸ್ಥಿತಿಯಾದರೆ, ಮೈಸೂರು ಮತ್ತೆ ಸ್ವಚ್ಛನಗರಿ ಎಂಬ ಬಿರುದು ಪಡೆಯಲು ಸಾಧ್ಯವೇ ಎಂದು ಪ್ರಶ್ನಿಸಿದರು.



ಇಂತಹ ವಿಷಯಗಳ ಬಗ್ಗೆ ಅಧಿಕಾರಿಗಳು ಗಮನ ನೀಡಬೇಕು. ಈ ವಿಷಯವನ್ನು ಪಾಲಿಕೆ ನೂತನ ಆಯುಕ್ತರಿಗೆ, ಹೆಚ್ಚುವರಿ ಆಯುಕ್ತರಿಗೆ ಭಾವಚಿತ್ರಗಳ ಸಹಿತ ಮನವಿ ಮಾಡಲಾಗಿದೆ. ಮುಂದೆ ಈ ಸಮಸ್ಯೆ ಸರಿಪಡಿಸದಿದ್ದರೆ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.

ಮಾ.7ರವರೆಗೆ ಧನ್ವಂತರಿ ರಸ್ತೆಯಲ್ಲಿ ವಾಹನಗಳಿಗೆ ನಿರ್ಬಂಧ

ಮೈಸೂರು, ಮಾ.4(ಎಂಕೆ)– ಮೈಸೂರು ನಗರಪಾಲಿಕೆ ವಾರ್ಡ್ ನಂ–23ರ ವ್ಯಾಪ್ತಿಯ ಸಿಎಫ್‌ಟಿಆರ್‌ಐ ಗೇಟ್ ಆಂಜನೇಯಸ್ವಾಮಿ ದೇವಸ್ಥಾನದಿಂದ ಜೆ.ಕೆ ಮೈದಾನದವರೆಗೆ ತ್ಯಾಜ್ಯ ನೀರು ನಿರ್ವಹಣೆಗಾಗಿ ಮುಖ್ಯ ಒಳಚರಂಡಿ ಕಾಮಗಾರಿ ಹಿನ್ನೆಲೆಯಲ್ಲಿ ಮಾ.7ರವರೆಗೆ ಧನ್ವಂತರಿ ರಸ್ತೆಯಲ್ಲಿ ತಾತ್ಕಾಲಿಕವಾಗಿ ವಾಹನಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಧನ್ವಂತರಿ ರಸ್ತೆ(ದಾಸಪ್ಪ ವೃತ್ತದಿಂದ ಸಂಗೀತ ವಿದ್ವಾನ್ ದೇವೇಂದ್ರಪ್ಪ ವೃತ್ತದವರೆಗಿನ ಭಾಗ)ಯಲ್ಲಿ ಮುಖ್ಯ ಒಳಚರಂಡಿ ಕಾಮಗಾರಿ ಹಿನ್ನೆಲೆ ಸಾರ್ವಜನಿಕರು, ವಾಹನ ಸವಾರರು ಬದಲಿ ರಸ್ತೆಯಲ್ಲಿ ಸಂಚರಿಸುವ ಮೂಲಕ ಕಾಮಗಾರಿ ಪೂರ್ಣಗೊಳಿಸಲು ಸಹಕರಿಸುವಂತೆ ಕೋರಲಾಗಿದೆ.

ಬದಲಿ ಮಾರ್ಗ: ಕೆಆರ್‌ಎಸ್ ರಸ್ತೆಯಿಂದ ಬರುವ ವಾಹನಗಳು ದಾಸಪ್ಪ ವೃತ್ತದಲ್ಲಿ ಎಡ ತಿರುವು ತೆಗೆದುಕೊಂಡು ಬಾಬು ಜಗಜೀವನ್ ರಾಮ್ ವೃತ್ತ(ರೈಲ್ವೆ ನಿಲ್ದಾಣ ವೃತ್ತ) ಮತ್ತು ಶ್ರೀ ಪುಟ್ಟಗೋಪಾಲಕೃಷ್ಣ ವೃತ್ತದ ಮೂಲಕ ಸಾಗುವುದು. ಹುಣಸೂರು ರಸ್ತೆ ಮತ್ತು ಜೆಎಲ್‌ಬಿ ರಸ್ತೆ ಕಡೆಯಿಂದ ಬರುವ ವಾಹನಗಳು ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತ(ಮೆಟ್ರೋಪೋಲ್ ವೃತ್ತ)ದಿಂದ ವಿನೋಭ ರಸ್ತೆಯ ಮೂಲಕ ಸಂಚರಿಸುವುದು. ಬಾಬು ಜಗಜೀವನ್ ರಾಮ್ ವೃತ್ತದಿಂದ ಬರುವ ವಾಹನಗಳು ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತದಿಂದ ವಿನೋಭ ರಸ್ತೆಯ ಮೂಲಕ ಸಂಚರಿಸುವುದು ಹಾಗೂ ಧನ್ವಂತರಿ ರಸ್ತೆ ಮತ್ತು ದಿವಾನ್ಸ್ ರಸ್ತೆಯಿಂದ ಬರುವ ವಾಹನಗಳು ಪುಟ್ಟಗೋಪಾಲಕೃಷ್ಣಶೆಟ್ಟಿ ವೃತ್ತ ಮತ್ತು ಬಾಬು ಜಗಜೀವನ್ ರಾಮ್ ವೃತ್ತದ ಮೂಲಕ ರಾಮಸ್ವಾಮಿ ವೃತ್ತ ಮತ್ತು ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ವೃತ್ತ ಮೂಲಕ ಸಂಚರಿಸುವುದಾಗಿದೆ.

ರಾಷ್ಟ್ರೀಯ ಲೋಕ್ ಅದಾಲತ್ ಮಾ.16ಕ್ಕೆ ಮುಂದೂಡಿಕೆ

ಮೈಸೂರು, ಮಾ.4– ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಮಾ.9ಕ್ಕೆ ನಿಗದಿಯಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಮಾ.16ಕ್ಕೆ ಮುಂದೂಡಲಾಗಿದ್ದು, ಎಂದಿನಂತೆ ಕಕ್ಷಿಗಾರರು, ಸಾರ್ವಜನಿಕರು ಹಾಗೂ ವಕೀಲರು ಅದಾಲತ್‌ನಲ್ಲಿ ಭಾಗವಹಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

ಅಪರಿಚಿತ ಶವ ಪತ್ತೆ

ಮೈಸೂರು, ಮಾ.4– ಬಿ.ಎನ್ ರಸ್ತೆಯಲ್ಲಿರುವ ಮಹಾರಾಜ ಕಾಂಪ್ಲೆಕ್ಸ್‌ನ ಅನುದರ್ಶಿನಿ ಮುಂಭಾಗ ಫೆ27 ರಂದು ಸುಮಾರು 40 ರಿಂದ 45 ವರ್ಷದ ವ್ಯಕ್ತಿಯ ಮೃತದೇಹವು ದೊರೆತಿದೆ. ಮೃತದೇಹವು ಮೈಸೂರಿನ ಕೆಆರ್ ಆಸ್ಪತ್ರೆಯ ಶವಾಗಾರದಲ್ಲಿದ್ದು, ನಜರ್‌ಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 5.4 ಅಡಿ ಎತ್ತರ, ಸಾಧಾರಣ ಶರೀರ, ದುಂಡುಮುಖ, ಕಪ್ಪು ಮೈಬಣ್ಣ, ಕಪ್ಪು ಮತ್ತು ಬಿಳಿಯ ತಲೆಕೂದಲು, ಮೈಮೇಲೆ ಬಿಳಿಯ ಬಣ್ಣದ ತುಂಬು ತೋಳಿನ ಶರ್ಟ್, ಕಪ್ಪು ಬಣ್ಣದ ಬನಿಯನ್ ಮತ್ತು ನೀಲಿ ಕಪ್ಪು, ಬಿಳಿ ಬಣ್ಣದ ಪಂಚೆ, ಕಪ್ಪು ಬಣ್ಣದ ನಿಕ್ಕರ್ ಧರಿಸಿದ್ದು, ಬಲಗೈಯಲ್ಲಿ ಸಿದ್ದಮ್ಮ ಎಂಬ ಅಚ್ಚೆ ಇದೆ. ಮೃತನ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ನಜರ್‌ಬಾದ್ ಠಾಣೆಯ ದೂ.ಸಂ: 0821–2418308 ಮತ್ತು ಕಂಟ್ರೋಲ್ ರೂಂ.ನಂ: 112, 0821–2418339 ಮತ್ತು 0821–2452200 ನ್ನು ಸಂಪರ್ಕಿಸಬಹುದು ಎಂದು ನಜರ್‌ಬಾದ್‌ನ ಸ್ಟೇಷನ್ ಹೌಸ್ ಆಫಿಸರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ರವಿಕುಮಾರ್ ನಿಧನ



ಮೈಸೂರು, ಮಾ.4– ಮೈಸೂರಿನ ಕುವೆಂಪುನಗರ 2ನೇ ಹಂತ ಕೆಹೆಚ್‌ಬಿ ಕಾಲೋನಿ ನಿವಾಸಿ ಎಂ.ಎನ್.ರವಿಕುಮಾರ್(72) ಅವರು ಸೋಮವಾರ ಮಧ್ಯಾಹ್ನ ಹೃದಯಾಘಾತದಿಂದ ನಿಧನರಾದರು. ಇವರು ಪತ್ನಿ ಡಿ.ಕಲ್ಪನಾ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಚಾಮುಂಡಿಬೆಟ್ಟ ತಪ್ಪಲಿನ ಚಿತಾಗಾರದಲ್ಲಿ ಮಂಗಳವಾರ(ಮಾ.5) ಮಧ್ಯಾಹ್ನ 12ಕ್ಕೆ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕುಲಾಂತರಿ ತಳಿ ಪ್ರಯೋಗಕ್ಕೆ ನೀಡಿರುವ ಅನುಮತಿ ಹಿಂಪಡೆಯಲು ಆಗ್ರಹ

ಮೈಸೂರು,ಮಾ.4(ಎಂಟಿವೈ)– ಎರಡು ಕುಲಾಂತರಿ ತಳಿಗಳ ಪ್ರಯೋಗ ನಡೆಸಲು ರಾಜ್ಯದ ಜೈವಿಕ ತಂತ್ರಜ್ಞಾನ ಸಮನ್ವಯ ಸಮಿತಿ ಖಾಸಗಿ ಬೀಜ ಕಂಪನಿಯೊಂದಕ್ಕೆ ಅನುಮತಿ ನೀಡಿರುವುದು ನಿಯಮಬಾಹಿರವಾಗಿದೆ. ಕೂಡಲೇ ಅನುಮತಿ ಹಿಂಪಡೆಯುವಂತೆ ರೈತ ಮುಖಂಡರಾದ ಚುಕ್ಕಿ ನಂಜುಂಡಸ್ವಾಮಿ ಒತ್ತಾಯಿಸಿದ್ದಾರೆ.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಕುಲಾಂತರಿ ತಳಿಗಳ ಪ್ರಯೋಗಕ್ಕೆ ಅನುಮತಿ ನೀಡದಂತೆ ರೈತ ಮುಖಂಡರಾದ ಚುಕ್ಕಿ ನಂಜುಂಡಸ್ವಾಮಿ ಸುದ್ದಿಗೋಷ್ಠಿ ನಡೆಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಟಿ ಹತ್ತಿ ಮತ್ತು ಜೋಳದ ತಳಿಗಳಾದ ಎಂಎಲ್‌ಎಸ್–4301 ಹಾಗೂ ಎಂಎಲ್‌ಎಸ್ 2531 ಈ ಎರಡು ಹೊಸ ತಳಿಗಳು ಕಳೆ ನಾಶಕ ಹಾಗೂ ಕ್ರಿಮಿನಾಶಕ ನಿರೋಧಕ ಗುಣ ಹೊಂದಿವೆ. ಶೇ.30ರಿಂದ 70 ರಷ್ಟು ಇಳುವರಿ ಹೆಚ್ಚಿಸುತ್ತದೆ ಎಂದು ಹೇಳಲಾಗಿದೆ. ಆದರೆ ಈ ಕುಲಾಂತರಿ ತಳಿಗಳಿಂದ ಕೇವಲ ಮನುಷ್ಯರ ಆರೋಗ್ಯದ ಮೇಲೆ ಮಾತ್ರವಲ್ಲದೆ, ಪ್ರಾಣಿ–ಪಕ್ಷಿ, ಪರಿಸರ, ಭೂಮಿ ಮೇಲೂ ದುಷ್ಪರಿಣಾಮ ಬೀರುತ್ತದೆ. ಈ ಕುರಿತು ಈಗಾಗಲೇ ವಿಜ್ಞಾನಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕುಲಾಂತರಿ ತಳಿಗಳ ಪ್ರಯೋಗಕ್ಕೆ ನೀಡಿರುವ ಅನುಮತಿ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಮಹಾರಾಷ್ಟ್ರದಲ್ಲಿ ಕುಲಾಂತರಿ ಹತ್ತಿ ಬೆಳೆಯುವ ಪ್ರದೇಶದಲ್ಲಿಯೇ ರೈತರ ಆತ್ಮಹತ್ಯೆ ಹೆಚ್ಚಾಗಿದೆ. ಜೊತೆಗೆ ರೈತರ ಬೀಜ ಸ್ವಾತಂತ್ರ್ಯದ ಹರಣವಾಗಲಿದೆ. ಇನ್ನು, ಕೃಷಿ ವಿವಿಯಲ್ಲಿ ಪ್ರಯೋಗ ನಡೆಸದೇ ಹೊರಗಿನ ಪ್ರದೇಶದಲ್ಲಿ ನಡೆಸುವುದು ಸರಿಯಲ್ಲ. ಒಂದು ವೇಳೆ ಈ ಅನುಮತಿ ವಾಪಸು ಪಡೆಯದಿದ್ದರೆ ಅಂತಹ ಗಿಡಗಳನ್ನು ರೈತ ಸಂಘ ಕಿತ್ತೊಗೆಯಲಿದೆ. ಕೃಷಿ ಭೂಮಿಗಳ ಗುತ್ತಿಗೆ ಕಾನೂನು ಬದ್ಧಗೊಳಿಸುವಂತೆ ಕರ್ನಾಟಕ ಆಡಳಿತ ಸುಧಾರಣಾ ಆಯೋಗ ಸರ್ಕಾರಕ್ಕೆ ತಿಳಿಸಿದೆ. ಈ ವೇಳೆ ಎಚ್ಚರಿಕೆ ವಹಿಸಬೇಕು. ಭೂಮಿ ಬೀಳು ಬೀಳಲು ಇರುವ ಕಾರಣ ಪತ್ತೆ ಹಚ್ಚಿ ಸಮಸ್ಯೆ ನಿವಾರಿಸಬೇಕು. ಕಿಸಾನ್ ಸತ್ಯಾಗ್ರಹ ಸಾಕ್ಷ್ಯಚಿತ್ರವನ್ನು ಅಂತರರಾಷ್ಟ್ರೀಯ ಚಲನ ಚಿತ್ರೋತ್ಸವದಲ್ಲಿ ಸರ್ಕಾರ ಪ್ರದರ್ಶಿಸಬೇಕೆಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಸಾಮೂಹಿಕ ನಾಯಕತ್ವದ ರಾಜ್ಯ ರೈತ ಸಂಘ ಪದಾಧಿಕಾರಿಗಳಾದ ವಿದ್ಯಾಸಾಗರ್, ಮಂಜು ಕಿರಣ್, ಇಮ್ಮಾವು ರಘು ಇದ್ದರು.

ಸಹನಾಗೆ 6 ಚಿನ್ನದ ಪದಕ



ಮೈಸೂರು, ಮಾ.4– ಮೈಸೂರು ವಿಶ್ವವಿದ್ಯಾನಿಲಯದ ಘಟಿಕೋತ್ಸವದಲ್ಲಿ ಎಂ.ಎಸ್ಸಿ ಭೌತಶಾಸ್ತ್ರ ವಿದ್ಯಾರ್ಥಿನಿ ಬಿ.ಸಹನಾ 6 ಚಿನ್ನದ ಪದಕ ಹಾಗೂ ಒಂದು ನಗದು ಬಹುಮಾನ ಸ್ವೀಕರಿಸಿದರು. ಇವರು ಮೈಸೂರಿನ ಜಯನಗರ ನಿವಾಸಿ, ವಾಣಿ ವಿಲಾಸ ವಾಟರ್ ವರ್ಕ್ಸ್ ನೌಕರ ಎನ್.ಬಲರಾಮ ಹಾಗೂ ಕೆ.ಸರೋಜ ದಂಪತಿ ಪುತ್ರಿ

ಹೆಚ್.ಡಿ.ಕೋಟೆ: 69.64 ಲಕ್ಷ ಉಳಿತಾಯ ಬಜೆಟ್

ಹೆಚ್.ಡಿ.ಕೋಟೆ, ಮಾ.4– ಪಟ್ಟಣದ ಪುರಸಭೆಯ ದಿ.ಚಿಕ್ಕಮಾದು ಸಭಾಂಗಣದಲ್ಲಿ ಸೋಮವಾರ ಉಪವಿಭಾಗಾಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಅವರ ಅಧ್ಯಕ್ಷತೆಯಲ್ಲಿ 2024–25ನೇ ಸಾಲಿನ 69.64 ಲಕ್ಷ ರೂ.ಗಳ ಉಳಿತಾಯ ಬಜೆಟ್ ಅನ್ನು ಮುಖ್ಯಾಧಿಕಾರಿ ಸುರೇಶ್ ಮಂಡಿಸಿದರು.

ನಂತರ ಮಾತನಾಡಿದ ಅವರು, ಪ್ರಸ್ತುತ 16,83,08692 ರೂ. ಆದಾಯ ನಿರೀಕ್ಷಿಸಲಾಗಿದ್ದು, 16,13,44,203 ರೂ. ಖರ್ಚಾಗಲಿದ್ದು, 69.64 ಲಕ್ಷ ರೂ. ಉಳಿತಾಯವಾಗಲಿದೆ ಎಂದರು.



ಹೆಚ್.ಡಿ.ಕೋಟೆ ಪುರಸಭೆ ಮುಖ್ಯಾಧಿಕಾರಿ ಸುರೇಶ್ ಬಜೆಟ್ ಮಂಡಿಸಿದರು.

ಆಸ್ತಿ ತೆರಿಗೆಯಿಂದ 1.75ಕೋಟಿ, ನೀರಿನ ತೆರಿಗೆಯಿಂದ 45.50 ಲಕ್ಷ, ಮಳಿಗೆಗಳ ಬಾಡಿಗೆಯಿಂದ 3.10 ಲಕ್ಷ, ಉದ್ದಿಮೆ ಪರವಾನಗಿಯಿಂದ 12 ಲಕ್ಷ, ನೆಲ ಬಾಡಿಗೆ 20.05 ಲಕ್ಷ ಇತರೆ ಮೂಲಗಳಿಂದ 23.50 ಲಕ್ಷ ಆದಾಯ ಬರಲಿದೆ ಎಂದರು.

ಸರ್ಕಾರದ 15ನೇ ಹಣಕಾಸು ಅನುದಾನ 96 ಲಕ್ಷ, ಎಸ್‌ಎಫ್‌ಸಿ ಅನುದಾನ 34 ಲಕ್ಷ, ವಿದ್ಯುತ್ ಶಕ್ತಿ ಅನುದಾನ 1.99 ಕೋಟಿ, ವೇತನ ಅನುದಾನ 2.41 ಕೋಟಿ, ಕುಡಿಯುವ ನೀರಿನ ಅನುದಾನ 3 ಲಕ್ಷ ಆದಾಯ ಬರುವ ನಿರೀಕ್ಷೆ ಇದೆ ಎಂದರು. ಪುರಸಭೆ ಕಚೇರಿ ನಿರ್ವಹಣೆಗೆ 57.85 ಲಕ್ಷ, ರಸ್ತೆ ಕಲ್ಲು ಹಾಸುಗಳು ಮತ್ತು ರಸ್ತೆಬದಿ ಚರಂಡಿಗಳು ಇತರೆ ಸ್ಥರಾಸ್ತಿ ಗಳಿಗೆ 46 ಲಕ್ಷ, ಬೀದಿ ದೀಪ ನಿರ್ವಹಣೆಗೆ 26 ಲಕ್ಷ, ಸದಸ್ಯರ ಪ್ರವಾಸ ಅಧ್ಯಯನಕ್ಕೆ 5 ಲಕ್ಷ, ವಾಹನಗಳ ಇಂಧನ ಹಾಗೂ ದುರಸ್ತಿ, ನಿರ್ವಹಣೆಗೆ 12.20 ಲಕ್ಷ, ಹೊರಗುತ್ತಿಗೆ ನೌಕರರು ಹಾಗೂ ನೇರ ಪಾವತಿ ನೌಕರರ ವೇತನ 65 ಲಕ್ಷ, ಪೌರ ಕಾರ್ಮಿಕರ ಬೆಳಗಿನ ಉಪಾಹಾರಕ್ಕೆ 7 ಲಕ್ಷ ಖರ್ಚಾಗಲಿದೆ ಎಂದರು.

ಅಲ್ಲದೇ ನೀರು ಸರಬರಾಜು ವಿಭಾಗದ ದುರಸ್ತಿ ಮತ್ತು ನಿರ್ವಹಣೆಗೆ 30 ಲಕ್ಷ, ಬ್ಲಿಚಿಂಗ್ ಪೌಡರ್ ಸರಬರಾಜಿಗೆ 1.5 ಲಕ್ಷ, ಹೊರಗುತ್ತಿಗೆ ನೌಕರರ ವೇತನ ಪಾವತಿಗೆ 30 ಲಕ್ಷ, ಕಚೇರಿ ಯಂತ್ರೋಪಕರಣ ಹಾಗೂ ಕಂಪ್ಯೂಟರ್‌ಗಳಿಗೆ 5 ಲಕ್ಷ, ರಸ್ತೆಗಳ ನಿರ್ಮಾಣಕ್ಕೆ 1.50 ಕೋಟಿ, ಚರಂಡಿ ನಿರ್ಮಾಣಕ್ಕೆ 1 ಕೋಟಿ, ಮಳೆ ನೀರು, ಚರಂಡಿ ನಿರ್ಮಾಣಕ್ಕೆ 10 ಲಕ್ಷ, ನಾಗರಿಕ ವಿನ್ಯಾಸಗಳಿಗೆ 15 ಲಕ್ಷ, ಘನ ತ್ಯಾಜ್ಯ ವಿಲೇವಾರಿ ಘಟಕದ ಅಭಿವೃದ್ಧಿಗೆ 95 ಲಕ್ಷ, ನೀರು ಸರಬರಾಜು ವಿಭಾಗಕ್ಕೆ 50 ಲಕ್ಷ, ವಾಣಿಜ್ಯ ಕಟ್ಟಡ ನಿರ್ಮಾಣಕ್ಕೆ 20 ಲಕ್ಷ ವ್ಯಯವಾಗಲಿದೆ ಎಂದರು.

ಈ ವೇಳೆ ಪುರಸಭಾ ಸದಸ್ಯರಾದ ಐಡಿಯಾ ವೆಂಕಟೇಶ್, ಹೆಚ್.ಸಿ. ನರಸಿಂಹಮೂರ್ತಿ, ಆಸೀಫ್ ಇಕ್ಬಾಲ್, ರಾಜು, ಪುಟ್ಟಬಸವ, ಪ್ರೇಮ್ ಸಾಗರ್, ನಂಜಪ್ಪ, ಲೋಕೇಶ್, ಶಿವಮ್ಮ, ದರ್ಶಿನಿ, ನಂದಿನಿ, ಕವಿತಾ, ಸರೋಜಮ್ಮ, ಸುಹಾಸಿನಿ, ಅನಿತಾ, ಶಾಂತಮ್ಮ, ನಾಗಮ್ಮ, ಅಧಿಕಾರಿಗಳಾದ ರಘು, ಪರಮೇಶ್, ರಕ್ಷಿತ್‌ಗೌಡ, ಲಕ್ಷ್ಮಿದೇವಿ, ಹರೀಶ್, ಕೃತಿಕ, ರಘು, ವಿನೋದ್ ಸೇರಿದಂತೆ ಇನ್ನಿತರರು ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಕೆಟಿಎಂ (ಕ)	4 ಪ್ರದರ್ಶನಗಳು,
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಾಟೇರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕ್ರಾಕ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಗುಂಟೂರು ಖಾರಂ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಒಂದು ಸರಳ ಪ್ರೇಮಕಥೆ (ಕ)	4 ಪ್ರದರ್ಶನಗಳು
ರಾಜಕಮಲ್	
ಆಪರೇಷನ್ ವ್ಯಾಲಂಟೇನ್ (ತೆ)	4 ಪ್ರದರ್ಶನಗಳು
ಸಂಗಂ	
ಉಪಾಧ್ಯಕ್ಷ (ಕ)	4 ಪ್ರದರ್ಶನಗಳು
ಲಿಡೋ	
ವಾರಿ–3 (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಸಹದೇವ್ (ಹಿ)	4 ಪ್ರದರ್ಶನಗಳು
ಪ್ರಭಾ	
ಛಾಯಾ (ಕ)	2 ಪ್ರದರ್ಶನಗಳು
ನಮೋಭಾರತ್ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಚಾರಿ 111 (ತೆ): ಬೆ.10.30ಕ್ಕೆ, ಡ್ಯೂನ್ ಪಾರ್ಟ್2 (ಇಂ): ಮ.1.05ಕ್ಕೆ, ರಾ.10.25ಕ್ಕೆ, ಆರ್ಟಿಕಲ್ 370 (ಹಿಂ): ಸಂ.4.15ಕ್ಕೆ, ರಾ.7.25ಕ್ಕೆ.
ಸ್ಕ್ರೀನ್ 2	ಜುಗಲ್‌ಬಂದಿ (ಕ): ಬೆ.10.45ಕ್ಕೆ, ಉಪಾಧ್ಯಕ್ಷ (ಕ): ಮ.1.30ಕ್ಕೆ, ಲಾಪತಾ ಲೇಡಿಸ್ (ಹಿಂ): ಸಂ.4.25ಕ್ಕೆ, ಒಂದು ಸರಳ ಪ್ರೇಮಕಥೆ (ಕ): ರಾ.7ಕ್ಕೆ, ಮಂಜುಮಲೆ (ಮ): ರಾ.10ಕ್ಕೆ.
ಸ್ಕ್ರೀನ್ 3	ಆರ್ಟಿಕಲ್ 370 (ಹಿಂ): ಬೆ.10.40ಕ್ಕೆ, ರಾ.9.45ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ
ಸ್ಕ್ರೀನ್ 4	

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಆಪರೇಷನ್ ವ್ಯಾಲೆಂಟೈನ್ (ತೆ): ಬೆ.9.55ಕ್ಕೆ, ಲಾಪತಾ ಲೇಡಿಸ್ (ಹಿಂ): ಮ.12.45ಕ್ಕೆ, ಡ್ಯೂನ್ ಪಾರ್ಟ್2 (ಇಂ): ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ಡ್ಯೂನ್ ಪಾರ್ಟ್2 (ಇಂ): ಬೆ.9.50ಕ್ಕೆ, ಮ.1.20ಕ್ಕೆ, ಕ್ರೀಂ (ಕ): ಸಂ.4.50ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ): ರಾ.7.25ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಲಾಪತಾ ಲೇಡಿಸ್ (ಹಿಂ): ಬೆ.10ಕ್ಕೆ, ರಾ.7.25ಕ್ಕೆ, ಆರ್ಟಿಕಲ್ 370 (ಹಿಂ): ಮ.12.45ಕ್ಕೆ, ಸಂ.4.05ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಆಪರೇಷನ್ ವ್ಯಾಲೆಂಟೈನ್ (ತೆ): ಮ.12ಕ್ಕೆ, ಉಪಾಧ್ಯಕ್ಷ (ಕ): ಮ.3.05ಕ್ಕೆ, ಒಂದು ಸರಳ ಪ್ರೇಮಕಥೆ (ಕ): ಸಂ.6.20ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಆರ್ಟಿಕಲ್ 370 (ಹಿಂ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ಡ್ಯೂನ್ ಪಾರ್ಟ್ 2 (ಇಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ಡೆಮೋನ್ ಸ್ಲೇಯರ್ (ಜ): ಸಂ.4.30ಕ್ಕೆ, ಆಪರೇಷನ್ ವ್ಯಾಲೆಂಟೈನ್ (ತೆ & ಹಿಂ): ಬೆ.9.45ಕ್ಕೆ, ಮ.3.40ಕ್ಕೆ, ಸಂ.6.35ಕ್ಕೆ, ರಾ.9.30ಕ್ಕೆ, ಲಾಪತಾ ಲೇಡಿಸ್ (ಹಿಂ): ಬೆ.10.35ಕ್ಕೆ, ಸಂ.4.10ಕ್ಕೆ, ರಾ.9.45ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಬೆ.10.20ಕ್ಕೆ, ಮ.1.25ಕ್ಕೆ, ರಾ.7.25ಕ್ಕೆ, ತೇರಿ ಬತೂನ್ ಮೇ ಐಸಾ ಉಲ್ಝಾ ಜಿಯಾ (ಹಿಂ): ಬೆ.11.55ಕ್ಕೆ, ಕ್ರೀಂ (ಕ): ಸಂ.6.55ಕ್ಕೆ, ಪ್ರೇಮಲು (ಮ): ರಾ.10.20ಕ್ಕೆ, ಜೋಶುವಾ (ತ): ಮ.1.20ಕ್ಕೆ, ಸಂ.6.55ಕ್ಕೆ, ಭ್ರಮಯುಗಂ (ಮ): ರಾ.9.45ಕ್ಕೆ, ವಾರನಂ ಆಯಿರಂ (ತ): ಮ.3.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಗಾಯತ್ರಿ ವಿದ್ಯಾಸಂಸ್ಥೆಯಲ್ಲಿ ಶಾಲಾ ವಾರ್ಷಿಕೋತ್ಸವ



ಮಲ್ಕುಂಡಿ, ಮಾ.4– ಪೋಷಕರು ತಮ್ಮ ಮಕ್ಕಳಿಗೆ ಆಸ್ತಿ ಮಾಡುವ ಬದಲು ಅವರಿಗೆ ಉನ್ನತ ಶಿಕ್ಷಣ ಕೊಡಿಸುವ ಮೂಲಕ ಅವರನ್ನೇ ಆಸ್ತಿಯನ್ನಾಗಿ ಮಾಡಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಶಿವಲಿಂಗಯ್ಯ ಕರೆ ನೀಡಿದರು.

ಸಮೀಪದ ಹುರ ಗ್ರಾಮದ ಗಾಯತ್ರಿ ವಿದ್ಯಾಸಂಸ್ಥೆ ಶಾಲಾ ವಾರ್ಷಿ ಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಎಲ್ಲಾ ಸಂಪತ್ತಿಗಿಂತಲೂ ವಿದ್ಯೆ ಶ್ರೇಷ್ಠವಾದದು. ಮಕ್ಕಳಿಗೆ ಉನ್ನತ ಶಿಕ್ಷಣ ನೀಡಿದರೆ ಅವರೇ ಎಲ್ಲಾ ಸಂಪತ್ತುಗಳನ್ನು ಗಳಿಸಿಕೊಳ್ಳುತ್ತಾರೆ.ಹೀಗಾಗಿ ಪ್ರತಿಯೊಬ್ಬರೂ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಸಾಹಿತಿ ಮಲ್ಕುಂಡಿ ಮಹದೇವಸ್ವಾಮಿ, ವಾಡಪಟ್ಟಣ್ಣದ ವಿರಕ್ತ ಮಠಾಧ್ಯಕ್ಷ ತೋಂಟದಾರ್ಯ ಸ್ವಾಮೀಜಿ, ಹಲ್ಲರೆ ಗುರುಮಲ್ಲೇಶ್ವರ ಮಠಾಧ್ಯಕ್ಷ ಬಸವಣ್ಣ ಸ್ವಾಮೀಜಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷ ವಿದ್ಯಾಸಾಗರ್, ಶಿಕ್ಷಣ ಸಂಘದ ಅಧ್ಯಕ್ಷ ರತ್ನಕರ್, ರಮೇಶ್, ಜಿಪಂ ಮಾಜಿ ಸದಸ್ಯ ಬಿ.ಸಿ.ರಾಜಣ್ಣ, ಎಂ.ಬಿ.ವಿರೇಶ್, ಗಾಯತ್ರಿ ವಿದ್ಯಾಸಂಸ್ಥೆ ಕಾರ್ಯದರ್ಶಿ ನಟರಾಜ್, ಸೇರಿದಂತೆ ಶಿಕ್ಷಕ ವೃಂದ ಹಾಜರಿದ್ದರು.

'ಅಶ್ವಮೇಧ' ಬಸ್‌ಗಳಿಗೆ ಶಾಸಕ ದರ್ಶನ್ ಚಾಲನೆ

ನಂಜನಗೂಡು, ಮಾ.4– ಕ್ಷೇತ್ರದ ಜನರ ಅನುಕೂಲಕ್ಕಾಗಿ ಸರ್ಕಾರ 10 ಅಶ್ವಮೇಧ ಕ್ಲಾಸಿಕ್ ಬಸ್‌ಗಳನ್ನು ನೀಡಿದ್ದು, ಇಂದಿನಿಂದ ನಗರ ಬಸ್ ನಿಲ್ದಾಣದಿಂದ ಕಾರ್ಯಾರಂಭ ಮಾಡಲಿವೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಸೋಮವಾರ ಹೊಸ ಬಸ್‌ಗಳಿಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಕಳೆದ ಎರಡ್ಮೂರು ವರ್ಷಗಳಿಂದ ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಬಸ್‌ಗಳ ಕೊರತೆ ಉಂಟಾಗಿತ್ತು ಅಲ್ಲದೇ ಸರ್ಕಾರ ಮಹಿಳೆಯರಿಗಾಗಿ ಸಾರಿಗೆ ಸಂಸ್ಥೆ ಬಸ್‌ಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸಿದ್ದರಿಂದ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿತ್ತು. ಹೀಗಾಗಿ ಸದನದಲ್ಲಿ ನಮ್ಮ ಕ್ಷೇತ್ರಕ್ಕೆ ಹೆಚ್ಚಿನ ಬಸ್ ನೀಡುವಂತೆ ಮನವಿ ಮಾಡಿದ್ದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ವಾರದೊಳಗೆ ಹೊಸ ಬಸ್‌ಗಳನ್ನು ನೀಡುವುದಾಗಿ ಭರವಸೆ ನೀಡಿದ್ದರು.



ಶಾಸಕ ದರ್ಶನ್ ಅಶ್ವಮೇಧ ಕ್ಲಾಸಿಕ್ ಬಸ್‌ಗಳಿಗೆ ಚಾಲನೆ ನೀಡಿದರು.

ಅದರಂತೆ ಬಸ್‌ಗಳನ್ನು ನೀಡಿದ್ದಾರೆ. ಹೀಗಾಗಿ ಅವರಿಗೆ ಕ್ಷೇತ್ರದ ಪರವಾಗಿ ಧನ್ಯವಾದ ಸ್ವೀಕರಿಸುತ್ತೇನೆ ಎಂದರು.

ಕೆಎಸ್‌ಆರ್‌ಟಿಸಿ ಜಿಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿ ವೀರೇಶ್ ತ್ಯಾಪಿ ಮಾತನಾಡಿ, ನೂತನ ಬಸ್‌ಗಳಲ್ಲಿ ಬಕೆಟ್ ಸೀಟ್, ಎಲ್‌ಇಡಿ ಲೈಟ್, ಮೊಬೈಲ್ ಚಾರ್ಜರ್, ಸಿಸಿ ಕ್ಯಾಮರಾ ಸೌಲಭ್ಯವಿದ್ದು, ಪ್ರಯಾಣಿಕರ ಸುಖ ಪ್ರಯಾಣಕ್ಕಾಗಿ ಸಂಸ್ಥೆ ಹೆಚ್ಚಿನ ಆಧುನಿಕ ಸೌಲಭ್ಯ ಒದಗಿಸಿದೆ. ಇನ್ನೂ 2 ಬಸ್‌ಗಳು ನಂಜನಗೂಡು ಘಟಕಕ್ಕೆ ಶೀಘ್ರ ಲಭ್ಯವಾಗಲಿವೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಅಧ್ಯಕ್ಷ ಸಿ.ಎಂ.ಶಂಕರ್, ಶ್ರೀಕಂಠ ನಾಯಕ, ಘಟಕ ವ್ಯವಸ್ಥಾಪಕ ತ್ಯಾಗರಾಜ್, ವಿಭಾಗೀಯ ಸಂಚಲನಾಧಿಕಾರಿ ದಶರಥ್, ಭದ್ರತಾಧಿಕಾರಿ ಶಿವರಾಮೇಗೌಡ, ಕಾರ್ಮಿಕ ಮುಖಂಡರಾದ ರಾಜೇಶ್, ಬಸವರಾಜ್, ಚಿನ್ನಸ್ವಾಮಿ, ನಗರಸಭೆ ಸದಸ್ಯರಾದ ಗಾಯತ್ರಿ, ಗಂಗಾಧರ್, ಎನ್.ಎಸ್. ಯೋಗೇಶ್, ಗಂಗಾಧರ್ ಉಪಸ್ಥಿತರಿದ್ದರು.

ಸರ್ವಜ್ಞನ ತ್ರಿಪದಿಗಳು ಜ್ಞಾನದ ಭಂಡಾರ: ಷಣ್ಮುಖಸ್ವಾಮಿ

ತಿ.ನರಸೀಪುರ, ಮಾ.4– ಸರ್ವಜ್ಞನ ತ್ರಿಪದಿಗಳು ಜ್ಞಾನದ ಭಂಡಾರವಾಗಿದ್ದು, ಕೇವಲ 3 ಸಾಲಿನ ತ್ರಿಪದಿಗಳಲ್ಲಿ ಸಮಾಜದ ಅಂಕುಡೊಂಕುಗಳನ್ನು ನಿರ್ಭೀತಿಯಿಂದ ಪ್ರಸ್ತುತ ಪಡಿಸಲಾಗಿದೆ. ಜನತೆ ಇದನ್ನು ಓದಿದರೆ ಸಮಾಜದಲ್ಲಿ ನಡೆಯುವ ಸರಿ ತಪ್ಪುಗಳ ಬಗ್ಗೆ ತಿಳುವಳಿಕೆ ಮೂಡುತ್ತದೆ ಎಂದು ತಾಲೂಕು ಕಸಾಪ ಮಾಜಿ ಅಧ್ಯಕ್ಷ ಕೆ.ಆರ್.ಷಣ್ಮುಖಸ್ವಾಮಿ ತಿಳಿಸಿದರು.

ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ತಾಲೂಕು ಕುಲಾಲಗುಂಡ ಬ್ರಹ್ಮಾರ್ಯ ಕುಂಬಾರ ಸಂಘದ ಸಂಯುಕ್ತಾಶ್ರಯದಲ್ಲಿ ಪಟ್ಟಣದ ತಾಪಂ ಸಭಾಂಗಣದಲ್ಲಿ ಆಯೋಜಿಸಿದ್ದ 504ನೇ ಸರ್ವಜ್ಞ ಜಯಂತಿಯಲ್ಲಿ ಮಾತನಾಡಿದ ಅವರು, ಸಮಾಜದ ಅಂಕುಡೊಂಡು ತಿದ್ದುತ್ತಾ, ಬಡವರು–ದುರ್ಬಲರ ನೋವಿಗೆ ಸ್ಪಂದಿಸುವ ಧ್ವನಿಯಾಗಿದ್ದ ಸರ್ವಜ್ಞ, ದಿಟ್ಟ ನಿಲುವಿನ ಪ್ರಬುದ್ಧ ವ್ಯಕ್ತಿಯಾಗಿದ್ದರು. ಕಬೀರ, ನಾರಾಯಣ ಗುರು, ತಿರುವಳ್ಳುವರ್ ಮಾದರಿ ತ್ರಿಪದಿಗಳ ಮೂಲಕ ತಮ್ಮ ತತ್ವ ವಿಚಾರಗಳನ್ನು ಬೋಧಿಸಿದ ಸರ್ವಜ್ಞನಿಗೂ ಬುದ್ಧ, ಬಸವ, ಅಂಬೇಡ್ಕರ್‌ಗೆ ಸಿಕ್ಕ ಮನ್ನಣೆ ಅವರಿಗೂ ದೊರೆಯಬೇಕಾಗಿದೆ. ತ್ರಿಪದಿ ವಚನಕಾರ ಸರ್ವಜ್ಞರ ತತ್ವ ಸಿದ್ಧಾಂತಗಳನ್ನು ಪ್ರಸ್ತುತ ಯುವ ಪೀಳಿಗೆಗೆ ತಿಳಿಸುವ ಅಗತ್ಯವಿದೆ ಎಂದರು.

ಸರ್ವಜ್ಞರು ಸಂಸ್ಕೃತ ಕಲಿತು ಪಂಡಿತರು ಎನಿಸಿಕೊಂಡವರಿಗಿಂತ ಅದ್ಭುತ ಸಂದೇಶಗಳನ್ನು ಅಪ್ಪಟ ಕನ್ನಡದಲ್ಲೇ ತ್ರಿಪದಿಗಳಲ್ಲೇ ಕಟ್ಟಿಕೊಟ್ಟರು. ಅಲ್ಲದೇ ಯಾವುದೇ ವಿಷಯ ಬಿಟ್ಟು ಕೊಡದೇ ಎಲ್ಲಾ ಸಂಗತಿಗಳ ಕುರಿತು ವಚನ ರಚಿಸಿದ ಅವರನ್ನು ಇದೇ ಕಾರಣಕ್ಕೆ ಆಡುತಿನ್ನದ ಸೊಪ್ಪಿಲ್ಲ. ವಚನಗಳಲ್ಲಿ ಸರ್ವಜ್ಞರು ಹೇಳದ ವಿಷಯಗಳಿಲ್ಲ ಎಂದು ಬಣ್ಣಿಸಿದರು.



ಕಾರ್ಯಕ್ರಮದಲ್ಲಿ ಮುಖಂಡರು ಸರ್ವಜ್ಞರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ತಹಸೀಲ್ದಾರ್ ಟಿ.ಜಿ.ಸುರೇಶ್ ಆಚಾರ್ ಮಾತನಾಡಿ, ಕನ್ನಡ ಸಾಹಿತ್ಯಕ್ಕೆ ಸರ್ವಜ್ಞರ ಕೊಡುಗೆ ಅಪಾರ. ಮಹಾತ್ಮರ ವಿಚಾರಧಾರೆಗಳು ಸಮಾಜದ ಕನ್ನಡಿ ಇದ್ದಂತೆ. ಅವರ ತತ್ವಾದರ್ಶ, ಸಂದೇಶಗಳು ಉತ್ತಮ ಸಮಾಜ ನಿರ್ಮಾಣಕ್ಕೆ ಮಾರ್ಗದರ್ಶಿ ಸೂತ್ರಗಳಾಗಿವೆ. ಇದಕ್ಕೆ ಸರ್ವಜ್ಞ ನಮ್ಮೆಲ್ಲರ ನಡುವಿನ ಸಮ ಸಮಾಜದ ಸಾಕ್ಷಿ ಪ್ರಜ್ಞೆಯಾಗಿದ್ದಾರೆ ಎಂದರು.

ಸರ್ವಜ್ಞ ಎಂದರೆ ಎಲ್ಲವನ್ನು ತಿಳಿದವನು ಎಂದರ್ಥ. ಅಂತಹ ಹೆಸರಿನ ಅಂಕಿತ ಬಳಸಿಕೊಂಡು ವಚನಗಳನ್ನು ರಚಿಸಿದ ಸರ್ವಜ್ಞರು ಜಗತ್ತು ಕಂಡ ಶ್ರೇಷ್ಠ ದಾರ್ಶನಿಕರಲ್ಲಿ ಒಬ್ಬರು. ಪಂಪ, ರನ್ನ, ಜನ್ನ, ಪೊನ್ನ ಇವರೆಲ್ಲರು ಸಂಸ್ಕೃತ ಅಧ್ಯಯನ ಮಾಡಿದ ಪಂಡಿತರಾದರೆ, ಸರ್ವಜ್ಞರು ಅಪ್ಪಟ ಕನ್ನಡದ ಕವಿ ಎಂದು ವಿಶ್ಲೇಷಿಸಿದರು.

ಕಾರ್ಯಕ್ರಮದಲ್ಲಿ ಕುಂಬಾರ ಸಂಘದ ಸಂಸ್ಥಾಪಕ ಗುತ್ತಿಗೆದಾರ ರಾಜಣ್ಣ, ತಾಲೂಕು ಕುಂಬಾರ ಸಂಘದ ಅಧ್ಯಕ್ಷ ರಮೇಶ್, ಗೌರವಾಧ್ಯಕ್ಷ ಮಹದೇವ ಶೆಟ್ಟಿ, ಉಪಾಧ್ಯಕ್ಷ ಆರ್.ಸಿದ್ದರಾಜು, ಕಾರ್ಯದರ್ಶಿ ಜೆ.ಮಹ ದೇವಸ್ವಾಮಿ, ಚಂದ್ರು, ಗ್ರಾಪಂ ಸದಸ್ಯ ನಾಗೇಂದ್ರ, ರಾಮಶೆಟ್ಟಿ, ಸಿದ್ದರಾಜು, ನಂಜುಂಡ, ಕುಮಾರಸ್ವಾಮಿ ಸೇರಿದಂತೆ ಇನ್ನಿತರರಿದ್ದರು.

ಆಕಸ್ಮಿಕ ಬೆಂಕಿಗೆ ಬಾಳೆ, ಬಿದಿರು ಭಸ್ಮ

ಹುಣಸೂರು, ಮಾ.4– ಆಕಸ್ಮಿಕ ಬೆಂಕಿ ಬಿದ್ದು ಬಾಳೆ ತೋಟ, ಬಿದಿರು ಭಸ್ಮವಾಗಿರುವ ಘಟನೆ ತಾಲೂಕಿನಲ್ಲಿ ನಡೆದಿದೆ.



ತಾಲೂಕಿನ ಆಸ್ವಾಳು ಗ್ರಾಮದ ಶಿವಕುಮಾರ್ ಅವರಿಗೆ ಸೇರಿದ ಬಾಳೆ ತೋಟ ಹಾಗೂ ಹನಗೋಡು ಲಕ್ಷ್ಮಣ ತೀರ್ಥ ನದಿ ಯಂಚಿನ ಜಮೀನಿನಲ್ಲಿ ಬೆಳೆದಿದ್ದ 10ಕ್ಕೂ ಹೆಚ್ಚು ಬಿದಿರಿನ ಹಿಂಡಲು ಬೆಂಕಿಗಾಹುತಿಯಾಗಿದೆ. ಶಿವಕುಮಾರ್ ಅವರಿಗೆ ಸೇರಿದ 2 ಎಕರೆ ಜಮೀನಿನಲ್ಲಿ ಕಟಾವಿಗೆ ಬಂದಿದ್ದ ನೇಂದ್ರ ಬಾಳೆ ಹಾಗೂ ಇವರ ಪಕ್ಕದ ಜಮೀನಿನಲ್ಲಿ ಬೆಳೆದಿದ್ದ ಒಂದೂವರೆ ಎಕರೆ ಬಾಳೆ ಸೇರಿದಂತೆ ಮೂರುವರೆ ಎಕರೆ ಬಾಳೆ ಬೆಳೆ ನಾಶವಾಗಿದ್ದು, ಸುಮಾರು 6 ಲಕ್ಷ ರೂ. ನಷ್ಟ ಸಂಭವಿಸಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳದ ಅಧಿಕಾರಿ ಸತೀಶ್ ಹಾಗೂ ಸಿಬ್ಬಂದಿ ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ.

ಇನ್ನು, ಹನಗೋಡಿನ ಲಕ್ಷ್ಮಣತೀರ್ಥ ನದಿ ಯಂಚಿನ ಹೆಚ್.ಎಲ್.ರಾಜಣ್ಣ, ಸತೀಶ್ ಹಾಗೂ ಮಹೇಶ್ ಅವರಿಗೆ ಸೇರಿದ ಜಮೀನಿನಲ್ಲಿ ಬೆಳೆದಿದ್ದ 10ಕ್ಕೂ ಹೆಚ್ಚು ಬಿದಿರಿಗೆ ಆಕಸ್ಮಿಕ ಬೆಂಕಿ ಬಿದ್ದು ಭಸ್ಮವಾಗಿದೆ. ಅಲ್ಲದೇ ಸತೀಶ್ ಅವರಿಗೆ ಸೇರಿದ ಸ್ಪಿಂಕ್ಲರ್ ಸೆಟ್ ಬೆಂಕಿಗಾಹುತಿಯಾಗಿದೆ.



ಪಿರಿಯಾಪಟ್ಟಣ ತಾಲೂಕಿನ ಕದ್ರಿಗೌಡನಕೊಪ್ಪಲು ಗ್ರಾಮದಲ್ಲಿ ರಸ್ತೆ ಚರಂಡಿ ಅಭಿವೃದ್ಧಿ ಕಾಮಗಾರಿಗೆ ಸಚಿವ ಕೆ.ವೆಂಕಟೇಶ್ ಭೂಮಿಪೂಜೆ ನೆರವೇರಿಸಿದರು. ಈ ವೇಳೆ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಡಿ.ಟಿ.ಸ್ವಾಮಿ, ರೆಹಮತ್ ಜಾನ್ ಬಾಬು, ತಾಲೂಕು ಆಶ್ರಯ ಕಮಿಟಿ ಅಧ್ಯಕ್ಷ ನಿತಿನ್ ಸೇರಿದಂತೆ ಇತರರಿದ್ದರು.

ಹುಣಸೂರು: ರೈತರಿಗೆ ಕೃಷಿ ಪರಿಕರ ವಿತರಣೆ



ರೈತರಿಗೆ ಕೃಷಿ ಉಪಕರಣಗಳನ್ನು ಶಾಸಕ ಜಿ.ಡಿ.ಹರೀಶ್‌ಗೌಡ ವಿತರಿಸಿದರು.

ಹುಣಸೂರು, ಮಾ.4– ಕೇಂದ್ರ, ರಾಜ್ಯ ಸರ್ಕಾರದ ಸಹಾಯಧನ ಯೋಜನೆಯಡಿ ನೀಡುವ ಕೃಷಿ ಪರಿಕರಗಳನ್ನು ಶಾಸಕ ಜಿ.ಡಿ.ಹರೀಶ್‌ಗೌಡ ರೈತರಿಗೆ ವಿತರಿಸಿದರು.

ನಗರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಆವರಣದಲ್ಲಿ ಕೃಷಿ ಪರಿಕರಗಳನ್ನು ವಿತರಿಸಿ ಮಾತನಾಡಿದ ಅವರು, ಇಂದು 200ಕ್ಕೂ ಹೆಚ್ಚು ರೈತರಿಗೆ ಕೃಷಿ ಪರಿಕರಗಳನ್ನು ವಿತರಿಸಲಾಗಿದೆ. ರೈತರು ಇದನ್ನು ಸದುಪಯೋಗಪಡಿಸಿಕೊಂಡು ಕೃಷಿಯಲ್ಲಿ ತೊಡಗಬೇಕು ಎಂದರು. ತಾಲೂಕಿನ 2 ಸಾವಿರ ರೈತರಿಗೆ ನಾಲ್ಕು ಕೋಟಿ ವೆಚ್ಚದಲ್ಲಿ ತುಂತುರು ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ. ಪ್ರಸ್ತುತ ನೂರಾರು ರೈತರು ಈ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿದ್ದು, ಆದ್ಯತೆ ಮೇರೆಗೆ ವಿತರಿಸಲಾಗುವುದು. ಸರ್ಕಾರ ಪ್ರತಿ ಗ್ರಾಪಂಗೂ ಕೃಷಿ ಸಖಿಯರನ್ನು ನೇಮಿಸಿದ್ದು, ಇದರಿಂದ ರೈತರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದರು.

ಗ್ಯಾರಂಟಿಗೆ ವಿರೋಧವಿಲ್ಲ, ಬರ ಪರಿಹಾರ ಸಮರ್ಪಕವಾಗಿ ನೀಡಲಿ: ರಾಜ್ಯ ಸರ್ಕಾರ ಕಿಸಾನ್ ಸಮ್ಮಾನ್ ಯೋಜನೆ ನಿಲ್ಲಿಸಿದ್ದು, ಕೇಂದ್ರ ಸರ್ಕಾರ ಹಣ ನೀಡುತ್ತಿಲ್ಲ ಎಂದು ಆರೋಪಿಸುತ್ತಿದೆ. ಗ್ಯಾರಂಟಿ ಯೋಜನೆಗಳಿಗೆ ಸರ್ಕಾರ 76 ಸಾವಿರ ಕೋಟಿ ರೂ. ಮೀಸಲಿಟ್ಟಿದ್ದು, ಅದಕ್ಕೆ ನಮ್ಮ ವಿರೋಧವಿಲ್ಲ. ಆದರೆ ರಾಜ್ಯದಲ್ಲಿ ಬರ ತಾಂಡವವಾಡುತ್ತಿದೆ. ಇಂತಹ ವೇಳೆ ರೈತರಿಗೆ ನೀಡುವ 2 ಸಾವಿರ ರೂ. ಬರ ಪರಿಹಾರ ಸಾಲುವುದಿಲ್ಲ. ಅದೂ ಕೂಡ ರೈತರಿಗೆ ಸಕಾಲದಲ್ಲಿ ತಲುಪುತ್ತಿಲ್ಲ ಎಂದ ಅವರು ರಾಗಿ ಬೆಳೆಯನ್ನು ಬರ ಪಟ್ಟಿಗೆ ಸೇರಿಸುವ ಬಗ್ಗೆ ಚರ್ಚಿಸಿದ್ದೇನೆ ಎಂದರು.

ಕೃಷಿ ಉಪನಿರ್ದೇಶಕ ಡಾ.ರಾಜು ಮಾತನಾಡಿ, ಕೃಷಿ ಕಾರ್ಮಿಕರ ಕೊರತೆ ನಡುವೆ ಕೃಷಿ ಚಟುವಟಿಕೆ ನಡೆಸಲು ಎಲ್ಲಾ ಬಗೆಯ ಕೃಷಿ ಯಂತ್ರೋಪಕರಣಗಳು ಸಬ್ಸಿಡಿ ರೂಪದಲ್ಲಿ ದೊರೆಯುತ್ತಿದೆ. ಉಪಕರಣ ಖರೀದಿಸಿದರೆ ಸಾಲದು, ಅವುಗಳ ಉಪಯೋಗ, ಬಳಸುವ ಬಗೆ, ಸಣ್ಣಪುಟ್ಟ ದುರಸ್ತಿಗಳನ್ನು ಮಾಡಿಕೊಳ್ಳುವ ಬಗ್ಗೆಯೂ ರೈತರಿಗೆ ತರಬೇತಿ ನೀಡಲಾಗುತ್ತಿದೆ ಎಂದರು.

ಇದೇ ವೇಳೆ ತಾಲೂಕಿನ 200ಕ್ಕೂ ಹೆಚ್ಚು ರೈತರಿಗೆ ಕೃಷಿ ಯಂತ್ರೋಪಕರಣಗಳಾದ ಪವರ್ ಟಿಲ್ಲರ್, ಚಾಫ್ ಕಟರ್, ಡೀಸೆಲ್ ಮೋಟಾರ್, ಪವರ್ ವೀಡರ್, ರೋಟೋವೇಟರ್, ಬ್ರಷ್ ಕಟ್ಟರ್, ತುಂತುರು ನೀರಾವರಿಗೆ ಬಳಸುವ ಪೈಪ್‌ಗಳನ್ನು ವಿತರಿಸಲಾಯಿತು.

ಸಹಾಯಕ ಕೃಷಿ ನಿರ್ದೇಶಕ ಅನಿಲ್‌ಕುಮಾರ್ ಮಾತನಾಡಿದರು. ಟಿಎಪಿಸಿಎಂಎಸ್ ಅಧ್ಯಕ್ಷ ಬಸವಲಿಂಗಯ್ಯ, ಕೃಷಿಕ ಸಮಾಜದ ಅಧ್ಯಕ್ಷ ಅರುಣ್‌ಕುಮಾರ್, ಕಾರ್ಯದರ್ಶಿ ಹೊನ್ನಪ್ಪರಾವ್ ಕಾಳಿಂಗೆ, ಚಾಮುಂಡೇಶ್ವರಿ ಟ್ರೇಡರ್ಸ್‌ನ ಚಂದ್ರಶೇಖರ್, ತಾಪಂ ಮಾಜಿ ಸದಸ್ಯ ಶ್ರೀನಿವಾಸ್, ಮುಖಂಡರಾದ ಶ್ರೀಧರ್, ಗೋವಿಂದೇಗೌಡ, ಕೆಂಪೇಗೌಡ, ವಸಂತ, ಕೃಷಿ ಸಹಾಯಕರಾದ ವೆಂಕಟಾಚಲಪತಿ, ಶ್ರೀಕಾಂತ್, ಮುಕುಂದ, ವಿನಯಕುಮಾರ್, ವೆಂಕಟೇಶ್, ಆತ್ಮ ಯೋಜನೆಯ ಅಶ್ವಿನಿ, ಕಾವ್ಯ, ದೀಪಾ, ಶಶಿಕುಮಾರ್, ವಿವಿಧ ಗ್ರಾಪಂಗಳ ಕೃಷಿ ಸಖಿಯರು ಹಾಗೂ ರೈತರಿದ್ದರು.

ಎಸ್‌ಇಪಿ, ಟಿಎಸ್‌ಪಿ ಅನುದಾನ ಗ್ಯಾರಂಟಿ ಯೋಜನೆಗಳಿಗೆ ಬಳಕೆ

ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಾಮ್ರಾಟ್ ಸುಂದರೇಶನ್ ಆರೋಪ

ತಿ.ನರಸೀಪುರ, ಮಾ.4– ಎಸ್‌ಸಿಪಿ, ಟಿಎಸ್‌ಪಿ ಅನುದಾನದ 25 ಸಾವಿರ ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಗೆ ಬಳಸುವ ಮೂಲಕ ಎಸ್‌ಸಿ, ಎಸ್‌ಟಿ ಸಮುದಾಯವನ್ನು ಕೇವಲ ವೋಟ್ ಬ್ಯಾಂಕ್‌ಗೆ ಬಳಸಿಕೊಳ್ಳುತ್ತಿದೆ ಎಂದು ಜಿಲ್ಲಾ ಗ್ರಾಮಾಂತರ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಾಮ್ರಾಟ್ ಸುಂದರೇಶನ್ ಆರೋಪಿಸಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ ಮೀಸಲಿಟ್ಟಿದ್ದ ಎಸ್‌ಸಿಪಿ, ಟಿಎಸ್‌ಪಿ ಹಣದ ಪೈಕಿ ರಾಜ್ಯ ಸರ್ಕಾರ ಕಳೆದ ವರ್ಷ 11,140 ಕೋಟಿ, ಪ್ರಸಕ್ತ ವರ್ಷ 14 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗೆ ಬಳಸಿಕೊಳ್ಳುವ ಮೂಲಕ ಹಿಂದುಳಿದ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ. ಮಹದೇವಪ್ಪನವರು ರಾಜ್ಯದ ಹಿಂದುಳಿದ ವರ್ಗಕ್ಕೆ ನೀಡುತ್ತಿರುವ ಯೋಜನೆಗಳಾದರೂ ಏನು ಎಂದು ಪ್ರಶ್ನಿಸಿದ ಅವರು, ರಾಜ್ಯದ ಜನತೆ ಎಲ್ಲವನ್ನು ಗಮನಿಸುತ್ತಿದ್ದಾರೆ. ಮುಂದೆ ಇದರ ಫಲಾಫಲಗಳನ್ನು ಅನುಭವಿಸುತ್ತೀರಿ ಎಂದರು. ರಾಹುಲ್ ಗಾಂಧಿ ಅವರು ದೇಶದೆಲ್ಲೆಡೆ ಭಾರತ್ ಜೋಡೋ ಯಾತ್ರೆ ನಡೆಸುತ್ತಿದ್ದಾರೆ. ಆದರೆ ವಿದೇಶದಲ್ಲಿ ಭಾರತದ ಬಗ್ಗೆ ಟೀಕೆ ಮಾಡುತ್ತಾರೆ. ಇವರಿಗೆ ಭಾರತ್ ಜೋಡೋ ಮಾಡಲು ಇರುವ ಮಾನದಂಡವಾದರೂ ಏನು ಎಂದು ಪ್ರಶ್ನಿಸಿದರು.



ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಾಮ್ರಾಟ್ ಸುಂದರೇಶನ್ ಮಾತನಾಡಿದರು.

ಕೇಂದ್ರ ಬಜೆಟ್ ನಂತರ ಸಂಸದ ಡಿ.ಕೆ.ಸುರೇಶ್ ದೇಶ ವಿಭಜಿಸುವ ಬಗ್ಗೆ ಹೇಳಿಕೆ ಕೊಡುತ್ತಾರೆ ಎಂದು ಕಿಡಿಕಾರಿದ ಸಾಮ್ರಾಟ್, ಹಿಂದೂ ದೇವಾಲಯದ ಮೇಲೆ ಶೇ.10ರಷ್ಟು ತೆರಿಗೆ ವಿಧಿಸಿ ಸೆಷನ್ ಇಲ್ಲದ ಸಮಯ ಬಿಲ್‌ಪಾಸ್ ಮಾಡುತ್ತಾರೆ. ಆದರೆ ಮೇಲ್ಮನೆಯಲ್ಲಿ ಬಿಲ್ ಪಾಸ್‌ಗೆ ವಿರೋಧ ವ್ಯಕ್ತವಾದ ನಂತರ ಗೌರ್ನರ್ ಕಡೆಯಿಂದ ಬಿಲ್‌ಪಾಸ್ ಮಾಡಿಸುತ್ತಾರೆ. ಚರ್ಚ್ ಮತ್ತು ಮಸೀದಿಗಳ ಮೇಲೆ ನಯಾಪೈಸೆ ತೆರಿಗೆ ವಿಧಿಸದ ಸರ್ಕಾರ ಹಿಂದೂ ದೇವಾಲಯಗಳಲ್ಲಿ ಶೇಖರಣೆಯಾದ ಹಣವನ್ನು ಅಲ್ಲಿಗೆ ಡೈವರ್ಟ್ ಮಾಡಲು ಹೊರಟಿದೆ ಎಂದು ಆರೋಪಿದರು.

ಇತ್ತೀಚಿಗೆ ದೇಶದ ನೀರು ಕುಡಿದು, ಅನ್ನ ತಿಂದು, ಗಾಳಿ ಸೇವಿಸಿ ನಮ್ಮಲ್ಲೇ ಅಧಿಕಾರ ಪಡೆದಿರುವ ಕೆಲವರು ವಿಧಾನಸೌಧದ ಆವರಣದಲ್ಲಿ ಪಾಕಿಸ್ತಾನದ ಪರ ಘೋಷಣೆ ಕೂಗಿದ ಘಟನೆಯನ್ನು ಸಚಿವೆ ಹೆಬ್ಬಾಳ್ಕರ್ ಸಮರ್ಥನೆ ಮಾಡಿಕೊಳ್ಳುತ್ತಾರೆ. ಆದರೆ ಎಫ್‌ಎಸ್‌ಎಲ್ ವರದಿಯಲ್ಲಿ ಪಾಕಿಸ್ತಾನ ಜಿಂದಾಬಾದ್ ಕೂಗಿರುವುದು ದೃಢಪಟ್ಟಿದೆ. ಘಟನೆಯನ್ನು ಸಚಿವ ಪ್ರಿಯಾಂಕ್ ಖರ್ಗೆ ಸಹ ಮುಚ್ಚಿ ಹಾಕಲು ಯತ್ನಿಸುತ್ತಿದ್ದಾರೆ ಎಂದು ದೂರಿದರು.

ಮೇಜರ್ ಬ್ಲಾಸ್ಟ್ ಆಗಬೇಕೆ?: ಬೆಂಗಳೂರಿನ ವೈಟ್‌ಫೀಲ್ಡ್‌ನ ರಾಮೇಶ್ವರಂ ಕೆಫೆಯಲ್ಲಿ ನಡೆದ ಬಾಂಬ್ ಬ್ಲಾಸ್ಟ್ ಅನ್ನು ಸಚಿವ ಶರಣಗೌಡ ಪಾಟೀಲ್ ಸಿಲ್ಲಿ ಮ್ಯಾಟರ್ ಎನ್ನುತ್ತಾರೆ. ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇದು ಕೇವಲ ಮೈನರ್ ಬ್ಲಾಸ್ಟ್ ಅಷ್ಟೇ ಎನ್ನುತ್ತಾರೆ. ಇವರಿಗೆ ಕಾಮನ್ ಸೆನ್ಸ್ ಇಲ್ಲ ಎಂದು ಕಾಣುತ್ತೆ. ಹಾಗಾದರೆ ಇವರು ಮೇಜರ್ ಬ್ಲಾಸ್ಟ್ ಆಗುವುದನ್ನು ಕಾಯುತ್ತಿದ್ದಾರೆಯೇ ಎಂದು ಆಪಾದಿಸಿದರು. ಸುದ್ದಿಗೋಷ್ಠಿಯಲ್ಲಿ ಕ್ಷೇತ್ರಾಧ್ಯಕ್ಷ ಶಿವಕುಮಾರ್, ಯುವ ಮೋರ್ಚಾ ಅಧ್ಯಕ್ಷ ಶಿವು, ಮುಖಂಡ ಬಸಪ್ಪ ಪಟೇಲ್ ಇದ್ದರು.

ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಘೋಷಣೆ

ಅಂತೂ ಮೂವರು ಆರೋಪಿಗಳ ಬಂಧನ

ಬೆಂಗಳೂರು: ಇತ್ತೀಚಿಗೆ ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಗೆ ನಡೆದ ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದ ಕಾಂಗ್ರೆಸ್ ಅಭ್ಯರ್ಥಿ ನಾಸೀರ್ ಹುಸೇನ್ ಅವರ ಬೆಂಬಲಿಗರು ವಿಧಾನಸೌಧದಲ್ಲಿ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊನೆಗೂ ಪೊಲೀಸರು ಸೋಮವಾರ ಮೂವರನ್ನು ಬಂಧಿಸಿದ್ದಾರೆ.

ವಿಧಾನಸೌಧದಲ್ಲಿ ಕರ್ತವ್ಯದಲ್ಲಿದ್ದ ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಶಿವಕುಮಾರ್ ಅವರು ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡಿದ್ದ ವಿಧಾನಸೌಧ ಪೊಲೀಸ್ ಠಾಣೆಯ ಪೊಲೀಸರು ಇಂದು ಸಂಜೆ ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ದೆಹಲಿ ಮೂಲದ ಇಲ್ತಿಯಾಜ್, ಆರ್.ಟಿ. ನಗರದ ಮುನಾವರ್ ಹಾಗೂ



ಕಾಂಗ್ರೆಸ್‌ನ ನಾಸೀರ್ ಹುಸೇನ್ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾದ ದಿನ ವಿಧಾನಸೌಧ ಆವರಣದಲ್ಲಿ 'ಪಾಕಿಸ್ತಾನ್ ಜಿಂದಾಬಾದ್' ಘೋಷಣೆ ಕೂಗಿದ ಸಂದರ್ಭದ ಸಂಗ್ರಹ ಚಿತ್ರ

ಹಾವೇರಿ ಜಿಲ್ಲೆ ಬ್ಯಾಡಗಿಯ ಮೊಹಮದ್ ಶಫಿ ನಾಶಿಪುಡಿ ಎಂದು ಗುರುತಿಸಲಾಗಿದ್ದು, ಸದ್ಯ ಈ ಮೂವರು ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಿ ಬಳಿಕ ನ್ಯಾಯಾಲಕ್ಕೆ ಹಾಜರುಪಡಿಸಿದ್ದಾರೆ. ಪಾಕಿಸ್ತಾನ ಪರ ಘೋಷಣೆ ಕೂಗಿದ್ದ ಮೂವರು ಆರೋಪಿಗಳ ಬಂಧನವನ್ನು ಖಚಿತಪಡಿಸಿರುವ ಬೆಂಗಳೂರಿನ ಕೇಂದ್ರ ವಿಭಾಗದ ಪೊಲೀಸರು, ಈ ಸಂಬಂಧ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಎಫ್ಎಸ್ಎಲ್ ವರದಿ, ಸಾಂದರ್ಭಿಕ ಸಾಕ್ಷ್ಯಗಳು, ಆರೋಪಿಗಳ ಹೇಳಿಕೆ ಹಾಗೂ ತನಿಖೆ ವೇಳೆ ಸಿಕ್ಕ ಸಾಕ್ಷ್ಯಗಳನ್ನು ಆಧರಿಸಿ ಆರೋಪಿಗಳನ್ನು ಬಂಧಿಸಿದ್ದೇವೆ. ಸದ್ಯ ಆರೋಪಿಗಳ ವೈದ್ಯಕೀಯ ಪರೀಕ್ಷೆ ನಡೀತಾ ಇದೆ. ವೈದ್ಯಕೀಯ ಪರೀಕ್ಷೆ ಬಳಿಕ ಕೋರಮಂಗಲದ ನ್ಯಾಯಾಧೀಶರ ಮನೆಯಲ್ಲಿ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ತಮ್ಮ ವಶಕ್ಕೆ ಪಡೆಯುವುದಾಗಿ ತಿಳಿಸಿದ್ದರು. ಆರೋಪಿಗಳನ್ನು ಪೊಲೀಸರು ಇಂದು ರಾತ್ರಿ ನ್ಯಾಯಾಧೀಶರ ಮುಂದೆ ಹಾಜರುಪಡಿಸಿದಾಗ ಹೆಚ್ಚಿನ ತನಿಖೆಗಾಗಿ ಅವರನ್ನು ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ.

ಲೋಕಸಭೆ ಚುನಾವಣೆ ಬಳಿಕ ಮುಖ್ಯಮಂತ್ರಿ ಬದಲಾವಣೆ ವಿಚಾರ ಊಹಾಪೋಹ

ಸಿಎಂ ಪುತ್ರ ಡಾ.ಯತೀಂದ್ರ ಪುನರುಚ್ಚಾರ

ಹಾಸನ: ಲೋಕಸಭೆ ಚುನಾವಣೆ ಬಳಿಕ



ಮುಖ್ಯಮಂತ್ರಿ ಬದಲಾವಣೆ ವಿಚಾರ ಕೇವಲ ಊಹಾಪೋಹ. ಆ ರೀತಿ ಏನೂ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ತಿಳಿಸಿದರು. ಹೊಳೆನರಸೀಪುರ ತಾಲೂಕಿನ ಹಳ್ಳಿಮೈಸೂರಿನಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿ, ಸ್ಥಿರ ಸರ್ಕಾರ ಕೊಡಬೇಕಿರುವುದು ಎಲ್ಲ ಪಕ್ಷಗಳ ಜವಾಬ್ದಾರಿ. ಹಾಗಾಗಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ 5 ವರ್ಷ ಪೂರೈಸುತ್ತಾರೆಂಬುದು ನನ್ನ ನಂಬಿಕೆ ಎಂದರು.

ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆ ಎಂಬ ಕೆಲ ಶಾಸಕರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಪ್ರತಿ ಸರ್ಕಾರವಿದ್ದಾಗಲೂ ಇಂಥ ಮಾತುಗಳು ಕೇಳಿ ಬರುತ್ತವೆ. ಬಿಜೆಪಿ ಸರ್ಕಾರವಿದ್ದಾಗ ಎಷ್ಟು ಮಂದಿ ಮುಖ್ಯಮಂತ್ರಿ ಆಕಾಂಕ್ಷಿಗಳಿದ್ದರು ಅವರ ಬೆಂಬಲಿಗರು ಕೂಡ ಮಾತನಾಡಿದ್ದರು ಎಂದು ಸಮರ್ಥಿಸಿಕೊಂಡರು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಿದ್ದರಾಮಯ್ಯ ಶಕ್ತಿ ತುಂಬುತ್ತಿದ್ದಾರೆ. ಇದೇ ರೀತಿ ಕೆಲಸ ಮುಂದುವರಿಸಬೇಕು ಎಂದರೆ, ನೀವು ಅಂತಹ ನಾಯಕರಿಗೆ ಶಕ್ತಿ ಕೊಡಬೇಕು ಎಂದು ಕೋರಿದರು. ಮೈಸೂರು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಗ್ಗೆ ವರಿಷ್ಠರ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗಿರಬೇಕಾಗುತ್ತದೆ. ನನಗೂ ಸೂಚನೆ ಕೊಟ್ಟಿಲ್ಲ. ನಾನಂತೂ ಟಿಕೆಟ್ ಕೇಳಲ್ಲ, ಆಕಾಂಕ್ಷಿಯೂ ಅಲ್ಲ ಎಂದರು. ಜಾತಿ ಗಣತಿ ವರದಿ ಬಿಡುಗಡೆ ಮಾಡಲು ಸರ್ಕಾರ ಬದ್ಧವಾಗಿದೆ. ಸಿದ್ದರಾಮಯ್ಯ ಅವರು ಕಳೆದ ಬಾರಿ ಮುಖ್ಯಮಂತ್ರಿಯಾಗಿದ್ದಾಗಲೇ ಜಾತಿಗಣತಿ ಮಾಡಿಸಿದ್ದರು. ಆದರೆ ಆ ವರದಿ ಸ್ವೀಕರಿಸುವ ಮುಂಚೆ ಅಧಿಕಾರ ಹೋಗಿತ್ತು ಎಂದರು.


ಪ್ರಧಾನಿ ಮೋದಿಗೆ ಕೊಲೆ ಬೆದರಿಕೆ ಹಾಕಿದ: ಕೇಸ್ ದಾಖಲಾಗುತ್ತಿದ್ದಂತೆ ಪರಾರಿಯಾದ

ಯಾದಗಿರಿ, ಮಾ.4– ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಪ್ರಧಾನಿ ಮೋದಿ ನಿನ್ನ ದೇಹದ ನರ ಕಟ್ ಮಾಡುತ್ತೇನೆ ಎಂದು ಖಡ್ಗ ಹಿಡಿದು ಕೊಲೆ ಬೆದರಿಕೆ ಹಾಕಿದ ವಿಡಿಯೋವನ್ನು ಮೊಹಮದ್ ರಸೂಲ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ತೀವ್ರ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹಂಚಿಕೊಂಡಿರುವ ಯಾದಗಿರಿ ಜಿಲ್ಲೆ ರಂಗಪೇಟೆ ನಿವಾಸಿ ರಸೂಲ್ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ. ಆತನ ವಿರುದ್ಧ ಐಪಿಸಿ ಸೆಕ್ಷನ್ 505(1)(ಬಿ), 25(1)(ಬಿ) ಹಾಗೂ ಆರ್ಮ್ಸ್ ಕಾಯ್ದೆಯಡಿ ಕೇಸ್ ದಾಖಲು ಮಾಡಲಾಗಿದ್ದು, ಈಗ ಆತ ನಾಪತ್ತೆಯಾಗಿದ್ದಾನೆ. ಪೊಲೀಸರು ಆರೋಪಿಗಾಗಿ ಶೋಧ ಕಾರ್ಯ ನಡೆಸುತ್ತಿದ್ದಾರೆ.

ರಾಜಕೀಯ ಪ್ರವೇಶಕ್ಕೆ ಡಾ.ಸಿ.ಎನ್.ಮಂಜುನಾಥ್ ಸಮ್ಮತಿ ಸೂಚಿಸಲ್ಲ


ಬೆಂಗಳೂರು: ಲೋಕಸಭಾ ಚುನಾವಣೆಗೆ ಈ ಬಾರಿ ಡಾ.ಮಂಜುನಾಥ್ ಕಣಕ್ಕೆ ಇಳಿಯುತ್ತಾರೆ ಎಂಬ ಮಾತುಗಳು ಕೇಳಿ ಬರುತ್ತಿರುವ ಬೆನ್ನಲ್ಲೇ ರಾಜಕೀಯ ಪ್ರವೇಶಕ್ಕೆ ಡಾ.ಮಂಜುನಾಥ್ ಸಮ್ಮತಿ ಸೂಚಿಸುವುದಿಲ್ಲ ಎಂದು ಹೇಳುವ ಮೂಲಕ ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರು ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಜೆಡಿಎಸ್ ಕಚೇರಿಯಲ್ಲಿ ಜಯದೇವ ಆಸ್ಪತ್ರೆಯ ನಿವೃತ್ತ ನಿರ್ದೇಶಕ ಡಾ.ಮಂಜುನಾಥ್ ಅವರ ರಾಜಕೀಯ ಪ್ರವೇಶದ ವಿಚಾರದ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ, ಮಂಜುನಾಥ್ ಇಡೀ ದೇಶಾದ್ಯಂತ ತಮ್ಮದೇ ಆದ ಹೆಸರು ಮಾಡಿದ್ದಾರೆ. ಅವರು ಇಂತಹ ರಾಜಕೀಯ ಪರಿಸ್ಥಿತಿಯಲ್ಲಿ



ಬರುವುದು ಸರಿಯಲ್ಲ. ಅವರಿಗೆ ಈಗ ಒಂದು ಒಳ್ಳೆ ಸ್ಥಾನವಿದೆ ಎಂದು ಉತ್ತರಿಸಿದರು. ಈ ಸಮಯದಲ್ಲಿ ರಾಜಕೀಯ ಪ್ರವೇಶ ಮಾಡಿ ಎಂದು ನಾನು ಒತ್ತಾಯಿಸುತ್ತಿಲ್ಲ. ವ್ಯಕ್ತಿತ್ವಕ್ಕೆ ಕಳಂಕ ತರುವ ತೀರ್ಮಾನವನ್ನು ನಾವು ಮಾಡುವುದಿಲ್ಲ. ರಾಜಕೀಯಕ್ಕೆ ಬರುವುದಕ್ಕೆ ಅವರು ಸಮ್ಮತಿ ಸೂಚಿಸುವುದಿಲ್ಲ ಅಂತ ಅಂದು ಕೊಂಡಿದ್ದೇನೆ ಎಂದರು. ಬೆಂಗಳೂರಿನ ಜಯದೇವ ಆಸ್ಪತ್ರೆಯನ್ನು ಮುನ್ನಡೆಸಿ ಈಗ ನಿವೃತ್ತರಾಗಿರುವ ಡಾ.ಸಿ.ಎನ್. ಮಂಜುನಾಥ್ ಅವರು ಈ ಬಾರಿಯ ಲೋಕಸಭಾ ಚುನಾವಣೆಗೆ ಸ್ಪರ್ಧಿಸುತ್ತಾರೆ ಎಂಬ ಮಾತು ಕೇಳಿ ಬರುತ್ತಿದೆ. ಈ ಬಗ್ಗೆ ಇಲ್ಲಿಯವರೆಗೂ ಅಧಿಕೃತವಾಗಿ ಮಂಜುನಾಥ್ ಎಲ್ಲಿಯೂ ತಮ್ಮ ನಿರ್ಧಾರವನ್ನು ತಿಳಿಸಿಲ್ಲ. ಮೈಸೂರಿನ ನಾಗರಿಕರ ಪರವಾಗಿ ಫೆ.26 ರಂದು ಆಯೋಜನೆ ಗೊಂಡಿದ್ದ 'ಧನ್ಯವಾದ ಧನ್ವಂತರಿ' ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಮಂಜುನಾಥ್ ನನ್ನ ಸೇವೆ ರಾಷ್ಟ್ರ ಮಟ್ಟದಲ್ಲಿ ವಿಸ್ತರಣೆ ಆಗಬೇಕು ಎಂದು ಜನ ನಿರೀಕ್ಷೆ ಮಾಡುತ್ತಿದ್ದಾರೆ. ನಾನು ಕೂಡ ಈ ಬಗ್ಗೆ ಯೋಚನೆ ಮಾಡುತ್ತಿದ್ದೇನೆ ಎಂದು ಹೇಳಿದ್ದರು.

'ಕೈ' ನಾಯಕರ ಜೊತೆ ಕಾಣಿಸಿಕೊಂಡ ಸಿ.ಪಿ ಯೋಗೇಶ್ವರ್ ಪುತ್ರಿ!



ರಾಮನಗರ: ಮಾಜಿ ಸಚಿವ ಹಾಗೂ ಬಿಜೆಪಿ ಪ್ರಭಾವಿ ನಾಯಕ ಸಿ.ಪಿ.ಯೋಗೇಶ್ವರ್ ಪುತ್ರಿ ನಿಶಾ ಯೋಗೇಶ್ವರ್ ಕಾಂಗ್ರೆಸ್ ಪಡಸಾಲೆಯಲ್ಲಿ ಮತ್ತೊಮ್ಮೆ ಕಾಣಿಸಿಕೊಳ್ಳುವ ಮೂಲಕ ಅಚ್ಚರಿಗೆ ಕಾರಣವಾಗಿದ್ದಾರೆ.

ಬೆಂಗಳೂರಿನಲ್ಲಿ ಇಂದು ಕಾಂಗ್ರೆಸ್ ನಾಯಕರ ಜೊತೆ ಕಾಣಿಸಿಕೊಂಡು ಚರ್ಚೆಗೆ ಗ್ರಾಸವಾಗಿದ್ದಾರೆ. ಚನ್ನಪಟ್ಟಣ ಮೂಲದ ಕಾಂಗ್ರೆಸ್ ನಾಯಕ ರಘುನಂದನ್ ರಾಮಣ್ಣ ಇಂದು ಬೆಂಗಳೂರು ಮೈಸೂರು ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಪ್ರಾಧಿಕಾರದ ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ ಮಾಡುವ ಕಾರ್ಯಕ್ರಮದಲ್ಲಿ ನಿಶಾ ಯೋಗೇಶ್ವರ್ ಭಾಗಿಯಾಗಿದ್ದಾರೆ. ಈ ವೇಳೆ ಯೋಗೇಶ್ವರ್ ರಾಜಕೀಯ ಬದ್ಧವೈರಿ ಸಂಸದ ಡಿ.ಕೆ.ಸುರೇಶ್ ಜೊತೆ ನಿಂತು ಫೋಟೋ ತೆಗೆಸಿಕೊಂಡಿರುವ ನಿಶಾ ರಾಜಕೀಯ ವಲಯದಲ್ಲಿ ಅಚ್ಚರಿಗೆ ಕಾರಣವಾಗಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಸಿ.ಪಿ.ಯೋಗೇಶ್ವರ್ ಕಣಕ್ಕಿಳಿಯಲಿದ್ದಾರೆ ಎನ್ನುವ ಚರ್ಚೆ ಇದೆ. ಇದರ ನಡುವೆ ಯೋಗೇಶ್ವರ್ ಪುತ್ರಿ ಕಾಂಗ್ರೆಸ್ ನಾಯಕರ ಜೊತೆ ಕಾಣಿಸಿಕೊಂಡಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ರಘುನಂದನ್ ರಾಮಣ್ಣನವರಿಗೆ ಶುಭಕೋರುವ ಸಲುವಾಗಿ ನಿಶಾ ಯೋಗೇಶ್ವರ್ ಕಚೇರಿಗೆ ಹೋಗಿದ್ದರು ಎನ್ನಲಾಗಿದ್ದು, ಚುನಾವಣೆ ಹೊಸ್ತಿಲಲ್ಲಿ ಈ ಭೇಟಿ ಸಾಕಷ್ಟು ಕುತೂಹಲ ಮೂಡಿಸಿದೆ. ಇತ್ತೀಚೆಗೆ ಸಾಮಾಜಿಕ ಜಾಲತಾಣದ ಮೂಲಕ ಸಕ್ರಿಯವಾಗಿರುವ ನಿಶಾ ಯೋಗೇಶ್ವರ್ ರಾಜಕೀಯ ಪ್ರವೇಶ ಮಾಡಲಿದ್ದಾರೆ ಎನ್ನುವ ಚರ್ಚೆಯೂ ಇದೆ. ಕಳೆದ ಕೆಲವು ದಿನಗಳ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನೂ ಭೇಟಿ ಮಾಡಿದ್ದ ನಿಶಾ, ಈಗ ಮತ್ತೆ ಸಂಸದ ಸುರೇಶ್ ಜೊತೆ ಕಾಣಿಸಿಕೊಂಡಿರುವುದು ಚನ್ನಪಟ್ಟಣ ಭಾಗದಲ್ಲಿ ರಾಜಕೀಯ ಸಂಚಲನ ಮೂಡಿಸಿದೆ.

ಲಂಚ ಪ್ರಕರಣದಲ್ಲಿ ಶಾಸಕರು, ಸಂಸದರಿಗೆ ಕಾನೂನು ರಕ್ಷಣೆ ಇಲ್ಲ


1998ರ ತೀರ್ಪು ರದ್ದುಪಡಿಸಿ ಸುಪ್ರೀಂಕೋರ್ಟ್ ಮಹತ್ವದ ತೀರ್ಪು

ನವದೆಹಲಿ: ಲಂಚ ಪಡೆದ ಪ್ರಕರಣಗಳಲ್ಲಿ ಸಂಸದರು ಹಾಗೂ ಶಾಸಕರಿಗೆ ಕಾನೂನು ರಕ್ಷಣೆ ನೀಡಲು ಸಾಧ್ಯವಿಲ್ಲ ಎಂದು ಮಹತ್ವದ ತೀರ್ಪು ನೀಡಿರುವ ಸುಪ್ರೀಂಕೋರ್ಟ್, ಶಾಸಕರಿಗೆ ಕಾನೂನು ಕ್ರಮದಿಂದ ವಿನಾಯಿತಿ ನೀಡುವ ಹಿಂದಿನ ಆದೇಶವನ್ನು ಸೋಮವಾರ ರದ್ದುಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಡಿ.ವೈ.. ಚಂದ್ರಚೂಡ್ ನೇತೃತ್ವದ ಏಳು ಸದಸ್ಯರ ಸಾಂವಿಧಾನಿಕ ಪೀಠ ಇಂದು ತೀರ್ಪು ನೀಡಿದೆ. ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ನೇತೃತ್ವದ ಪೀಠದಲ್ಲಿ ನ್ಯಾಯಮೂರ್ತಿಗಳಾದ ಎ.ಎಸ್. ಬೋಪಣ್ಣ, ಎಂ.ಎಂ.ಸುಂದರೇಶ್, ಪಿ.ಎಸ್.ನರಸಿಂಹ, ಜೆ.ಬಿ. ಪರ್ಡಿವಾಲ, ಸಂಜಯ್‌ಕುಮಾರ್ ಮತ್ತು ಮನೋಜ್ ಮಿಶ್ರಾ ಇದ್ದರು.

ಸಂಸತ್ ಸದಸ್ಯರು ಹಾಗೂ ರಾಜ್ಯಗಳ ವಿಧಾನ ಮಂಡಲದ ಸದಸ್ಯರು ಲಂಚ ಪಡೆದಾಗ, ಭ್ರಷ್ಟಾಚಾರ ಎಸಗಿದಾಗ ಅವರ ವಿರುದ್ಧ ತನಿಖೆ ನಡೆಯದಂತೆ ಕಾನೂನು ರಕ್ಷಣೆ ನೀಡಲು ಸಾಧ್ಯವಿಲ್ಲ ಎಂದು ಹೇಳುವ ಮೂಲಕ ಜನಪ್ರತಿನಿಧಿಗಳಿಗೆ ಸುಪ್ರೀಂಕೋರ್ಟ್ ಶಾಕ್ ಕೊಟ್ಟಿದೆ.

ಅಕ್ಟೋಬರ್ 5, 2023 ರಂದು ತನ್ನ ತೀರ್ಪನ್ನು ಕಾಯ್ದಿರಿಸಿದ್ದ ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದ ಸಂವಿಧಾನ ಪೀಠವು ಈ ವಿಷಯದ ಬಗ್ಗೆ ಇಂದು ತೀರ್ಪು ಪ್ರಕಟಿಸಿತು. ಇಂದು ಸರ್ವಾನುಮತದ ತೀರ್ಪು ಪ್ರಕಟಿಸಿದ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಚಂದ್ರಚೂಡ್, ಶಾಸನ ಸಭೆಯ ಸದಸ್ಯರು ಭ್ರಷ್ಟಾಚಾರ ನಡೆಸುವುದು ಅಥವಾ



ಲಂಚ ಪಡೆಯುವುದು ಸಾರ್ವಜನಿಕ ಜೀವನದ ನೈತಿಕತೆಯನ್ನು ನಶಿಸುತ್ತದೆ ಎಂದು ಹೇಳಿದರು. ಅಷ್ಟೇ ಅಲ್ಲದೆ, ಸಂಸತ್ತು ಅಥವಾ ಶಾಸಕಾಂಗದ ಕಾರ್ಯನಿರ್ವಹಣೆಗೆ ಸಂಬಂಧಿಸದ ಯಾವುದೇ ಸವಲತ್ತನ್ನು ನೀಡುವುದು, ನೆಲದ ಕಾನೂನಿನಿಂದ ಅನಿರ್ಬಂಧಿತ ವಿನಾಯಿತಿಗಳನ್ನು ಆನಂದಿಸುವ ವರ್ಗವನ್ನು ರಚಿಸಿದಂತಾಗುವುದು. ಭ್ರಷ್ಟಾಚಾರ ಮತ್ತು ಲಂಚಗುಳಿತನ ಸಂವಿಧಾನದ ಆಶಯಗಳಿಗೆ ವಿನಾಶಕಾರಿಯಾಗಿವೆ ಎಂದು ತಿಳಿಸಿದರು. ಅಲ್ಲದೆ, ಈ ಹಿಂದೆ 1998ರಲ್ಲಿ ಸುಪ್ರೀಂಕೋರ್ಟ್‌ನ ಐವರು ನ್ಯಾಯಮೂರ್ತಿಗಳನ್ನು ಒಳಗೊಂಡ ಸಾಂವಿಧಾನಿಕ ಪೀಠ ನೀಡಿದ್ದ ತೀರ್ಪನ್ನು ಇದೀಗ ಸುಪ್ರೀಂಕೋರ್ಟ್ ಸಪ್ತ ಸದಸ್ಯರ ಪೀಠ ಬದಲಾವಣೆ ಮಾಡಿದೆ.

1998ರಲ್ಲಿ ಸುಪ್ರೀಂಕೋರ್ಟ್ ನೀಡಿದ್ದ ತೀರ್ಪಿನ ಅನ್ವಯ, ಸಂಸದರು ಹಾಗೂ ಶಾಸಕರು ಹಣ ಪಡೆದು ಭಾಷಣ ಮಾಡಿದ್ದರೆ ಅಥವಾ ಮತ ಹಾಕಿದ್ದರೆ ಅವರಿಗೆ ಲಂಚ ಪ್ರಕರಣದ ತನಿಖೆ ಅಡಿ ಕಾನೂನಿನ ರಕ್ಷಣೆ ಸಿಗುತ್ತಿತ್ತು. ಇದೀಗ ಸುಪ್ರೀಂಕೋರ್ಟ್ ನ್ಯಾಯ ಪೀಠ, ಶಾಸಕರು ಹಾಗೂ ಸಂಸದರಿಗೆ ಇದ್ದ ಆ ಸವಲತ್ತನ್ನು ರದ್ದು ಮಾಡಿದೆ. ಸಂಸದೀಯ ಸೌಲಭ್ಯಗಳ ಅಡಿ ಲಂಚ ಸ್ವೀಕಾರವನ್ನು ಸೇರ್ಪಡೆ ಮಾಡಲು ಸಾಧ್ಯವಿಲ್ಲ ಎಂದಿರುವ ನ್ಯಾಯಪೀಠ, 1998ರಲ್ಲಿ ನೀಡಿದ್ದ ತೀರ್ಪು ಸಂವಿಧಾನದ ಆರ್ಟಿಕಲ್ 105 ಹಾಗೂ 194ಕ್ಕೆ ವ್ಯತಿರಿಕ್ತ ನಿಲುವಾಗಿದೆ ಎಂದು ಅಭಿಪ್ರಾಯಪಟ್ಟಿದೆ.

ತೀರ್ಪು ಸ್ವಾಗತಿಸಿದ ಪ್ರಧಾನಿ ಮೋದಿ: ಸುಪ್ರೀಂಕೋರ್ಟ್‌ನ ಮಹತ್ವದ ತೀರ್ಪನ್ನು ಪ್ರಧಾನಿ ಮೋದಿಯವರು ಸ್ವಾಗತಿಸಿದ್ದು, ತೀರ್ಪು ಶುದ್ಧ ರಾಜಕಾರಣವನ್ನು ಖಚಿತಪಡಿಸುತ್ತದೆ ಮತ್ತು ವ್ಯವಸ್ಥೆ ಮೇಲೆ ಜನರಿಗಿರುವ ನಂಬಿಕೆ ಮತ್ತಷ್ಟು ಹೆಚ್ಚಾಗುವಂತೆ ಮಾಡುತ್ತದೆ ಎಂದು ಹೇಳಿದ್ದಾರೆ.